ಸಂಪುಟ: 22, ಸಂಚಿಕೆ: 251, ಪುಟಗಳು: 8, ಶುಕ್ರವಾರ, 20 ಜೂನ್ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ಸುತ್ತಿಗೆಯ ಅದೊಂದು ಹೊಡೆತದಿಂದ ಬಂಡೆ ಒಡೆಯುತ್ತದೆ, ಮೊದಲಿನ ಹೊಡೆತಗಳು ನಿಷ್ಪ್ರಯೋಜಕ ಅಂತಲ್ಲ. ನಿರಂತರ ಪ್ರಯತ್ನ ಯಶಸ್ಸನ್ನು ನೀಡುತ್ತೆ ಎಂದರ್ಥ.

## ಪಂಚಾಂಗ

(ಶುಕ್ರವಾರ 20 ಜೂನ್-2025)

- ವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಕೃಷ್ಣ ಪಕ್ಷ,
- ದ್ವಿತೀಯ, ಶುಕ್ರವಾರ,
- ಪೂರ್ವಾಷಾಡ ನಕ್ಷತ್ರ
- ರಾಹುಕಾಲ: 10:47 ರಿಂದ 12:23
- ಗುಳಿಕ ಕಾಲ: 07:35 ರಿಂದ 09:11
- ಯಮಗಂಡಕಾಲ: 03:35 ರಿಂದ 05:11



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com



We Undertake Printing of Newspapers | Tabloids | Magazines

## ಸಂಕ್ಷಿಪ್ತ ಸುದ್ದಿ

### ಕೆಆರ್‌ಎಸ್ ಭರ್ತಿಗೆ 7 ಅಡಿಗಳಷ್ಟೇ ಬಾಕಿ



**ಮಂಡ್ಯ:** ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಹೆಚ್ಚಾಗಿರುವ ಹಿನ್ನೆಲೆ ಹಳೇ ಮೈಸೂರು ಭಾಗದ ಜೀವನಾಡಿಯಾಗಿರುವ ಕೆಆರ್‌ಎಸ್ ಡ್ಯಾಂ ಭರ್ತಿಗೆ ಕೇವಲ 7 ಅಡಿಗಳಷ್ಟೇ ಬಾಕಿಯಿದೆ. ಜಲಾಶಯಕ್ಕೆ 23,473 ಕ್ಯೂಸೆಕ್ ಒಳಹರಿವು ಇದ್ದು, ನಿನ್ನೆಗಿಂತ ಇಂದು ಒಳಹರಿವಿನ ಪ್ರಮಾಣದಲ್ಲಿ ಕಡಿಮೆಯಾಗಿದೆ. ಸದ್ಯ ಡ್ಯಾಂನಲ್ಲಿ 39.847 ಟಿಎಂಸಿ ನೀರು ಸಂಗ್ರಹವಾಗಿದ್ದು, 1,252 ಕ್ಯೂಸೆಕ್ ಒಳಹರಿವು ಇದೆ. ಪುಟ 2

### ಕರ್ನಾಟಕದ ಕರಾವಳಿಯಲ್ಲಿ ಜೂನ್ 26ರ ವರೆಗೂ ಭಾರೀ ಮಳೆ



**ಬೆಂಗಳೂರು:** ರಾಜ್ಯದ ಕರಾವಳಿ ಭಾಗದಲ್ಲಿ ಮುಂಗಾರು ಮಳೆಯ ಆರ್ಭಟ ಮುಂದುವರಿಯಲಿದೆ. ಜೂನ್ 26ರ ವರೆಗೆ ಕರಾವಳಿ ಭಾಗದಲ್ಲಿ ಭಾರೀ ಮಳೆ ಆಗಲಿದ್ದು, ಉಳಿದೆಲ್ಲಾ ಕಡೆ ಒಣಹವೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಜೂನ್ 26ರ ವರೆಗೂ ಮಳೆಯಾಗಲಿದೆ. ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಕಲಬುರಗಿ, ರಾಯಚೂರು, ವಿಜಯಪುರ, ಯಾದಗಿರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಶಿವಮೊಗ್ಗ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ. ಇನ್ನುಳಿದಂತೆ ವಿಜಯನಗರ, ತುಮಕೂರು, ರಾಮನಗರ, ಮಂಡ್ಯ, ಕೋಲಾರ, ದಾವಣಗೆರೆ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ಬಳ್ಳಾರಿಯಲ್ಲಿ ಒಣಹವೆ ಇರಲಿದೆ. ಉಪ್ಪಿನಂಗಡಿ, ಪುಟ 2

# ಮಂಡ್ಯ ಮೈಶುಗರ್ ಶಾಲೆ ಮೇಲೆ ಖಾಸಗಿ ಕಣ್ಣು

**ಮಂಡ್ಯ:** ಇತ್ತೀಚೆಗೆ ಮೈಶುಗರ್ ಫ್ಯಾಕ್ಟರಿಯನ್ನು ಗುತ್ತಿಗೆ ನೀಡಲು ರಾಜ್ಯ ಸರ್ಕಾರ ಮುಂದಾಗಿತ್ತು. ಬಳಿಕ ಹೋರಾಟ ಮಾಡಿ ಉಳಿಸಿಕೊಳ್ಳಲಾಗಿತ್ತು. ಇದೀಗ ಮೈಶುಗರ್ ಶಾಲೆ ಮೇಲೆ ಖಾಸಗಿಯವರ ಕಣ್ಣು ಬಿದ್ದಿದ್ದು, ನೂರಾರು ಕೋಟಿ ಮೌಲ್ಯದ ಶಾಲೆ ಆಸ್ತಿ ಕಬಳಿಸಲು ಹುನ್ನಾರ ನಡೆಯುತ್ತಿರುವ ಆರೋಪ ಕೇಳಿಬಂದಿದೆ. ಮೈಶುಗರ್ ಶಾಲೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಈ ಪ್ರಸ್ತಾವನ್ನು ಕೈಬಿಡುವಂತೆ ಆಗ್ರಹ ಕೂಡ ಕೇಳಿಬರುತ್ತಿದೆ.

» **ಕೋಟ್ಯಂತರ ರೂ ಆಸ್ತಿ ಕಬಳಿಸಲು ಹುನ್ನಾರ ಆರೋಪ**

ಬೆಂಗಳೂರು ಟು ಮೈಸೂರು ಹೆದ್ದಾರಿ ಪಕ್ಕದಲ್ಲೇ 13 ಎಕರೆ ಶಾಲೆ ಜಾಗ ಇದೆ. ಇದೇ ಜಾಗದ ಮೇಲೆ ಖಾಸಗಿಯವರ ಕಣ್ಣು ಬಿದ್ದಿದೆ ಎನ್ನಲಾಗುತ್ತಿದೆ. ಗುತ್ತಿಗೆ ಕೊಡುವ ನೆಪದಲ್ಲಿ ಶಾಲೆಯ ಆಸ್ತಿ ಕಬಳಿಸಲು ಸ್ಕೆಚ್ ಹಾಕಲಾಗಿದ್ದು, ಕೋಟ್ಯಂತರ ಮೌಲ್ಯದ ಜಾಗ ಕಬಳಿಸುವ



ಹುನ್ನಾರ ನಡೆದಿದೆ ಎಂದು ಆರೋಪ ಕೇಳಿಬಂದಿದೆ.

**ಗುತ್ತಿಗೆ ನಿರ್ಧಾರಕ್ಕೆ ಹಳೇ ವಿದ್ಯಾರ್ಥಿಗಳು ಆಕ್ರೋಶ:** ಆರ್ಥಿಕ ಹೊರೆ ನೆಪದಲ್ಲಿ ಮೈಶುಗರ್ ಶಾಲೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡಲು ಮೈಶುಗರ್ ಶಾಲಾ ಮಂಡಳಿ ಮುಂದಾಗಿದೆ. ಮಾಜಿ ಎಂಎಲ್ ಸಿ ಬಿ.ರಾಮಕೃಷ್ಣ ಮಾಲೀಕತ್ವದ ಕೀರ್ತನಾ ಟ್ರಸ್ಟ್ ಗೆ ಗುತ್ತಿಗೆ ನೀಡಲು ಶಾಲಾ ಆಡಳಿತ ಮಂಡಳಿ ನಿರ್ಧರಿಸಿದೆ. ಆದರೆ ಈ ಗುತ್ತಿಗೆ ನಿರ್ಧಾರದ ವಿರುದ್ಧ ರೈತರು ಮತ್ತು ಹಳೇ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

1949ರಲ್ಲಿ ಆರಂಭವಾಗಿದ್ದ ಶಾಲೆ ಇತ್ತೀಚೆಗೆ ಅಮೃತ ಮಹೋತ್ಸವ ಆಚರಣೆ ಮಾಡಲಾಗಿದೆ. ಇಲ್ಲಿ ಓದಿದ ಅದೆಷ್ಟೋ ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿದ್ದಾರೆ. ಶಾಲೆ ನಡೆಸಲು ಸಾಧ್ಯವಾಗದಿದರೆ ಹಳೇ ವಿದ್ಯಾರ್ಥಿಗಳೇ ನಡೆಸುತ್ತೇವೆ. ಯಾವುದೇ ಕಾರಣಕ್ಕೂ ಶಾಲೆಯನ್ನು ಗುತ್ತಿಗೆ ನೀಡಬಾರದು. ಈ ನಿರ್ಧಾರ ಕೈಬಿಡದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ಶಾಲಾ ಆಡಳಿತ ಮಂಡಳಿಗೆ ರೈತರು ಮತ್ತು ಹಳೇ ವಿದ್ಯಾರ್ಥಿಗಳು ಎಚ್ಚರಿಕೆ ನೀಡಿದ್ದಾರೆ.

ಇತಿಹಾಸ ಪ್ರಸಿದ್ಧ ಮೈಶುಗರ್ ಫ್ಯಾಕ್ಟರಿಯಷ್ಟೇ ಪ್ರಸಿದ್ಧವಾಗಿರುವ ಮೈಶುಗರ್ ಶಾಲೆಯನ್ನು ಖಾಸಗಿ ವ್ಯಕ್ತಿಗಳಿಗೆ ಗುತ್ತಿಗೆ ನೀಡುವ ಮೈಶುಗರ್ ಶಾಲಾ ಮಂಡಳಿಯ ನಿರ್ಧಾರ ನಿಜಕ್ಕೂ ಖಂಡನೀಯ ಎಂದು ಸಿಪಿಐ ಜಿಲ್ಲಾ ಕಾರ್ಯದರ್ಶಿ ಸಿ. ಕುಮಾರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಭಾರತದ ಅತಿದೊಡ್ಡ ಭೂಗತ ಎಲ್‌ಪಿಜಿ ಸಂಗ್ರಹಾಗಾರ ಮಂಗಳೂರಿನಲ್ಲಿ ಸಿದ್ಧ

**ಮಂಗಳೂರು:** ಭಾರತದ ಅತಿದೊಡ್ಡ ಭೂಗತ ಎಲ್‌ಪಿಜಿ ಸಂಗ್ರಹಾಗಾರ ಮಂಗಳೂರಿನಲ್ಲಿ ಸಿದ್ಧಗೊಂಡಿದೆ. ಇದರೊಂದಿಗೆ, ದೇಶದ ಇಂಧನ ಮೂಲಸೌಕರ್ಯ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲು ಸ್ಥಾಪಿಸಿದಂತಾಗಿದೆ. ಸದ್ಯ, ವಿಶಾಖಪಟ್ಟಣದಲ್ಲಿರುವ 60 ಸಾವಿರ ಟನ್ ಸಂಗ್ರಹ ಸಾಮರ್ಥ್ಯದ ಎಲ್‌ಪಿಜಿ ಸಂಗ್ರಹಾಗಾರ ಈವರೆಗೆ ದೇಶದ ಅತಿದೊಡ್ಡ ಸಂಗ್ರಹಾಗಾರವಾಗಿತ್ತು. ಇದೀಗ ಮಂಗಳೂರಿನಲ್ಲಿ ನಿರ್ಮಾಣವಾಗಿರುವ ಸಂಗ್ರಹಾಗಾರ 80,000 ಟನ್ ಸಂಗ್ರಹ ಸಾಮರ್ಥ್ಯ ಹೊಂದಿದೆ.



ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಗಾಗಿ ಮೇಘಾ ಎಂಜಿನಿಯರಿಂಗ್ ಆಂಡ್ ಇನ್ ಫ್ರಾಸ್ಟ್ರಕ್ಚರ್ ಲಿಮಿಟೆಡ್ ಅಭಿವೃದ್ಧಿಪಡಿಸಿದ ಸಂಗ್ರಹಾಗಾರ ಇದಾಗಿದೆ. ಪುಟ 2

# ಮೋದಿ ಸರ್ಕಾರದ ಅವಧಿಯಲ್ಲಿ ದೇಶದ ಬುಡಕಟ್ಟು ಸಮುದಾಯದ ಜೀವನ ಮಟ್ಟ ಸಂಪೂರ್ಣ ಬದಲು

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹನ್ನೊಂದು ವರ್ಷಗಳ ಅಧಿಕಾರಾವಧಿಯನ್ನು ಪೂರೈಸಿದೆ. ಈ ಅವಧಿಯಲ್ಲಿ ಹಿಂದುಳಿದ ವರ್ಗಗಳು, ಬುಡಕಟ್ಟು ಸಮುದಾಯದಲ್ಲಿ ಸಾಕಷ್ಟು ಬದಲಾವಣೆಗಳನ್ನು ತಂದಿದೆ. ನರೇಂದ್ರ ಮೋದಿ ಸರ್ಕಾರವು ಸಮಾಜದ ಪ್ರತಿಯೊಂದು ವರ್ಗದ ಅಭಿವೃದ್ಧಿಗಾಗಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಕಳೆದ 11 ವರ್ಷಗಳಲ್ಲಿ ಕೇಂದ್ರವು ನಡೆಸುತ್ತಿರುವ ಕಲ್ಯಾಣ ಯೋಜನೆಗಳಿಂದಾಗಿ, ಬುಡಕಟ್ಟು ಮತ್ತು ಬುಡಕಟ್ಟು ಸಮಾಜದ ಜನರ ಜೀವನ ಮಟ್ಟವು ಗಮನಾರ್ಹವಾಗಿ ಸುಧಾರಣೆ ಕಂಡಿದೆ.

**ಬಜೆಟ್‌ನಲ್ಲಿ ಹೆಚ್ಚು ಮೊತ್ತ ಮೀಸಲಿಟ್ಟ ಸರ್ಕಾರ:** 2025-26ರ ಕೇಂದ್ರ ಬಜೆಟ್ ಬುಡಕಟ್ಟು ವ್ಯವಹಾರಗಳ ಸಚಿವಾಲಯಕ್ಕೆ ಹೆಚ್ಚಿನ ಮೊತ್ತವನ್ನು ಬಿಡುಗಡೆ ಮಾಡಿತ್ತು ಹಾಗೂ ಬುಡಕಟ್ಟು ಅಭಿವೃದ್ಧಿಗಾಗಿ ಬಜೆಟ್ ಅನ್ನು 3 ಪಟ್ಟು ಹೆಚ್ಚಿಸಲಾಯಿತು. ಭಾರತದಲ್ಲಿ 10.45 ಕೋಟಿಗೂ ಹೆಚ್ಚು ಬುಡಕಟ್ಟು ಜನರು ವಾಸಿಸುತ್ತಿದ್ದಾರೆ. ಇದು ಒಟ್ಟು ಜನಸಂಖ್ಯೆಯ ಸುಮಾರು 8.6 ಪ್ರತಿಶತದಷ್ಟಿದೆ. ಬುಡಕಟ್ಟು ಸಮುದಾಯದ ಜನರು ದೇಶದ ನಾಗರಿಕತೆಯ



ಅವಿಭಾಜ್ಯ ಅಂಗವಾಗಿದ್ದಾರೆ. ಅವರು ಶ್ರೀಮಂತ ಸಂಪ್ರದಾಯಗಳು, ಭಾಷೆಗಳು ಮತ್ತು ಜ್ಞಾನ ವ್ಯವಸ್ಥೆಗಳನ್ನು ಸಂರಕ್ಷಿಸಿದ್ದಲ್ಲದೆ, ದೇಶದ ಸಾಂಸ್ಕೃತಿಕ ಗುರುತನ್ನು ರೂಪಿಸಿದ್ದಾರೆ.

2025-26ರ ಕೇಂದ್ರ ಬಜೆಟ್ ಬುಡಕಟ್ಟು ವ್ಯವಹಾರಗಳ ಸಚಿವಾಲಯಕ್ಕೆ ಹಣವನ್ನು ದೊಡ್ಡ ಪ್ರಮಾಣದಲ್ಲಿ ಹೆಚ್ಚಿಸಿದೆ. ಅದೇ ರೀತಿ, ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕೂ ಹಣಕಾಸಿನ ಹಂಚಿಕೆಯನ್ನು ಹೆಚ್ಚಿಸಲಾಗಿದೆ. ಈಗ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ವಾರ್ಷಿಕ ಬಜೆಟ್ 3 ಪಟ್ಟು ಹೆಚ್ಚಾಗಿದೆ. ಮೋದಿ ಸರ್ಕಾರವು ಈ ಹಿಂದೆ 2013-14ರಲ್ಲಿ 4,295.94 ಕೋಟಿ ರೂ.ಗಳ ಬಜೆಟ್ ನೀಡಿತ್ತು, ಅದು 2025-26ರಲ್ಲಿ 14,926 ಕೋಟಿ ರೂ.ಗಳಿಗೆ ಏರಿದೆ. ಪುಟ 2

## ಹುಟ್ಟುಹಬ್ಬದ ದಿನವೇ ಹೊಸ ಬಂಗಲೆಗೆ ಸ್ಥಳಾಂತರಗೊಂಡ ರಾಹುಲ್ ಗಾಂಧಿ

**ನವದೆಹಲಿ:** ಕಾಂಗ್ರೆಸ್ ಸಂಸದ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಿವಾಸ ಈಗ ಬದಲಾಗಿದೆ. ಈಗ ಸುನ್ಹೇರಿ ಬಾಗ್ ರಸ್ತೆಯಲ್ಲಿರುವ ಬಂಗಲೆ ಸಂಖ್ಯೆ 5 ಕ್ಕೆ ಸ್ಥಳಾಂತರಗೊಂಡಿದ್ದಾರೆ. ಕಾಂಗ್ರೆಸ್ ಮೂಲಗಳ ಪ್ರಕಾರ, ಅವರು ಗುರುವಾರ ತಮ್ಮ ಹುಟ್ಟುಹಬ್ಬದ



ಸಂದರ್ಭದಲ್ಲಿ ಇಲ್ಲಿಗೆ ಸ್ಥಳಾಂತರಗೊಂಡಿದ್ದಾರೆ. ಆದರೆ ಮುಂಬರುವ ಸಂಸತ್ತಿನ ಅಧಿವೇಶನಕ್ಕೆ ಮುಂಚಿತವಾಗಿ ಅಧಿಕೃತವಾಗಿ ಅಲ್ಲಿ ವಾಸಿಸಲು ಆರಂಭಿಸಲಿದ್ದಾರೆ. ಇದಕ್ಕೂ ಮೊದಲು ಅವರು ತಮ್ಮ ತಾಯಿ ಸೋನಿಯಾ ಗಾಂಧಿ ಅವರೊಂದಿಗೆ ಜನಪಥ್ ನಲ್ಲಿರುವ ನಿವಾಸದಲ್ಲಿದ್ದರು. ಪುಟ 2

## ರಾತ್ರಿ ರಿಸೆಪ್ಷನ್ ಬೆಳಗ್ಗೆ ಮದುವೆ ಕ್ಯಾನ್ಸಲ್!

**ಬೆಂಗಳೂರು:** ಇತ್ತೀಚಿಗೆ ಕಲ್ಯಾಣ ಮಂಟಪದವರೆಗೂ ಬಂದ ಹಲವು ಮದುವೆಗಳು ನಾನಾ ಕಾರಣಕ್ಕೆ ಮುರಿದು ಬಿದ್ದಿದೆ. ಆರತಕ್ಷತೆಗೆ ನಿಂತವರು ಮದುವೆ ಮಾಡಿಕೊಳ್ಳಲಿಲ್ಲ. ಮಂಟಪಕ್ಕೆ ಬಂದವರು ತಾಳಿ ಕಟ್ಟಿಸಿಕೊಳ್ಳಲಿಲ್ಲ ಎನ್ನುವ ಸುದ್ದಿಗಳು ಹರಿದಾಡುತ್ತಲೇ ಇದೆ. ಇದರ ನಡುವೆ ಬೆಂಗಳೂರಿನ ದೇವನಹಳ್ಳಿ ಬಳಿ ಈ ರೀತಿ ಮದುವೆ ತಪ್ಪು ಅಂತ ಗೊತ್ತಿದ್ರೂ, ಮಗಳ ಮದುವೆ ನಿಶ್ಚಯ ಮಾಡಿ ಅದ್ದೂರಿಯಾಗಿ ರಿಸೆಪ್ಷನ್ ಮಾಡ್ತಿದ್ದವರಿಗೆ ಅಧಿಕಾರಿಗಳು ಶಾಕ್ ಕೊಟ್ಟಿದ್ದಾರೆ. ರಾತ್ರಿಯೇ ವಧುವನ್ನ ಕರೆದೊಯ್ದಿದ್ದಾರೆ. ಕಾರಣ ಏನು ಗೊತ್ತಾ? ಅಸಲಿಗೆ ಮಂಟಪದಲ್ಲಿ ನಡೆದಿದ್ದು ಏನು ಗೊತ್ತಾ?

**ಮದುವೆ ಬ್ರೇಕ್, ಕುಟುಂಬಸ್ಥರಿಗೆ ಶಾಕ್?!:** ಬೆಂಗಳೂರಿನ ಕೂಗಳತೆಯ ದೂರದಲ್ಲೇ ನಡೀತಿದ್ದ ಬಾಲ್ಯ ವಿವಾಹಕ್ಕೆ ಬ್ರೇಕ್ ಬಿದ್ದಿದೆ ಎಂದು ವರದಿ ಆಗಿದೆ. ರಾತ್ರಿ ಅದ್ದೂರಿಯಾಗಿ ಆಯೋಜಿಸಲಾಗಿದ್ದ ರಿಸೆಪ್ಷನ್‌ಗೆ ಅತಿಥಿಗಳ ಬದಲಿಗೆ ಮಕ್ಕಳ ಪುಟ 2

## 215 ಡಿಎನ್‌ಎ ಮ್ಯಾಚ್ 198 ಮೃತದೇಹ ಹಸ್ತಾಂತರ

**ಅಹಮದಾಬಾದ್:** ಏರ್ ಇಂಡಿಯಾವಿಮಾನ ದುರಂತದಲ್ಲಿ ಮೃತಪಟ್ಟವರ ಪೈಕಿ ಈವರೆಗೆ ಒಟ್ಟು 215 ಮಂದಿ ಗುರುತು ಪತ್ತೆಯಾಗಿದ್ದು, 198 ಮೃತ ದೇಹಗಳನ್ನ ಸಂಬಂಧಪಟ್ಟ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ ಎಂದು ಅಹಮದಾಬಾದ್ ಸಿವಿಲ್ ಹಾಸ್ಪಿಟಲ್ ಅಧೀಕ್ಷಕ ರಾಕೇಶ್ ಜೋಶಿ ತಿಳಿಸಿದ್ದಾರೆ. ಪುಟ 2



## ನರೇಗಾ ಬಿಲ್ ಪಡೆಯಲು ಸೀರೆ ಉಟ್ಟ ಗಂಡು!

**ಬಾಗಲಕೋಟೆ:** ಬಣ್ಣದಿಂದ ಕಂಗೊಳಿಸುತ್ತಿರುವ ಅಂಗನ ವಾಡಿಗಳ ಹಿಂದೆ ಅಕ್ರಮ ಸದ್ದಿಲ್ಲದೆ ನಡೆದು ಹೋಗಿದೆ. ಇನ್ನು ಪುರುಷನೊಬ್ಬ ಮಹಿಳೆಯ ವೇಷ ತೊಟ್ಟು ಬ್ಲಾಕ್ ಪ್ಲಾಂಟೇಷನ್ ಕಾಮಗಾರಿಗೆ ಪೋಸ್ ನೀಡಿದ್ದಾನೆ. ಮಂಗಳಮ್ಮ ಆರಿ ಹೆಸರಲ್ಲಿ ಪುರುಷನೊಬ್ಬ ಸೀರೆಯುಟ್ಟು ಪೋಸ್ ಕೊಟ್ಟಿದ್ದಾನೆ! ಇಳಕಲ್ ತಾಲ್ಲೂಕಿನ ಸಿದ್ದನಕೊಳ್ಳ ಗ್ರಾಮದಲ್ಲಿ ಬ್ಲಾಕ್ ಪ್ಲಾಂಟೇಷನ್



ಕಾಮಗಾರಿಗೆ ಈ ಫೋಟೊ ಅಪ್ಲೋಡ್ ಮಾಡಲಾಗಿದೆ. ಈ ಒಂದೇ ಫೋಟೊ ವಿವಿಧ ಅಂಗನವಾಡಿ ಕಾಮಗಾರಿಗಳಿಗೆ ದುರ್ಬಳಕೆಯಾಗಿದೆ. ಇಂತಹ ಅಕ್ರಮ ನಡೆದಿರುವುದು ಬಾಗಲಕೋಟೆ ಜಿಲ್ಲೆ ಹುನಗುಂದ ಹಾಗೂ ಇಳಕಲ್ ತಾಲ್ಲೂಕಿನ ಗ್ರಾಪಂ ವ್ಯಾಪ್ತಿಯಲ್ಲಿ. ನರೇಗಾ ಯೋಜನೆಯ ಹಣ ಪಡೆಯಲು ಈ ರೀತಿಯ ಅಕ್ರಮಗಳನ್ನು ಎಸಗಲಾಗಿದೆ. ಪುಟ 2

ದೊಡ್ಡಣ್ಣನ ಎಂಟ್ರಿಯಿಂದ 3ನೇ ಮಹಾಯುದ್ಧದ ಆತಂಕ

# ಇರಾನ್ ಬೆಂಬಲಕ್ಕೆ ನಿಂತ ರಷ್ಯಾ

**ಟೆಹ್ರಾನ್/ಟೆಲ್ ಅವೀವ್:** ಇರಾನ್ ಮತ್ತು ಇಸ್ರೇಲ್ ನಡುವಿನ ಯುದ್ಧದ ಭೀಕರತೆ ಹೆಚ್ಚಾಗುತ್ತಲೇ ಇದೆ. ಈ ಮಧ್ಯೆ ಅಮೆರಿಕದ ಎಂಟ್ರಿ ಮತ್ತಷ್ಟು ಆತಂಕಕ್ಕೆ ಕಾರಣವಾಗಿದ್ದು, ಮೂರನೇ ಮಹಾಯುದ್ಧಕ್ಕೆ ನಾಂದಿಯಾಗುತ್ತಾ ಎನ್ನುವಂತಾಗಿದೆ.

ಇರಾನ್-ಇಸ್ರೇಲ್ ನಡುವಿನ ಯುದ್ಧದ ಸ್ವರೂಪ ಸದ್ಯಕ್ಕೆ ಬದಲಾಗುವಂತಿಲ್ಲ. ಎರಡು ದೇಶಗಳ ನಡುವಿನ ದಾಳಿ, ಪ್ರತಿದಾಳಿಗಳ ಭೀಕರತೆ ಹೆಚ್ಚಾಗುತ್ತಲೇ ಇದೆ. ಯಾವುದೇ ಕಾರಣಕ್ಕೂ ಎರಡು ರಾಷ್ಟ್ರಗಳು ಹಿಂದೆ ಸರಿಯಲ್ಲ ಎಂದು ಪಟ್ಟು ಹಿಡಿದಿವೆ. ಇದೆಲ್ಲದರ ನಡುವೆ ಅಮೆರಿಕದ ನಡೆ ಮತ್ತಷ್ಟು ಟೆನ್ಷನ್‌ಗೆ ಕಾರಣವಾಗಿದೆ.

ಇಷ್ಟು ದಿನ ಇಸ್ರೇಲ್ ಬೆನ್ನಿಗೆ ನಿಂತು ಬಲ ನೀಡಿದ್ದ ಅಮೆರಿಕ, ಈಗ ಒಂದು ಹೆಜ್ಜೆ ಮುಂದೆ ಬಂದು ನೇರವಾಗಿಯೇ ಇರಾನ್‌ಗೆ ಹೋರಾಟದ ಎಚ್ಚರಿಕೆ ನೀಡಿದೆ. ಇದು ಮೂರನೇ ಮಹಾಯುದ್ಧಕ್ಕೆ



ನಾಂದಿಯಾಗುತ್ತಾ ಎನ್ನುವ ಟೆನ್ಷನ್ ಹೆಚ್ಚಿಸಿದೆ. ಈ ಮಧ್ಯೆ ಟ್ರಂಪ್‌ನ ಆ ಒಂದು ಹೇಳಿಕೆ ಮೂರನೇ ಮಹಾಯುದ್ಧ ಶುರುವಾದರೂ ಅಚ್ಚರಿಪಡಬೇಕಿಲ್ಲ ಎನ್ನುವ ಚರ್ಚೆಗೆ ಆಸ್ಪದ ಮಾಡಿಕೊಟ್ಟಿದೆ.

ಇರಾನ್‌ಗೆ ಎರಡು ದಿನದ ಹಿಂದಷ್ಟೇ ಟ್ರಂಪ್ ನೇರ ಎಚ್ಚರಿಕೆ ನೀಡುವ ಮೂಲಕ ಹಿಂದೆ ಸರಿಯುವಂತೆ ಹೇಳಿದ್ದರು. ಆದರೆ ಇದಕ್ಕೆ ಬಗ್ಗದ ಇರಾನ್ ಸರ್ವೋಚ್ಚ ನಾಯಕ ಖಮೇನಿ ನೀವು ಕೂಡ ನಿಮ್ಮ ಪಾಡಿಗೆ ಸೈಲೆಂಟ್ ಆಗಿದ್ರೆ ಒಳ್ಳೆಯದು, ಇಲ್ಲದಿದ್ದರೆ ಅಮೆರಿಕ ಕೂಡ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ವಾರ್ನಿಂಗ್ ನೀಡಿದೆ. ಅದಾದ ಬೆನ್ನಲ್ಲೇ ನಿನ್ನೆ ಮತ್ತೆ ಇರಾನ್ ವಿರುದ್ಧ ಟ್ರಂಪ್ ಗುಡುಗಿದರು. ತಾವು ಕೂಡ ಇರಾನ್ ವಿರುದ್ಧ ಸಮರಕ್ಕಿಳಿಯುವ ಮುನ್ಸೂಚನೆ ನೀಡಿದರು. ಈ ಬಗ್ಗೆ ಸ್ಥಳೀಯ ಮಾಧ್ಯಮಗಳು ಟ್ರಂಪ್ ಬಳಿ ಕೇಳಿದಾಗ ಯಾವುದೇ ಷರತ್ತುಗಳಿಲ್ಲದೆ ಇರಾನ್ ತನ್ನ ಪರಮಾಣು ಯೋಜನೆಗಳನ್ನು ಸಂಪೂರ್ಣವಾಗಿ ತ್ಯಜಿಸಬೇಕೆಂದು ವಾರ್ನಿಂಗ್ ಕೊಟ್ಟಿದ್ದಾರೆ.

ಟ್ರಂಪ್ ಹೇಳಿಕೆ ಬೆನ್ನಲ್ಲೇ ಅಮೆರಿಕವು ಮಧ್ಯಪ್ರಾಚ್ಯಕ್ಕೆ ಹೆಚ್ಚಿನ ಮಿಲಿಟರಿ ಪಡೆಗಳನ್ನು ಸ್ಥಳಾಂತರಿಸುತ್ತಿದೆ. ಮೂರನೇ ನೌಕಾ ವಿಧ್ವಂಸಕ ನೌಕೆ ಪೂರ್ವ ಮೆಡಿಟರೇನಿಯನ್ ಸಮುದ್ರವನ್ನು ಪ್ರವೇಶಿಸಿದೆ. ಮತ್ತೊಂದು ವಿಮಾನವಾಹನ ನೌಕೆ ಗುಂಪು ಅರೇಬಿಯನ್ ಸಮುದ್ರಕ್ಕೆ ತೆರಳುತ್ತಿದೆ ಎನ್ನಲಾಗ್ತಿದೆ. ಇದು ಕೇವಲ ರಕ್ಷಣಾತ್ಮಕ ಕ್ರಮವಾಗಿದೆ ಎಂಬ ಚರ್ಚೆ ಇದೆ. ಪುಟ 2

# ಇಸ್ರೇಲ್-ಇರಾನ್ ಉದ್ವಿಗ್ನತೆ ನಡುವೆ ಹೊಸ ಗುಪ್ತಚರ ಮುಖ್ಯಸ್ಥರನ್ನು ನೇಮಿಸಿದ ಇರಾನ್

**ಇರಾನ್:** ಇಸ್ರೇಲ್ ಮತ್ತು ಇರಾನ್ ನಡುವಿನ ಉದ್ವಿಗ್ನತೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಇದರ ನಡುವೆ ಇರಾನ್ ತನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್‌ಗಳ ಹೊಸ ಗುಪ್ತಚರ ಮುಖ್ಯಸ್ಥರನ್ನು ನೇಮಿಸಿದೆ. ಈ ಹುದ್ದೆಗೆ ಬ್ರಿಗೇಡಿಯರ್ ಜನರಲ್ ಮಜೀದ್ ಖಾದಾಮಿ ಅವರನ್ನು ನೇಮಿಸಲಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಐಆರ್‌ಜಿಸಿಯ ಕಮಾಂಡರ್ ಮೇಜರ್ ಜನರಲ್ ಮೊಹಮ್ಮದ್ ಪಕ್ಪುರ್ ಅವರು ಮಜೀದ್ ಖಾದ್ಮಿ ಅವರನ್ನು ನೇಮಕ ಮಾಡಿದ್ದಾರೆ.

ಈ ಹುದ್ದೆಯಲ್ಲಿದ್ದ ಹಿಂದಿನ ಅಧಿಕಾರಿ ಮೊಹಮ್ಮದ್ ಕಾಜ್ಮಿ ಇಸ್ರೇಲಿ ವಾಯುದಾಳಿಯ ಸಮಯದಲ್ಲಿ ಸಾವನ್ನಪ್ಪಿದ್ದರು. ಹೀಗಾಗಿ ಹೊಸ ನೇಮಕಾತಿ ನಡೆದಿದೆ. ಇಸ್ರೇಲ್ ನಡೆಸಿದ ಈ ದಾಳಿಯಲ್ಲಿ ಕಾಜ್ಮಿ ಜೊತೆಗೆ, ಇತರ ಇಬ್ಬರು ಉನ್ನತ ಅಧಿಕಾರಿಗಳಾದ ಹಸನ್ ಮೊಹಕ್ ಮತ್ತು ಮೊಹ್ಸಿನ್



ಬಾಘೇರಿ ಕೂಡ ಸಾವನ್ನಪ್ಪಿದ್ದರು.

ಕಳೆದ ವಾರ ಇಸ್ರೇಲ್ ಇರಾನ್‌ನ ಪರಮಾಣು ಮತ್ತು ಮಿಲಿಟರಿ ನೆಲೆಗಳ ಮೇಲೆ ವಾಯುದಾಳಿ ನಡೆಸಿತ್ತು.ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ತಯಾರಿಸುತ್ತಿದೆ. ಹೀಗಾಗಿ ಇದನ್ನು ತಡೆಯಲು ಇಸ್ರೇಲ್ ಹಾಗೂ ಅಮೆರಿಕ ಟೊಂಕಕಟ್ಟಿ ನಿಂತಿದೆ. ಹಲವು ಬಾರಿ ಎಚ್ಚರಿಕೆಯನ್ನೂ ನೀಡಿದೆ. ಇರಾನ್ ಗುರುವಾರ ಇಸ್ರೇಲ್??ನ ಆಸ್ಪತ್ರೆಯ ಮೇಲೆ ಕ್ಷಿಪಣಿ ದಾಳಿ ನಡೆಸಿತ್ತು.

ಎರಡನೇ ವಾರಕ್ಕೆ ಕಾಲಿಟ್ಟ ಇಸ್ರೇಲ್-ಇರಾನ್ ಸಂಘರ್ಷ ಇರಾನ್ ಹಾರಿಸಿದ ಕ್ಷಿಪಣಿಯು ಇಸ್ರೇಲ್ ನ ದಕ್ಷಿಣ ಭಾಗದಲ್ಲಿರುವ ಮುಖ್ಯ ಆಸ್ಪತ್ರೆಯಾದ ಸೊರೊಕಾ ವೈದ್ಯಕೀಯ ಕೇಂದ್ರವನ್ನು ನೇರವಾಗಿ ಗುರಿಯಾಗಿಸಿಕೊಂಡಿದ್ದು, ದಾಳಿಯಲ್ಲಿ ಆಸ್ಪತ್ರೆಯ ಹಲವು ಭಾಗಗಳಿಗೆ ಭಾರೀ ಹಾನಿಯಾಗಿದೆ ಮತ್ತು ಅನೇಕ ಜನರು ಗಾಯಗೊಂಡಿದ್ದಾರೆ ಎಂದು ಆಸ್ಪತ್ರೆ ಆಡಳಿತ ತಿಳಿಸಿದೆ. ಇರಾನ್ ಇಸ್ರೇಲ್‌ನ ರಾಜಧಾನಿ ಟೆಲ್ ಅವಿವ್ ಮೇಲೆ ಕ್ಷಿಪಣಿಗಳನ್ನು ಹಾರಿಸಿ ನಾಶಮಾಡಿದ ಹಿನ್ನೆಲೆಯಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೆರಳಿದ್ದು, ಇದಕ್ಕೆ ಪ್ರತ್ಯುತ್ತರ ನೀಡುವ ಶಪಥ ಮಾಡಿದ್ದಾರೆ. ಪುಟ 2

# ಅಪಾರ್ಟ್‌ಮೆಂಟ್‌ನಲ್ಲಿ ಅಸ್ಥಿಪಂಜರಗಳು ಪತ್ತೆ



**ಬೆಂಗಳೂರು:** ನಗರದ ಬೇಗೂರಿನ ಅಪಾರ್ಟ್ಮೆಂಟ್ ಒಂದರಲ್ಲಿ ಎರಡು ಅಸ್ಥಿಪಂಜರಗಳು ಪತ್ತೆಯಾಗಿವೆ. ಅಪಾರ್ಟ್ಮೆಂಟ್‌ನಲ್ಲಿ ಇಂಗುಗುಂಡಿ ತೆಗೆಯುತ್ತಿರುವಾಗ ಅಸ್ಥಿಪಂಜರಗಳು ಪತ್ತೆಯಾಗಿವೆ. ಸಿಕ್ಕಿರುವ ಎರಡು ಅಸ್ಥಿಪಂಜರಗಳು ಒಂದೇನಾ? ಅಥವಾ ಬೇರೆ ಬೇರೆನಾ? ಎಂದು ಹಲವು ಅನುಮಾನಗಳು ಹುಟ್ಟಿಕೊಂಡಿವೆ. ಸದ್ಯ ಪೊಲೀಸರು ಅಸ್ಥಿಪಂಜರಗಳನ್ನ ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, 2012, 2013ನೇ ಸಾಲಿನಲ್ಲಿ ಮೃತಪಟ್ಟಿರುವುದಾಗಿ ತಜ್ಞರು ಮಾಹಿತಿ ನೀಡಿದ್ದಾರೆ. ಈಗಾಗಲೇ ಅಸ್ಥಿಪಂಜರಗಳನ್ನು FSLಗೆ ಕಳುಹಿಸಲಾಗಿದ್ದು, ವರದಿ ಬಳಿಕ ಹೆಚ್ಚಿನ ಮಾಹಿತಿ ತಿಳಿದು ಬರಲಿದೆ. ಸದ್ಯ ಘಟನೆ ಸಂಬಂಧ ಅಸ್ವಾಭಾವಿಕ ಸಾವು ಎಂದು ಪ್ರಕರಣ ದಾಖಲಿಸಿಕೊಂಡು ಬೇಗೂರು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಗೃಹಲಕ್ಷ್ಮಿ ಹಣ ಮೇ ತಿಂಗಳದ್ದು ಮಾತ್ರ ಬಾಕಿಯಿದೆ

**ಬೆಂಗಳೂರು:** ಯಾವುದೇ ಕಾರಣಕ್ಕೂ ಗೃಹಲಕ್ಷ್ಮಿ ಫಲಾನುಭವಿಗಳ ಪರಿಷ್ಕರಣೆ ಮಾಡುವುದಿಲ್ಲ. ಈಗ ಇರುವಂತೆ ವ್ಯವಸ್ಥೆ ಮುಂದುವರೆಯುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಸ್ಪಷ್ಟಪಡಿಸಿದ್ದಾರೆ.



ಗೃಹಲಕ್ಷ್ಮಿ ಹಣ ವಿಳಂಬದ ಬಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಗೃಹಲಕ್ಷ್ಮಿ ಹಣ ಬಿಡುಗಡೆಗೆ ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲ. ಏಪ್ರಿಲ್ ತಿಂಗಳವರೆಗೂ ಹಣ ಕ್ಲಿಯರ್ ಆಗಿದೆ. ಮೇ ತಿಂಗಳು ಮಾತ್ರ ಬಾಕಿ ಇದ್ದು ಪ್ರತಿ ತಿಂಗಳು ಹಣಕಾಸು ಇಲಾಖೆಗೆ ಹಣ ಬಿಡುಗಡೆ ಆಗುತ್ತಿದೆ ಎಂದರು.

ಈಗ ಹಣ ತಾಲೂಕು, ಜಿಲ್ಲಾ ಪಂಚಾಯತಿಗೆ ಸುತ್ತಾಡಿ ಬಿಡುಗಡೆ ಆಗಬೇಕಿದೆ. ಇದರಿಂದಾಗಿ ಒಂದು ವಾರ, ಎರಡು ವಾರ ತಡೆ ಆಗಬಹುದು ಅಷ್ಟೇ. ಬಾಕಿ ಹಣ ಬಿಡುಗಡೆ ಮಾಡುತ್ತೇವೆ ಎಂದು ತಿಳಿಸಿದರು.

ಹಣಕಾಸು ಇಲಾಖೆ ಪ್ರತಿ ತಿಂಗಳು ಹಣ ನೀಡುತ್ತಿದೆ. ಪ್ರತಿ ತಿಂಗಳು ಯಜಮಾನಿಯರು ಹೊಸದಾಗಿ ಸೇರುತ್ತಿದ್ದಾರೆ. ಈಗ 1.25 ಕೋಟಿ ಯಜಮಾನಿಯರು ಯೋಜನೆ ಅಡಿ ಇದ್ದಾರೆ. ನಮ್ಮ ಇಲಾಖೆಯಿಂದ ಫಲಾನುಭವಿಗಳ ಪರಿಷ್ಕರಣೆ ಮಾಡುವುದಿಲ್ಲ. ಈಗ ಹೇಗೆ ಇದೆಯೋ ಹಾಗೆಯೇ ಮುಂದುವರೆಯುತ್ತಿದೆ ಅಂತ ಸ್ಪಷ್ಟಪಡಿಸಿದರು.

# ಕರ್ನಾಟಕಕ್ಕೆ ಹೆಚ್‌ಡಿಕೆ, ಜೋಶಿ ಕೊಡುಗೆ ಏನು? ಚರ್ಚೆಗೆ ಬರಲಿ: ಪ್ರದೀಪ್ ಈಶ್ವರ್ ಪಂಥಾಹ್ವಾನ

**ಬೆಂಗಳೂರು:** ರಾಜ್ಯಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹಾಗೂ ಹೆಚ್.ಡಿ ಕುಮಾರಸ್ವಾಮಿಯವರ ಕೊಡುಗೆ ಏನು? ಇಬ್ಬರಿಗೂ ಆತ್ಮಸಾಕ್ಷಿಯಿದ್ದರೆ ನನ್ನ ಜೊತೆ ಬಹಿರಂಗ ಚರ್ಚೆಗೆ ಬರಲಿ ಎಂದು ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಕೇಂದ್ರ ಸಚಿವರಿಗೆ ಪಂಥಾಹ್ವಾನ ನೀಡಿದ್ದಾರೆ.

**1 ವರ್ಷದಿಂದ ಏನ್ ಕಡೆದು ಕಟ್ಟೆ ಹಾಕಿದ್ದೀರಾ?:** ವಿಧಾನಸೌಧದಲ್ಲಿ ಮಾತನಾಡಿದ ಅವರು, ಓಆಂ ಎಂದರೆ ನೇಷನ್ ಡೆಸ್ಟ್ರಾಯ್ ಅಲಾಯನ್ಸ್. ಕೇಂದ್ರ ಸಚಿವ ಜೋಶಿ ಮತ್ತು ಕುಮಾರಸ್ವಾಮಿಗೆ ರಾಜ್ಯದ ಮೇಲೆ ಪ್ರೀತಿ ಜಾಸ್ತಿಯಾಗಿದೆ. ಕಳೆದ 1 ವರ್ಷದಿಂದ ನೀವು ಇಬ್ಬರು ಕೇಂದ್ರದಲ್ಲಿ ಏನ್ ಕಡಿದು ಕಟ್ಟೆ ಹಾಕಿದ್ದೀರಾ? ಉತ್ತರ ಕೊಡಿ. ಆತ್ಮಸಾಕ್ಷಿ ಇದ್ದರೆ ಬಹಿರಂಗ ಚರ್ಚೆ ಇಬ್ಬರು ಬರಲಿ ಎಂದರು.

ಕೇಂದ್ರ ಸರ್ಕಾರ ಏನು ಮಾಡಿದೆ ಎಂದು ತಿಳಿಯುವ ಕುತೂಹಲವಿದೆ. ನಮ್ಮ ರಾಜ್ಯ ಸರ್ಕಾರ 2 ವರ್ಷ ಏನು



ಮಾಡಿದೆ ಎಂದು ನಾನು ಹೇಳುತ್ತೇನೆ. ಮೊದಲು ನೀವು ರಾಜ್ಯಕ್ಕೆ ಏನು ಮಾಡಿದ್ದೀರಾ ಹೇಳಿ? ನಮ್ಮ ಸರ್ಕಾರದ ಎಲ್ಲಾ ಸಚಿವರು ಕೇಂದ್ರ ಸಚಿವರಿಗೆ ಮನವಿ ಮಾಡಿದ್ದಾರೆ. ನಾವು ಪ್ರತಿಭಟನೆ ಮಾಡಿದ್ದೇವೆ. ಆದರೂ ಕೇಂದ್ರ ನಮಗೆ ಏನ್ ಕೊಡ್ತಿಲ್ಲ. ರಾಜ್ಯದಿಂದ ಆಯ್ಕೆಯಾಗಿದ್ದಾರೆ ಎಂದ ಮೇಲೆ ಅವರಿಗೆ ಜವಾಬ್ದಾರಿ ಇದೆ. ಏನಾದ್ರು ಮಾತಾಡಿದ್ರೆ, ಆಪರೇಷನ್ ಸಿಂಧೂರ ಅಂತಾರೆ. ಮೋದಿ ಅಂತಾರೆ. ನಿಮ್ಮ ರಿಪೋರ್ಟ್ ಏನು? ರಾಜ್ಯಕ್ಕೆ ಕೊಡುಗೆ ಏನು? ಬಹಿರಂಗಪಡಿಸಿ ಎಂದು ಆಗ್ರಹಿಸಿದರು.

ರಾಜ್ಯದಿಂದ ಭದ್ರಾ ಮೇಲ್ದಂಡೆ, ಕೃಷ್ಣ ಮೇಲ್ದಂಡೆ ಮಾಡಿ, ಬೇಡಿಕೆ ಈಡೇರಿಸಿದ್ದೇವೆ. ಯಾಕೆ ಹಣ ಕೊಡಲಿಲ್ಲ? ಕೇಂದ್ರದ ಎಲ್ಲಾ ಅನುದಾನ ರಾಜ್ಯಕ್ಕೆ ಕಡಿಮೆಯಾಗಿದೆ. ತೆರಿಗೆ ಪಾಲು ಸರಿಯಾಗಿ ಕೊಡ್ತಿಲ್ಲ. ಜಾಸ್ತಿ ಪಾಲು ಕೊಡಬೇಕು. ಕುಮಾರಸ್ವಾಮಿ, ಜೋಶಿ ಚರ್ಚೆಗೆ ಬರಲಿ. ನಾನು ಚರ್ಚೆಗೆ ಸಿದ್ಧ. ಕುಮಾರಸ್ವಾಮಿ ಅವರಿಗೆ ಬಹಿರಂಗ ಚರ್ಚೆಗೆ ಆಹ್ವಾನ ಕೊಡ್ತೀನಿ. ಒಂದು ವರ್ಷದಿಂದ ರಾಜ್ಯಕ್ಕೆ ಏನ್ ಕೊಟ್ಟಿದ್ದೀರಾ ಹೇಳಿ. ಬಹಿರಂಗ ಚರ್ಚೆಗೆ ಜೋಶಿ, ಕುಮಾರಸ್ವಾಮಿ ಬರಲಿ ಎಂದು ವಾಗ್ದಾಳಿ ನಡೆಸಿದರು.

# ನಮ್ಮ ಮೆಟ್ರೋದಲ್ಲಿ ನಂದಿನಿಗೆ ಮೊದಲ ಆದ್ಯತೆ ಕೊಡಬೇಕು

**ಬೆಂಗಳೂರು:** ನಮ್ಮ ಮೆಟ್ರೋದಲ್ಲಿ ನಂದಿನಿ ಮಳಿಗೆಗೆ ಮೊದಲ ಆದ್ಯತೆ ಕೊಡಬೇಕು ಎಂದು ಸಚಿವ ರಾಮಲಿಂಗಾ ರೆಡ್ಡಿ ಆಗ್ರಹ ಮಾಡಿದ್ದಾರೆ.



ನಮ್ಮ ಮೆಟ್ರೋದಲ್ಲಿ ನಂದಿನಿ ಮಳಿಗೆಗೆ ಅವಕಾಶ ನೀಡದ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನಮ್ಮ ನಂದಿನಿ ಉತ್ಪನ್ನ ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದೆ. ಉತ್ತಮ ಗುಣಮಟ್ಟದ ಪದಾರ್ಥಗಳು ಇವೆ. ಅಮುಲ್‌ಗೆ ಅವಕಾಶ ಕೊಟ್ಟಿದ್ದಾರೆ. ಇದು ಸರಿಯಲ್ಲ. ಮೊದಲು ನಂದಿನಿಗೆ ಕೊಡಬೇಕಿತ್ತು ಎಂದು ತಿಳಿಸಿದರು.

ಇನ್ನುಮುಂದೆ ರೈಲ್ವೆ, ಮೆಟ್ರೋ, ಎಲ್ಲೇ ಆದರೂ ಪ್ರಥಮ ಆದ್ಯತೆ ನಂದಿನಿಗೆ ಕೊಡಬೇಕು. ನಾವು ಕೆಎಸ್ ಆರ್‌ಟಿಸಿ ಸೇರಿ ಎಲ್ಲಾ ಕಡೆ ನಂದಿನಿಗೆ ಆದ್ಯತೆ ಕೊಟ್ಟಿದ್ದೇವೆ. ಅಮುಲ್ ಹೆಚ್ಚು ಹಣ ಕೊಟ್ಟಿದ್ದಾರೆ ಅಂತ ಅವರಿಗೆ ಕೊಡಬೇಡಿ. ನಂದಿನಿಗೆ ಮೊದಲ ಆದ್ಯತೆ ಕೊಡಬೇಕು. ಸಿಎಂ, ಡಿಸಿಎಂ ಗಮನಕ್ಕೂ ಇದು ಬಂದಿದೆ ಎಂದು ತಿಳಿಸಿದರು.

# ಐಶ್ವರ್ಯಗೌಡ ಆಸ್ತಿ ಮುಟ್ಟುಗೋಲು ಪ್ರಕ್ರಿಯೆ ಶುರು

**ಬೆಂಗಳೂರು:** ಐಶ್ವರ್ಯಗೌಡ ಬಹುಕೋಟಿ ವಂಚನೆ ಪ್ರಕರಣದಲ್ಲಿ ದಿನಕ್ಕೊಂದು ಟ್ವಿಸ್ಟ್ ಸಿಗುತ್ತಾ ಇದೆ.



» **ಬಹುಕೋಟಿ ವಂಚನೆ ಕೇಸ್**

ಎರಡು ದಿನಗಳ ಹಿಂದಷ್ಟೇ ಮಾಜಿ ಸಂಸದ ಡಿ.ಕೆ ಸುರೇಶ್‌ಗೆ ಇಡಿ ಸಮನ್ಸ್ ನೀಡಿದ್ದು, ನಿನ್ನೆ ವಿಚಾರಣೆಗೆ ಹಾಜರಾಗಲು ಸೂಚಿಸಿತ್ತು. ಈಗ ತನಿಖೆ ಮತ್ತೊಂದು ಮಜಲಿಗೆ ಹೋಗಿದೆ. ಇಡಿ ಅಧಿಕಾರಿಗಳು ಐಶ್ವರ್ಯಗೌಡ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವ ಪ್ರಕ್ರಿಯೆ ಶುರು ಮಾಡಿದೆ.

ಐಶ್ವರ್ಯಗೌಡ ಕೋಟ್ಯಂತರ ರೂಪಾಯಿ ಆಸ್ತಿ ಹೊಂದಿದ್ದು, ಅಕ್ರಮ ಹಣ ವರ್ಗಾವಣೆಯಿಂದ ಎಷ್ಟು ಹಣ ಸಂಪಾದನೆ ಮಾಡಿದ್ದಾಳೆ? ಎಲ್ಲೆಲ್ಲಿಗೆ ಹಣ ವರ್ಗಾವಣೆ ಮಾಡಲಾಗಿದೆ? ಯಾರ್‍ಯಾರ ಸಂಪರ್ಕ ಮಾಡಿದ್ದಾಳೆ? ಅನ್ನೋದನ್ನ ಬಯಲಿಗೆಳೆಯಲು ಇಡಿ ತನಿಖೆ ಮುಂದುವರಿಸಿದೆ. ಡಿ.ಕೆ ಸುರೇಶ್ ಅವರಿಗೂ ಆಸ್ತಿ ಮುಟ್ಟುಗೋಲು ಬಿಸಿ ತಟ್ಟುತ್ತಾ ಅನ್ನೋದನ್ನ ಕಾದುನೋಡಬೇಕಿದೆ.

**ಈಗ ಡಿಕೆಸು ಸರದಿ:** ಐಶ್ವರ್ಯಗೌಡ ಬಹುಕೋಟಿ ಹಗರಣದಲ್ಲಿ ಈಗ ಮಾಜಿ ಸಂಸದ ಡಿಕೆ ಸುರೇಶ್ ಸರದಿ. ಐಶ್ವರ್ಯಗೌಡ ಪ್ರತಿ ಕಾರ್ಯಕ್ರಮದಲ್ಲಿ ನಾನು ಡಿಕೆ ಸುರೇಶ್ ಸಹೋದರಿ ಅಂತ ಹೇಳಿಕೊಂಡು ಓಡಾಡ್ತಾ ಇದ್ರು. ಇಡಿ ಐಶ್ವರ್ಯಳನ್ನ ಬಂಧಿಸಿದ ಬಳಿಕ ದಾಖಲಾತಿ, ಹಣದ ವರ್ಗಾವಣೆ ಎಲ್ಲವನ್ನೂ ಪರಿಶೀಲಿಸಿ ಒಂದಷ್ಟು ಬಲವಾದ ಸಾಕ್ಷ್ಯಗಳನ್ನು ಇಟ್ಟುಕೊಂಡು ಡಿಕೆಸುಗೆ ಸಮನ್ಸ್ ನೀಡಿದೆ.

ಮೂಲಗಳ ಪ್ರಕಾರ, ಒಂದೆರಡು ವರ್ಷದಲ್ಲಿ ಐಶ್ವರ್ಯ ಮತ್ತು ಡಿಕೆ ಸುರೇಶ್ ನಡುವೆ ಹಣಕಾಸಿನ ವಹಿವಾಟು ನಡೆದಿದೆ ಅನ್ನೋದು ಇಡಿ ವಾದ. ಹೀಗಾಗಿಯೇ ಇಡಿ ಅಧಿಕಾರಿಗಳು ಸಮನ್ಸ್ ನೀಡಿದ್ದಾರೆ.

# ಮಲೆ ಮಾದಪ್ಪ ಮತ್ತೆ ಕೋಟಿ ಒಡೆಯ

**ಚಾಮರಾಜನಗರ:** ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಹುಂಡಿ ಎಣಿಕೆ ಮಾಡಲಾಗಿದ್ದು, 15 ವಿದೇಶಿ ಕರೆನ್ಸಿಗಳು ಸೇರಿ 2.6 ಕೋಟಿ ರೂ. ಸಂಗ್ರಹವಾಗಿದೆ. ಈ ಮೂಲಕ ಮಾದಪ್ಪ ಮತ್ತೆ ಕೋಟಿ ಒಡೆಯನಾಗಿದ್ದಾನೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ನಿನ್ನೆ ಹುಂಡಿ ಹಣ ಎಣಿಕೆ ಮಾಡಲಾಯಿತು. ಈ ಬಾರಿ ಕೇವಲ 34 ದಿನಗಳಲ್ಲಿ 2.65 ಕೋಟಿ ರೂ. ಸಂಗ್ರಹವಾಗಿದೆ.

ಸರ್ಕಾರಿ ರಜಾ ದಿನ, ಅಮಾವಾಸ್ಯೆ ಸೇರಿದಂತೆ ಶಕ್ತಿ ಯೋಜನೆಯ



ಉಚಿತ ಪ್ರಯಾಣದ ಹಿನ್ನೆಲೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ. ಹೀಗಾಗಿ 2,65,04,712 ರೂ. ನಗದು, 58 ಗ್ರಾಂ ಚಿನ್ನ ಹಾಗೂ 2.7 ಕೆಜಿ ಬೆಳ್ಳಿ ಸಂಗ್ರಹವಾಗಿದೆ. ಇದಲ್ಲದೇ ಇ-ಹುಂಡಿಯಿಂದ 6,66,104 ರೂ. ಹಾಗೂ 15 ವಿದೇಶಿ ಕರೆನ್ಸಿಗಳು ಬಂದಿವೆ.

ಇದಕ್ಕೂ ಮುನ್ನ ಏಪ್ರಿಲ್ ತಿಂಗಳಲ್ಲಿ ಸಾಲೂರು ಶ್ರೀಗಳ ನೇತೃತ್ವದಲ್ಲಿ ಹುಂಡಿ ಎಣಿಕೆ ಮಾಡಲಾಗಿತ್ತು. ಆ ವೇಳೆ 35 ದಿನಗಳ ಅವಧಿಯಲ್ಲಿ ಬರೋಬ್ಬರಿ 3.26 ಕೋಟಿ ಕೋಟಿ ರೂ. ಸಂಗ್ರಹವಾಗಿತ್ತು. ಅಲ್ಲದೇ 47 ಗ್ರಾಂ ಚಿನ್ನ, 2 ಕೆಜಿ 200 ಗ್ರಾಂ ಬೆಳ್ಳಿ ಕಾಣಿಕೆ ರೂಪದಲ್ಲಿ ಸಂಗ್ರಹವಾಗಿತ್ತು. ಇದರೊಂದಿಗೆ 11 ವಿದೇಶಿ ನೋಟುಗಳು, 2,000 ರೂ. ಮುಖಬೆಲೆಯ 20 ನೋಟುಗಳು ಹುಂಡಿಯಲ್ಲಿ ಸಿಕ್ಕಿದ್ದವು.



### ಕೇತಗಾನಹಳ್ಳಿ ಭೂ ಒತ್ತುವರಿ ಪ್ರಕರಣ

# ಹೆಚ್‌ಡಿಕೆಗೆ ಬಿಗ್ ರಿಲೀಫ್

**ಬೆಂಗಳೂರು:** ಕೇತಗಾನಹಳ್ಳಿ ಭೂ ಒತ್ತುವರಿ ಪ್ರಕರಣದಲ್ಲಿ ಕೇಂದ್ರ ಭಾರೀ ಕೈಗಾರಿಕಾ ಸಚಿವ ಕುಮಾರಸ್ವಾಮಿಗೆ ಹೈಕೋರ್ಟ್‌ನಿಂದ ಬಿಗ್ ರಿಲೀಫ್ ಸಿಕ್ಕಿದೆ.

ಬಿಡದಿಯ ಕೇತಗಾನಹಳ್ಳಿ ಬಳಿಯ ಸರ್ವೆ ನಂಬರ್ 7,8,9 ರ ಜಮೀನನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಲಾಗಿತ್ತು ಆರೋಪದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಕೂಡ ತನಿಖೆಗೆ ಎಸ್‌ಐಟಿ ರಚನೆ ಮಾಡಿತ್ತು.

ಎಸ್‌ಐಟಿ ರಚನೆ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದ ಕುಮಾರಸ್ವಾಮಿ ಪರ ವಕೀಲರಾದ ಉದಯ್ ಹೊಳ್ಳ ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಸಂದರ್ಭದಲ್ಲಿ ಔಪಚಾರಿಕವಾಗಿ ಯಾವುದೇ ತೆರನಾದ ಅಧಿಸೂಚನೆಯನ್ನು ಪ್ರಕಟಿಸಿಲ್ಲ ಎಂದು ಮಂಡಿಸಿದರು.

ವಾದ ಪುರಸ್ಕರಿಸಿದ ಹೈಕೋರ್ಟ್ ಏಕ ಸದಸ್ಯ ಪೀಠ ಮಧ್ಯಂತರ ತಡೆಯಾಜ್ಞೆಯನ್ನು ನೀಡಿದೆ. ಜೊತೆಗೆ ಎಸ್‌ಐಟಿ ರಚನೆಯ ಬಳಿಕ ಕುಮಾರಸ್ವಾಮಿಗೆ ನೀಡಿದ್ದ ಸಮನ್ಸ್ ಅನ್ನು ಕೂಡ ತಡೆ ಹಿಡಿದಿದ್ದು, ರಾಮನಗರ ಜಿಲ್ಲಾಧಿಕಾರಿ ಮತ್ತು ತಹಸಿಲ್ದಾರ್‌ಗೆ ನೋಟಿಸ್ ಜಾರಿ ಮಾಡಿ ವಿಚಾರಣೆಯನ್ನು ಮುಂದೂಡಿಕೆ ಮಾಡಿದೆ.

## ಮಂಗಳೂರಿನಲ್ಲಿ ಸಿದ್ಧ

ಈ ಭೂಗತ ಎಲ್‌ಪಿಜಿ ಸಂಗ್ರಹಾಗಾರವು ದೇಶದ ಪೆಟ್ರೋಲಿಯಂ ನಿಕ್ಷೇಪಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಎಂದು ಹೇಳಲಾಗಿದೆ.

ದೇಶದಲ್ಲಿ ಸದ್ಯ 2 ಭೂಗತ ಎಲ್‌ಪಿಜಿ ಸಂಗ್ರಹಾಗಾರ ಮಾತ್ರ ಇದ್ದು, ಅದರಲ್ಲಿ ಮಂಗಳೂರಿನದ್ದೂ ಒಂದಾಗಿದೆ. ಇಂಧನ ಸುರಕ್ಷತೆಯನ್ನು ಹೆಚ್ಚಿಸಲು ಮತ್ತು ನಿರಂತರ ಪೂರೈಕೆ ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಮಂಗಳೂರಿನ ಸಂಗ್ರಹಾಗಾರ ಬಹಳ ಮಹತ್ವದ್ದಾಗಿದೆ ಎಂದು ಕಂಪನಿ ತಿಳಿಸಿದೆ. ಈ ಸಂಗ್ರಹಾಗಾರವು ಆರು ಲಕ್ಷ ಬ್ಯಾರೆಲ್‌ಗಳು ಅಥವಾ 60 ಮಿಲಿಯನ್ ಲೀಟರ್ ದ್ರವೀಕೃತ ಪೆಟ್ರೋಲಿಯಂ ಅನಿಲವನ್ನು ಸಂಗ್ರಹಿಸಬಹುದು. ಅಷ್ಟೇ ಅಲ್ಲದೆ, 40,000 ಟನ್ ಪ್ರೊಪೇನ್ ಮತ್ತು 60,000 ಟನ್ ಬ್ಯುಟೇನ್ ಅನ್ನು ಸಂಗ್ರಹಿಸುವುದಕ್ಕಾಗಿ ವಿನ್ಯಾಸಗೊಳಿಸಲಾದ ಎರಡು ಪ್ರತ್ಯೇಕ ಭೂಗತ ಕೊಠಡಿಗಳನ್ನು ಒಳಗೊಂಡಿದೆ.

ಮಂಗಳೂರು ಭೂಗತ ಎಲ್‌ಪಿಜಿ ಸಂಗ್ರಹಾಗಾರವನ್ನು 854 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದೆ. ಇದು ಎಲ್ಲಾ ಪ್ರಮುಖ ಪರೀಕ್ಷಾ ಹಂತಗಳನ್ನು ಯಶಸ್ವಿಯಾಗಿ ಪೂರೈಸಿದೆ ಎಂದು ಎಂಇಐಎಲ್ ಅಧಿಕೃತ ಎಕ್ಸ್ ಹ್ಯಾಂಡಲ್ ಮೂಲಕ ಇತ್ತೀಚೆಗೆ ಘೋಷಿಸಿತ್ತು. ಅತ್ಯಂತ ನಿರ್ಣಾಯಕ ಹಂತವಾದ 'ಕ್ಯಾವರ್ನ್ ಅಕ್ಸೆಪ್ಟೆನ್ಸ್ ಟೆಸ್ಟ್' ಮೇ 9 ರಿಂದ ಜೂನ್ 6 ರವರೆಗೆ ನಡೆದಿದ್ದು, ಯಶಸ್ವಿಯಾಗಿದೆ ಎಂದು ಕಂಪನಿ ತಿಳಿಸಿದೆ.

ಅತ್ಯದ್ಭುತವಾಗಿ ವಿನ್ಯಾಸಗೊಳಿಸಲಾದ ಈ ಭೂಗತ ಸಂಗ್ರಹಾಗಾರವು 1,083 ಮೀಟರ್ ಸುರಂಗವನ್ನು ಹೊಂದಿದೆ. ಸಂಗ್ರಹಾಗಾರದ ಎರಡು ಮುಖ್ಯ ಘಟಕಗಳು ಎಸ್1 ಮತ್ತು ಎಸ್2 ಕ್ರಮವಾಗಿ 220 ಮೀಟರ್ ಮತ್ತು 225 ಮೀಟರ್ ಆಳದಲ್ಲಿವೆ.

ಇಂಧನ ಪೂರೈಕೆಯಲ್ಲಿನ ಅಡೆತಡೆಗಳ ನಿವಾರಣೆ ಮತ್ತು ಇಂಧನ ಪೂರೈಕೆ ವಿಚಾರದಲ್ಲಿ ರಾಷ್ಟ್ರೀಯ ಸನ್ನದ್ಧತೆಯನ್ನು ಹೆಚ್ಚಿಸುವಲ್ಲಿ ಈ ಸಂಗ್ರಹಾಗಾರವು ನಿರ್ಣಾಯಕ ಹೆಜ್ಜೆಯಾಗಿದೆ ಎಂದು ಮೂಲಗಳು ತಿಳಿಸಿವೆ.

## ಸಂಪೂರ್ಣ ಬದಲು

ಬುಡಕಟ್ಟು ಸಮುದಾಯಗಳ ಒಟ್ಟಾರೆ ಅಭಿವೃದ್ಧಿಗಾಗಿ ಮೋದಿ ಸರ್ಕಾರ ಗಣನೀಯ ಪ್ರಮಾಣದ ಹಣವನ್ನು ಬಿಡುಗಡೆ ಮಾಡಿದೆ, ಇದರಲ್ಲಿ ಪ್ರಧಾನಮಂತ್ರಿ-ಜನ್ಮನ್ 24,104 ಕೋಟಿ ರೂ.ಗಳು ಮತ್ತು ಧರ್ತಿ ಆಬಾ ಅಭಿಯಾನಕ್ಕೆ ನೀಡಿದ್ದ 79,156 ಕೋಟಿ ರೂ.ಗಳು ಸೇರಿವೆ. ಇದು ತಳಮಟ್ಟದಲ್ಲಿ ಸಮಗ್ರ ಅಭಿವೃದ್ಧಿ ಮಾದರಿಯನ್ನು ನೀಡುವ ಗುರಿಯನ್ನು ಹೊಂದಿದೆ.

ಇದಲ್ಲದೆ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕ್ರಿಯಾ ಯೋಜನೆ 2013-14ರಲ್ಲಿ 24,598 ಕೋಟಿ ರೂ.ಗಳಿಂದ 2024-25ರಲ್ಲಿ 1.23 ಲಕ್ಷ ಕೋಟಿ ರೂ.ಗಳಿಗೆ 5 ಪಟ್ಟು ಹೆಚ್ಚಾಗಿದೆ. ಇದರಲ್ಲಿ, 42 ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳು ಈಗ ಋಖಿ-ಕೇಂದ್ರಿತ ಉಪಕ್ರಮಗಳಿಗೆ ಕೊಡುಗೆ ನೀಡುತ್ತಿವೆ. ಇದು ಬುಡಕಟ್ಟು ಸಮುದಾಯಗಳಲ್ಲಿ ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಮತ್ತು ಜೀವನೋಪಾಯದಲ್ಲಿ ಸಮಗ್ರ ಮತ್ತು ನಿರಂತರ ಪ್ರಗತಿಯನ್ನು ಖಚಿತಪಡಿಸುತ್ತದೆ.

ಬುಡಕಟ್ಟು ಜನಾಂಗದ ಭೂಮಿ ಮತ್ತು ಜೀವನೋಪಾಯವನ್ನು ಸುರಕ್ಷಿತಗೊಳಿಸುವುದು ಅರಣ್ಯ ಹಕ್ಕುಗಳ ಕಾಯ್ದೆ ಬುಡಕಟ್ಟು ಮತ್ತು ಅರಣ್ಯದಲ್ಲಿ-ವಾಸಿಸುವ ಸಮುದಾಯಗಳಿಗೆ ಅರಣ್ಯ ಭೂಮಿ ಮತ್ತು ಸಂಪನ್ಮೂಲಗಳ ಮೇಲಿನ ವೈಯಕ್ತಿಕ ಮತ್ತು ಸಮುದಾಯದ ಹಕ್ಕುಗಳನ್ನು ಕಾನೂನುಬದ್ಧವಾಗಿ ಗುರುತಿಸುವ ಮೂಲಕ ಅಧಿಕಾರ ನೀಡುತ್ತದೆ. ಕಳೆದ 11 ವರ್ಷಗಳಲ್ಲಿ, ಸರ್ಕಾರವು 17 ರಾಜ್ಯಗಳು ಮತ್ತು 1 ಕೇಂದ್ರಾಡಳಿತ ಪ್ರದೇಶದಲ್ಲಿ FRA ಕೋಶಗಳು, ಸಾಮರ್ಥ್ಯ ವೃದ್ಧಿ ಮತ್ತು ಜಾಗೃತಿ ಅಭಿಯಾನಗಳ ಮೂಲಕ ಇದನ್ನು ಜಾರಿಗೆ ತಂದಿದೆ.

ಈ ಸಮುದಾಯದ ಉತ್ತಮ ಭವಿಷ್ಯಕ್ಕಾಗಿ, ಮೋದಿ ಸರ್ಕಾರವು ಪ್ರಧಾನ ಮಂತ್ರಿ ಜನಜಾತಿ ಆದಿವಾಸಿ ನ್ಯಾಯ ಮಹಾ ಅಭಿಯಾನ (ಪಿಎಂ-ಜನ್ಮಾನ್) ಅನ್ನು ಪ್ರಾರಂಭಿಸಿತು, ಇದು ಕೇವಲ ಒಂದು ಯೋಜನೆಯಾಗಿರದೆ, ದುರ್ಬಲ ಬುಡಕಟ್ಟು ಗುಂಪುಗಳಿಗೆ (ಪಿವಿಟಿಜಿಗಳು) ನ್ಯಾಯ, ಘನತೆ ಮತ್ತು ಉನ್ನತಿಯ ಪ್ರಬಲ ಧ್ಯೇಯವಾಗಿದೆ. ಈ ಉಪಕ್ರಮವು 18 ರಾಜ್ಯಗಳು ಮತ್ತು 1 ಕೇಂದ್ರಾಡಳಿತ ಪ್ರದೇಶದ 75 ಪಿವಿಟಿಜಿ ಸಮುದಾಯಗಳ ಜೀವನವನ್ನು ಪರಿವರ್ತಿಸುತ್ತಿದೆ ಮತ್ತು ದೇಶದ ಅತ್ಯಂತ ದೂರದ ಪ್ರದೇಶಗಳನ್ನು ತಲುಪುತ್ತಿದೆ.

ಅಂಗನವಾಡಿ ಕೇಂದ್ರ ಮತ್ತು ಹಾಸ್ಟೆಲ್ ಜೊತೆಗೆ ವಿದ್ಯುತ್ ಸೌಲಭ್ಯ ಮೂರು ವರ್ಷಗಳ ಅವಧಿಯಲ್ಲಿ 24,104 ಕೋಟಿ ರೂ.ಗಳ ಬೃಹತ್ ಹೂಡಿಕೆಯೊಂದಿಗೆ, ಪ್ರಧಾನಮಂತ್ರಿ-ಜನ್ಮನ್ ಯೋಜನೆಯು ಈ ಸಮುದಾಯದ ಜನರಿಗೆ ಮೂಲಭೂತ ಸೌಕರ್ಯಗಳನ್ನು (ವಸತಿ, ನೀರು, ಆರೋಗ್ಯ ರಕ್ಷಣೆ, ಶಿಕ್ಷಣ, ಪೋಷಣೆ, ರಸ್ತೆಗಳು ಮತ್ತು ಸುಸ್ಥಿರ ಜೀವನೋಪಾಯ) ಒದಗಿಸುವ ಮೂಲಕ ದಶಕಗಳ ನಿರ್ಲಕ್ಷ್ಯವನ್ನು ದೂರ ತಳ್ಳಿದೆ.

ಇದರ ಅಡಿಯಲ್ಲಿ, 1,04,688 ಮನೆಗಳನ್ನು ನಿರ್ಮಿಸಲಾಗಿದೆ. 7,202 ಹಳ್ಳಿಗಳಿಗೆ ಪೈಪ್ ನೀರು ಸರಬರಾಜು ಮಾಡಲಾಗಿದೆ. ಈ ಪ್ರದೇಶಗಳಲ್ಲಿ 1,069 ಅಂಗನವಾಡಿ ಕೇಂದ್ರಗಳನ್ನು ತೆರೆಯಲಾಗಿದೆ. ಈ ಪ್ರದೇಶಗಳಲ್ಲಿ 500 ಹಾಸ್ಟೆಲ್‌ಗಳನ್ನು ನಿರ್ಮಿಸಬೇಕಾಗಿದೆ, ಅವುಗಳಲ್ಲಿ 95 ಹಾಸ್ಟೆಲ್‌ಗಳಲ್ಲಿ ಕೆಲಸ ಪ್ರಾರಂಭವಾಗಿದೆ. ಅಲ್ಲದೆ, 1,05,760 ಮನೆಗಳಿಗೆ ವಿದ್ಯುತ್ ಒದಗಿಸಲಾಗಿದೆ.

ಅಂತ್ಯೋದಯದ ಮೂಲಕ ಜನರಿಗೆ ಶುದ್ಧ ಕುಡಿಯುವ ನೀರು, ಉತ್ತಮ ಆರೋಗ್ಯ ಸೇವೆ, ಮಕ್ಕಳಿಗೆ ಉತ್ತಮ ಶಿಕ್ಷಣ, ವಿದ್ಯುತ್ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳು, ರಸ್ತೆ ಸಂಪರ್ಕ, ಡಿಜಿಟಲ್ ನೆಟ್‌ವರ್ಕ್ ಮತ್ತು ಉತ್ತಮ ಜೀವನೋಪಾಯದ ಅವಕಾಶಗಳನ್ನು ಒದಗಿಸಲಾಗುವುದು. ಇದರ ಜೊತೆಗೆ, ಪ್ರಧಾನ ಮಂತ್ರಿ ಜನಜಾತಿ ವಿಕಾಸ್ ಮಿಷನ್ ಮೂಲಕ ಬುಡಕಟ್ಟು ಸಮಾಜದ ಜನರ ಜೀವನೋಪಾಯವನ್ನು ಹೆಚ್ಚಿಸಲು ಪ್ರಯತ್ನಗಳನ್ನು ಮಾಡಲಾಗಿದೆ.

EMRS ಮೂಲಕ ಬುಡಕಟ್ಟು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಬುಡಕಟ್ಟು ಸಮುದಾಯಗಳ ಅಮೂಲ್ಯ ಕೊಡುಗೆಯನ್ನು ಗೌರವಿಸಲು ಬಿರ್ಸಾ ಮುಂಡಾ ಅವರ ಸ್ಮರಣಾರ್ಥ ಪ್ರತಿ ವರ್ಷ ನವೆಂಬರ್ 15 ರಂದು ಜಂಜಾಟಿ ಪ್ರೈಡ್ ದಿನವನ್ನು ಆಚರಿಸಲು ಸರ್ಕಾರ ನಿರ್ಧರಿಸಿದೆ. ಏಕಲವ್ಯ ಮಾದರಿ ವಸತಿ ಶಾಲೆಗಳ ಮೂಲಕ ಬುಡಕಟ್ಟು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ. 50% ಕ್ಕಿಂತ ಹೆಚ್ಚು ST ಜನಸಂಖ್ಯೆ ಇರುವ ಮತ್ತು ಕನಿಷ್ಠ 20,000 ಬುಡಕಟ್ಟು ನಿವಾಸಿಗಳು ವಾಸಿಸುವ ಪ್ರತಿಯೊಂದು ಬುಡಕಟ್ಟು ಬ್ಲಾಕ್‌ನಲ್ಲಿ EMRS ಅನ್ನು ಸ್ಥಾಪಿಸಲಾಗಿದೆ. ದೇಶಾದ್ಯಂತ ಸುಮಾರು 3.5 ಲಕ್ಷ EMRS ವಿದ್ಯಾರ್ಥಿಗಳಿಗೆ ಪ್ರಯೋಜನವಾಗುವಂತೆ 728 ST ಅನ್ನು ಸ್ಥಾಪಿಸುವ ಗುರಿಯನ್ನು ಸಚಿವಾಲಯ ಹೊಂದಿದೆ.

ಮೋದಿ ಸರ್ಕಾರದ ಅಡಿಯಲ್ಲಿ ಕಳೆದ 11 ವರ್ಷಗಳಲ್ಲಿ, ಬುಡಕಟ್ಟು ವ್ಯವಹಾರಗಳ ಸಚಿವಾಲಯವು ಬುಡಕಟ್ಟು ವಿದ್ಯಾರ್ಥಿಗಳನ್ನು ಸಬಲೀಕರಣಗೊಳಿಸಲು ತನ್ನ ವಿದ್ಯಾರ್ಥಿವೇತನ ವ್ಯವಸ್ಥೆಯನ್ನು ಬಲಪಡಿಸಿದೆ. ಇಂದು, ಸುಮಾರು 30 ಲಕ್ಷ ಬುಡಕಟ್ಟು ವಿದ್ಯಾರ್ಥಿಗಳು 5 ಕೇಂದ್ರ ವಿದ್ಯಾರ್ಥಿವೇತನ ಯೋಜನೆಗಳ ಮೂಲಕ ಪ್ರತಿ ವರ್ಷ ಪ್ರಯೋಜನ ಪಡೆಯುತ್ತಿದ್ದಾರೆ. 2013-14ರಲ್ಲಿ ಇದು 978 ಕೋಟಿ ರೂ.ಗಳಷ್ಟಿತ್ತು, ಆದರೆ ಈಗ 2024-25ರಲ್ಲಿ ಇದು 3,000 ಕೋಟಿ ರೂ.ಗಳಿಗೂ ಹೆಚ್ಚಾಗಿದೆ. ಕಳೆದ ದಶಕದಲ್ಲಿ 22,000 ಕೋಟಿ ರೂ.ಗಳಿಗಿಂತ ಹೆಚ್ಚು ಮೌಲ್ಯದ ವಿದ್ಯಾರ್ಥಿವೇತನಗಳನ್ನು ನೀಡಲಾಗಿದೆ. ಐಐಟಿ, ಐಐಎಂ ಮತ್ತು ಏಮ್ಸ್‌ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ 7,000 ವಿದ್ಯಾರ್ಥಿಗಳು ಈ ಯೋಜನೆಯ ಪ್ರಯೋಜನ ಪಡೆದಿದ್ದಾರೆ.

ಕಳೆದ ದಶಕದಲ್ಲಿ (2014 ಮತ್ತು 2024 ರ ನಡುವೆ), 117 ಸಮುದಾಯಗಳನ್ನು ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿಸಲಾಗಿದೆ, ಒಂದು ದಶಕದ ಹಿಂದೆ ಈ ಸಂಖ್ಯೆ ಕೇವಲ ಹನ್ನೆರಡಾಗಿತ್ತು. ಮೋದಿ ಸರ್ಕಾರದ ಕಳೆದ 11 ವರ್ಷಗಳಲ್ಲಿ, ಪ್ರತಿಯೊಂದು ವಲಯದಲ್ಲೂ ನಿರಂತರ ಕಲ್ಯಾಣ ಯೋಜನೆಗಳ ಸಹಾಯದಿಂದ, ಬುಡಕಟ್ಟು ಸಮುದಾಯವು ಅಂಚಿನಿಂದ ಹಿಂತಿರುಗಿ ಮುಖ್ಯವಾಹಿನಿಗೆ ಬಂದಿದೆ.

ಈಗ ಅವು ದೇಶದ ಅಭಿವೃದ್ಧಿ ಪ್ರಯಾಣದ ಕೇಂದ್ರವಾಗಿವೆ. ಪ್ರಧಾನ ಮಂತ್ರಿ-ಜನ್ಮನ್, ಧರ್ತಿ ಅಬಾ ಅಭಿಯಾನ್ ಮತ್ತು ವನ್ ಧನ್ ಯೋಜನೆಯಂತಹ ಕೇಂದ್ರ ಯೋಜನೆಗಳು ಬುಡಕಟ್ಟು ಸಮುದಾಯದವರಿಗೆ ಸಮಾನ ಹಕ್ಕುಗಳು, ಅವಕಾಶಗಳು ಮತ್ತು ಗೌರವವನ್ನು ಪಡೆಯಲು ಸಹಾಯ ಮಾಡುತ್ತದೆ.

ಮೊದಲನೇ ಪುಟದಿಂದ...

## ರಾಹುಲ್ ಗಾಂಧಿ

**ಹೊಸ ಬಂಗಲೆಯ ಇತಿಹಾಸವೇನು?:** ಈ ಬಂಗಲೆಯನ್ನು ಈ ಹಿಂದೆ ಕೇಂದ್ರ ಸಾಮಾಜಿಕ ನ್ಯಾಯ ರಾಜ್ಯ ಸಚಿವ ಮತ್ತು ಕರ್ನಾಟಕದ ಬಿಜೆಪಿ ನಾಯಕ ಎ. ನಾರಾಯಣಸ್ವಾಮಿ ಅವರಿಗೆ ನೀಡಲಾಗಿತ್ತು, ಅವರು 2021 ರಿಂದ 2024 ರವರೆಗೆ ಮೋದಿ ಸರ್ಕಾರದಲ್ಲಿ ಸಚಿವರಾಗಿದ್ದರು. ಎ. ನಾರಾಯಣಸ್ವಾಮಿ 2024 ರ ಲೋಕಸಭಾ ಚುನಾವಣೆಯಲ್ಲಿ ಸೋತರು. ಈಗ ಈ ಬಂಗಲೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಅಧಿಕೃತ ನಿವಾಸವಾಗಲಿದೆ.

ರಾಹುಲ್ ಗಾಂಧಿಯ ಹಿಂದಿನ ನಿವಾಸಗಳು ರಾಹುಲ್ ಗಾಂಧಿ 2019 ರಲ್ಲಿ ಸಂಸದರಾದಾಗಿನಿಂದ ತುಘಲಕ್ ಲೇನ್ ನಲ್ಲಿರುವ ಬಂಗಲೆ ಸಂಖ್ಯೆ 12 ರಲ್ಲಿ ವಾಸಿಸುತ್ತಿದ್ದರು. ಆದಾಗ್ಯೂ, ಮಾನನಷ್ಟ ಪ್ರಕರಣದಲ್ಲಿ ಶಿಕ್ಷೆಗೊಳಗಾದ ನಂತರ ಮತ್ತು ಅವರ ಲೋಕಸಭಾ ಸದಸ್ಯತ್ವ ರದ್ದಾದ ನಂತರ 2023 ರಲ್ಲಿ ಅವರು ಬಂಗಲೆಯನ್ನು ಖಾಲಿ ಮಾಡಿದರು.

ಇದಾದ ನಂತರ, ಅವರು ತಮ್ಮ ತಾಯಿ ಮತ್ತು ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿಯವರ ಜನಪಥ್ ನಿವಾಸಕ್ಕೆ ಸ್ಥಳಾಂತರಗೊಂಡರು. ಸದಸ್ಯತ್ವವನ್ನು ಪುನಃಸ್ಥಾಪಿಸಿದ ನಂತರವೂ ಅವರು ಇಲ್ಲಿಯೇ ವಾಸಿಸುತ್ತಿದ್ದರು.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಸ್ಥಾನಮಾನವು ಕ್ಯಾಬಿನೆಟ್ ಸಚಿವರಿಗೆ ಸಮಾನವಾಗಿರುತ್ತದೆ, ಆದ್ದರಿಂದ ರಾಹುಲ್ ಗಾಂಧಿಗೆ ಟೈಪ್ -8 ಬಂಗಲೆಯನ್ನು ನೀಡಲಾಗಿದೆ. ಸರ್ಕಾರಿ ನಿಯಮಗಳ ಪ್ರಕಾರ, ಈ ವರ್ಗದ ಬಂಗಲೆಗಳು 5 ಮಲಗುವ ಕೋಣೆಗಳು, ದೊಡ್ಡ ಹುಲ್ಲುಹಾಸು ಮತ್ತು ಸಾಕಷ್ಟು ಭದ್ರತಾ ವ್ಯವಸ್ಥೆಗಳನ್ನು ಹೊಂದಿವೆ.

ಕಾಂಗ್ರೆಸ್ ಮೂಲಗಳ ಪ್ರಕಾರ, ರಾಹುಲ್ ಗಾಂಧಿ ಗುರುವಾರದಿಂದ ತಮ್ಮ ವಸ್ತುಗಳನ್ನು ಹೊಸ ಬಂಗಲೆಗೆ ಸ್ಥಳಾಂತರಿಸಲು ಪ್ರಾರಂಭಿಸಿದ್ದಾರೆ. ಆದರೆ, ಜುಲೈ ಮೂರನೇ ವಾರದಲ್ಲಿ ಪ್ರಾರಂಭವಾಗುವ ಮಳೆಗಾಲದ ಅಧಿವೇಶನಕ್ಕೂ ಮುನ್ನ ಅವರು ಇಲ್ಲಿ ವಾಸಿಸಲು ಪ್ರಾರಂಭಿಸುತ್ತಾರೆ.

## ಬೆಳಗ್ಗೆ ಮದುವೆ ಕ್ಯಾನ್ಸಲ್!

ರಕ್ಷಣಾ ಇಲಾಖೆ ಅಧಿಕಾರಿಗಳು ಬಂದು ಕುಟುಂಬಸ್ಥರಿಗೆ ಬಿಗ್ ಶಾಕ್ ಕೊಟ್ಟಿದ್ದಾರೆ. ಬಾಲ್ಯ ವಿವಾಹ ನಿಷೇದದ ನಡುವೆಯೂ ಬಾಲ್ಯ ವಿವಾಹಕ್ಕೆ ಯತ್ನಿಸಿದ್ದವರನ್ನು ಅಧಿಕಾರಿಗಳು ತರಾಟೆಗೆ ತೆಗೆದುಕೊಂಡಿದ್ರು ಎನ್ನಲಾಗ್ತಿದೆ.

**ಬಾಲ್ಯ ವಿವಾಹ ತಡೆದ ಅಧಿಕಾರಿಗಳು:** ಆರತಕ್ಷತೆ ವೇಳೆ ಕಲ್ಯಾಣ ಮಂಟಪದ ಮೇಲೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧಿಕಾರಿಗಳು ದಾಳಿ ನಡೆಸಿ ಬಾಲ್ಯ ವಿವಾಹ ತಡೆದಿದ್ದಾರೆ. ದೇವನಹಳ್ಳಿಯ ವಿಜಯಪುರ ಪಟ್ಟಣದ ಚನ್ನಪ್ಪ ಸುಬ್ಬಮ್ಮ ಕಲ್ಯಾಣ ಮಂಟಪದಲ್ಲಿ ಅದ್ದೂರಿಯಾಗಿ ಬಾಲ್ಯ ವಿವಾಹ ಮಾಡಲು ಕುಟುಂಬಸ್ಥರಿ ಸಜ್ಜಾಗಿದ್ರು ಎಂದು ತಿಳಿದುಬಂದಿದೆ.

**17 ವರ್ಷದ ಹುಡುಗಿಗೆ ಮದುವೆ:** 17 ವರ್ಷದ ಹುಡುಗಿಯನ್ನ ಕುಟುಂಬಸ್ಥರು ಒಪ್ಪಿಸಿ ಬಾಲ್ಯ ವಿವಾಹ ಮಾಡುತ್ತಿದ್ದರು ಎನ್ನಲಾಗ್ತಿದೆ. ಮಕ್ಕಳ ಸಹಾಯವಾಣಿ 1098 ನಂಬರ್‌ಗೆ ಕರೆ ಮಾಡಿ ಬಾಲ್ಯ ವಿವಾಹದ ಬಗ್ಗೆ ಅಪರಿಚಿತರು ಮಾಹಿತಿ ನೀಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

**ಅಪ್ರಾಪ್ತೆ ರಕ್ಷಣೆ ಮಾಡಿದ ಅಧಿಕಾರಿಗಳು:** ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧಿಕಾರಿಗಳು ದಾಳಿ ನಡೆಸಿ ಬಾಲ್ಯ ವಿವಾಹವನ್ನ ತಡೆದಿದ್ದಾರೆ. ಅಪ್ರಾಪ್ತ ಯುವತಿಯನ್ನ ಮಹಿಳಾ ಸಾಂತ್ವನ ಕೇಂದ್ರಕ್ಕೆ ಕರೆದೊಯ್ಯಲಾಗಿದೆ. ಕಲ್ಯಾಣ ಮಂಟಪ ಮಾಲೀಕರಿಂದಲು ನಿಯಮ ಉಲ್ಲಂಘಿಸಿ ಬಾಲ್ಯ ವಿವಾಹಕ್ಕೆ ಕಲ್ಯಾಣ ಮಂಟಪ ನೀಡಿದ ಆರೋಪ ಕೇಳಿ ಬಂದಿದೆ.

**ವರ, ಪೋಷಕರ ವಿರುದ್ಧ ದೂರು:** ಅಪ್ರಾಪ್ತೆಯ ಪೋಷಕರು, ಮದುವೆಯಾಗ್ತಿದ್ದ ವರ ಮತ್ತು ಕಲ್ಯಾಣ ಮಂಟಪ ಮಾಲೀಕರ ವಿರುದ್ದ ಮಕ್ಕಳ ರಕ್ಷಣಾ ಇಲಾಖೆ ಅಧಿಕಾರಿಗಳು ದೂರು ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನ ವಿಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸೀರೆ ಉಟ್ಟ ಗಂಡು!

ಹುನಗುಂದ ತಾಲ್ಲೂಕಿನಲ್ಲಿ ಒಟ್ಟು 23 ಅಂಗನವಾಡಿಗಳ ಕಟ್ಟಡ ಕಾಮಗಾರಿ ನಡೆಯುತ್ತಿವೆ. ಹುನಗುಂದ ಪಂಚಾಯತ್ ರಾಜ್ ಇಲಾಖೆಯಿಂದ ಅಂಗನವಾಡಿ ಕಟ್ಟಡ ಕಾಮಗಾರಿ ನಡೆಯುತ್ತಿದ್ದು, ಹುನಗುಂದ ಪಂಚಾಯತ್ ರಾಜ್ ಇಲಾಖೆಯ ಅಕ್ರಮ ಈಗ ಬಯಲಾಗಿದೆ. ಅಂಗನವಾಡಿ ಕಟ್ಟಡ ನಿರ್ಮಾಣ ಕಾರ್ಯಕ್ಕೆ ನರೇಗಾ ಕೂಲಿಕಾರ್ಮಿಕರ ಬಳಕೆಯಲ್ಲಿ ಭಾರಿ ಅಕ್ರಮ ಎಸಗಲಾಗಿದೆ. ಕೂಲಿ ಕಾರ್ಮಿಕರ ಒಂದೇ ಫೋಟೊ ಎರಡೆರಡು ಗ್ರಾಪಂ ವ್ಯಾಪ್ತಿಯಲ್ಲಿ ಬಳಕೆಯಾಗಿದೆ. ಹುನಗುಂದ ತಾಲ್ಲೂಕಿನ ಗಂಜಿಹಾಳ ಗ್ರಾಪಂ ವ್ಯಾಪ್ತಿ ಅಂಗನವಾಡಿ ಕಟ್ಟಡ 3 ಕ್ಕೆ, ಬಿಂಜವಾಡಗಿ ಗ್ರಾಪಂ ವ್ಯಾಪ್ತಿಯ ಅಂಗನವಾಡಿ ಕಟ್ಟಡ 2 ಕ್ಕೆ ಒಂದೆ ಗ್ರೂಪ್ ಕಾರ್ಮಿಕರ ಫೊಟೊ ಬಳಸಲಾಗಿದೆ.

**ಫೋಟೊ ಒಂದೇ, ಹೆಸರು ಬೇರೆ ಬೇರೆ!:** ಹುನಗುಂದ ತಾಲ್ಲೂಕಿನ ರಾಮವಾಡಗಿ, ಇಳಕಲ್ ತಾಲ್ಲೂಕಿನ ಚಿನ್ನಾಪುರ ಎಸ್ ಟಿ ಅಂಗನವಾಡಿ ಕಟ್ಟಡಕ್ಕೆ ಒಂದೇ ಫೋಟೊ ಅಪ್ಲೋಡ್ ಮಾಡಲಾಗಿದೆ. ಫೋಟೊ ಒಂದೇ ಆದರೂ ಹೆಸರು ಹೆಸರು ಮಾತ್ರ ಬೇರೆ ಬೇರೆಯಾಗಿವೆ! ಆಯಾ ಗ್ರಾಪಂ ವ್ಯಾಪ್ತಿಯ ಕಾಮಗಾರಿಗೆ ಅದೇ ಪಂಚಾಯತ್ ವ್ಯಾಪ್ತಿಯ ಕಾರ್ಮಿಕರ ಬಳಸಿಕೊಳ್ಳಬೇಕು. ಆದರೆ ಇಲ್ಲಿ ನಿಯಮಗಳನ್ನು ಬೇಕಾಬಿಟ್ಟಿಯಾಗಿ ಉಲ್ಲಂಘನೆ ಮಾಡಲಾಗಿದೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಬಗ್ಗೆ ಗ್ರಾಪಂ ಪಿಡಿಒಗಳು, ತಾಪಂ ಅಧಿಕಾರಿಗಳು ಹಾರಿಕೆ ಉತ್ತರ ನೀಡುತ್ತಿದ್ದಾರೆ. ಇದು ನಮ್ಮ ತಪ್ಪಲ್ಲ, ಪಂಚಾಯತ್ ರಾಜ್ ಇಲಾಖೆ ವತಿಯಿಂದ ಅಂಗನವಾಡಿ ಕೆಲಸ ನಡೆದಿದೆ. ಅವರು ನಮಗೆ ಕಾರ್ಮಿಕರ ಬೇಡಿಕೆ ಇಟ್ಟಿರುತ್ತಾರೆ. ಆ ಪ್ರಕಾರ, ನಾವು ಅವರಿಗೆ ಕಾರ್ಮಿಕರ ಲಿಸ್ಟ್ ಮಾತ್ರ ಕೊಡುತ್ತೇವೆ. ಅವರು ತಮ್ಮ ಕೆಲಸದಲ್ಲಿ ಈ ರೀತಿ ಮಾಡಿದ್ದಾರೆ ಎಂದು ಬಿಂಜವಾಡಗಿ ಗ್ರಾಪಂ ಪಿಡಿಒ ಪ್ರವೀಣ ಕಂಚಿ ಹೇಳಿದ್ದಾರೆ. ಇನ್ನು ಹುನಗುಂದ ತಾಪಂ ಇಒ ಮುರಳಿ ದೇಶಪಾಂಡೆ ಅವರಿಂದಲೂ ಅದೇ ಸಮರ್ಥನೆ ಬಂದಿದೆ. ಅದು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಆಗಿದೆ. ಇದರಲ್ಲಿ ನಮ್ಮಪಾತ್ರವಿಲ್ಲ ಆದರೂ ಪರಿಶೀಲನೆ ನಡೆಸುತ್ತೇವೆ ಎಂದು ಹೇಳಿದ್ದಾರೆ.

ಹುನಗುಂದ ಪಂಚಾಯತ್ ರಾಜ್ ಇಲಾಖೆ ಎಇಇ ಕೃಷ್ಣರಾವ್ ನಾಯಕ್ ಅವರನ್ನು ಕೇಳಿದರೆ, ಅಂಗನವಾಡಿ ಕಟ್ಟಡಕ್ಕೆ ನರೇಗಾದಿಂದ 8 ಲಕ್ಷ ರೂ., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ 15 ಲಕ್ಷ ರೂ, ಒಟ್ಟು 32 ಲಕ್ಷ ರೂ. ಹಣ ನೀಡಲಾಗುತ್ತದೆ. ಹುನಗುಂದ ತಾಲ್ಲೂಕಿನಲ್ಲಿ 23 ಅಂಗನವಾಡಿ ಕಟ್ಟಡ ಕಾಮಗಾರಿ ನಡೆದಿವೆ. ಕಾಮಗಾರಿ ಪಂಚಾಯತ್ ರಾಜ್ ಇಲಾಖೆಯಿಂದ ನಡೆದಿದೆ. ಒಂದೆ ಫೋಟೊ ಬೇರೆ ಕಡೆ ಬಳಸಿದ್ದು ತಪ್ಪು. ಇದನ್ನು ನರೇಗಾದವರು ಮಾಡಿರುತ್ತಾರೆ. ನಮ್ಮ ಜ್ಯೂನಿಯರ್ ಇಂಜಿನಿಯರ್ ಗಳು ಕೆಲಸದ ಒತ್ತಡದಲ್ಲಿ ಗಮನಿಸಿರಲಿಕ್ಕಿಲ್ಲ. ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುತ್ತದೆ ಎಂದಿದ್ದಾರೆ.

ಒಟ್ಟಿನಲ್ಲಿ ನರೇಗಾ ಪ್ರಮುಖ ಯೋಜನೆ ಗ್ರಾಮೀಣ ಮಟ್ಟದಲ್ಲಿ ಬಾರಿ ದುರ್ಬಳಕೆಯಾಗುತ್ತಿದೆ. ಇದಕ್ಕೆ ಈ ಅಕ್ರಮ ಸಾಕ್ಷಿಯಾಗಿದ್ದು, ಮೇಲಾಧಿಕಾರಿಗಳು ಈ ಬಗ್ಗೆ ಗಮನಹರಿಸಿ ತಪ್ಪಿತಸ್ಥರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕಿದೆ.

## ನೇಮಿಸಿದ ಇರಾನ್

ಹೈಪರ್‌ಸಾನಿಕ್ ಕ್ಷಿಪಣಿಗಳು ಶಬ್ಧಕ್ಕಿಂತ ಐದು ಪಟ್ಟು ವೇಗದಲ್ಲಿ ಚಲಿಸುವ ಸಾಮರ್ಥ್ಯವನ್ನು ಹೊಂದಿದ್ದು, ಅದರ ಜಾಡನ್ನು ಪತ್ತೆಹಚ್ಚಿ, ತಡೆಯುವುದು ಕಷ್ಟಕರವಾಗಿದೆ. ಇದರ ಜೊತೆಗೆ ಇರಾನ್ ಡ್ರೋನ್‌ಗಳ ಹಿಂಡನ್ನೇ ರವಾನಿಸಿದೆ. ಅವುಗಳ ಪೈಕಿ ಎರಡನ್ನು ಡೆಡ್‌ಸೀ ಪ್ರದೇಶದ ಸಮೀಪ ಪತನಗೊಳಿಸಿರುವುದಾಗಿ ಇಸ್ರೇಲ್ ಹೇಳಿಕೊಂಡಿದೆ.

ಇರಾನ್ ಮಂಗಳವಾರ ತಡರಾತ್ರಿ, ಇಸ್ರೇಲ್ ಮೇಲೆ ಹೈಪರ್ ಸಾನಿಕ್ ಕ್ಷಿಪಣಿಗಳನ್ನು ಪ್ರಯೋಗಿಸಿದೆಯೆಂದು ಇಸ್ಲಾಮಿಕ್ ರಿಪಬ್ಲಿಕನ್ ಗಾರ್ಡ್ಸ್ ಸೇನೆಯ ಮೂಲಗಳು ತಿಳಿಸಿವೆ.ತನ್ನ ಮಿತ್ರ ರಾಷ್ಟ್ರವಾದ ಇಸ್ರೇಲ್ ಇರಾನ್ ಮೇಲೆ ನಡೆಸುತ್ತಿರುವ ದಾಳಿಗಳ ಹಿಂದೆ ತನ್ನ ಯಾವುದೇ ಪಾತ್ರವಿಲ್ಲವೆಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ ದಿನದಿಂದ ದಿನಕ್ಕೆ ತನ್ನ ಸಹನೆ ಕ್ಷೀಣಿಸುತ್ತಿದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

## ಬೆಂಬಲಕ್ಕೆ ನಿಂತ ರಷ್ಯಾ

ಇರಾನ್ ಇಸ್ರೇಲ್ ಮೇಲೆ ಬಹುದೊಡ್ಡ ದಾಳಿ ನಡೆಸಿದರೆ ಅಮೆರಿಕ ರಣರಂಗಕ್ಕೆ ಇಳಿಯುವ ಸಾಧ್ಯತೆ ಹೆಚ್ಚಿದೆ ಎಂದು ಹೇಳಲಾಗುತ್ತಿದೆ

ಅಮೆರಿಕದ ಎಚ್ಚರಿಕೆ ನಡುವೆ ಈಗ, ರಷ್ಯಾ ಕೂಡ ಎಂಟ್ರಿ ಕೊಟ್ಟಿದ್ದು, ಅಮೆರಿಕಾಕ್ಕೆ ಸೈಲೆಂಟಾಗಿರುವಂತೆ ವಾರ್ನಿಂಗ್ ಕೊಟ್ಟಿದೆ. ಈ ಮೂಲಕ ಆಯಾ ದೇಶಗಳ ಪರ ಒಂದೊಂದೆ ದೇಶಗಳು ಎಂಟ್ರಿ ಆರಂಭವಾದಂತಿದ್ದು, ಒಂದೊಮ್ಮೆ ಸ್ವಲ್ಪ ಹೆಚ್ಚು ಕಡಿಮೆಯಾದರೂ ಇಡೀ ಪ್ರಪಂಚ ಮತ್ತೆ ಮತ್ತೊಂದು ಮಹಾಯುದ್ಧದ ಭೀಕರತೆಗೆ ಸಿಲುಕಲಿದೆ.

## 198 ಮೃತದೇಹ ಹಸ್ತಾಂತರ

ಸುದ್ದಿಗಾರರೊಂದಿಗೆ ಮಾತನಾಡಿದ ಜೋಶಿ, ಒಟ್ಟು 215 ಡಿಎನ್‌ಎ ವರದಿಗಳು ಮ್ಯಾಚ್ ಆಗಿವೆ. ಈ ಪೈಕಿ 198 ಮೃತದೇಹಗಳನ್ನ ಹಸ್ತಾಂತರಿಸಲಾಗಿದೆ. ಈ ಪೈಕಿ 149 ಭಾರತೀಯರು, 7 ಪೋರ್ಚುಗೀಸ್, 32 ಬ್ರಿಟಿಷ್ ಮತ್ತಿ ಕೆನಡಿಯನ್ ಪ್ರಜೆಗಳ ಮೃತದೇಹಗಳು ಪತ್ತೆಯಾಗಿವೆ ಎಂದು ಮಾಹಿತಿ ನೀಡಿದ್ದಾರೆ.

15 ಮೃತದೇಹಗಳನ್ನು ಏರ್ ಅಂಬುಲೆನ್ಸ್ ಹಾಗೂ 183 ಮೃತದೇಹಗಳನ್ನು ರೋಡ್ ಅಂಬುಲೆನ್ಸ್ ಮೂಲಕ ಸಾಗಿಸಲಾಗಿದೆ. ಇದೆಲ್ಲವೂ ಸೇರಿ ಒಟ್ಟಾರೆ 222 ಮೃತದೇಹಗಳನ್ನು ಪತ್ತೆಹಚ್ಚಲಾಗಿದೆ. 8 ಮಂದಿ ಮೃತದೇಹಗಳ ಗುರುತು ಮಾತ್ರ ಪತ್ತೆಯಾಗಿಲ್ಲ ಎಂದು ವಿವರಿಸಿದ್ದಾರೆ.

**ಬ್ಲ್ಯಾಕ್ ಬಾಕ್ಸ್ ಅಮೆರಿಕಗೆ ರವಾನೆ:** ಸದ್ಯ ಪತನವಾಗಿರುವ ಏರ್ ಇಂಡಿಯಾ ಬೋಯಿಂಗ್-787 ವಿಮಾನದ ಬ್ಲ್ಯಾಕ್ ಬಾಕ್ಸ್ ಅನ್ನು ಡಿಕೋಡ್ ಮಾಡಲು ಅಮೆರಿಕಕ್ಕೆ ಕಳುಹಿಸಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ಜೂನ್ 13ರಂದು ಬಿಜೆ ಮೆಡಿಕಲ್ ಹಾಸ್ಟೆಲಿನ ಮೇಲ್ಛಾವಣಿಯಲ್ಲಿದ್ದ ಏರ್ ಇಂಡಿಯಾ ವಿಮಾನದ ಬ್ಲ್ಯಾಕ್ ಬಾಕ್ಸ್ ಅನ್ನು ವಿಮಾನ ಅಪಘಾತ ತನಿಖಾ ಬ್ಯೂರೋ ವಶಪಡಿಸಿಕೊಂಡಿತ್ತು. ಆದ್ರೆ ಬ್ಲ್ಯಾಕ್ ಬಾಕ್ಸ್‌ಗೆ ಬೆಂಕಿ ಬಿದ್ದು ಬಾಹ್ಯವಾಗಿ ಹಾನಿಯಾಗಿದೆ. ಇದರಿಂದ ಸ್ಥಳೀಯ ತನಿಖಾಧಿಕಾರಿಗಳಿಂದ ಮಾಹಿತಿ ಹೊರ ತೆಗೆಯಲು ಸಾಧ್ಯವಾಗಿಲ್ಲ. ಈ ಹಿನ್ನೆಲೆ ಡೇಟಾ ರಿಕವರಿಗಾಗಿ ಬ್ಲ್ಯಾಕ್ ಬಾಕ್ಸ್ ಅನ್ನು ಅಮೆರಿಕಾಗೆ ರವಾನೆ ಮಾಡಲಾಗಿದೆ ಎಂದು ತಿಳಿದುಬಂದಿದೆ.

## ಬಾಕಿ

124.80 ಅಡಿಗಳ ಗರಿಷ್ಠ ಮಟ್ಟ ಹೊಂದಿರುವ ಕೆಆರ್‌ಎಸ್ ಡ್ಯಾಂನಲ್ಲಿ 117.80 ಅಡಿ ನೀರಿದ್ದು, ಸಂಪೂರ್ಣ ಭರ್ತಿಗೆ 7 ಅಡಿಗಳಷ್ಟೇ ಬಾಕಿಯಿದೆ. ಹಳೆ ಮೈಸೂರು ಭಾಗದ ಜೀವನಾಡಿ ಕೆಆರ್‌ಎಸ್ ಡ್ಯಾಂ ಭರ್ತಿಯಾಗುತ್ತಿರುವುದು ರೈತರಲ್ಲಿ ಸಂತಸ ಮೂಡಿಸಿದೆ.

**ಹಾರಂಗಿ ಜಲಾಶಯ 2849.77 ಅಡಿ ಭರ್ತಿ:** 2,859 ಅಡಿ ಗರಿಷ್ಠ ಸಂಗ್ರಹ ಸಾಮರ್ಥ್ಯ ಹೊಂದಿರುವ ಹಾರಂಗಿ ಜಲಾಶಯದಲ್ಲಿ 2849.77 ಅಡಿ ನೀರಿದೆ. ಜಲಾಶಯಕ್ಕೆ ಸದ್ಯ 3,070 ಕ್ಯೂಸೆಕ್ ನೀರಿನ ಒಳಹರಿವಿದ್ದು, 3,070 ಕ್ಯುಸೆಕ್ ಹೊರಹರಿವಿದೆ.

**ಹೇಮಾವತಿಗೆ 13,273 ಕ್ಯೂಸೆಕ್ ಒಳಹರಿವು:** ಇನ್ನೂ 37.103 ಟಿಎಂಸಿ ಸಂಗ್ರಹ ಸಾಮರ್ಥ್ಯ ಹೊಂದಿರುವ ಹೇಮಾವತಿ ಜಲಾಶಯದಲ್ಲಿ 29.350 ಟಿಎಂಸಿ ನೀರಿದೆ. 2,922 ಅಡಿ ಗರಿಷ್ಠ ಮಟ್ಟದ ಸಂಗ್ರಹ ಸಾಮರ್ಥ್ಯ ಹೊಂದಿರುವ ಜಲಾಶಯದಲ್ಲಿ ಇಂದು 2,913.40 ಅಡಿ ನೀರಿದೆ. ಇಂದು 13,273 ಕ್ಯುಸೆಕ್ ಒಳಹರಿವಿದ್ದು, 4,750 ಕ್ಯೂಸೆಕ್ ಹೊರಹರಿವಿದೆ.

## ಮಳೆ

ಗೇರುಸೊಪ್ಪ, ಮಂಕಿ, ಯಲ್ಲಾಪುರ, ಆಗುಂಬೆ, ಕೊಟ್ಟಿಗೆಹಾರ, ಕಮ್ಮರಡಿ, ಭಾಗಮಂಡಲ, ಹುಂಚದಕಟ್ಟೆ, ಶಿರಾಲಿ, ಕದ್ರಾ, ಸುಳ್ಯ, ಕುಮಟಾ, ಧರ್ಮಸ್ಥಳ, ಬನವಾಸಿ, ಜೋಯ್ಡಾ, ಬೆಳ್ತಂಗಡಿ, ಹೊನ್ನಾವರ, ತ್ಯಾಗರ್ತಿ, ಖಾನಾಪುರ್, ಗುತ್ತಲ್, ಆನವಟ್ಟಿ, ಕಳಸ, ವಿರಾಜಪೇಟೆ, ಹೊಸಕೋಟೆ, ಅಂಕೋಲಾ, ಪುತ್ತೂರ್, ಮೂಡುಬಿದಿರೆ, ಬಂಟವಾಳ, ಸಿದ್ದಾಪುರ, ಮಾಣಿ, ಕಾರವಾರ, ಮುಂಡಗೋಡಿನಲ್ಲಿ ಸಾಧಾರಣ ಮಳೆಯಾಗಲಿದ್ದು, ಉಳಿದೆಡೆ ಒಣಹವೆ ಮುಂದುವರಿಯಲಿದೆ.

# ಪ್ರಾಣ, ಆಸ್ತಿ ರಕ್ಷಣೆ ವಿಪತ್ತು ನಿರ್ವಹಣಾ ಪಡೆಯ ಮುಖ್ಯ ಉದ್ದೇಶ



**ಕೋಲಾರ:** ಸಾರ್ವಜನಿಕರ ಪ್ರಾಣ, ಆಸ್ತಿಯನ್ನು ರಕ್ಷಣೆ ಮಾಡುವಂತಹ ಕಾರ್ಯ ಜಿಲ್ಲಾ ವಿಪತ್ತು ನಿರ್ವಹಣಾ ಪಡೆಯ ಮುಖ್ಯ ಉದ್ದೇಶವಾಗಿದೆ. ವಿಪತ್ತುಗಳು ಸಂಭವಿಸಿದಾಗ ಜನರಲ್ಲಿ ಆತ್ಮವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದರು.

ಇಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ವತಿಯಿಂದ ಆಯೋಜಿಸಿದ್ದ ಕ್ಷಿಪ್ರ ಕಾರ್ಯಾಚರಣೆ ತಂಡ ಎ-ಖಂಖಿ ನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವೆಲ್ಲರೂ ಇಂದು ನೆಮ್ಮದಿಯಾಗಿ ಸುಖವಾಗಿ ಜೀವಿಸುತ್ತಿದ್ದೇವೆ ಅದಕ್ಕೆ ಕಾರಣ ಗಡಿಗಳಲ್ಲಿ ಕಾಯುತ್ತಿರುವ ಯೋಧರು. ಅದೇ ರೀತಿ ಜಿಲ್ಲೆಯಲ್ಲಿ ಮಳೆ, ವಿಪತ್ತುಗಳು ಸಂಭವಿಸಿದಾಗ ಜಿಲ್ಲಾ ವಿಪತ್ತು ನಿರ್ವಹಣಾ ಪಡೆ ಸನ್ನದ್ದರಾಗಿ ಕಾರ್ಯ ನಿರ್ವಹಿಸಬೇಕು ಎಂದರು. ವಿಪತ್ತು ನಿರ್ವಹಣಾ ತಂಡದಲ್ಲಿ 300 ಜನರಿದ್ದು, ಎಲ್ಲರೂ ತರಬೇತಿ ಪಡೆದು ಪರಿಣಿತರಾಗಿದ್ದಾರೆ. ಒಬ್ಬರು 10 ಜನರನ್ನು ತಯಾರಿ ಮಾಡಿದರೆ ಆ ತಂಡವು ಮತ್ತ?ಟ್ಟು ಬಲಿ?ಟ್ಟವಾಗುತ್ತದೆ. ವಿಪತ್ತು ನಿರ್ವಹಣೆಯಲ್ಲಿ ಎನ್.ಎಸ್.ಎಸ್., ಸ್ಕೌಟ್ಸ್ ಗೈಡ್ಸ್, ಎನ್ ಜಿ.ಒ.ಗಳ ಜವಾಬ್ದಾರಿ ಅತಿಮುಖ್ಯ ವಾಗಿದೆ. ಸಾರ್ವಜನಿಕರ ಸಹಭಾಗಿತ್ವ ಸಹ ಮುಖ್ಯವಾಗಿದ್ದು, ಎಲ್ಲರ ಜೀವನ ರಕ್ಷಣೆ ಮಾಡುವ ಸಾಮಾಜಿಕ ಹೊಣೆಗಾರಿಕೆ ಸಮುದಾಯಗಳಿಗೂ ಬರಬೇಕು ಎಂದರು. ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಬಿ.ನಿಖಿಲ್ ಅವರು ಮಾತನಾಡಿ ಜಿಲ್ಲೆಯಲ್ಲಿ ಯಾವುದೇ ಅನಾಹುತ, ವಿಪತ್ತು ಸಂಭವಿಸಿದಾಗ ಈ ಕಾರ್ಯಪಡೆ ತ್ವರಿತಗತಿಯಲ್ಲಿ ಕಾರ್ಯನಿರ್ವಹಿಸಲಿದೆ. ವಿಪತ್ತು ತಡೆಯಲು, ತ್ವರಿತಗತಿಯಲ್ಲಿ ಸ್ಪಂದಿಸಲು ಹಾಗೂ ವಿಪತ್ತು ನಿರ್ವಹಣೆ, ಉಪಶಮನ ಮಾಡಲು ಸದಾ ಸನ್ನದ್ಧವಾಗಿರಲಿದೆ ಅವರಿಗೆ ತರಬೇತಿ ಕೊಡಲಾಗುತ್ತದೆ ತಿಳಿಸಿದರು.

ನೋಂದಣಿ ಮಾಡಿಕೊಂಡು ಉದ್ಘಾಟನೆ ಕಾರ್ಯಕ್ರಮಕ್ಕೆಬಂದಿರುವಂತಹ 300 ಹೆಚ್ಚಿನ ಸ್ವಯಂ ಸೇವಕರು ತಾವು ಮೊದಲು ಸಾಮಾಜಿಕ ಜಾಲತಾಣಗಳಲ್ಲಿ ಅರದಾಡುವ ಸುಳ್ಳು ಸುದ್ದಿಗಳನ್ನು ತಡೆಯಬೇಕು ಅಂತಹ ವಿಚಾರಗಳು ಇದ್ದರೆ ಪೊಲೀಸ್ ಕಂಟ್ರೋಲ್ ರೂಂಗೆ ಕರೆಮಾಡಿ ಖಚಿತ ಪಡಿಸಿಕೊಳ್ಳಬಹುದು ಹಾಗೂ ಎಲ್ಲಾಇಲಾಖೆಗಳು ಸೇರಿ ನಡೆಸುವ ತರಬೇತಿಯನ್ನು ಪಡೆದುಕೊಂಡು ಸಂಪೂರ್ಣವಾಗಿ ಈ ಒಂದು ಕಾರ್ಯಾಚರಣೆಯಲ್ಲಿ ತೊಡಗಿಕೊಳ್ಳಿ ಇದು ಸಮುದಾಯದಲ್ಲಿರುವ ತಮ್ಮೆಲ್ಲರ ಕರ್ತವ್ಯವಾಗಿದೆ ಈ ತಂಡದಲ್ಲಿರುವ ತಾವು ಸಮಾಜಕ್ಕೆ ಒಳ್ಳೆಯ ಸಂದೇಶವನ್ನು ಕೊಡಬೇಕು ಮತ್ತು ಮಾದರಿ ವ್ಯಕ್ತಿಯಾಗಬೇಕು ನಂತರ ಒಬ್ಬೊಬ್ಬರು ಹತ್ತು ಜನರಿಗೆ ತರಬೇತಿಯನ್ನು ನೀಡಿದರೆ ತಾವೇ ಸಮುದಾಯವನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ಜಿಲ್ಲಾಡಳಿತ ವತಿಯಿಂದ ಆಯೋಜಿಸಿದ್ದ ಕ್ಷಿಪ್ರ ಕಾರ್ಯಾಚರಣೆ ತಂಡದ ಉದ್ಘಾಟನೆ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಪ್ರವೀಣ್.ಪಿ.ಬಾಗೇವಾಡಿ ಅವರು ಅಧ್ಯಕ್ಷತೆ ವಹಿಸಿದ್ದರು.

ಜಿಲ್ಲೆಯಲ್ಲಿ ವಿಪತ್ತು ನಿರ್ವಹಣೆಗೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅವರ ನೇತೃತ್ವದಲ್ಲಿ ಜಿಲ್ಲಾಡಳಿತವು ಕ್ಷಿಪ್ರ ಕಾರ್ಯಾಚರಣೆ ತಂಡ ಎಂಬ ವಿನೂತನ ಯೋಜನೆ ರೂಪಿಸಿದ್ದು ಇದು ನಮ್ಮ ಜಿಲ್ಲೆಯಲ್ಲಿಯೇ ಮೊದಲು ಜಾರಿಗೆ ತರಲಾಗಿದೆ ಆದ್ದರಿಂದ ಇಂತಹ ಯೋಜನೆಯನ್ನು ಉತ್ತಮಗೊಳಿಸುವಲ್ಲಿ ಯಶಸ್ವಿಯಾದ ಜಿಲ್ಲಾಧಿಕಾರಿ ಅವರಿಗೆ ಸಿಇಓ ಅವರು ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಮಂಗಳ, ಉಪ ವಿಭಾಗಾಧಿಕಾರಿ ಡಾ.ಮೈತ್ರಿ, ಜಿಲ್ಲಾ ಅರಣ್ಯ ಅಧಿಕಾರಿ ಸಾರಿನ ಸಿಕ್ಕಲಿಗಾರ್, ಅಗ್ನಿಶಾಮಕ ದಳ, ಗೃಹ ರಕ್ಷಣಾ ದಳ, ಸೇರಿದಂತೆ ಇನ್ನಿತರ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಫಿಟ್ನೆಸ್ ತರಬೇತಿದಾರರನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಹಿರಿಯ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳಿಗೆ ಫಿಟ್ನೆಸ್ ತರಬೇತಿ ನೀಡುವ ಸಲುವಾಗಿ 12 ಫಿಟ್ನೆಸ್ ತರಬೇತುದಾರರ ಸೇವೆ ಪಡೆಯಲು ನೇಮಕಾತಿ ಆದೇಶ ನೀಡುವ ದಿನಾಂಕದಿಂದ ಒಂದು ವರ್ಷ ಅವಧಿಯವರೆಗೆ ಮಾತ್ರ ತಾತ್ಕಾಲಿಕವಾಗಿ ಮಾಸಿಕ ಸಂಚಿತ ವೇತನ, ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಮತ್ತು ಇನ್ನಿತರ ಪೂರಕ ದಾಖಲೆಗಳನ್ನು ಜೂ. 25ರಂದು ಸಂಜೆ 4 ಗಂಟೆಯೊಳಗೆ ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು-560001 ಇವರಿಗೆ ಸಲ್ಲಿಸಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವೆಬ್‌ಸೈಟ್ dyes.karnataka.gov.in ನಲ್ಲಿ ಪಡೆಯಬಹುದು.

## ವಿದ್ಯುತ್ ವ್ಯತ್ಯಯ

**ರಾಮನಗರ:** 66/11 ಕೆವಿ ಉರಗಹಳ್ಳಿ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಕ್ರಷರ್ ಏರಿಯಾ, ನಾಮ್‌ಧಾರಿ, ಅಣ್ಣಹಳ್ಳಿ, ಸೀಬಕಟ್ಟೆ, ಚಿಕ್ಕರಸನಹಳ್ಳಿ, ಮಂಚೇಗೌಡನಪಾಳ್ಯ, ವಡ್ಡರದೊಡ್ಡಿ, ಜಂಗಮರಪಾಳ್ಯ, ಬಿಲ್ಲೆದೊಡ್ಡಿ, ಗೋಪಹಳ್ಳಿ, ಹುಚ್ಚಮ್ಮನದೊಡ್ಡಿ, ಬೆಣ್ಣಹಳ್ಳಿ, ಪಾರೇಗೌಡನಪಾಳ್ಯ, ಶಂಭೇಗೌಡನದೊಡ್ಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜೂ. 19ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ತಿಳಿಸಿದ್ದಾರೆ.

## 20ರಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66/11 ಕೆವಿ ಅಕ್ಕೂರುಮೊಳೆ ಮತ್ತು 66/11ಕೆವಿ ಇಗ್ಗಲೂರು ವಿದ್ಯುತ್ ಉಪಕೇಂದ್ರಗಳ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಅಕ್ಕೂರುಮೊಳೆ, ಸಂತೆಮೊಗೇನಹಳ್ಳಿ, ಅಕ್ಕೂರು, ಗರಕಹಳ್ಳಿ, ಸುಳ್ಳೇರಿ, ಮಳೂರುಪಟ್ಟಣ, ಚಕ್ಕೆರೆ, ಚಕ್ಕಲೂರು, ಕೃಷ್ಣಾಪುರ, ತೂಬಿನಕೆರೆ, ಎ.ವಿ.ಹಳ್ಳಿ, ಕೊಂಡಾಪುರ, ಸೋಗಾಲ, ಬಾಣಗಹಳ್ಳ, ಮಾದಾಪುರ, ಇಗ್ಗಲೂರು, 66ಕೆವಿ ಇಎಚ್‌ಟಿ/ ಎಂ/ಎಸ್ ಸಿಎನ್ ಎನ್‌ಎಲ್, ನಿಡಗೋಡಿ, ಮಾರೇಗೌಡನದೊಡ್ಡಿ, ನೇರಳೂರು, ಸರಗೂರು, ಎಲೆತೋಟದಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜೂ. 20ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 20ರಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66 ಕೆವಿ ಕನಕಪುರ-ಸೋಮನಹಳ್ಳಿ ಲೈನ್-1 ಮಾರ್ಗ ಮತ್ತು 66/11 ಕೆವಿ ಮಣಿಯಂಬಾಳ್, ಮರಳವಾಡಿ ಮತ್ತು ಗೋದೂರು ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಮರಳವಾಡಿ, ಯಲಚವಾಡಿ, ಟಿ. ಹೊಸಹಳ್ಳಿ, ಬನವಾಸಿ, ತೋಕಸಂದ್ರ, ದ್ಯಾವಸಂದ್ರ ಪಂಚಾಯಿತಿ ವ್ಯಾಪ್ತಿ ಮತ್ತು ಛತ್ರ, ಪಡುವನಗೆರೆ, ಅಗರ, ಬಳೆಚನ್ನವಲಸೆ ಮತ್ತು ಕಲ್ಲಹಳ್ಳಿ ಕೈಗಾರಿಕಾ ಪ್ರದೇಶದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಜೂ. 20ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ವತಿಯಿಂದ 2025-26ನೇ ಸಾಲಿಗೆ ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಲತೆ (ಶ್ರವಣದೋಷ/ದೃಷ್ಟಿದೋಷ) ಕಾಯಿಲೆಯಿಂದ ಬಳಲುತ್ತಿರುವ ವಿಕಲಚೇತನ ವ್ಯಕ್ತಿಗಳ ಆರೈಕೆದಾರರಿಗೆ ಪ್ರೋತ್ಸಾಹಧನ ನೀಡಲು ವಿಕಲಚೇತನರ ಆರೈಕೆದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ವಿಕಲಚೇತನರ ಆರೈಕೆದಾರರಿಗೆ ಮಾಹೆಯಾನ 1,000 ರೂ.ಗಳ ಪ್ರೋತ್ಸಾಹಧನ ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಜೂ. 30 ಕೊನೆಯ ದಿನವಾಗಿದೆ. ಅರ್ಜಿದಾರರು ಯು.ಡಿ.ಐ.ಡಿ ಕಾರ್ಡ್, ಸಕ್ಷಮ ಪ್ರಾಧಿಕಾರದಿಂದ ಪಡೆದ ಜಾತಿ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆರೈಕೆದಾರರು ಹಾಗೂ ವಿಕಲಚೇತನರ ಜಂಟಿ ಭಾವಚಿತ್ರ, ಆಧಾರ್ ಕಾರ್ಡ್‌ನೊಂದಿಗೆ ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಂ.ಆರ್.ಡಬ್ಲ್ಯೂಗಳನ್ನು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯು.ಆರ್. ಡಬ್ಲ್ಯೂಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂಗಳಿಗೆ ಅರ್ಜಿ ಸಲ್ಲಿಸಬೇಕು.

## ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿ 2025ಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರದ ವತಿಯಿಂದ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ರಾಷ್ಟ್ರಾದ್ಯಂತ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ:31.07.2025ಕ್ಕೆ ಅನ್ವಯವಾಗುವಂತೆ 05 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿರುವ ಮಕ್ಕಳು ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ, ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿರುವ ಎಲ್ಲಾ ಮಕ್ಕಳು ಅರ್ಹರಾಗಿರುತ್ತಾರೆ. ಆಸಕ್ತರು ಜುಲೈ 31 ರೊಳಗೆ ಆನ್ ಲೈನ್ ವೆಬ್‌ಸೈಟ್ https://awards.gov.in ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ನಂ.ಸಿಎ-15:17, ಮೊದಲನೇ ಮಹಡಿ, ಅಂಜನಾದ್ರಿ, ಮುಖ್ಯ ರಸ್ತೆ, ವಿಜಯನಗರ 4ನೇ ಹಂತ, 2ನೇ ಫೇಸ್, ಮೈಸೂರು-32 ದೂ. ಸಂಖ್ಯೆ:0821-2543003 ಇ-ಮೇಲ್: : dcpumysore@gmail.com ನ್ನು ಸಂಪರ್ಕಿಸಬಹುದು.

# 532 ಮಂದಿ ಪೌರ ಕಾರ್ಮಿಕರ ಹುದ್ದೆ ಕಾಯಂ




**ಬೆಂಗಳೂರು:** ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿ ಇರುವ 35000 ಸಾವಿರ ನಿಮ್ಮ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಇಲಾಖೆಯ 532 ಮಂದಿ ಪೌರ ಕಾರ್ಮಿಕರ ಹುದ್ದೆ ಕಾಯಂ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ಬೆಂಗಳೂರಿನ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಹಮ್ಮಿಕೊಳ್ಳಲಾಗಿದ್ದ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವವನ್ನು ಉದ್ಘಾಟಿಸಿ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು, ನಮ್ಮದು ನುಡಿದಂತೆ ನಡೆಯುವ ಸರ್ಕಾರ. ನಿಮ್ಮ ಬೇಡಿಕೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ. ಎನ್.ಪಿ.ಎಸ್. ಜಾರಿ ಮಾಡಿದ್ದು ಕೇಂದ್ರ ಸರ್ಕಾರ. ನಾವು ಓಪಿಎಸ್ ಜಾರಿ ಸಂಬಂಧಿಸಿದಂತೆ ನಮ್ಮ ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ. ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

1964 ರಲ್ಲಿ ಆರಂಭವಾದ ನೌಕರರ ಸಂಘ ಇಷ್ಟು ಮಹತ್ತರ ವರ್ಷಗಳ ಕಾಲ ನಿರಂತರವಾಗಿ ನೌಕರರ ಕಷ್ಟ ಸುಖಗಳಿಗೆ ಸ್ಪಂದಿಸಿ, ಪ್ರಾಮಾಣಿಕ ಹೋರಾಟ ನಡೆಸುತ್ತಿದೆ. ಜೊತೆಗೆ ಗ್ರಾಹಕರಿಗೆ ಸಮರ್ಪಕ ವಿದ್ಯುತ್ ಪೂರೈಸುವ ಹೊಣೆಗಾರಿಕೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೀರಿ. ಇದಕ್ಕೆ ನೀವೆಲ್ಲರೂ ಅಭಿನಂದನಾರ್ಹರು ಎಂದು ಶ್ಲಾಘಿಸಿದರು.

ಇಡೀ ಏಷ್ಯಾದಲ್ಲಿ ಮೊದಲಿಗೆ ವಿದ್ಯುತ್ ಉತ್ಪಾದನೆ ಆಗಿದ್ದು 1902 ರಲ್ಲಿ ಅದು ಕರ್ನಾಟಕದಲ್ಲಿ. 1905 ರಲ್ಲಿ ಬೆಂಗಳೂರಿನಲ್ಲಿ ಪ್ರಥಮ ವಿದ್ಯುತ್ ಸರಬರಾಜು ಕಂಪನಿ ಆರಂಭಿಸಲಾಯಿತು. 1908 ರಲ್ಲಿ ಮೊದಲ ಬಾರಿ ಅರಮನೆಗೆ ವಿದ್ಯುತ್ ಬಂತು. ಅಲ್ಲಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ನಾವು 34000 ಮೆಘಾ ವ್ಯಾಟ್ ಉತ್ಪಾದನೆ ಮಾಡುತ್ತಿರುವ ರಾಜ್ಯ ಎನ್ನುವ ಹೆಗ್ಗಳಿಕೆ ಕೇವಲ ನಮ್ಮ ರಾಜ್ಯದ್ದಾಗಿದೆ ಎಂದರು.

ಆಹಾರ ಉತ್ಪಾದನೆಯಲ್ಲಿ ನಾವು ಸ್ವಾವಲಂಬಿಗಳಾಗುತ್ತಿರುವುದು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬಿಗಳಾಗಿರುವ ಕಾರಣಕ್ಕೇ ಎಂದು ವಿಶ್ಲೇಷಿಸಿದರು. ರೈತರಿಗೆ, ಕೃಷಿಗೆ, ಪಂಪ್ ಸೆಟ್ ಗಳಿಗೆ ಹಗಲಲ್ಲೂ 7 ಗಂಟೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಶಕ್ತರಾಗುತ್ತೇವೆ. ಈ ಗುರಿ ಇಟ್ಟುಕೊಂಡು ಕೆಲಸಗಳು ನಡೆಯುತ್ತಿವೆ. 60000 ಮೆಘಾ ವ್ಯಾಟ್ ಉತ್ಪಾದನೆ ಗುರಿ ನಾವು ತಲುಪಿದ ತಕ್ಷಣ ಇದು ಸಾಧ್ಯವಗಲಿದೆ. ವಿದ್ಯುತ್ ಪ್ರಮುಖ ಕಚ್ಚಾವಸ್ತು ಎನ್ನುವುದನ್ನು ನಾವು ಮರೆಯಬಾರದು ಎಂದರು. ನೌಕರರು ಮತ್ತು ಕಾರ್ಮಿಕರು ಬಹಳ ಶ್ರಮ ವಹಿಸಿ ಕೆಲಸ ನಿರ್ವಹಿಸುತ್ತಿದ್ದೀರಿ. ನಿಮ್ಮ ಎಲ್ಲಾ ಬೇಡಿಕೆಗಳನ್ನೂ ಈಡೇರಿಸಲು ನಮ್ಮ ಸರ್ಕಾರ ಸಿದ್ಧವಿದೆ. ನಾವು ನಿಮ್ಮ ಜೊತೆಗೆ ಇದ್ದೇವೆ. ನೀವು ನಮ್ಮ ಜೊತೆಗೆ ಇರಿ ಎಂದು ಕರೆ ನೀಡಿದರು.

# ಡೈಯೇರಿಯಾ ತಡೆಗಟ್ಟುವಿಕೆ ಅಭಿಯಾನ

**ಬೆಂ.ಗ್ರಾ.:** ಜಿಲ್ಲೆಜಿಲ್ಲೆಯಲ್ಲಿ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ ಡೈಯೇರಿಯಾ ತಡೆಗಟ್ಟುವಿಕೆ ಅಭಿಯಾನ -2025 ಅನ್ನು ಜೂನ್ 16 ರಿಂದ ಜುಲೈ 31 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು ಗರ್ಭಿಣಿ, ಬಾಣಂತಿಯರು, ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಮೂಲಕ ಮಕ್ಕಳ ಆರೋಗ್ಯ ರಕ್ಷಣೆಗೆ ಮೊದಲ ಆದ್ಯತೆ ನೀಡಿ ಎಂದು ಆರೋಗ್ಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಸೂಚಿಸಿದರು.



ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ಲಸಿಕಾ ಕಾರ್ಯಪಡೆ ಸಭೆ ಹಾಗೂ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಸಭೆಯ ಅಧ್ಯಕ್ಷತೆ ವಹಿಸಿ

ಐ.ಇ.ಸಿ ಚಟುವಟಿಕೆಗಳಿಗೆ ಸಂಬಂಧಿಸಿದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು ಅತಿಸಾರ ಪೀಡಿತ ಮಕ್ಕಳಿಗೆ ತುರ್ತು ಆರೈಕೆ ಮತ್ತು ಸೂಕ್ತ ಚಿಕಿತ್ಸೆ ನೀಡಿ ಜೊತೆಗೆ ಜನಸಾಮಾನ್ಯರಲ್ಲಿ, ವಿಶೇಷವಾಗಿ ಪೋಷಕರು ಮತ್ತು ಮಕ್ಕಳಲ್ಲಿ, ಪರಿಸರ ನೈರ್ಮಲ್ಯ, ಕೈ ತೊಳೆಯುವ ಸರಿಯಾದ ವಿಧಾನ, ಓ.ಆರ್. ಎಸ್. ತಯಾರಿಕೆ ಹಾಗೂ ವೈಯಕ್ತಿಕ ಶುಚಿತ್ವದ ಕುರಿತು ಅರಿವು ಮೂಡಿಸಿ ಎಂದರು.

ಆರೋಗ್ಯ ದೃಷ್ಟಿಯಿಂದ ಗರ್ಭಿಣಿ ಹಾಗೂ ಮಕ್ಕಳಿಗೆ ಕಾಲಕಾಲಕ್ಕೆ ನೀಡುವ ಲಸಿಕೆಗಳು ಪಡೆಯುತ್ತಿದ್ದಾರಾ ಎಂಬುದರ ಬಗ್ಗೆ ಗಮನ ಹರಿಸಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಗರ್ಭಿಣಿ, ಬಾಣಂತಿಯರ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಬಗ್ಗೆ ಅರಿವು ಮೂಡಿಸಿ ಶಿಶು ಹಾರೈಕೆ ಮತ್ತು ಗರ್ಭಿಣಿ, ಬಾಣಂತಿಯರ ಹಾರೈಕೆಯಲ್ಲಿ ನಿರತರಾಗಿ ಎಂದರು.

ಮಳೆಗಾಲ ಪ್ರಾರಂಭ ಆಗುತ್ತಿದ್ದು ಈ ಸಂದರ್ಭದಲ್ಲಿ ತೊಟ್ಟಿ, ಚರಂಡಿ ಹಾಗೂ ಇನ್ನಿತರ ಘನ ತ್ಯಾಜ್ಯಗಳಲ್ಲಿ ನೀರು ಶೇಖರಣೆ ಯಾಗಿ ಸೊಳ್ಳೆಗಳು ಉತ್ಪತ್ತಿಗೊಂಡು ಡೆಂಗ್ಯೂ, ಮಲೇರಿಯಾ, ಚಿಕನ್ ಗುನ್ಯ ನಂತಹ ರೋಗಗಳು ಕಂಡು ಬರುವ ಸಂಭವ ಹೆಚ್ಚಿದ್ದು ರೋಗವನ್ನು ನಿಯಂತ್ರಿಸಲು ಮುಂಜಾಗ್ರತಾವಾಗಿ ಕ್ರಮ ಕೈಗೊಂಡು, ಸೊಳ್ಳೆ ಉತ್ಪತ್ತಿ ತಾಣಗಳಾದ ತೆರೆದ ತೊಟ್ಟಿ, ಮೇಲ್ಛಾವಣಿ ಇಲ್ಲದ ತೊಟ್ಟಿಗಳು ಕಿರು ನೀರು ಸರಬರಾಜು ಮಾಡುವಂತಹ ತೊಟ್ಟಿಗಳನ್ನು ಭದ್ರವಾದ ಮುಚ್ಚಳ ಅಥವಾ ಬಟ್ಟೆಯನ್ನು ಮುಚ್ಚಬೇಕು.

ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ತೆರೆದ ತೊಟ್ಟಿ ಗಳಿದ್ದಲ್ಲಿ ಮುಂಜಾಗ್ರತಾ ಕ್ರಮವಾಗಿ ಅವುಗಳ ಮೇಲ್ಭಾಗವನ್ನು ಮುಚ್ಚಬೇಕು. ಕೊರೋನ, ಡೆಂಗ್ಯೂ, ಚಿಕನ್ ಗುನ್ಯಾ ನಂತಹ ರೋಗಗಳ ಬಗ್ಗೆ ಮುನ್ನೆಚರಿಕೆ ಕ್ರಮ ವಹಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಲಕ್ಕ ಕೃಷ್ಣ ರೆಡ್ಡಿ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಸೀಮಾ ರುದ್ರಪ್ಪ ಮಹಾಬಳೆ, ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ನಾಗೇಶ್ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಆರೋಗ್ಯ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ವಿಶೇಷಚೇತನ ವಿದ್ಯಾರ್ಥಿಗಳ ವಿವಿಧ ಡಿಪ್ಲೋಮಾ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**ಮಂಡ್ಯ:** ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರಿನಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025-26 ನೇ ಸಾಲಿನ ಡಿಪ್ಲೋಮೋಕೋರ್ಸ್ ಗಳ ಪ್ರವೇಶಕ್ಕಾಗಿವಿಶೇಷಚೇತನ ವಿದ್ಯಾರ್ಥಿಗಳಿಂದ ಅರ್ಜಿಆಹ್ವಾನಿಸಲಾಗಿದೆ.ಅರ್ಜಿಯನ್ನುಜೂನ್ 23 ರೊಳಗೆ ಸಲ್ಲಿಸಬಹುದಾಗಿರುತ್ತದೆ. ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತುಇಂಜಿನಿಯರಿಂಗ್ ಅನುದಾನಿತ ಕೋರ್ಸುಗಳು ಹಾಗೂ ಅನುದಾನರಹಿತ ಕೋರ್ಸ್ಗಳಾದ ಜ್ಯುವೆಲರಿಡಿಸೈನ್ ಮತ್ತುಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತುಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಶನ್ಸ್ (ಫಾರ್ ವಿಜ್ಯುವಲಿ ಇಂಪೇರ್ಡ್), ಅಪಾರೇಲ್‌ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್‌ಇಂಜಿನಿಯರಿಂಗ್ ಮತ್ತುಎಲೆಕ್ಟ್ರಿಕಲ್ ವೆಹಿಕಲ್‌ಟೆಕ್ನಾಲಜಿ ಕೋರ್ಸ್‌ಗಳಿಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಲುಅಭ್ಯರ್ಥಿಗಳು ಎಸ್.ಎಸ್. ಎಲ್.ಸಿ ಮತ್ತುತತ್ಸಮಾನ ಪರೀಕ್ಷೆಯಲ್ಲಿತೇರ್ಗಡೆ ಹೊಂದಿರಬೇಕು, ಮತ್ತು ಮೂಳೆ ಮತ್ತು ಕೀಲು ಶೇ.40, ಕಿವುಡು ಮತ್ತು ಮೂಗು ಅಂಗವಿಕಲತೆ 60 ಡಿಬಿ ಮೇಲ್ಪಟವರುಅರ್ಜಿ ಸಲ್ಲಿಸಬಹುದಾಗಿದೆ ಅಭ್ಯರ್ಥಿಗಳು ಕಂಪ್ಯೂಟರ್‌ಅಪ್ಲಿಕೇಷನ್ ಡಿಪ್ಲೋಮಾಕೋರ್ಸ್‌ಗೆಅರ್ಜಿ ಸಲ್ಲಿಸಬಹುದು. ದೂ. ಸಂ 98446-44937 ಅನ್ನು ಸಂಪರ್ಕಿಸಬಹುದು.

# ಆತ್ಮಹತ್ಯೆ ತಡೆಗಟ್ಟಲು ಸಹಕರಿಸಿ

**ರಾಮನಗರ:** ಆತ್ಮಹತ್ಯೆ ಎನ್ನುವುದು ಗಂಭೀರವಾದ ಸಮಸ್ಯೆ, ಇದು ಭಾರತದಲ್ಲಿ ಮಾತ್ರವಲ್ಲ ರಾಷ್ಟ್ರದ ಎಲ್ಲಾ ಭಾಗಗಳಲ್ಲಿಯೂ ನಡೆಯುತ್ತದೆ. ದೇಶದಲ್ಲಿ 2022ರ ಅನುಪಾತದ ಪ್ರಕಾರ 30-40 ವರ್ಷದ ಯುವಕರೇ ಹೆಚ್ಚಾಗಿ ಆತ್ಮಹತ್ಯೆಗೆ ಮಾಡಿಕೊಳ್ಳುತ್ತಿದ್ದಾರೆ ಎಂದು ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ ಮನೋವೈದ್ಯಕೀಯ ಸಾಮಾಜಿಕ ಕಾರ್ಯ ವಿಭಾಗದ ಹೆಚ್ಚುವರಿ ಪ್ರಾಧ್ಯಾಪಕರಾದ ಡಾ. ಅನಿಶ್ ವಿ. ಚೆರಿಯನ್ ಅವರು ತಿಳಿಸಿದರು. ಅವರು ಜೂ. 18ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಮಾನಸಿಕ ಆರೋಗ್ಯ ಹಾಗೂ ನರವಿಜ್ಞಾನ ಸಂಸ್ಥೆ, ಹಿಮಾಲಯ ವೆಲ್ನೆಸ್ ಕಂಪನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಾನಸಿಕ ಆರೋಗ್ಯ ವಿಭಾಗದ ಸಹಯೋಗದೊಂದಿಗೆ ಸುರಕ್ಷಾ ಯೋಜನೆ ವತಿಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎಲ್ಲಾ ಮೇಲ್ವಿಚಾರಕಿಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ಗೇಟ್-ಕೀಪರ್ ತರಬೇತಿ-ಆತ್ಮಹತ್ಯೆ ತಡೆಗಟ್ಟುವುದರಲ್ಲಿ ಇವರ ಪಾತ್ರ, ಕರ್ತವ್ಯ, ಜವಾಬ್ದಾರಿ ಕುರಿತಂತೆ ಆಯೋಜಿಸಲಾಗಿದ್ದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಸುರಕ್ಷಾ ಯೋಜನೆಯ ಕಾರ್ಯಕ್ರಮವನ್ನು ಮೊದಲ ಬಾರಿಗೆ ಚನ್ನಪಟ್ಟಣದಲ್ಲಿ ಆಯೋಜಿಸಲಾಗಿದೆ ಈ ಯೋಜನೆ ಭಾರತಕ್ಕೆ ಮಾದರಿಯಾಗಿದೆ. 2030ರ ಅಂತ್ಯಕ್ಕೆ ಆತ್ಮಹತ್ಯೆ ಪ್ರಕರಣವನ್ನು ಕಡಿಮೆ ಮಾಡಬೇಕು ಎಂಬ ಧ್ಯೇಯವನ್ನು ಇಟ್ಟುಕೊಳ್ಳಲಾಗಿದೆ ಎಂದರು. ಅಂಗನವಾಡಿ, ಆಶಾ ಕಾರ್ಯಕರ್ತೆಯರಿಗೆ ಸಮೀಪವಿರುವ ಮಕ್ಕಳು ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಲಿ ಎಂಬುದು ಈ ಕಾರ್ಯಾಗಾರದ ಉದ್ದೇಶವಾಗಿದೆ. ಆತ್ಮಹತ್ಯೆ ಮಾಡಿಕೊಳ್ಳುವವರೆಲ್ಲರೂ ಮಾನಸಿಕ ಒತ್ತಡಗಳಿಂದ ಬಳಲುತ್ತಿರುವುದಿಲ್ಲ. ಬದಲಾಗಿ ಆರ್ಥಿಕ ಹಾಗೂ ಸಾಮಾಜಿಕ ಸಮಸ್ಯೆಯಿಂದಲೂ ಸಹ ಆತ್ಮಹತ್ಯೆಯನ್ನು ಮಾಡಿಕೊಳ್ಳುತ್ತಾರೆ. ಹಾಗಾಗಿ ಸಮಸ್ಯೆಯಲ್ಲಿರುವವರನ್ನು ಗುರುತಿಸಿ ಅವರೊಂದಿಗೆ ಆಪ್ತಸಮಾಲೋಚನೆ ಮಾಡಿದ್ದಲ್ಲಿ, ಅವರ ಸಮಸ್ಯೆಯನ್ನು ಬಹೆಹರಿಸಿ ಆತ್ಮಹತ್ಯೆ ತಡೆಗಟ್ಟಬಹುದು ಎಂದು ಹೇಳಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶಿವಕುಮಾರ್, ಸುರಕ್ಷಾ ಯೋಜನೆಯ ಡಾ. ಆರ್ಯ ತಿರುಮೇನಿ, ಡಾ. ಅರವಿಂದ್, ಮಹೇಂದ್ರ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ರೈತರು ಬೆಳೆ ವಿಮೆಗೆ ನೋಂದಾಯಿಸಿ

**ಬೆಂ.ಗ್ರಾಂ:** 2025ರ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆಯನ್ನು ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಕೃತಿ ವಿಕೋಪದಿಂದ ಬೆಳೆ ನಷ್ಟ ಸಂಭವಿಸಿದರೆ ರೈತರಿಗೆ ಪರಿಹಾರ ನೀಡುವ ಮೂಲಕ ಆರ್ಥಿಕ ಭದ್ರತೆ ಒದಗಿಸುವ ದೃಷ್ಟಿಯಿಂದ ವಿಮೆ ಯೋಜನೆ ಜಾರಿಗೆ ತರಲಾಗಿದೆ. ವಿಮೆ ಮಾಡಿದ ಕ್ಷೇತ್ರದಲ್ಲಿ ಮಳೆ ಅಭಾವದಿಂದ ಬಿತ್ತನೆ/ನಾಟಿ ವಿಫಲಗೊಂಡಲ್ಲಿ ವಿಮಾ ರಕ್ಷಣೆ ಒದಗಿಸುವುದು, ಹಾಲಿ ಇರುವ ಬೆಳೆಗಳಿಗೆ (ಬಿತ್ತನೆಯಿಂದ ಕಟಾವಿನ ಹಂತದವರೆಗೆ) ಬರ/ ಶುಷ್ಕ ಪರಿಸ್ಥಿತಿ, ನೆರೆ/ಪ್ರವಾಹಗಳಿಂದ ಬೆಳೆ ಮುಳಗಡೆ, ಗುಡುಗು ಮಿಂಚುಗಳಿಂದ ಉಂಟಾಗುವ ಬೆಂಕಿ ಅವಘಡ, ಭೂಕುಸಿತ, ಬಿರುಗಾಳಿ, ಚಂಡಮಾರುತ ಸಹಿತ ಮಳೆ, ಅಕಾಲಿಕ ಮಳೆಯಿಂದ ನಷ್ಟ ಸಂಭವಿಸಿದಲ್ಲಿ ಸಮಗ್ರ ವಿಮಾ ಭದ್ರತೆಯನ್ನು ಒದಗಿಸುವುದು ಹಾಗೂ ಕಟಾವಿನ ನಂತರ ಬೆಳೆಯನ್ನು ಜಮೀನಿನಲ್ಲಿ ಒಣಗಲು ಬಿಟ್ಟ ಸಂದರ್ಭದಲ್ಲಿ (14 ದಿನಗಳವರೆಗೆ) ಆಲಿಕಲ್ಲು ಮಳೆ, ಚಂಡಮಾರುತ ಸಹಿತ ಮಳೆ ಹಾಗೂ ಅಕಾಲಿಕ ಮಳೆಯಿಂದ ಬೆಳೆ ನಷ್ಟವಾದರೆ ನಷ್ಟ ಪರಿಹಾರವನ್ನು ಒದಗಿಸುವುದ ವಿಮೆಯ ಉದ್ದೇಶವಾಗಿದೆ.

ಜಿಲ್ಲೆಯಲ್ಲಿ ಮುಖ್ಯ ಬೆಳೆಯಾಗಿ ರಾಗಿ (ಮಳೆಯಾಶ್ರಿತ ಮತ್ತು ನೀರಾವರಿ) ಹಾಗೂ ಭತ್ತ (ನೀರಾವರಿ), ಮುಸುಕಿನಜೋಳ (ಮಳೆಯಾಶ್ರಿತ ಮತ್ತು ನೀರಾವರಿ), ತೊಗರಿ (ಮಳೆಯಾಶ್ರಿತ ಹಾಗೂ ನೀರಾವರಿ), ನೆಲಗಡಲೆ (ಮಳೆಯಾಶ್ರಿತ) ಹುರುಳಿ (ಮಳೆಯಾಶ್ರಿತ) ಮತ್ತು ಟೊಮ್ಯಾಟೋ ಬೆಳೆಗಳನ್ನು ಇತರೆ ಬೆಳೆಗಳಾಗಿ ಅಧಿಸೂಚಿಸಲಾಗಿದೆ.

ಆಯಾ ತಾಲ್ಲೂಕಿನಲ್ಲಿ ಮುಖ್ಯ ಬೆಳೆಗಳಿಗೆ ಗ್ರಾಮ ಪಂಚಾಯತ್/ ನಗರ ಸ್ಥಳೀಯ ಸಂಸ್ಥೆಗಳನ್ನು ವಿಮಾ ಘಟಕವಾಗಿ ಹಾಗೂ ಇತರೆ ಬೆಳೆಗಳಿಗೆ ಹೋಬಳಿಯನ್ನು ವಿಮಾ ಘಟಕವಾಗಿ ಪರಿಗಣಿಸಲಾಗಿದೆ. ವಿಮಾ ಸಂಸ್ಥೆಯ ಜಿಲ್ಲಾ ಮಟ್ಟದ ಪ್ರತಿನಿಧಿಗಳು ಮತ್ತು ಸಂಯೋಜಕರುಗಳಾದ ಅಮೋಘ ವರ್ಷ ಆನಂದ್ ಜಿಲ್ಲಾ ಪ್ರತಿನಿಧಿ ದೂ. ಸಂಖ್ಯೆ:8904088274, ತಾಲ್ಲೂಕು ಮಟ್ಟದ ಪ್ರತಿನಿಧಿಗಳಾದ ಚಿರಂಜನ್ ಅರ್.ಎಂ(ದೇವನಹಳ್ಳಿ)ದೂ,ಸಂಖ್ಯೆ:9606173802, ನಿಶ್ಚಿತಾ ಎಂ(ದೊಡ್ಡಬಳ್ಳಾಪುರ)ದೂ,ಸಂಖ್ಯೆ:8497818723, ಗುರು ಕಿರಣ್ ಆರ್(ಹೊಸಕೋಟೆ)ದೂ,ಸಂಖ್ಯೆ:6362667097, ಸಾಗರ್ ಸಿ.ಜೆ(ನೆಲಮಂಗಲ)ದೂ,ಸಂಖ್ಯೆ:8217377255, ಯಶವಂತ ದೂ,ಸಂಖ್ಯೆ:9902545564 ಹಾಗೂ ಅಜಯ್ ವಿರೂಪಾಕ್ಷ ಕಸರ್ ದೂ,ಸಂಖ್ಯೆ:9902 944507,ಇವರುಗಳನ್ನು ಸಂಪರ್ಕಿಬಹುದಾಗಿದೆ ಎಂದು ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರಾದ ಬಿ.ಜಿ ಕಲಾವತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೈಕ್ಷಣಿಕ ಪ್ರೋತ್ಸಾಧನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನಲ್ಲಿ 10 ನೇ ತರಗತಿ ಮತ್ತು ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ಮೂಲ ನಿವಾಸಿಗಳಾದ ಜೇನುಕುರುಬ ಜನಾಂಗದವರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಹಾಗೂ ಜೇನುಕುರುಬ ಜನಾಂಗದ ನಿರುದ್ಯೋಗಿ ಯುವಕ/ಯುವತಿಯರಿಗೆ ನಿರುದ್ಯೋಗ ಜೀವನ ಭತ್ಯೆಯನ್ನು ಮಂಜೂರು ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಜೇನುಕುರುಬ ಜನಾಂಗದವರಿಗೆ ನೀಡುವ ಶೈಕ್ಷಣಿಕ ಪ್ರೋತ್ಸಾಹಧನ ಹಾಗೂ ನಿರುದ್ಯೋಗ ಜೀವನ ಭತ್ಯೆ ಹಾಗೂ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ವಾರ್ಷಿಕ ಶೈಕ್ಷಣಿಕ ಭತ್ಯೆ 10,000/-, ನಿರುದ್ಯೋಗ ಭತ್ಯೆ (3 ವರ್ಗಗಳು ಮಾತ್ರ) ಮಾಸಿಕ 2,000/-, ವಾರ್ಷಿಕ 24.000/-, ಪಿ.ಯು.ಸಿ. ತತ್ಸಮಾನ ಕೋರ್ಸ್‌ಗಳು ಪ್ರತಿ ವರ್ಕ್ಕೆ ವಾರ್ಷಿಕ ಶೈಕ್ಷಣಿಕ ಭತ್ಯೆ 12,000/-, ಮಾಸಿಕ 2,500/-, ವಾರ್ಷಿಕ 30,000/-, ಎಲ್ಲಾ ಪದವಿ ಕೋರ್ಸ್‌ಗಳು ಪ್ರತಿ ವರ್ಕ್ಕೆ, ವಾರ್ಷಿಕ ಶೈಕ್ಷಣಿಕ ಭತ್ಯೆ 15,000/-, ಮಾಸಿಕ 3,500/-, ವಾರ್ಷಿಕ 42,000/-ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು ಪ್ರತಿ ವರ್ಕ್ಕೆ, ವಾರ್ಷಿಕ ಶೈಕ್ಷಣಿಕ ಭತ್ಯೆ 18,000/-, ಮಾಸಿಕ 4,500/-, ವಾರ್ಷಿಕ 54,000/- ನೀಡಲಾಗುತ್ತದೆ. ಯೋಜನಾ ಸಮನ್ವಯಾಧಿಕಾರಿಗಳ ಕಛೇರಿ, ಡಾ. ಬಾಬು ಜಗಜೀವನ್ ರಾಮ್ ಭವನ, ಆದಿಪಂಪ ರಸ್ತೆ, ಪಡುವಾರಳ್ಳಿ, ಮೈಸೂರು ಅಥವಾ ಸಂಬಂಧಿಸಿದ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಛೇರಿ/ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಇಲ್ಲಿ ಅರ್ಜಿಯನ್ನು ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಸೆಪ್ಟೆಂಬರ್ 2025ರ ಅಂತ್ಯದೊಳಗೆ ಸಲ್ಲಿಸಬೇಕಾಗಿದೆ. ಕಳೆದ 3 ವರ್ಗಳಲ್ಲಿ ನಿರುದ್ಯೋಗ ಜೀವನ ಭತ್ಯೆಯನ್ನು ಪಡೆದ ನಿರುದ್ಯೋಗಿಗಳು ಮತ್ತೊಮ್ಮೆ ಭತ್ಯೆಯನ್ನು ಪಡೆಯಲು ಅರ್ಹರಿರುವುದಿಲ್ಲ.

ಮುಖ್ಯ ವೈದ್ಯಾಧಿಕಾರಿಗಳ ಕಛೇರಿ
**ಸಾರ್ವಜನಿಕ ಆಸ್ಪತ್ರೆ, ಮಾಗಡಿ**
Ph : 9663447056, e-mail: cmoghmagadi1@gmail.com

ಸಂ. ಸಾಆಮಾ/ಡಯಟ್/01/25-26 ದಿನಾಂಕ: 19.06.2025

**ಕೊಟೇಷನ್ ಪ್ರಕಟಣೆ**

ಸಾರ್ವಜನಿಕ ಆಸ್ಪತ್ರೆ, ಮಾಗಡಿ, ಬೆಂಗಳೂರು ದಕ್ಷಿಣ ಜಿಲ್ಲೆ ಇಲ್ಲಿಗೆ 2025-26ನೇ ಸಾಲಿಗೆ ಈ ಕೆಳಕಂಡ ಟೆಂಡರ್‌ಗಳನ್ನು ಆಧಿಕೃತ/ ಇ-ಪ್ರೊಕ್ಯೂರ್‌ಮೆಂಟ್ ಅಡಿಯಲ್ಲಿ ನೋಂದಾಯಿಸಲಾದ ಸಂಸ್ಥೆಗಳಿಂದ ಟೆಂಡರ್ ನಿಬಂಧನೆಗಳಿಗನುಗುಣವಾಗಿ "ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯುವು 2000" ರಂತೆ ದ್ವಿಲಕೋಟೆ ಇ-ಪ್ರೊಕ್ಯೂರ್‌ಮೆಂಟ್ (Website: https://kppp.karnataka. gov.in) ಮೂಲಕ ಟೆಂಡರ್ ಆಹ್ವಾನಿಸಲಾಗಿರುತ್ತದೆ.

2025-26ನೇ ಸಾಲಿಗೆ ಒಳರೋಗಿಗಳಿಗೆ ಸಿದ್ದಪಡಿಸಿದ ಪಥ್ಯಾಹಾರ ಪದಾರ್ಥಗಳು ಸರಬರಾಜು ಮಾಡಲು ಕರೆದಿರುವ (ಟೆಂಡರ್ ಸಂಖ್ಯೆ (DHFWS/2025-26/SE1576). ಟೆಂಡರ್ ಇಎಂಡಿ ಮೊತ್ತ **ರೂ. 75600/-**. ಟೆಂಡರ್ ಪ್ರಾರಂಭ ದಿನಾಂಕ: **19/06/2025**. ಟೆಂಡರ್ ಅಪ್ಲೋಡ್ ಮಾಡಲು ಕೊನೆಯ ದಿನಾಂಕ: **07-07-2025**.

ಹೆಚ್ಚಿನ ಮಾಹಿತಿಯನ್ನು ಮೇಲ್ಕಂಡ ವೆಬ್‌ಸೈಟ್ ಮೂಲಕ ಪಡೆಯುವುದು ಅಥವಾ ಕಛೇರಿಯನ್ನು ಸಂಪರ್ಕಿಸುವುದು.

ಸಹಿ/-
**ಮುಖ್ಯ ವೈದ್ಯಾಧಿಕಾರಿಗಳು**
ಸಾರ್ವಜನಿಕ ಆಸ್ಪತ್ರೆ, ಮಾಗಡಿ.

DIPR/SAD/178/SA/2025-26

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**
ನಂ. 333/1, 1ನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್,
ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110

ಸಂ:ಬಿಐಎಎಪಿಎ/ಟಿಪಿ/ಭೂಉನಿ/06/2025-26/774 ದಿನಾಂಕ:18.06.2025

**ಪ್ರಕಟಣೆ**

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 ರ ತಿದ್ದುಪಡಿ ಕಾಯ್ದೆಯಂತೆ)**

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ : ನಅಇ 157 ಬಿಎಂಆರ್ 2005 ದಿನಾಂಕ : 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ : 29-01-2009 ರಂದು ಅನುಮೋದನೆ ನೀಡಲಾಗಿದ್ದು, ಐದು ವರ್ಷಗಳ ಅವಧಿಯು ಈಗಾಗಲೇ ಪೂರ್ಣಗೊಂಡಿದ್ದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (2) ರಂತೆ ಭೂಉಪಯೋಗ ರದ್ದಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (4) ರನ್ವಯ ಈ ಕೆಳಕಂಡಂತೆ ವಸತಿ ಭೂಉಪಯೋಗ ನಿಗದಿಪಡಿಸಲು ಅರ್ಜಿದಾರರು ಕೋರಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69(3) ರ ಅಡಿಯಲ್ಲಿ ಈ ಕೆಳಕಂಡಂತೆ ಭೂಉಪಯೋಗ ನಿಗದಿಪಡಿಸುವ ಸಂಬಂಧ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸ.ನಂ. | ವಿಸ್ತೀರ್ಣ ಎ-ಗುಂ | ಮಹಾಯೋಜನೆಯ ಪ್ರಕಾರ ಭೂ ಉಪಯೋಗ | ಭೂ ಉಪಯೋಗ ನಿಗದಿಪಡಿಸಲು ಕೋರಿರುವ ಉದ್ದೇಶ |
|---|---|---|---|---|---|---|---|---|
| 1 | ಶ್ರೀ ಸೂರಜ್ ಮಲ್ - ರಾಮಲಾಲ್ | ದೇವನಹಳ್ಳಿ | ಕಸಬಾ | ಚಿಕ್ಕಸಣ್ಣೆ | 50/1 | 03-02 | ಸಾರ್ವಜನಿಕ / ಅರೆಸಾರ್ವಜನಿಕ | ವಸತಿ |
| ಮೇಲ್ಕಂಡ ಭೂಮಾಲೀಕರ ಪರವಾಗಿ ನೋಂದಾಯಿತ ಜಿಪಿಎದಾರರಾದ ಮೆ॥ ಪ್ರವೀಣ್ ವೆಂಚರ್ಸ್‌ರ ಪರವಾಗಿ ವ್ಯವಸ್ಥಾಪಕ ಪಾಲುದಾರರಾದ **Mr.Praveen Pukhraj Shah** | | | | | | | | |

ಸಹಿ/- ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ

ವಾಸಸಂಇ/ಸಿಪಿ/ಎಎಎ/1354/2025-26

# ವರದರಾಜ ಕಾಲೇಜಿನ ಆವರಣದಲ್ಲಿ ವಿಶ್ವ ಪರಿಸರ ದಿನ

**ತುಮಕೂರು:** ಪರಿಸರದ ಬಗ್ಗೆ ಹೆಚ್ಚು- ಹೆಚ್ಚು ಮೌಲ್ಯವಾದ ಗುಣಗಳನ್ನು ಬೆಳೆಸಿಕೊಳ್ಳಬೇಕು. ಹಾಗೂ ಪರಿಸರದ ಬಗ್ಗೆ ಜಾಗೃತಿಯನ್ನು ಪ್ರತಿಯೊಬ್ಬರು ಅರಿವು ಮೂಡಿಸಬೇಕು. ಹಾಗೂ ಗಿಡಗಳನ್ನು ನೆಡುವುದರ ಜೊತೆಗೆ ಅದರ ಪೋಷಣೆಯ ಕಡೆಗೂ ಹೆಚ್ಚಿನ ಗಮನ ಹರಿಸಬೇಕು, ವಿದ್ಯಾರ್ಥಿಗಳು ತಮ್ಮ ಶಾಲಾ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಆರೋಗ್ಯಕರ ವಾತಾವರಣವನ್ನು ನಿರ್ಮಾಣ ಮಾಡಲು ಪ್ರಯತ್ನಿಸಬೇಕು ಎಂದು ವರದರಾಜ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಯಾದ ವರುಣ್ ಅಸ್ರಣ್ಣರವರು ತಿಳಿಸಿದರು.

ನಗರದ ಶೆಟ್ಟಿಹಳ್ಳಿ ಹೊರವಲಯದ ಜಯನಗರ ದಕ್ಷಿಣದಲ್ಲಿರುವ ವರದರಾಜ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ವರದರಾಜ ಕಾಲೇಜಿನ ಆವರಣದಲ್ಲಿ ಜೂನ್ 18 ಬುಧವಾರ ಬೆಳಿಗ್ಗೆ 11 ಗಂಟೆಗೆ ವಿಶ್ವ ಪರಿಸರ ದಿನಾಚರಣೆಯನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ವರುಣ್ ಅಸ್ರಣ್ಣರವರು ಸಸಿ ನೆಡುವ ಮೂಲಕ ಚಾಲನೆ ನೀಡಿ ಮಾತನಾಡುತ್ತಾ ಪರಿಸರ ನಮಗೆ ಎಲ್ಲವನ್ನು ನೀಡಿದೆ, ಆದರೆ ಪರಿಸರಕ್ಕೆ ನಮ್ಮ ಕೊಡುಗೆ ಕನಿ?. ಹಾಗಾಗಿ ಪರಿಸರದ ಬಗ್ಗೆ ತಿಳುವಳಿಕೆಯನ್ನು ನೀಡುವುದು




ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವರದರಾಜ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ದುರ್ಗಾದಾಸ್ ಅಸ್ರಣ್ಣರವರು ಮಾತನಾಡುತ್ತಾ ಪ್ರಸ್ತುತ ಸಂದರ್ಭದಲ್ಲಿ ಪರಿಸರದ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಹಾಗೂ ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಮುಂದಿನ ಪೀಳಿಗೆಯಲ್ಲಿ ಭೂಮಿಯಲ್ಲಿ ತಾಪಮಾನ ಅರಿವು ಮೂಡಿಸುವುದು ಅಗತ್ಯವಿದೆ ಹಾಗೂ ಗಿಡಗಳನ್ನು ನೆಟ್ಟು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವರದರಾಜ ಗ್ರೂಪ್ ಆಫ್ ಇನ್ ಸ್ಟಿಟ್ಯೂ?ನ್ಸ್‌ನ ನಿರ್ದೇಶಕರಾದ ಡಾ.ಮುಬಾರಕ್‌ರವರು ಮಾತನಾಡುತ್ತಾ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿದ್ದಲ್ಲಿ ಪ್ರತಿಯೊಬ್ಬ ವ್ಯಕ್ತಿಯೂ ತಗುಲುವ ರೋಗಗಳಿಂದ ಮುಕ್ತಿ ಹೊಂದಬಹುದು, ಹಾಗೂ ಸ್ವಚ್ಛ ದೇಶವನ್ನು ನಿರ್ಮಾಣ ಮಾಡುವುದು ಮುಖ್ಯವಾಗಿತ್ತು, ದೇಶದಲ್ಲಿ ಎಲ್ಲಾ ಜನರಲ್ಲಿ ಸ್ವಚ್ಛತೆಯ ಅರಿವುವನ್ನು ಮೂಡಿಸಿ ದೇಶ ಕಟ್ಟುವ ಕೆಲಸವನ್ನು ತಮ್ಮನ್ನು ತಾವು ತೊಡಗಿಸಿಕೊಳ್ಳುವಂತೆ ಉತ್ತೇಜನ ನೀಡಬೇಕು ಎಂದು ತಿಳಿಸಿದರು. ವರದರಾಜ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಟಿ.ಪಿ.ತ್ರಿವೇಣಿ, ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಉಮೇರಾ ಪರ್ವೀನ್ ಹಾಗೂ ವಿದ್ಯಾರ್ಥಿ- ವಿದ್ಯಾರ್ಥಿನಿಯರು ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ನಾಳೆ ಅನನ್ಯ ಕಾಲೇಜಿನಲ್ಲಿ ಉದ್ಯೋಗ ಮೇಳ

**ತುಮಕೂರು:** ನಗರದ ಬಿ.ಹೆಚ್.ರಸ್ತೆಯ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ಹಾಗೂ ಡಾ.ರೆಡ್ಡಿಸ್ ಫೌಂಡೇಷನ್ ಇವರುಗಳ ಸಂಯುಕ್ತಾಶ್ರಯದಲ್ಲಿ ಜೂನ್ 20 ರಂದು (ನಾಳೆ) ಶುಕ್ರವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಉದ್ಯೋಗಮೇಳವನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಉದ್ಯೋಗ ಮೇಳದಲ್ಲಿ ಸುಮಾರು 50 ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿದ್ದು, ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಐ.ಟಿ.ಐ., ಡಿಪ್ಲೋಮಾ, ಬಿ.ಕಾಂ, ಬಿ.ಸಿ.ಎ, ಎಂ.ಕಾಂ, ಎಂ.ಬಿ.ಎ. ಹಾಗೂ ಎಲ್ಲಾ ಪದವಿ, ಸ್ನಾತಕೋತ್ತರ ಪದವಿ ಅಭ್ಯರ್ಥಿಗಳು ಉದ್ಯೋಗ ಮೇಳಕ್ಕೆ ಹಾಜರಾಗಬಹುದಾಗಿದೆ. ಈ ಮೇಳದಲ್ಲಿ 18 ರಿಂದ 35 ವರ್ಷದೊಳಗಿರುವ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ನೇರವಾಗಿ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಅನನ್ಯ ಕಾಲೇಜಿನ ಉದ್ಯೋಗ ಮತ್ತು ತರಬೇತಿ ಅಧಿಕಾರಿಗಳಾದ ಶ್ರೀಮತಿ ಶಮಂತ ಪ್ರಿಯರವರು ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9108986117, 9632220899 ರವರನ್ನು ಸಂಪರ್ಕಿಸಲು ಕೋರಲಾಗಿದೆ.

## ಕೋಲಾರ ಜಿಲ್ಲಾ ವಾಲ್ಮೀಕಿ ಸಂಘಟನೆಗಳ ಒಕ್ಕೂಟ

**ಕೋಲಾರ:** ಜಿಲ್ಲಾ ಕೇಂದ್ರಸ್ಥಾನದಲ್ಲಿರುವ ವಾಲ್ಮೀಕಿ ಭವನಕ್ಕೆ ಸರ್ಕಾರ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 31ಗುಂಟೆ ಜಮೀನು ಖರೀದಿ ಮಾಡಿ ವಾಲ್ಮೀಕಿ ಭವನಕ್ಕೆ ಮಂಜೂರು ಮಾಡಿದ್ದು ಸರ್ವೆ ಸಂಖ್ಯೆ 82/1ರ 31ಗುಂಟೆ ವಿಸ್ತೀರ್ಣ ಉಳ್ಳಸ್ಥಳ ವಾಲ್ಮೀಕಿ ಭವನಕ್ಕೆ ಸೇರಿದ್ದಾಗಿರುತ್ತದೆಯೆಂದು ಕೋಲಾರ ಜಿಲ್ಲಾ ವಾಲ್ಮೀಕಿ ಸಂಘಟನೆಗಳ ಒಕ್ಕೂಟ ತಿಳಿಸಿದೆ.



## ವ್ಯಕ್ತಿಗಳ ಪತ್ತೆಗಾಗಿ ಮನವಿ

**ಕೋಲಾರ:** ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಭಾಗ್ಯಮ್ಮ, ಗಂಡನ ಹೆಸರು: ಮುನಿರಾಜು, 65 ವರ್ಷ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, 5.2 ಅಡಿ ಎತ್ತರ, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಕ್ರೀಮ್ ಬಣ್ಣದ ಸೀರೆ, ಹಸಿರು ಬಣ್ಣದ ಬಾರ್ಡರ್, ಗುಲಾಬಿ ಬಣ್ಣದ ಜಾಕೆಟ್ ಧರಿಸಿರುತ್ತಾಳೆ. ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಮಂಜುನಾಥ, ತಂದೆಯ ಹೆಸರು: ಲಕ್ಷ್ಮಯ್ಯ, 32 ವರ್ಷ, ಕೋಲು ಮುಖ, ಕಪ್ಪು ಮೈಬಣ್ಣ, ದೃಡಕಾಯ ಶರೀರ, 5.8 ಅಡಿ ಎತ್ತರ, ಕನ್ನಡ, ತೆಲುಗು ಮತ್ತು ತಮಿಳು ಭಾಷೆ ಮಾತನಾಡುತ್ತಾರೆ. ನೀಲಿ ಬಣ್ಣದ ಜೀನ್ಸ್ ಪ್ಯಾಂಟು ಮತ್ತು ತಿಳಿ ಪಿಂಕ್ ಬಣ್ಣದ ಶರ್ಟು ಧರಿಸಿರುತ್ತಾನೆ. ಈ ವ್ಯಕ್ತಿಗಳ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಕೋಲಾರ ಕಂಟ್ರೋಲ್ ರೂಂ. ಸಂ.08152-243066, ಉಪವಿಭಾಗದ ಪೊಲೀಸ್ ಉಪಾದೀಕ್ಷಕರ-08152-225824, ಮಾಲೂರು ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರ ಸಂ.08151-232220, 9480802632, 9480802650 ಯನ್ನು ಸಂಪರ್ಕಿಸಬಹುದೆಂದು ಮಾಲೂರು ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುಸಕ್ತ ಬಹುಮಾನಕ್ಕಾಗಿ ಅರ್ಜಿ

**ಕೋಲಾರ:** ಕರ್ನಾಟಕ ಯಕ್ಷಗಾನ ಅಕಾಡೆಮಿಯು ಯಕ್ಷಗಾನ ಮೂಡಲಪಾಯ, ಕೇಳಿಕೆ, ಘಟ್ಟದಕೋರೆ ಮತ್ತು ತಾಳಮದ್ದಲೆ ಇತ್ಯಾದಿ ಕಲಾಪ್ರಕರಣಗಳಲ್ಲಿ 2024ನೇ ಸಾಲಿನ ಕ್ಯಾಲೆಂಡರ್ ವರ್ಷದಲ್ಲಿ ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ/ಪ್ರಕಾಶಕರಿಂದ ಅರ್ಜಿ ಅಹ್ವಾನಿಸಲಾಗಿದೆ. ಆಯ್ಕೆಯಾದ ಪುಸ್ತಕಕ್ಕೆ ರೂ.25000/ಗಳ ಬಹುಮಾನವನ್ನು ನೀಡಲಾಗುವುದು. ಯಕ್ಷಗಾನದ ಕ್ಷೇತ್ರದ ವಿವಿಧ ಆಯಾಮಗಳ ಬಗ್ಗೆ ಸಂಗೀತ, ಆಹಾರ್ಯ, ಅಭಿನಯ, ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ ಪುಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದ್ದು, ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು ಹಾಗೂ ಸಂಪಾದಿತ ಕೃತಿ ಅಥವಾ ಅಭಿನಂದನ ಕೃತಿಯಾಗಿರಬಾರದು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು. ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ಜೆ.ಸಿ ರಸ್ತೆ ಎರಡನೇ ಮಹಡಿ ಚಾಲುಕ್ಯ ವಿಭಾಗ, ಕನ್ನಡ ಭವನದ ಕರ್ನಾಟಕ ಯಕ್ಷಗಾನ ಅಕಾಡೆಮಿಯ ರಿಜಿಸ್ಟ್ರಾರ್ ರವರಿಗೆ 2025ರ ಜುಲೈ 10 ರೊಳಗಾಗಿ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸಬೇಕು. ಯಾವುದೇ ಕಾರಣಕ್ಕೂ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು ದೂ.ಸಂ.080-22113146 ಯನ್ನು ಸಂಪರ್ಕಿಸಿ ಹಾಗೂ ಅರ್ಜಿಯನ್ನು ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕ ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ ಪಡೆಯಬಹುದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಯಕ ದಾಸೋಹ ಸಾಕಾರ

**ಚಿಕ್ಕಬಳ್ಳಾಪುರ:** ವೈದ್ಯ, ವಿದ್ಯೆ ಮತ್ತು ಪೌಷ್ಠಿಕತೆಗಳು ಸಮಾಜಕ್ಕೆ ಬೇಕಾದ ಮೂಲಭೂತ ಅಗತ್ಯಗಳಾಗಿವೆ. ಇವುಗಳನ್ನು ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಲೋಕಕ್ಕೆ ಉಚಿತ ರೂಪದಲ್ಲಿ ಒದಗಿಸುತ್ತಿದ್ದಾರೆ. ವಾಸ್ತವವಾಗಿ ಸರಕಾರ ಮಾಡಬೇಕಾದ ಕಾರ್ಯವನ್ನು ತಾವೇ ಮಾಡಿ ಸಮಾಜಕ್ಕೆ ಮಾದರಿಯಾಗಿದ್ದಾರೆ. ಸರ್ಕಾರದ ವತಿಯಿಂದಲೂ ಜಿಲ್ಲೆಗೊಂದು ವೈದ್ಯಕೀಯ ಕಾಲೇಜು ಮತ್ತು ಅತ್ಯಾಧುನಿಕ ಸೇವಾ ಸೌಲಭ್ಯದ ಆಸ್ಪತ್ರೆಗಳನ್ನು ಮುಂದಿನ ದಿನಗಳಲ್ಲಿ ಸ್ಥಾಪಿಸುವ ಉದ್ದೇಶವಿದೆ. ದುಬಾರಿ ವೆಚ್ಚದ ವೈದ್ಯಕೀಯ ಸೇವಾ ಸೌಲಭ್ಯಗಳು ಗ್ರಾಮೀಣ ಪ್ರದೇಶದ ಜನರಿಗೆ ಸುಲಭವಾಗಿ ದೊರೆಯುವಂತೆ ಮಾಡುವ ಸದಾಲೋಚನೆ ಸರ್ಕಾರದ ಮುಂದಿದ್ದು ಅದರ ಕಾರ್ಯ ಸಾಧನೆಗೆ ಪ್ರಯತ್ನಿಸಲಾಗುತ್ತಿದೆ. ಇದಕ್ಕೆ ಸಹಕಾರ ಕ್ಷೇತ್ರದ ಪಾಲ್ಗೊಳ್ಳುವಿಕೆಯು ದೊರೆತರೆ ಕಾರ್ಯಸಾಧ್ಯವಾಗುವುದರಲ್ಲಿ ಸಂದೇಹವಿಲ್ಲ. ಆದರೆ ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಸಮಾಜಕ್ಕೆ ಸಲ್ಲಿಸುವ ಸೇವೆಯು ಅನನ್ಯವಾಗಿದೆ. ಬಸವಾದಿ ಶರಣರು ಹೇಳಿದ ಕಾಯಕ ದಾಸೋಹ ನಿಜಾರ್ಥದಲ್ಲಿ ಇಲ್ಲಿ ಸಾಕಾರಗೊಳ್ಳುತ್ತಿದೆ. ಕಾಯಕ ದಾಸೋಹದ ಕ್ರಿಯಾ ರೂಪದ ಸಾಕಾರವು ನೈಜಸೇವೆಯಾಗಿದೆ, ಎಂದು ಕರ್ನಾಟಕ ರಾಜ್ಯ ಸರ್ಕಾರದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಡಾ. ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ತಿಳಿಸಿದರು.

ತಾಲೂಕಿನ ಮುದ್ದೇನಹಳ್ಳಿ ಸತ್ಯಸಾಯಿ ಗ್ರಾಮದಲ್ಲಿ ಶ್ರೀ ಮಧುಸೂದನ ಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಗೆ ಇಂಫೋಸಿಸ್ ಪ್ರತಿಷ್ಠಾನವು ಕೊಡ ಮಾಡಿದ 'ಎಂ ಆರ್ ಐ' ಉಪಕರಣ ಮತ್ತು ಅತ್ಯುನ್ನತ ಸೇವಾ ಸೌಲಭ್ಯಗಳ ವಿಸ್ತರಣಾ ಘಟಕವನ್ನು ಉದ್ದೇಶಿಸಿ ಮಾತನಾಡಿದರು.

ಈ ಸೇವಾ ಘಟಕದ ಲೋಕಾರ್ಪಣೆಯೊಂದಿಗೆ ಅತ್ಯಂತ ದುಬಾರಿ ವೆಚ್ಚದ ವೈದ್ಯಕೀಯ ತಪಾಷಣೆಯಾದ ಎಂ ಆರ್ ಐ (ಆಯಸ್ಕಾಂತೀಯ ಛಾಯಾ ಶೋಧನೆ) ಮುದ್ದೇನಹಳ್ಳಿಯಂತಹ ಗ್ರಾಮೀಣ ಪ್ರದೇಶದಲ್ಲಿ ದೊರೆಯುವಂತಾಗಿದೆ.

ಇನ್ಫೋಸಿಸ್ ಸೇವಾ ಪ್ರತಿಷ್ಠಾನವು ಕೊಡಮಾಡಿದ



ಉಪಕರಣಗಳ ಲೋಕಾರ್ಪಣೆ ಸಮಾರಂಭದ ಪ್ರಾಸ್ತಾವಿಕ ನುಡಿಗಳೊಂದಿಗೆ ಶ್ರೀ ಮಧುಸೂದನ ಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಶಿಕ್ಷಣ ಮತ್ತು ಗುಣಮಟ್ಟ ಸುಧಾರಣಾ ವಿಭಾಗದ ನಿರ್ದೇಶಕ ಡಾ. ಸತೀಶ್ ಬಾಬು ಅವರು ಸಮಾರಂಭದ ಉದ್ದೇಶವನ್ನು ನಿರೂಪಿಸಿ ದಿಕ್ಸೂಚಿ ಭಾಷಣ ಗೈದು ವೈದ್ಯಕೀಯ ಸಂಸ್ಥೆಯ ಮುಂದಿನ ಕಾರ್ಯ ಯೋಜನೆಗಳ ಬಗ್ಗೆ ತಿಳಿಸಿದರು.

ಇನ್ಫೋಸಿಸ್ ಪ್ರತಿಷ್ಠಾನದ ಟ್ರಸ್ಟಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರಾದ ಸುನಿಲ್ ಕುಮಾರ್ ದಾರೇಶ್ವರ್ ಮಾತನಾಡಿ ಇದುವರೆಗೆ ಇನ್ಫೋಸಿಸ್ ಸಂಸ್ಥೆಯು ಸದ್ಗುರು ಶ್ರೀ ಮಧುಸೂದನ ಸಾಯಿ ಸಂಸ್ಥೆಗೆ ನೀಡಿದ ಸಹಕಾರಗಳ ಕುರಿತು ತಿಳಿಸಿ, ಆರೋಗ್ಯ ಕ್ಷೇತ್ರದಲ್ಲಿ ನಾವು ಮಾಡುವ ಯಾವುದೇ ಉಪಕ್ರಮಗಳು ಸದೃಢವಾದ ಭವಿಷ್ಯತ್ತಿಗೆ ಸಂವೇದಿಯಾಗುತ್ತವೆ. ಆರೋಗ್ಯವಂತ ವ್ಯಕ್ತಿಗಳನ್ನು ರೂಪಿಸುವಾಗ ಅನಾರೋಗ್ಯದ ಕಾರಣದಿಂದ ಸಮಾಜದ ಮೇಲೆ ಬೀರಬಹುದಾದ ಹೊರೆಯ ಪ್ರಮಾಣವನ್ನು ತಗ್ಗಿಸುತ್ತದೆ. ಆ ಮೂಲಕ ಆರ್ಥಿಕ ಸುಸ್ಥಿರತೆಗೆ ಕಾರಣವಾಗುತ್ತದೆ. ಸಮಾಜಕ್ಕೆ ಗಣನೀಯವಾದ ಸೇವೆ ಸಲ್ಲಿಸುತ್ತಿರುವ ಸದ್ಗುರುಗಳ ಸೇವಾ ಯಜ್ಞದ ಯಶಸ್ಸಿಗೆ ಹೆಗಲಿಗೆ ಹೆಗಲು ಕೊಟ್ಟು ಶ್ರಮಿಸಲಾಗುವುದು, ಎಂದು ತಿಳಿಸಿದರು.

ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಂಸ್ಥಾಪಕರು ಮತ್ತು ಶ್ರೀ ಸತ್ಯಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಕುಲಾಧಿಪತಿಗಳೂ ಆಗಿರುವ ಸದ್ಗುರು ಶ್ರೀ ಮಧುಸೂಧನ ಸಾಯಿಯವರು ತಮ್ಮ ಆಶೀರ್ವಚನದಲ್ಲಿ, ಎಲ್ಲರಿಗೂ ಒಳಿತಾಗಲಿ ಎನ್ನುವುದು ನಮ್ಮ ಸಂಸ್ಕೃತಿಯ ತಿರುಳು. ಆದರೆ ಇದು ವ್ಯಕ್ತಿಗತವಾಗಿ ಕಷ್ಟಸಾಧ್ಯವಾಗಿದೆ. ಆದುದರಿಂದ ಇದರ ಕಾರ್ಯಸಾಧ್ಯ ಸಿದ್ಧಿಗೆ ಸಂಸ್ಥೆ, ಸಮಾಜ ಮತ್ತು ಸರ್ಕಾರದ ಸಮನ್ವಯ ಅತ್ಯಗತ್ಯ. ಈ ಮೂರು ಘಟಕಗಳು ಒಂದಾಗಿ ಇರುವುದರಿಂದ ಸಮಾಜಕ್ಕೆ ಅಗತ್ಯವಾಗಿ ಬೇಕಾದ ಸೇವಾ ಕಾರ್ಯಗಳು ದೊರೆಯುತ್ತಿವೆ. ಇಂದು ತಾಂತ್ರಿಕತೆಯು ಬಹಳ ಮುಂದುವರಿದಿದ್ದು ಅದರ ಸಹಕಾರದಿಂದ ಎಲ್ಲವನ್ನು ಸಾಧಿಸಲಾಗುತ್ತಿದೆ. ಆದರೂ ಈ ಸೇವಾ ಸೌಲಭ್ಯ ಗ್ರಾಮೀಣ ಬಡ ಜನತೆಗೆ ಗಗನ ಕುಸುಮವೇ ಆಗಿದೆ. ಇದನ್ನು ಸರಿದೂಗಿಸುವ ಪ್ರಯತ್ನಕ್ಕೆ ನಮ್ಮ ಸಂಸ್ಥೆಯು ಮೊದಲ ಆದ್ಯತೆಯನ್ನು ನೀಡುತ್ತಿದೆ. ಆರೋಗ್ಯ ಮತ್ತು ಆರೋಗ್ಯ ಸೇವೆ ಜೊತೆ ಜೊತೆಯಾಗಿ ಸಾಗುವುದರಿಂದ ಅದ್ಭುತ ಕಾರ್ಯವನ್ನು ನಡೆಸಲು ಸಾಧ್ಯವಾಗಿದೆ. ಇನ್ಫೋಸಿಸ್ ಸಂಸ್ಥೆಯು ಈ ನಿಟ್ಟಿನಲ್ಲಿ ಗಮನಾರ್ಹವಾದ ಸಹಕಾರವನ್ನು ನೀಡಿದೆ. ತಾಂತ್ರಿಕವಾಗಿ ಎಲ್ಲವೂ ಇದ್ದಾಗ ತಂತ್ರಜ್ಞರ ಕೊರತೆ ಎದುರಾದರೆ ಯಾವುದೇ ಆವಿಷ್ಕಾರಕ್ಕೆ ಅರ್ಥವಿರುವುದಿಲ್ಲ. ಆದುದರಿಂದ ತಾಂತ್ರಿಕರನ್ನು ರೂಪಿಸುವ ಕಾರ್ಯವನ್ನು ತಮ್ಮ ಸಂಸ್ಥೆಯೂ ಮಾಡುತ್ತಿದೆ, ಎಂಬ ವಿಚಾರವನ್ನು ವಿಷದಪಡಿಸಿದರು. ಸೇವಾ ಕ್ಷೇತ್ರದಲ್ಲಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ ತನ್ನ ಸಹಯೋಗಿ ಸಂಸ್ಥೆಗಳ ಜೊತೆಗೆ ಸೇರಿಕೊಂಡು ಮಾಡಿದ ಜಾಗತಿಕ ಕಾರ್ಯಗಳ ಪಕ್ಷಿ ನೋಟವನ್ನು ವಿದ್ಯುನ್ಮಾನ ಪ್ರಾತ್ಯಕ್ಷಿಕೆಗಳ ಮೂಲಕ ಪ್ರಸ್ತುತ ಪಡಿಸಿತು. ಅತ್ಯಾಧುನಿಕ ಸಲಕರಣೆಗಳ ಸಹಕಾರದಿಂದ ಸಾಧ್ಯವಾಗಿ ಆರೋಗ್ಯ ಭಾಗ್ಯ ಪಡೆದ ಫಲಾನುಭವಿಗಳಿಗೆ ಪ್ರಮಾಣ ಪತ್ರವನ್ನು ನೀಡಲಾಯಿತು. ಸಮಾರಂಭದ ಸಭಾ ವೇದಿಕೆಯಲ್ಲಿ ಶ್ರೀ ಸತ್ಯಸಾಯಿ ಲೋಕ ಸೇವಾ ಶಿಕ್ಷಣ ಸಮೂಹಗಳ ಪ್ರಧಾನ ಮಾರ್ಗದರ್ಶಕರಾದ ಶ್ರೀ ಬಿ ಎನ್ ನರಸಿಂಹಮೂರ್ತಿ ಮತ್ತು ಶ್ರೀ ಮಧುಸೂದನ ಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಡಾ. ಎ ಆರ್ ರಘುಪತಿ ಉಪಸ್ಥಿತರಿದ್ದರು.

## ಹುಳಿಯಾರು ಪದವಿ ಕಾಲೇಜಿನಲ್ಲಿ ಪೋಷಕರ ಸಮಿತಿ ರಚನೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಮ್‌ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪೋಷಕರ ಸಭೆಯನ್ನು ಆಯೋಜಿಸಿ ಪೋಷಕರ ಕಾರ್ಯಕಾರಿ ಸಮಿತಿಯನ್ನು ರಚಿಸಲಾಯಿತು.

ಈ ಸಮಿತಿಯ ಗುರಿ, ಉದ್ದೇಶಗಳು, ಕರ್ತವ್ಯ ಗಳ ಬಗ್ಗೆ ಪೋಷಕರ ಸಮಿತಿಯ ಸಂಚಾಲಕರಾದ ಧನಂಜಯ ಎನ್ ಇವರು ಪ್ರಸ್ತಾವಿಕವಾಗಿ ಮಾತನಾಡಿದರು, ಹಿರಿಯ ಉಪನ್ಯಾಸಕರಾದ ಡಾ. ಸರಸ್ವತಿ ಕೆ.ಬಿ ರವರು ಮಾತನಾಡಿ ಪೋಷಕರ ಕಾರ್ಯಕಾರಿ ಸಮಿತಿಯಲ್ಲಿ ಯಾವ ರೀತಿ ಚಟುವಟಿಕೆಗಳನ್ನು ಆಯೋಜಿಸುವ ಬಗ್ಗೆ ಮಾಹಿತಿಯನ್ನು ನೀಡಿದರು.

ಈ ಪೋಷಕರ ಸಭೆಯಲ್ಲಿ ಸರ್ವಾನುಮತದ ಒಪ್ಪಿಗೆಯ ಮೇರೆಗೆ ಪೋಷಕರ ಕಾರ್ಯಕಾರಿ ಸಮಿತಿಯನ್ನು ರಚಿಸಲಾಯಿತು. ಈ ಸಮಿತಿಯ ಅಧ್ಯಕ್ಷರಾಗಿ ರಮೇಶ್ ಕುಮಾರ್ ಕೆ, ಉಪಾಧ್ಯಕ್ಷರಾಗಿ ಕನಕಲಕ್ಷ್ಮಿ, ಕಾರ್ಯದರ್ಶಿಗಳಾಗಿ ಗಿರಿಜಾ, ಜಂಟಿ ಕಾರ್ಯದರ್ಶಿಯಾಗಿ ದ್ರಾಕ್ಷಾಯಣಮ್ಮ, ಖಜಾಂಚಿಯಾಗಿ ಮಂಜುನಾಥ, ನಿರ್ದೇಶಕರುಗಳಾಗಿ ಪ್ರಭಾಕರನ್, ಸುರೇಶ್ ಕುಮಾರ್ ಆಯ್ಕೆಯಾದರು.

ಈ ಸಮಿತಿಯ ಅಧ್ಯಕ್ಷರಾಗಿ ಆಯ್ಕೆಯಾದ ರಮೇಶ್ ಕುಮಾರ್ ಕೆ ರವರು ಮಾತನಾಡಿ ಕಾಲೇಜಿನ ಪ್ರತಿಯೊಂದು ಚಟುವಟಿಕೆಯಲ್ಲಿ ಸಕ್ರಿಯವಾಗಿ ಸಮಿತಿಯು ಪಾಲ್ಗೊಳ್ಳುವುದರ ಮೂಲಕ ಕಾಲೇಜಿನ ಅಭಿವೃದ್ಧಿಗಾಗಿ ಶ್ರಮಿಸಲಾಗುವುದು ಎಂದು ತಿಳಿಸಿದರು.ಕಾರ್ಯದರ್ಶಿಯಾಗಿ ಆಯ್ಕೆಯಾದ ಗಿರಿಜಾ ಮಾತನಾಡಿ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಮೌಲ್ಯಗಳನ್ನು ಬೆಳೆಸುವುದರ ಮೂಲಕ ಉತ್ತಮ ನಾಗರೀಕರನ್ನಾಗಿ ಮಾಡುವ ಜವಾಬ್ದಾರಿ ಉಪನ್ಯಾಸಕರು ಮತ್ತು ಪೋಷಕರದ್ದಾಗಿದ್ದು, ಈ ಸಮಿತಿಯ ಮೂಲಕ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದರ ಮೂಲಕ ಕಾರ್ಯಗತ ಮಾಡಲಾಗುವುದು ಎಂದು ತಿಳಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್ ಸಿ ರವರು ಮಾತನಾಡಿ ಕಾರ್ಯಕಾರಿ ಸಮಿತಿಯು ಕಾಲೇಜಿನ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರ ಮೂಲಕ ಕಾಲೇಜಿನ ಅಭಿವೃದ್ಧಿಗೆ ಸಹಕಾರಿ ಆಗಬೇಕೆಂದು ತಿಳಿಸಿದರು. ಸಮಿತಿಯ ಕಾರ್ಯ ವೈಖರಿಯ ಬಗ್ಗೆ ಕರ್ತವ್ಯಗಳ ಬಗ್ಗೆ ವಿವಿಧ ಕಾರ್ಯಕ್ರಮಗಳ ಯೋಜನೆಯ ಬಗ್ಗೆ ಮಾಹಿತಿ ನೀಡಿದರು. ಆಯ್ಕೆಯಾದ ಕಾರ್ಯಕಾರಿ ಸಮಿತಿಯ ಸದಸ್ಯರಿಗೆ ಅಭಿನಂದನೆ ಸಲ್ಲಿಸಲಾಯಿತು.




## ಮನೆ ನಿರ್ಮಿಸದಂತೆ ತಡೆ, ಸಂಬಂಧಿಕರ ಕಿರುಕುಳ: ಐಚನಹಳ್ಳಿ ಅನಿಲ್ ಕುಮಾರ್ ಆರೋಪ

**ಪಿರಿಯಾಪಟ್ಟಣ:** ತಮ್ಮ ಸ್ವಂತ ಜಾಗದಲ್ಲಿ ಮನೆ ನಿರ್ಮಿಸಿಕೊಳ್ಳಲು ತಮ್ಮ ಸಂಬಂಧಿಕರು ತೊಂದರೆ ನೀಡುತ್ತಿದ್ದು, ಇದರಿಂದಾಗಿ ವಸತಿ ರಹಿತರಾದ ನನಗೆ ಸಂಕಷ್ಟ ಎದುರಾಗಿದೆ ಎಂದು ಐಚನಳ್ಳಿ ಅನಿಲ್ ಕುಮಾರ್ ಆರೋಪಿಸಿದರು.

**ಮನೆ ನಿರ್ಮಿಸದಂತೆ ತೊಂದರೆ ನೀಡುತ್ತಿರುವ ಆರೋಪ**

ಪಟ್ಟಣದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಕಳೆದ 40 ವರ್ಷಗಳಿಂದ ಐಚನಹಳ್ಳಿ ಗ್ರಾಮದಲ್ಲಿ ವಾಸವಾಗಿರುವ ನಮ್ಮ ಕುಟುಂಬವು 94(ಛಿ) ಕಾಯ್ದೆ ಅನ್ವಯ ಸರ್ಕಾರದಿಂದ ನಮ್ಮ ತಂದೆ ರವಿ ಎಂಬುವವರು ನಿವೇಶನವನ್ನು ಹೊಂದಿ ಹಕ್ಕು ಪತ್ರ ಪಡೆದಿದ್ದೇವೆ. ವಾಸಕ್ಕಾಗಿ ಈ ಜಾಗದಲ್ಲಿ ಮನೆ ನಿರ್ಮಾಣ ಮಾಡಲು ಮುಂದಾದ ಸಂದರ್ಭದಲ್ಲಿ ಸ್ಥಳೀಯ ನಿವಾಸಿ ನಮ್ಮ ಸಂಬಂಧಿ ಕಾಳೇಗೌಡ ಮತ್ತು ಈತನ ಕುಟುಂಬಸ್ಥರು ಮನೆ ನಿರ್ಮಾಣ ಮಾಡದಂತೆ ತೊಂದರೆ ನೀಡುತ್ತಿದ್ದಾರೆ ಎಂದು ದೂರಿದರು.

ಈ ವಿಚಾರವಾಗಿ ಸ್ಥಳೀಯ ಗ್ರಾಮ ಪಂಚಾಯಿತಿಗೆ ದೂರ ನೀಡಲಾಗಿದೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಣೇಶ್ ರವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಯಾವುದೇ ಸಮಸ್ಯೆ ಇಲ್ಲವೆಂದು ತಿಳಿಸಿ ಮನೆ ನಿರ್ಮಿಸಿಕೊಳ್ಳುವಂತೆ ಸೂಚಿಸಿದ್ದಾರೆ. ಇದಲ್ಲದೆ ಪೊಲೀಸ್ ಇಲಾಖೆಗೂ ಕೂಡ ದೂರು ನೀಡಲಾಗಿದ್ದು ಕಾನೂನಿನ ಅಡಿಯಲ್ಲಿ ಭೂ ವಿವಾದದ ಪ್ರಕರಣ ದಾಖಲಾಗಿ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿದೆ. ಆದರೂ ಕೂಡ ಸ್ಥಳೀಯ ಕಾಳೇಗೌಡ ಎಂಬ ವ್ಯಕ್ತಿ ತನ್ನ ಕುಟುಂಬಸ್ಥರೊಂದಿಗೆ ಸೇರಿಕೊಂಡು ವಿನಾಕಾರಣ ಇಲ್ಲಸಲ್ಲದ ಆರೋಪ ಮಾಡುತ್ತಾ ನಮ್ಮಗಳ ಮೇಲೆ ಹಲ್ಲೆ ಮಾಡಲು ಮುಂದಾಗುತ್ತಾನೆ ಮತ್ತು ಮನೆ ನಿರ್ಮಿಸದಂತೆ ತೊಂದರೆ ನೀಡುತ್ತಿದ್ದಾನೆ. ಈತನ ಕಿರುಕುದಿಂದ ನಮ್ಮ ತಂದೆ ಪಾರ್ಶ್ವ ಕಾಯಿಲೆಗೆ ಮತ್ತು ನಮ್ಮ ತಾಯಿ ಕ್ಯಾನ್ಸರ್ ರೋಗಕ್ಕೆ ತುತ್ತಾಗಿದ್ದಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈತನ ವಿರುದ್ಧ ಕ್ರಮ ಜರುಗಿಸಿ ನಮಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಅಳಲು ತೋಡಿಕೊಂಡರು.

ಪತ್ರಿಕಾಗೋಷ್ಠಿಯಲ್ಲಿ ಮಂಜುಳಾ,ಪ್ರವೀಣ್ ಉಪಸ್ಥಿತರಿದ್ದರು.

# ಶಾಲಾ ವಾಹನ ಪಲ್ಟಿ, ಚಾಲಕ ಸೇರಿ ಹಲವು ಮಕ್ಕಳಿಗೆ ಗಾಯ

**ಪಿರಿಯಾಪಟ್ಟಣ:** ಚಾಲಕನ ನಿಯಂತ್ರಣ ತಪ್ಪಿ ಶಾಲಾ ವಾಹನ ರಸ್ತೆ ಪಕ್ಕದ ತಡೆಗೋಡೆಗೆ ಡಿಕ್ಕಿ ಹೊಡೆದು ಚಾಲಕ ಸೇರಿ ಸುಮಾರು 16 ಮಕ್ಕಳಿಗೆ ಗಾಯಗಳಾಗಿರುವ ಘಟನೆ ಬುಧವಾರ ಬೆಳಗ್ಗೆ ನಡೆದಿದೆ.

ತಾಲ್ಲೋಕಿನ ಕಂಪಲಾಪುರದ ಎಂ.ಆರ್.ನೋಬೆಲ್ ಶಾಲೆಗೆ ಸೇರಿದ ವಾಹನ ( ಏಂ 41 ಃ3263) ಪಲ್ಟಿಯಾಗಿದ್ದು , ವ್ಯಾನಿನಲ್ಲಿ ಅಂದಾಜು 16 ರಿಂದ 20 ಮೆಕ್ಕಳಿದರೆನ್ನಲಾಗಿದ್ದು ಎಲ್ಲಾ ಮಕ್ಕಳಿಗೂ ಸಣ್ಣಪುಟ್ಟ ಗಾಯಗಳಾಗಿದ್ದು ಚಾಲಕ ಹಬ್ಬನಕುಪ್ಪೆ ಗ್ರಾಮದ ಶ್ರೀನಿವಾಸ್ ಗೂ ಕೂಡಾ ಗಾಯಗಳಾಗಿದೆ.

ಘಟನೆ ವಿವರ: ಎಂದಿನಂತೆ ಬೆಳಗ್ಗೆ 9 ಗಂಟೆಗೆ ಹಬ್ಬನಕುಪ್ಪೆ ಗ್ರಾಮದಿಂದ ಚಾಲಕ ಶ್ರೀನಿವಾಸ್ ಮಕ್ಕಳನ್ನು ಕೂರಿಸಿಕೊಂಡು ಕಂಪಲಾಪುರದ ಎಂ.ಆರ್.ನೋಬೆಲ್ ಶಾಲೆಗೆ ಕರೆತರುವಾಗ ಚಾಲಕನ ನಿಯಂತ್ರಣ ತಪ್ಪಿ ಹಬ್ಬನಕುಪ್ಪೆ - ಹೊಸಕೊಪ್ಪಲು ಮದ್ಯೆ ರಸ್ತೆ ತಡೆಗೋಡೆಗೆ ವ್ಯಾನ್ ಡಿಕ್ಕಿ ಹೊಡೆದಿದೆ.ಡಿಕ್ಕಿಯ ರಭಸಕ್ಕೆ ವ್ಯಾನ್ ಪಲ್ಟಿಯಾಗಿದೆ. ನಂತರ ದಿಗ್ಭ್ರಮೆಗೊಂಡ ಮಕ್ಕಳು ಚೀರಾಡಿದ್ದಾರೆ , ಈ ಶಬ್ದ ಕೇಳಿ ಅಕ್ಕಪಕ್ಕದ ಜಮೀನಿನಲ್ಲಿದ್ದವರು ಹಬ್ಬನಕುಪ್ಪೆ ಗ್ರಾಮದವರಿಗೆ ವಿಷಯ ಮುಟ್ಟಿಸಿದ್ದಾರೆ. ತಕ್ಷಣ ಕಾರುಗಳಲ್ಲಿ ಸ್ಥಳಕ್ಕೆ ಬಂದ ಹಬ್ಬನಕುಪ್ಪೆ ಗ್ರಾಮದ ವಿಜಯ್ , ರವಿ , ನವೀನ , ದಿನೇಶ್ ಹಾಗೂ ಇತರರು ಮಗುಚಿ ಬಿದ್ದ ವ್ಯಾನಿನ ಕಿಟಕಿಯಿಂದ ಎಲ್ಲ ಮಕ್ಕಳನ್ನು ಹೊರತೆಗೆದು ಕಾರುಗಳಲ್ಲಿ ಹುಣಸೂರು ಆಸ್ಪತ್ರೆಗೆ ಕರೆತಂದು ಪ್ರಾಥಮಿಕ ಚಿಕಿತ್ಸೆ



ಕೊಡಿಸಿ ಹೆಚ್ಚು ಗಾಯಗೊಂಡ ಮಕ್ಕಳು , ಚಾಲಕ ಹಬ್ಬನಕುಪ್ಪೆಯ ಶ್ರೀನಿವಾಸ್ ನನ್ನು ಮೈಸೂರಿಗೆ ರವಾನಿಸಿದ್ಲಾರೆ.

ಅದೃಷ್ಟವಶಾತ್ ಯಾರಿಗೂ ಪ್ರಾಣಾಪಾಯವಿಲ್ಲ ಎನ್ನಲಾಗಿದ್ದು. ಆಶ್ಚರ್ಯ ವೆಂದರೆ ವ್ಯಾನ್ ಪಲ್ಟಿತಾದ 10 ಮೀಟರ್ ಅಂತರದಲ್ಲಿ ಹೈಟೆನ್ಷನ್ ವಿದ್ಯುತ್ ಕಂಬ ಇತ್ತು ಒಂದು ವೇಳೆ ವಿದ್ಯುತ್ ಕಂಬಕ್ಕೆ ವಾಹನ ಡಿಕ್ಕಿಹೊಡೆದಿದ್ದರೆ ಮಕ್ಕಳಿಗೆ ಪ್ರಾಣಾಹಾನಿಯಾಗುತ್ತಿತ್ತೋ ದೇವರೇ ಬಲ್ಲ ಒಟ್ಟಾರೆ ವ್ಯಾನಿನಲ್ಲಿದ್ದ ಅಮೂಲ್ಯ ಜೀವಗಳಿಗೆ ಯಾವುದೇ ಪ್ರಾಣಾಹಾನಿಯಾಗದೇ ಇರುವುದು ದೇವರ ಅನುಗ್ರಹವೇ ಸರಿ.

# ದೊಡ್ಡಹುಲ್ಲೇನಹಳ್ಳಿಯಲ್ಲಿ ಜನ ಜಾತಿ ಗೌರವ ದಿವಸ ಆಚರಣೆ



**ಹುಳಿಯಾರು:** ಹುಳಿಯಾರುಸಮೀಪದದೊಡ್ಡಎಣ್ಣೇಗೆರೆ ಗ್ರಾಪಂ ವ್ಯಾಪ್ತಿಯ ದೊಡ್ಡಹುಲ್ಲೇನಹಳ್ಳಿಯಲ್ಲಿ ಜನ ಜಾತಿಯ ಗ್ರಾಮ್ ಉತ್ಕರ್ಷ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿದ ಸಮಾಜ ಕಲ್ಯಾಣ ಅಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ ಕೇಂದ್ರ, ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಪರಿಶಿಷ್ಟ ಜಾತಿಯವರಿಗೆ ದೊರೆಯುವ ಯೋಜನೆಗಳ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು. ಚಿಕ್ಕನಾಯಕನಹಳ್ಳಿ ಆರ್ಥಿಕ ಸಾಕ್ಷರತಾ ಸಲಹೆಗಾರರ ಆರ್.ಎಂ.ಕುಮಾರಸ್ವಾಮಿ ಮಾತನಾಡಿ ಬ್ಯಾಂಕ್ ಹಾಗೂ ಕೇಂದ್ರ, ಸರ್ಕಾರದ ಯೋಜನೆಗಳಾದ ಕಿಸಾನ್ ಕ್ರೆಡಿಟ್ ಕಾರ್ಡ್, ಪ್ರಧಾನಮಂತ್ರಿ ಜೀವನ ಸುರಕ್ಷಾ ಭಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಹಾಗೂ ಜನದನ್ ಖಾತೆಗಳ ಬಗ್ಗೆ ವಿವರ ನೀಡಿದರು.

ದೊಡ್ಡಣ್ಣಗೆರೆ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಾದ ರಾಘವೇಂದ್ರ, ಮಾತನಾಡಿ ಪರಿಶಿಷ್ಟರಿಗೆ ಕೇಂದ್ರ, ಹಾಗೂ ರಾಜ್ಯ ಸರ್ಕಾರದಿಂದ ದೊರೆಯುವ ಬ್ಯಾಂಕಿನ ಯೋಜನೆಗಳು, ಕಂದಾಯ, ಕೃಷಿ, ಆರೋಗ್ಯ, ಆಹಾರ, ಮಕ್ಕಳ ಹಾಗೂ ಬಾಣಂತಿಯರ ಬಗ್ಗೆ ಇರುವ ಯೋಜನೆಗಳ ಬಗ್ಗೆ ಅರಿವು ಮೂಡಿಸುವುದು ಕಾರ್ಯಕ್ರಮದ ಉದ್ದೇಶ ಎಂದು ತಿಳಿಸಿದರು.

ಅಂಗನವಾಡಿ ಮೇಲ್ವಿಚಾರಕಿ ಶಾರದಮ್ಮ, ಶಿಶು ಮತ್ತು ಮಹಿಳಾ ಅಭಿವೃದ್ಧಿ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳ ಬಗ್ಗೆ ಪರಿಶಿಷ್ಟರಿಗೆ ಅರಿವು ಮೂಡಿಸಿದರು.

ಈ ಅಭಿಯಾನದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಪಾಂಡುರಂಗಪ್ಪ, ಅನಿತಾ, ಆಹಾರ ಇಲಾಖೆಯ ಫುಡ್ ಇನ್ಸ್ಪೆಕ್ಟರ್ ಪ್ರಜ್ವಲ್, ಸಮಾಜ ಕಲ್ಯಾಣ ಇಲಾಖೆಯ ಸುರೇಶ್, ಗ್ರಾಮ ಪಂಚಾಯಿತಿ ಕಂಪ್ಯೂಟರ್ ಆಪರೇಟರ್ ಸಹನಾ, ಡ್ರೈವರ್ ಕವಿತಾ ಹಾಗೂ ಊರಿನ ಮುಖಂಡರಾದ ಪರಮೇಶ್ವರಪ್ಪ ಮುಂತಾದವರು ಉಪಸ್ಥಿತರಿದ್ದರು.

# ಅಸಹಾಯಕರ ರಕ್ಷಣೆಯೇ ಪೊಲೀಸ್ ಕರ್ತವ್ಯ

**ಚಿತ್ರದುರ್ಗ:** ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜಿನ ಸುತ್ತಮುತ್ತ ಹೊರರಾಜ್ಯದಿಂದ ಬಂದಂತವರು, ಬಿಹಾರದಿಂದ ಬಂದಂತವರು, ಸಣ್ಣದಾಗಿ, ಸ್ವಂತವಾಗಿ ಪಾನಿಪುರಿ ಮಾರಿಕೊಂಡು ಜೀವನ ಮಾಡುತ್ತಿದ್ದವರಿಗೆ, ಬಲವಂತವಾಗಿ ಹೆದರಿಸಿ, ತಿಂಗಳಿಗೆ ನಾಲ್ಕೈದು ಬಾರಿ ಪಾನಿಪುರಿ ತಿಂದು, ಹಣ ಕೊಡದಲೆ ಹೋಗುವವರನ್ನ ಪೊಲೀಸ್ ಇಲಾಖೆಯ ನಿಯಂತ್ರಿಸಬೇಕು, ಕಷ್ಟಪಟ್ಟು ದುಡಿದು ಜೀವನ ನಿರ್ವಹಿಸುತ್ತಿರುವಂತಹ ಅಸಹಾಯಕ ಜನರನ್ನು, ಸ್ಥಳೀಯ ಜನರಲ್ಲಿ ಕೆಲವರು, ಹೆದರಿಸಿ, ಬೆದರಿಸಿ, ಗುಂಡಾ ವರ್ತನೆಯಿಂದ ಪಾನಿಪುರಿ ತಿಂದು, ಹಣ ನೀಡದಲೇ, ತಿಂಗಳಿಗೆ ನಾಲ್ಕೈದು ಬಾರಿ ಬಂದು, ಇಂತಹ ಜನರನ್ನ ಗೋಳುಯ್ದುಕೊಳ್ಳುವುದನ್ನು, ಸತಾಯಿಸುವುದನ್ನು, ಮಾಡುತ್ತಿರುವುದನ್ನು ಪೊಲೀಸ್ ಇಲಾಖೆ ಗಂಭೀರವಾಗಿ ತೆಗೆದುಕೊಂಡು, ಅವರನ್ನು ನಿಯಂತ್ರಿಸಲು ಮತ್ತು ಕಾನೂನು ಕ್ರಮಗಳನ್ನು ಜರುಗಿಸಿ, ಸಮಾಜವನ್ನು ಸುಸ್ಥಿತಿಯಲ್ಲಿ ಇಡಲು ಪ್ರಯತ್ನಿಸಬೇಕೆಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ.

ಸರ್ಕಾರಿ ವಿಜ್ಞಾನ ಕಾಲೇಜಿನ ಸುತ್ತಮುತ್ತ ರಸ್ತೆಗಳಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ, ಪಾನಿಪುರಿ, ಗೋಲ್ ಗುಪ್ಪಗಳನ್ನು, ಮಾಡುತ್ತಿರುವಂತಹ ಹೊರ ರಾಜ್ಯದ ವ್ಯಾಪಾರಸ್ಥರಿಗೆ, ಸ್ಥಳೀಯವಾಗಿ ಕೆಲವೊಂದಿಷ್ಟು ವ್ಯಕ್ತಿಗಳು ಬಂದು, ಬಲವಂತದಿಂದ ಪಾನಿಪುರಿ ತಿಂದು, ಹಣ ಕೊಡದಲೇ, ವಾರಕ್ಕೊಮ್ಮೆ ಇದೇ ರೀತಿ ಮಾಡುತ್ತಿರುವುದನ್ನು ಪೊಲೀಸ್ ಗಮನಕ್ಕೆ ತಂದರು ಸಹ ಯಾವುದೇ, ಕಠಿಣ ಕ್ರಮ ಜರುಗಿಸಿಲ್ಲ ಎಂದು ನೊಂದು ನುಡಿದವರಿಗೆ ಸಮಾಧಾನ ಮಾಡುತ್ತಾ ಮಾತನಾಡುತ್ತಿದ್ದರು. ಹೊರ ರಾಜದಿಂದ ಬಂದಂತ ಅಸಹಾಯಕ ಏಕಾಂಗಿ ಜನರನ್ನ, ಸ್ಥಳೀಯ ಜನರು ಶೋಷಣೆ ಮಾಡುವುದನ್ನು ತಡೆಯಲು ಪೊಲೀಸ್ ಇಲಾಖೆ ಶ್ರಮಾವಹಿಸಬೇಕು, ಯಾವುದೇ ಅಸಹಾಯಕ ವ್ಯಕ್ತಿಯನ್ನು ಶೋಷಣೆ ಮಾಡದೇ ಸಮಾಜದಲ್ಲಿ ಬದುಕಲು ಹಕ್ಕನ್ನ ಸಂವಿಧಾನ ನೀಡಿರುವುದರಿಂದ, ಅಂಥವರ ರಕ್ಷಣೆ ಮಾಡುವುದೇ ಪೊಲೀಸ್ ಇಲಾಖೆಯ ಕರ್ತವ್ಯವಾಗುತ್ತದೆ. ಅವರು ನೊಂದು, ಬೆಂದು, ಶಾಪ ಹಾಕುತ್ತ, ತಾವು ದುಡಿದ ಸಂಪಾದನೆಯಲ್ಲಿ ಕೆಲವೊಂದಿಷ್ಟು ಭಾಗವನ್ನ ಸ್ಥಳೀಯರಿಗೆ ಉಚಿತವಾಗಿ ನೀಡುವುದರಿಂದ, ಅವರ ಜೀವನ ಸಂಕಷ್ಟಕ್ಕೆ ಬಂದು ನಿಲ್ಲುತ್ತದೆ, ಆದ್ದರಿಂದ ಸ್ಥಳೀಯ ಮುಖಂಡರು ಸಹ ಇಂತಹ ಪುಂಡಾಟಿಕೆ ಮಾಡುವ ಜನರನ್ನ ನಿಯಂತ್ರಿಸಿ, ಅವರಿಗೆ ತಿಳುವಳಿಕೆ ನೀಡಿ, ಬುದ್ಧವಾದ ಹೇಳಿ, ಬಡವರಿಂದ ವಸ್ತುಗಳನ್ನು ವಸೂಲಿ ಮಾಡುವುದು, ಪಾನಿಪುರಿ ತಿಂದು ಹಣ ನೀಡದೆ ಹೋಗುವುದು, ಇಂಥವುಗಳನ್ನು ಸಹ ಸರಿಪಡಿಸುವಂತಹ ನಿಟ್ಟಿನಲ್ಲಿ ಸಮಾಜದಲ್ಲಿ ಕೆಲಸವಾಗಬೇಕು ಎಂದರು. ಮಧ್ಯಾಹ್ನ ಮೂರರಿಂದ ನಾಲ್ಕರವರೆಗೆ ಯಾರು ಇಲ್ಲದ ಸಮಯದಲ್ಲಿ, ಆಟೋರಿಕ್ಷದಲ್ಲಿ ಬಂದು ಮೂರು ನಾಲ್ಕು ಜನ, ವಾರಕ್ಕೆ ಒಂದು ಸಾರಿ, ಎರಡು ಸಾರಿ ನಮ್ಮಲ್ಲಿ ಪಾನಿಪುರಿ ತಿಂದು, ಹಣ ನೀಡದಲೆ ಹಾಗೆ ಹೋಗುತ್ತಾರೆ, ಅವರು ಮಧ್ಯಪಾನ ವ್ಯಸನಿಗಳು ಇರಬಹುದು ಅಥವಾ ಮಧ್ಯಪಾನ ಕುಡಿದು ಬಂದು ನಮ್ಮ ಹತ್ತಿರ ಪಾನಿಪುರಿ ತಿಂದು, ಹಣ ಕೊಡದೆಲೆ ಹೋಗುವವರು, ಈ ರೀತಿ ಒಂದು ಗುಂಪು ನಮಗೆ ತೊಂದರೆ ಕೊಡುತ್ತಿದೆ, ಇದರ ವಿರುದ್ಧ ನಾವು ಪೊಲೀಸ್ ಇಲಾಖೆಗೆ ದೂರು ನೀಡಿದರು ಸಹ ಯಾವುದೇ ಕ್ರಮ ಜರುಗಿಸಿಲ್ಲ ಎಂದು ಬಿಹಾರದಿಂದ ಬಂದಂತಹ ಒಬ್ಬ ವ್ಯಕ್ತಿ ಅಸಹಾಯಕತೆಯನ್ನ ತೋಡಿಕೊಂಡಿದ್ದಾನೆ ಎಂದರು. ಸಾಮಾನ್ಯವಾಗಿ ಹೊರ ರಾಜ್ಯದಿಂದ ಬಂದಂತವರು ಸ್ಥಳೀಯ ಜನರ ಸಹಕಾರ ಮತ್ತು ಬೆಂಬಲವಿಲ್ಲದೆ ಏಕಾಂಗಿಯಾಗಿ ಬದುಕು ಸಾಗಿಸುತ್ತಿರುತ್ತಾರೆ, ಅಂತವರನ್ನು ಹೆದರಿಸಿ, ಬೆದರಿಸಿ, ಹಣ ವಸೂಲಿ ಮಾಡುವುದು, ತಿಂಡಿ ವಸೂಲಿ ಮಾಡುವುದು, ಮಾಡುವ ಜನರು ಸಾಮಾನ್ಯವಾಗಿ ಎಲ್ಲಾ ಊರುಗಳಲ್ಲಿ ದೊರೆಯುತ್ತಾರೆ. ಚಿಕ್ಕ ಊರುಗಳಾದ ಚಿತ್ರದುರ್ಗದಲ್ಲೂ ಸಹ ಅಂತಹ ಜನರ ಸಂಖ್ಯೆ ಇದೆ ಎಂಬುದೇ ಆಶ್ಚರ್ಯವಾಗುತ್ತದೆ, ಅಂತಹ ವ್ಯಕ್ತಿಗಳ ಮನಃಪರಿವರ್ತನೆ ಮಾಡಲು ಸ್ಥಳೀಯ ಜನರು ಸ್ವಲ್ಪ ಮಟ್ಟಿಗೆ ಜವಾಬ್ದಾರಿಯನ್ನ ತೆಗೆದುಕೊಂಡು, ಅಸಹಾಯಕ ಜನರ ರಕ್ಷಣೆಗೆ ನಿಲ್ಲಬೇಕು ಎಂದು ವಿನಂತಿಸಿಕೊಂಡಿದ್ದಾರೆ. ಸಣ್ಣ ಸಣ್ಣದಾಗಿ, ಬಲವಂತ ಮಾಡುವುದು ಹೆದರಿಸುವುದು, ಬೆದರಿಸುವುದು ಇವು ಬೆಳೆಯುತ್ತಾ ಬೆಳೆಯುತ್ತ ದೊಡ್ಡವಾಗಿ, ಸಮಾಜಘಾತಕ ಶಕ್ತಿಗಳಾಗಿ ನಿಲ್ಲಬಹುದು, ಈಗ ಸಣ್ಣದರಲ್ಲೇ ಇವುಗಳನ್ನು ಸರಿಪಡಿಸಿ, ಒಳ್ಳೆಯ ಸಮಾಜವನ್ನು ನಿರ್ಮಿಸುವತ್ತ ಸಾರ್ವಜನಿಕರು ಮತ್ತು ಪೊಲೀಸ್ ಇಲಾಖೆ ಒಟ್ಟಿಗೆ ಕೆಲಸ ಮಾಡಿದರೆ ಮಾತ್ರ ಸಾಧ್ಯವಾಗುತ್ತದೆ. ಸಾಮಾನ್ಯವಾಗಿ ನಾವು ತುಂಬಾ ಹಣವಂತರನ್ನು, ಬಲಿಷ್ಠರನ್ನ, ಅನ್ಯಾಯ ಮಾರ್ಗದಲ್ಲಿ ಹಣ ಸಂಪಾದನೆ ಮಾಡಿದವರನ್ನು ಹೆದರಿಸಿ, ಬೆದರಿಸಿ ಹಣ ವಸೂಲಿ ಮಾಡುವುದನ್ನು ಸಾಮಾನ್ಯವಾಗಿ ಸುದ್ದಿ ಪತ್ರಿಕೆಗಳಲ್ಲಿ ನೋಡುತ್ತಿರುತ್ತೇವೆ, ಆದರೆ ಒಂಟಿ ಕಾಲಲ್ಲಿ ನಿಂತು, ದಿನದ ಪೂರ್ತಿ ಬೆಳಿಗ್ಗೆಯಿಂದ ಸಂಜೆವರೆಗೂ, ವಿದ್ಯಾರ್ಥಿಗಳಿಗೆ ಪಾನಿಪುರಿ ಮಾರಿ, ತಮ್ಮ ಜೀವನ ನಿರ್ವಹಿಸುತ್ತಿರುವಂತಹ ಬಡವರ ಬಳಿಯಿಂದಲೂ ಸಹ ಹಣ ವಸೂಲಿ ಮಾಡುವುದು, ತಿಂಡಿಗಳನ್ನು ಉಚಿತವಾಗಿ ಪಡೆದುಕೊಳ್ಳುವುದು, ಇವೆಲ್ಲವೂ ಸಹ ಅನ್ಯಾಯಕರವಾದ ದಾರಿಗಳಾಗಿದೆ. ಸಾರ್ವಜನಿಕರ ಗಮನಕ್ಕೆ ಇವುಗಳನ್ನು ತಂದು, ಸಮಾಜದಲ್ಲಿ ಸುಧಾರಿಸುವ ನಿಟ್ಟಿನಲ್ಲಿ ಮುಖಂಡರುಗಳು, ಜನಪ್ರತಿನಿಧಿಗಳು, ಕೆಲಸ ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ. ಅಸಹಾಯಕ ಜನ ಹೆದರಿ ತಮ್ಮ ದುಡಿಮೆಯ ಸ್ವಲ್ಪ ಭಾಗವನ್ನು ಈ ರೀತಿ ನೀಡಿ, ಬದುಕು ಸಾಗಿಸುತ್ತಿದ್ದಾರೆ, ಕಷ್ಟವನ್ನು ಯಾರಿಗೂ ಹೇಳಿಕೊಳ್ಳಲಾರದೆ ಬಳಲುತ್ತಿದ್ದಾರೆ, ಹಾಗಾಗಿ ವಿಜ್ಞಾನ ಕಾಲೇಜಿನ ಸುತ್ತಮುತ್ತ ಜನಸಂದಣಿ ಕಡಿಮೆ ಇರುವುದರಿಂದ ಈ ರೀತಿ ಘಟನೆಗಳು ಹೆಚ್ಚಾಗಿ ಘಟಿಸುತ್ತಿವೆ, ಹಾಗಾಗಿ ಪೊಲೀಸ್ ಇಲಾಖೆ ಸಾಮಾನ್ಯ ವೇಷದಲ್ಲಿ ಆಗಮಿಸಿ, ಇಂತಹ ವ್ಯಕ್ತಿಗಳನ್ನ ನಿಯಂತ್ರಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

ಸಂಜೆ ಮುಗಿಲು
ಶುಕ್ರವಾರ
20.6.2025



# ಮಕ್ಕಳಿಗೆ ಉಚಿತ ಪಠ್ಯಪುಸ್ತಕ ವಿತರಣೆ



**ಮೈಸೂರು:** ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿಯವರ ಹುಟ್ಟುಹಬ್ಬವನ್ನು ಕುಕ್ಕರಹಳ್ಳಿಯ ಸರ್ಕಾರಿ ಶಾಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಗರದ ಕುಕ್ಕರಹಳ್ಳಿಯ ಸರ್ಕಾರಿ ಶಾಲೆಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ರವರ ಹುಟ್ಟುಹಬ್ಬವನ್ನು ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷರಾದ ಚಂದನ್ ಗೌಡ ಅವರ ನೇತೃತ್ವದಲ್ಲಿ ಶಾಲಾ ಮಕ್ಕಳಿಗೆ ಉಚಿತ ಪಠ್ಯಪುಸ್ತಕವನ್ನು ವಿತರಿಸುವ ಮೂಲಕ ಸಿಹಿ ಹಂಚಿ ಸಂಭ್ರಮಿಸಿದ್ದಾರೆ ಇದೇ ವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ಚಂದನ್ ಗೌಡ ಅವರು ಕರ್ನಾಟಕ ಪ್ರದೇಶ್ ಕಾಂಗ್ರೆಸ್ ರಾಜ್ಯಾಧ್ಯಕ್ಷರಾದ ಮಂಜುನಾಥ್ ಗೌಡ ಅವರ ಆದೇಶದ ಮೇರೆಗೆ ರಾಹುಲ್ ಗಾಂಧಿಯವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಪ್ರಧಾನಿಯಾಗಿ ದೇಶದ ನೊಂದವರ ಪಾಲಿನ ಆಶಾಕಿರಣವಾಗಬೇಕೆಂದು ತಾಯಿ ಚಾಮುಂಡೇಶ್ವರಿಯಲ್ಲಿ ಪ್ರಾರ್ಥಿಸುತ್ತೇವೆ ಎಂದು ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಟ್ಟಿಹುಂಡಿ ಸುನಿಲ್ ಸೇರಿದಂತೆ ಯುವ ಕಾಂಗ್ರೆಸ್ ಉಸ್ತುವಾರಿಗಳು ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಶಿವಶಂಕರ್ ಜಿಲ್ಲಾ ಉಪಾಧ್ಯಕ್ಷರಾದ ಫಯಾಜ್ ಮಹಮ್ಮದ್ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಯುವ ಅಧ್ಯಕ್ಷ ರಾಜೇಶ್ ಕಾರಾಗೃಹ ಮಂಡಳಿ ಪವನ್ ಸಿದ್ದರಾಮ್ ಉಪಾಧ್ಯಕ್ಷರುಗಳಾದ ನಿಂಗಯ್ಯ ರಾಜು ನಂಜನಗೂಡು ವಿಧಾನಸಭಾ ಕ್ಷೇತ್ರದ ಉಪಾಧ್ಯಕ್ಷರಾದ ಹರೀಶ್ ಸಿಂಗಾರಿಪುರ ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷರಾದ ಆದರ್ಶ್ ಜಿಲ್ಲಾಮಟ್ಟದ ಪದಾಧಿಕಾರಿಗಳಾದ ವಿಜಯ ಕುಮಾರ್, ಕೃಷ್ಣ, ಜಿ ಮಹೇಶ್, ಸಂಜಯ್, ಕುಮಾರ್, ಶಾಲಾ ಶಿಕ್ಷಕ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮೈಸೂರು:** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, 2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ''ಶುಲ್ಕ ವಿನಾಯಿತಿ'' ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

15.06.2025ಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ ನಿಗದಿಪಡಿಸಲಾಗಿರುತ್ತದೆ. ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಕೋರಿ ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳು ಮನವಿ ಮಾಡಿಕೊಂಡಿರುತ್ತಾರೆ ಹಾಗೂ ಮಾನ್ಯ ಹೈಕೋರ್ಟ್ ಮಧ್ಯಂತರ ಆದೇಶದಂತೆ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸುಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಮಾತ್ರ ಅರ್ಜಿ ಸಲ್ಲಿಸುವ ಕೊನೆಯ ಜೂನ್ 30 ರವರೆಗೆ ವಿಸ್ತರಿಸಲಾಗಿರುತ್ತದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ https://bcwd.karnataka.gov.in ಇಲಾಖಾ ಸಹಾಯವಾಣಿ ಸಂಖ್ಯೆ: ಇ–ಮೇಲ್ 8050770005 ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ: ಇ–ಮೇಲ್ bcwdhelpline@gmail.com ದೂರವಾಣಿ ಸಂಖ್ಯೆ 1902 postmatrichelp@karnataka.gov.inನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆವಿಕಂ ಗ್ರಾಹಕರ ಸಂವಾದ ಸಭೆ

**ಕೋಲಾರ:** ಕೋಲಾರ ಗ್ರಾಮೀಣ ಉಪ–ವಿಭಾಗದ ಕಛೇರಿಯಲ್ಲಿ ಜೂನ್ 21 ರಂದು ಮೂರನೇ ಶನಿವಾರದಂದು ಮಧ್ಯಾಹ್ನ 3.00 ರಿಂದ 5.30 ಗಂಟೆಯವರೆಗೆ ಬೆವಿಕಂ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಕೊಳ್ಳಬೇಕೆಂದು ಗ್ರಾಮೀಣ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಯಂತಿಗಳ ಪೂರ್ವಭಾವಿ ಸಭೆ

**ಕೋಲಾರ:** ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಜುಲೈ 02 ರಂದು ''ಡಾ. ಫ.ಗು ಹಳಕಟ್ಟಿಯವರ ಜಯಂತಿ'' ಹಾಗೂ ಜುಲೈ 10 ರಂದು ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ಜೂನ್ 21 ರಂದು ಕ್ರಮವಾಗಿ ಬೆಳಿಗ್ಗೆ 11.00 ಮತ್ತು 11.30 ಗಂಟೆಗೆ ಮಾನ್ಯ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಿ.ಚನ್ನಯ್ಯ ರಂಗಮಂದಿರದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗುತ್ತಿದೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## UPSC ಮುಖ್ಯ ಪರೀಕ್ಷಾ ಪೂರ್ವ ತರಬೇತಿಗೆ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಬೆಂಗಳೂರಿನ ಹಜ್ ಭವನದಲ್ಲಿ ವಸತಿಯುತ ತರಬೇತಿ ಅಥವಾ ಶಿಷ್ಯ ವೇತನದೊಂದಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ 03 ತಿಂಗಳ ಗಕಖಅ ಮುಖ್ಯ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡುವ ಮೂಲಕ ರಾಜ್ಯದ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು, ಅಭ್ಯರ್ಥಿಗಳ ಸುರಕ್ಷತಾ ದೃಷ್ಠಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು, ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ ತರಬೇತಿ ನೀಡಲಾಗುತ್ತಿದ್ದು, ಸದರಿ ತರಬೇತಿಗೆ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿ ಅರ್ಜಿ ಸಲ್ಲಿಸಲು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, ರಾಜ್ಯದ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದವರಾಗಿರಬೇಕು, ಅಭ್ಯರ್ಥಿಯು ಗಕಖಅ ಪೂರ್ವಭಾವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಈ ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. ಸದರಿ ತರಬೇತಿಗೆ ಸಂದರ್ಶನದ ಮೂಲಕ ಆಯ್ಕೆಮಾಡಲಾಗುವುದು. ಅಲ್ಪಸಂಖ್ಯಾತರ ಅರ್ಹ ಅಭ್ಯರ್ಥಿಗಳು ನಿರ್ದೇಶನಾಲಯದ ಜಾಲತಾಣದಲ್ಲಿ ಅರ್ಜಿಗಳನ್ನು https://dom.karnataka.gov.in ಮೂಲಕ ಸೂಕ್ತ ದಾಖಲೆಗಳೊಂದಿಗೆ ಜೂನ್ 21ರ ವರೆಗೆ ಸಲ್ಲಿಸಬಹುದು. ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್ https://dom.karnataka.gov.in ಹಾಗೂ ಸಹಾಯವಾಣಿ ಸಂಖ್ಯೆ : 8277799990 ಅನ್ನು ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯದ ದೂರವಾಣಿ ಸಂಖ್ಯೆ:08152–295257 ಸಂಪರ್ಕಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಿಂಗಳ ಉಪನ್ಯಾಸ ಕಾರ್ಯಕ್ರಮ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವತಿಯಿಂದ ಜೂನ್ 20 ರಂದು ಸಂಜೆ 5.00 ಗಂಟೆಗೆ ಪ್ರಾಧಿಕಾರದ ಕಚೇರಿಯ ಆವರಣದಲ್ಲಿ 'ಅನುವಾದದ ಸಾಂಸ್ಕೃತಿಕ ಮುಖ' ವಿಷಯದ ಕುರಿತು ಉಪನ್ಯಾಸ ಏರ್ಪಡಿಸಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಚನ್ನಪ್ಪ ಕಟ್ಟಿ ಅವರ ವಹಿಸಲಿದ್ದು, ಪ್ರಸಿದ್ಧ ಸಾಹಿತಿಗಳು ಹಾಗು ಅನುವಾದಕರಾದ ಪ್ರೊ. ಓ.ಎಲ್. ನಾಗಭೂಷಣ ಸ್ವಾಮಿ ಅವರು ಸಮಾರಂಭದಲ್ಲಿ ಭಾಗವಹಿಸಿ 'ಅನುವಾದದ ಸಾಂಸ್ಕೃತಿಕ ಮುಖ' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಪ್ರಾಧಿಕಾರದ ಸದಸ್ಯರಾದ ಪ್ರೊ. ನಾರಾಯಣ ಘಟ್ಟ (ನಾಹೊ) ಅವರು ಕಾರ್ಯಕ್ರಮದ ಪ್ರಸ್ತಾವನೆಯ ಕಾರ್ಯ ಮಾಡಲಿದ್ದು, ಡಾ.ಡಿ.ಕೆ.ಚಿತ್ತಯ್ಯ ಪೂಜಾ ಅವರು ಕಾರ್ಯಕ್ರಮವನ್ನು ನಿರೂಪಿಸಲಿದ್ದಾರೆ. ಪ್ರಾಧಿಕಾರದ ರಿಜಿಸ್ಟ್ರಾರ್ ಈಶ್ವರ್ ಕು. ಮಿರ್ಜಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಅವರು ಜೂನ್ 20 ರಂದು ಮಂಗಳೂರಿನಲ್ಲಿ ನಡೆಯುವ ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿಯ ಪ್ರಕಟಿತ 'ಮರೆಯಲಾಗದ ಬ್ಯಾರಿ ಮಹನೀಯರು' ಪುಸ್ತಕಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸುವುದು. ಜೂನ್ 21 ರಂದು ಉಡುಪಿಯಲ್ಲಿ ಆಯೋಜಿಸಿರುವ ಗೋವಿಂದ ಪೈ ಸಂಶೋಧನಾ ಕೇಂದ್ರದ ವತಿಯಿಂದ ಆಯೋಜಿಸಿರುವ ಪ್ರೊ.ಕು.ಶಿ.ಹರಿದಾಸ ಭಟ್ಟರ ಹೆಸರಿನಲ್ಲಿ ನೀಡುವ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಭಾಗವಹಿಸಿ ಜೂನ್ 22 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ನಗರದ ಪ್ರದೇಶದ ನಿವೇಶನ ರಹಿತರ ಪಟ್ಟಿ ಸಿದ್ಧಪಡಿಸಿ: ಡಿಸಿ

**ಮಂಡ್ಯ:** ನಗರದ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಸರ್ವೆ ನಡೆಸಿ ವಸತಿ ಮತ್ತು ನಿವೇಶನ ರಹಿತರ ಪಟ್ಟಿಯನ್ನು ಸಿದ್ಧ ಪಡಿಸಿ ಎಂದುಜಿಲ್ಲಾಧಿಕಾರಿಡಾಕುಮಾರಅವರು ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಆಯೋಜಿಸಲಾಗಿದ್ದ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದಅವರು ಪೌರಕಾರ್ಮಿಕರ ಗೃಹ ಭಾಗ್ಯಯೋಜನೆ, ವಾಜಪೇಯಿ ನಗರ ವಸತಿಯೋಜನೆ, ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ, ಪ್ರಧಾನ ಮಂತ್ರಿಆವಾಸ್ ಯೋಜನೆಗಳ ಅಡಿ ಅರ್ಹ ಫಲಾನುಭವಿಗಳಿಗೆ ಸವಲತ್ತು ನೀಡಿಎಂದು ಸೂಚಿಸಿದರು.

ಪೌರಕಾರ್ಮಿಕರ ಗೃಹ ಭಾಗ್ಯಯೋಜನೆ, ವಾಜಪೇಯಿ ನಗರ ವಸತಿಯೋಜನೆ, ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ, ಪ್ರಧಾನ ಮಂತ್ರಿಆವಾಸ್ ಯೋಜನೆಗಳಡಿ ನಿರ್ಮಿಸಲಾಗುತ್ತಿರುವ ವಸತಿಗಳ ಕಾಮಗಾರಿಯನ್ನು ಚುರುಕುಗೊಳಿಸಿ ಪೂರ್ಣಗೊಳಿಸಿ ಎಂದುತಾಕೀತು ಮಾಡಿದರು.

ನಗರ ಪ್ರದೇಶಗಳಿಗೆ ನೀಡಲಾಗುವ ನೀರಿನಗುಣಮಟ್ಟವನ್ನು ನಿಗಧಿತ ಅವಧಿಯೊಳಗೆ ಪರೀಕ್ಷೆ ನಡೆಸಿ, ನೀರಿನಗುಣಮಟ್ಟ ಪರೀಕ್ಷಿಸಲು ಪ್ರತಿದಿನ ಕನಿಷ್ಟ ಮೂರು ಮಾದರಿಗಳನ್ನು ಸಂಗ್ರಹಿಸಿ, ಪರೀಕ್ಷೆಯ ನಂತರಅಗತ್ಯ ಪ್ಯಾರಾಮೀಟರ್ ಗಳಿಗಿಂತ ಕಮ್ಮಿಗುಣಮಟ್ಟವಿರುವಕುಡಿಯುವ ನೀರಿನ ಮಾದರಿಕಂಡುಬಂದಲ್ಲಿತಕ್ಷಣ ಹಿರಿಯ ಅಧಿಕಾರಿಗಳ ಗಮನಕ್ಕೆ ತರಬೇಕುಎಂದರು.

ನಗರ ಭಾಗಗಳಲ್ಲಿ ತ್ಯಾಜ್ಯ ವಿಲೇವಾರಿಯನ್ನು ಸರಿಯಾಗಿ ನಿರ್ವಹಿಸದೇಇರುವುದು ಗಮನಕ್ಕೆ ಬಂದಿದೆ, ಟೆಂಡರ್‌ದಾರರೊಂದಿಗೆ ಮಾತನಾಡಿ ಸರಿಯಾಗಿ ವಿಲೇವಾರಿ ಮಾಡಿಸಿ, ಇಲ್ಲವಾದಲ್ಲಿಟೆಂಡರ್‌ರದ್ದು ಪಡಿಸಿ ಎಂದು ನಿರ್ದೇಶನ ನೀಡಿದರು. ನಗರ ಪ್ರದೇಶಗಳ ಆಸ್ತಿ ತೆರಿಗೆ ವಸೂಲಾತಿಯಲ್ಲಿ ಪಾಂಡವಪುರ, ಬೆಳ್ಳೂರು, ನಾಗಮಂಗಲ ಹಿಂದುಳಿದಿದೆ, ನೀರಿನ ಶುಲ್ಕ ಪಾವತಿಯಲ್ಲಿ ನಾಗಮಂಗಲ ಮತ್ತು ಮಂಡ್ಯ ನಗರಗಳಲ್ಲಿ ನೀರಿನ ಶುಲ್ಕವನ್ನು ಹೆಚ್ಚಾಗಿ ಉಳಿಸಿಕೊಂಡಿದ್ದಾರೆ ತೆರಿಗೆ ಪಾವತಿಸದೆಇವವರಿಗೆ ನೋಟಿಸ್ ಜಾರಿ ಮಾಡಿಕ್ರಮ ಕೈಗೊಳ್ಳಿ ಎಂದು ತಿಳಿಸಿದರು.ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕಕೃಷ್ಣಕುಮಾರ್, ನಗರಸಭೆಅಧ್ಯಕ್ಷೆ ಪಂಪಶ್ರೀ, ನಗರಾಭಿವೃದ್ಧಿಕೋಶಾದ ಸಹಾಯಕಕಾರ್ಯನಿರ್ವಾಹಕಎಂಜಿನಿಯರ್ ಪ್ರತಾಪ್, ನಗರಸಭೆ ಪರಿಸರ ಅಭ್ಯಂತರರುದ್ರೇಗೌಡ ಸೇರಿ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.



# ಗುಜರಾತ್ ಕರಕುಶಲ ಉತ್ಸವ



**ಮೈಸೂರು:** ಮೈಸೂರಿನ ಪತ್ರಕರ್ತರ ಭವನದಲ್ಲಿ ಜೆ ಎಸ್ ಎಸ್ ಮೈಸೂರು ಅರ್ಬನ್ ಹಾತ್ ವತಿಯಿಂದ ಸುದ್ದಿಗೋಷ್ಠಿ ನಡೆಸಲಾಯಿತು.

ಸುದ್ದಿಗೋಷ್ಠಿಯಲ್ಲಿ ಇಂಡೆಕ್ಸ್ಟ್‌ಸಿ ಗುಜರಾತ್ ವ್ಯವಸ್ಥಾಪಕ ನಿರ್ದೇಶಕರು ಡಾ.ಸಂಜಯ್ ಜೋಶಿ ಮಾತನಾಡಿ, ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್‌ನಲ್ಲಿ 10ನೇ ಬಾರಿಗೆ –ಗುಜರಾತ್ ಕರಕುಶಲ ಉತ್ಸವ–20 ರಿಂದ 29 – ಜೂನ್ ರ ವರೆಗೆ ಜೆಎಸ್ ಎಸ್ ಮಹಾವಿದ್ಯಾಪೀಠದ ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್‌ನಲ್ಲಿ ಸತತವಾಗಿ 10 ನೇ ಬಾರಿ ವಿಶೇಷವಾಗಿ ದೇಶದ ಪ್ರಾಂತೀಯ ಮೇಳವಾದ ಗುಜರಾತ್ ಹ್ಯಾಂಡಿ ಕ್ರಾಫ್ಟ್ ಉತ್ಸವ – 2025 ರನ್ನು ದಿನಾಂಕ 20–06–2025 ರಿಂದ 29–06–2025 ರವರೆಗೆ ಗುಜರಾತ್ ರಾಜ್ಯ ಸರ್ಕಾರದ Commissioner and Secretary, Cottage and Rural Industries, Govt. of Gujarat, Industrial Extension Cottage (INDEXT-C) ರವರ ಪ್ರಾಯೋಜಕತ್ವದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್ ರವರ ಸಹಯೋಗದೊಂದಿಗೆ ಆಯೋಜನೆ ಮಾಡಲಾಗಿದೆ.

**ಮೇಳದ ವಿಶೇಷತೆಗಳು:** ರಾಜ್ಯ, ರಾಷ್ಟ್ರಮಟ್ಟದ ಪ್ರಶಸ್ತಿ ಪಡೆದಿರುವ ಕುಶಲಕರ್ಮಿಗಳು ಒಂದೇ ಸೂರಿನಡಿಯಲ್ಲಿ ಕರಕುಶಲ ವಸ್ತುಗಳನ್ನು ಪ್ರದರ್ಶನ ಮತ್ತು ಮಾರಾಟ ಮಾಡುತ್ತಾರೆ. ಗುಜರಾತ್ ರಾಜ್ಯದ ವಿವಿಧ ಭಾಗಗಳ ಪ್ರಸಿದ್ಧ ಹಾಗೂ ಕ್ರೀಯಾಶೀಲರಾಗಿರುವ ಸುಮಾರು 70 ಕ್ಕೂ ಹೆಚ್ಚು, ಕುಶಲಕರ್ಮಿಗಳು ಮೇಳದಲ್ಲಿ ಭಾಗವಹಿಸುವರು. ಕುಶಲಕರ್ಮಿಗಳು ತಯಾರಿಸಿದ ಪಟೋಲ ಸೀರೆಗಳು, ಬಾಂದಿನಿ ಸೀರೆಗಳು, ಕಸೂತಿ ಮಾಡಿದ ಬೆಡ್ ಶೀಟ್‌ಗಳು, ಟವಲ್‌ಗಳು, ಕುಶನ್ ಕವರ್ ಗಳು, ಪರಿಸರ ಸ್ನೇಹಿ ಆಭರಣಗಳು, ಡ್ರೆಸ್ ಮೆಟೀರಿಯಲ್ ಗಳು, ಮಣ್ಣಿನಿಂದ ತಯಾರಿಸಿದ ವಸ್ತುಗಳು, ಬೀಡ್ ವರ್ಕ್, ಮೆಟಲ್ ವರ್ಕ್, ಕುರ್ತಿಗಳು, ಚನಿಯಾ ಚೋಲಿ, ಬಾಂದಿನಿ ಹಾಗೂ ಇನ್ನಿತರ ಆಕರ್ಷಣೀಯ ಕರಕುಶಲ ಹಾಗೂ ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲಿದ್ದಾರೆ. ಮೇಳದ ವಿಶೇಷ ಎಂದರೆ ತಯಾರಕರಿಂದಲೇ ನೇರವಾಗಿ ಗ್ರಾಹಕರಿಗೆ ಕೈಗೆಟಕುವ ಬೆಲೆಯಲ್ಲಿ ಒದಗಿಸುವ ಪ್ರಯತ್ನವನ್ನು ಗುಜರಾತ್ ಸರ್ಕಾರ ಮಾಡುತ್ತಿದೆ. ಈ ಕಾರಣದಿಂದಾಗಿ ಮೈಸೂರು ಹಾಗು ಸುತ್ತಮುತ್ತಲಿನ ಗ್ರಾಹಕರಿಗೆ ಗುಜರಾತ್ ಸಂಸ್ಕೃತಿಯ ಉಡುಗೆ–ತೊಡುಗೆಗಳು ಮತ್ತು ಆಲಂಕಾರಿಕ ವಸ್ತುಗಳು ನೇರವಾಗಿ, ಉತ್ತಮ ಗುಣಮಟ್ಟದಲ್ಲಿ ಕಡಿಮೆ ಬೆಲೆಗೆ ದೊರೆಯಲಿದೆ.

**ಸಾಂಸ್ಕೃತಿಕ ಸಂಜೆ :** 20 ರಿಂದ 22 –ಜೂನ್ –2025 ರ ತನಕ ಸಂಜೆ ಗಂಟೆ 06 ರಿಂದ 08 ರ ತನಕ Sports, Youth & Cultural Activities Department, Government of Gujarat ಇಲಾಖೆಯಿಂದ ಮಾನ್ಯತೆಯನ್ನು ಪಡೆದಿರುವ ಗುಜರಾತಿನ ಪ್ರಸಿದ್ಧ ಸಾಂಸ್ಕೃತಿಕ ಕಲಾ ತಂಡಗಳಾದ ಶ್ರೀಮತಿ ಮೀನಾ ಭೇನ್ ಉದಯಭಾಯಿ ಸೇವಕ್ ಮತ್ತು ತಂಡದವರಿಂದ ಗರ್ಭಾ ನೃತ್ಯ ಮತ್ತು ಶ್ರೀ ರಾಜು ಭಾಯಿ ಭೋಕಿರಿಯ ಮತ್ತು ತಂಡದವರಿಂದ ಧಾಲ್ ತಲ್ವಾರ್ ರಾಸ್ ಪ್ರದರ್ಶನ ಗೊಳ್ಳಲಿದೆ ಮೈಸೂರಿನ ಕಲಾ ರಸಿಕರು ಉಚಿತವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇದೊಂದು ಸುವರ್ಣ ಅವಕಾಶವಾಗಿದೆ.

ಗುಜರಾತ್ ಕರಕುಶಲ ವಸ್ತುಗಳ ನೈಜ ಪ್ರಾತ್ಯಕ್ಷತೆ ಮತ್ತು ತರಬೇತಿ : ಶಾಲಾ ಮಕ್ಕಳಿಗೆ,ಮಹಿಳೆಯರಿಗೆ ಮತ್ತು ಕಾರ್ಪೋರೇಟ್ ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಆಸಕ್ತಿಯುಳ್ಳವರಿಗೆ ಗುಜರಾತಿನ ಪಾರಂಪರಿಕ ಕಲೆಯ ಬಗ್ಗೆ ತರಬೇತಿಯನ್ನು ಗುಜರಾತಿನ ಕುಶಲಕರ್ಮಿಗಳು ಈ ಮೇಳದ ಸಂದರ್ಭದಲ್ಲಿ ನೀಡಲಿದ್ದಾರೆ.

ಗುಜರಾತ್ ಹ್ಯಾಂಡಿ ಕ್ರಾಫ್ಟ್ ಉತ್ಸವದ ಉದ್ಘಾಟನೆಯು ದಿನಾಂಕ 20–06–2025 ಶುಕ್ರವಾರದಂದು ಸಂಜೆ 4.00 ಘಂಟೆಗೆ ಏರ್ಪಡಿಸಲಾಗಿದೆ.

ಈ ಮೇಳಕ್ಕೆ ಪ್ರವೇಶವು ಉಚಿತವಾಗಿರುತ್ತದೆ. ಈ ವಸ್ತು ಪ್ರದರ್ಶನದಲ್ಲಿ ಭಾಗವಹಿಸುತ್ತಿರುವ ಗುಜರಾತ್ ರಾಜ್ಯದ ಕುಶಲಕರ್ಮಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರುಗಳು ಭೇಟಿ ನೀಡಿ ಪ್ರೋತ್ಸಾಹಿಸಬೇಕೆಂದು ಈ ಮೂಲಕ ಕೋರಲಾಗಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಮೈಸೂರು ನಗರ ಬಸ್ ನಿಲ್ದಾಣದಿಂದ ಪ್ರತಿ ನಿತ್ಯ ಬಸ್ ನಂ.117/1 ರ ಬಸ್ಸುಗಳು ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್‌ಗೆ ಸಂಚರಿಸಲಿದೆ ಎಂದು ತಿಳಿಸಿದರು.

# ರೈತರಿಗೆ ನೆರವು ನೀಡಲು ಅರ್ಜಿ ಆಹ್ವಾನ

**ಹುಳಿಯಾರು:** ತೋಟಗಾರಿಕೆ ಇಲಾಖೆ ವತಿಯಿಂದ 2025–24 ನೇ ಸಾಲಿನ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಯೋಜನೆಯಡಿ, ತೋಟಗಾರಿಕೆ ರೈತರಿಗೆ ನೆರವು ನೀಡಲು ಅರ್ಜಿ ಅಹ್ವಾನಿಸಿದೆ.

ಈ ಯೋಜನೆಯಡಿ ಪವರ್ ವೀಡರ್, ಬ್ರಷ್ ಕಟರ್, ಅಡಿಕೆ ಸಿಪ್ಪೆ ಸುಲಿಯುವ ಯಂತ್ರ, ಟ್ರಾಕ್ಟರ್, ಟ್ರಾಕ್ಟರ್‌ಗೆ ಸಂಬಂಧಿಸಿದ ಯಂತ್ರೋಪಕರಣಗಳು, ಟ್ರಾಕ್ಟರ್ ಟ್ರಾಲಿ ಮತ್ತು ವಿವಿದ ಯಂತ್ರೋಪಕರಣಗಳನ್ನು ಖರೀದಿ ಮಾಡಲು ಸಹಾಯಧನ ನೀಡಲಾಗುವುದು. ಪ.ಜಾತಿ, ಪ.ಪಂಗಡ, ಸಣ್ಣ ಮತ್ತು ಅತೀ ಸಣ್ಣ ಹಾಗೂ ಮಹಿಳಾ ರೈತರಿಗೆ ಶೇ.50 ರಂತೆ ಹಾಗೂ ಸಾಮಾನ್ಯ ಮತ್ತು ಇತರೆ ವರ್ಗದ ರೈತರಿಗೆ ಶೇ.40 ರಂತೆ ಸಹಾಯಧನ ನೀಡಲಾಗುವುದು.

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ, ವಿವಿಧ ಕಾರ್ಯಕ್ರಮಗಳಾದ ತೆಂಗು ಶೇಖರಣಾ ಘಟಕಗಳು, ಕೋಯ್ಲೋತ್ತರ ನಂತರದ ಚಟುವಟಿಕೆಗಳಿಗೆ ಫಾರಂ ಗೇಟ್ ಹಾಗೂ ತೋಟಗಾರಿಕೆ ಬೆಳೆಗಳಲ್ಲಿ ಗುಣ ಮಟ್ಟದ ಉತ್ಪಾದನೆಗೆ ವಿಶೇಷ ಉತ್ತೇಜನ ಕಾರ್ಯಕ್ರಮದಡಿ ನೀರಿನಲ್ಲಿ ಕರಗುವ ರಸಗೊಬ್ಬರಗಳು, ಲಘುಪೋಷಕಾಂಶಗಳ ಮಿಶ್ರಣಗಳು, Crates/punnet boxes/ corrugated boxes, Ripening chamber, (ಹಣ್ಣು ಶೇಖರಣಾ ಬಾಕ್ಸ್) ಸೋಲಾರ್ ಪಂಪ್ ಸೆಟ್, ಕೃಷಿ ಹೊಂಡ ಘಟಕಕ್ಕೆ ಸಹಾಯಧನ ನೀಡಲಾಗುವುದು.

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಹನಿ ನೀರಾವರಿ ಘಟಕಗಳನ್ನು ಅಡಿಕೆ ಬೆಳೆ ಹೊರತು ಪಡಿಸಿ, ಇತರೆ ತೋಟಗಾರಿಕೆ ಬೆಳೆಗಳಿಗೆ ಅಳವಡಿಸಿಕೊಳ್ಳಲು ಸೌಲಭ್ಯ ಕಲ್ಪಿಸಲಾಗುತ್ತಿದೆ. ಇದರಿಂದ ರೈತರುಗಳಿಗೆ ನೀರಿನ ಸಮರ್ಪಕ ಬಳಕೆಯೊಂದಿಗೆ ಕಡಿಮೆ ಖರ್ಚಿನಲ್ಲಿ ಅಧಿಕ ಇಳುವರಿ ಪಡೆದು ಅವರ ಆರ್ಥಿಕ ಮಟ್ಟ ಸುಧಾರಿಸಲು ಸಹಕಾರಿಯಾಗಿರುತ್ತದೆ. ಸದರಿ ಯೋಜನೆಯಡಿ ಎಲ್ಲಾ ವರ್ಗದ ರೈತರು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

ಹನಿ ನೀರಾವರಿ ಅಳವಡಿಕೆಗೆ ಪ್ರತೀ ಫಲಾನುಭವಿಗೆ ಗರಿಷ್ಠ 5.00 ಹೆಕ್ಟೇರ್ ಪ್ರದೇಶದವರೆಗೆ ಹಾಗೂ ತರಕಾರಿ ಮತ್ತು ವಾಣಿಜ್ಯ ಹೂ ಬೆಳೆಗೆ ಗರಿಷ್ಠ 2.00 ಹೆಕ್ಟೇರ್ ಪ್ರದೇಶದ ವರೆಗೆ ಸಹಾಯಧನ ನೀಡಲಾಗುತ್ತದೆ. ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಮೊದಲ 2.00 ಹೆಕ್ಟೇರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಶೇ.90 ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ವರ್ಗದ ರೈತರಿಗೆ (ಆರ್‌ಡಿ ಸಂಖ್ಯೆ ಇರುವ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು ಕಡ್ಡಾಯ) ಮತ್ತು ನಂತರದ 3.00 ಹೆಕ್ಟೇರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಶೇ. 45 ರಷ್ಟು ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ಅರ್ಜಿಯೊಂದಿಗೆ ಪಹಣಿ, ಆಧಾರ್ ಪ್ರತಿ, ಬೆಳೆ ದೃಢೀಕರಣ, ಚೆಕ್ ಬಂಧಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಜಾತಿ ಪ್ರಮಾಣ ಪತ್ರ (ಪ.ಜಾತಿ ಮತ್ತು ಪ.ಪಂಗಡದ ರೈತರಿಗೆ) ಜಂಟಿ ಖಾತೆ ಇದ್ದಲ್ಲಿ ಒಪ್ಪಿಗೆ ಪತ್ರ, ಮತ್ತು ಇತರೆ ದಾಖಲಾತಿಗಳನ್ನು ಲಗತ್ತಿಸಿ ತಾಲ್ಲೂಕಿನ ತೋಟಗಾರಿಕೆ ಕಛೇರಿಗೆ ದಿನಾಂಕ: 27–06–2025 ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕೆಳಕಂಡ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿರುತ್ತದೆ. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಚಿಕ್ಕನಾಯಕನಹಳ್ಳಿ ದೂ. 9686056705, ರೈತ ಸಂಪರ್ಕ ಕೇಂದ್ರ ಕಸಬಾ ದೂ. 9019295299, ಕಂದಿಕೆರೆ ದೂ. 9731831854, ಶೆಟ್ಟಿಕೆರೆ ದೂ.9731831854, ಹಂದನಕೆರೆ ದೂ.9019295299, ಹುಳಿಯಾರು ದೂ. 6362653521 ನ್ನು ಸಂಪರ್ಕಿಸಬಹುದು.



ಕೆಪಿಎಸ್‌ಸಿ ಸದಸ್ಯ ವಿ.ದೇವಪ್ಪ ಮತ್ತು ನಿಯೋಗವು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ರಾಜಭವನದಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿತು.

## ಜೂನ್ 25 ರಂದು ಜನಸ್ಪಂದನ ಕಾರ್ಯಕ್ರಮ

**ಮೈಸೂರು:** ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಪ್ರತಿ ತಿಂಗಳು ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರೋಪಯಗಳನ್ನು ಒದಗಿಸುವ ಸಂಬಂಧ ಜೂನ್ 25 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಆವರಣದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಜೂನ್ 25 ರಂದು ತಮ್ಮ ಆವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮಿಕಾಂತ್ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಹುಟ್ಟುಹಬ್ಬದ ಪ್ರಯುಕ್ತ ಮೈಸೂರು ನಗರ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರತಾಪ್ ರವರು ಮಂತ್ರಾಲಯದಲ್ಲಿ ವಿಶೇಷ ಪೂಜೆಯನ್ನು ಮಾಡಿಸುವ ಮುಖಾಂತರ ಅವರ ಹುಟ್ಟುಹಬ್ಬವನ್ನು ಆಚರಿಸಿದರು.

# ಜೂ.27ಕ್ಕೆ ಶ್ರೀ ಕೆಂಪೇಗೌಡ ಜಯಂತಿ–2025

**ಮೈಸೂರು:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಶ್ರೀ ಕೆಂಪೇಗೌಡ ಜಯಂತಿಯನ್ನು ಜೂನ್ 27 ರಂದು ಬೆಳಗ್ಗೆ 11:30 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದೆ. ಶ್ರೀ ಆದಿಚುಂಚನಗಿರಿ ಶಾಖಾ ಮಠದ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಇವರ ದಿವ್ಯ ಸಾನಿಧ್ಯದಲ್ಲಿ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಎಚ್.ಡಿ ಕುಮಾರಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪನವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್.ಸಿ., ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ. ರಮೇಶ್ ಬಂಡಿ ಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಅವರು ಗೌರವ ಉಪಸ್ಥಿತರಿರಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಶಾಸಕರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಶಾಸಕರಾದ ಸುನೀಲ್ ಬೋಸ್ ಅವರು ಆಗಮಿಸಲಿದ್ದಾರೆ. ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವೀರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ. ದೇವೇಗೌಡ, ಕೃಷ್ಣರಾಜನಗರ ವಿಧಾನಸಭಾ ಶಾಸಕರಾದ ರವಿಶಂಕರ್ ಡಿ., ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್.ಶ್ರೀವತ್ಸ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ.ಹರೀಶ್ ಗೌಡ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಹೆಚ್. ವಿಶ್ವನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ. ಯತಿಂದ್ರ ಎಸ್., ಮತ್ತು ವಿವೇಕಾನಂದ ಎಸ್. ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

# ಉಚಿತ ಕಣ್ಣಿನ ಆರೋಗ್ಯತಪಾಸಣಾ ಶಿಬಿರ



**ಮೈಸೂರು:** ಚಾಮರಾಜ ವಿಧಾನಸಭಾ ಕ್ಷೇತ್ರದ ಪಡುವಾರಹಳ್ಳಿಯಲ್ಲಿ ಯುವ ಕಾಂಗ್ರೆಸ್ ವತಿಯಿಂದ ಪ್ರದೇಶ್ ಕಾಂಗ್ರೆಸ್ ಅಧ್ಯಕ್ಷರಾದ ರಾಹುಲ್ ಗಾಂಧಿಯವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು ಚಾಮರಾಜ ವಿಧಾನಸಭಾ ಕ್ಷೇತ್ರದ ಬ್ಲಾಕ್ ಅಧ್ಯಕ್ಷರುಗಳು ಪದಾಧಿಕಾರಿಗಳು ವಾರ್ಡಿನ ಅಧ್ಯಕ್ಷರುಗಳು ಕಾಂಗ್ರೆಸ್ ಮುಖಂಡರುಗಳು ಎಲ್ಲರೂ ಒಗ್ಗಟ್ಟಾಗಿ ರಾಹುಲ್ ಗಾಂಧಿಯವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿದ್ದಾರೆ ಉಚಿತ ಕಣ್ಣಿನ ತಪಾಸಣಾ ಶಿಬಿರ ಆರೋಗ್ಯ ಶಿಬಿರ ಹಾಗೂ ಪಡುವಾರಹಳ್ಳಿಯ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಿಸುವ ಮೂಲಕ ಸರಳವಾಗಿ ಆಚರಿಸಿದ್ದಾರೆ ಈ ಕಾರ್ಯಕ್ರಮವನ್ನು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಅವರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಉದ್ಘಾಟಿಸಿದರು ನಂತರ ಮಾತನಾಡಿದ ಅವರು ರಾಹುಲ್ ಗಾಂಧಿಯವರ ಹೆಸರಿನಲ್ಲಿ ಇಂತಹ ಅರ್ಥಪೂರ್ಣ ಕಾರ್ಯಕ್ರಮವನ್ನು ಆಯೋಜನೆ ಮಾಡಿರುವ ಪ್ರತಿಯೊಬ್ಬರಿಗೂ ಧನ್ಯವಾದ ತಿಳಿಸುತ್ತೇನೆ ಮುಂದಿನ ದಿನಗಳಲ್ಲಿ ರಾಹುಲ್ ಗಾಂಧಿಯವರಿಗೆ ಆಯಸ್ಸು ಆರೋಗ್ಯ ಕೊಟ್ಟು ಪ್ರಧಾನಿಯಾಗಿ ಹೊರಹೊಮ್ಮಿ ನೊಂದವರ ಪಾಲಿಗೆ ಬೆಳಕಾಗಲಿ ಎಂದು ಮಾತನಾಡಿದರು ಇದೇ ವೇಳೆ ಮಾತನಾಡಿದ ಚಾಮರಾಜ ವಿಧಾನಸಭಾ ಕ್ಷೇತ್ರದ ನಿಶಾಂತ್ ಅವರು ಮಾತನಾಡಿ ಕರ್ನಾಟಕ ಪ್ರದೇಶ್ ಕಾಂಗ್ರೆಸ್ ರಾಜ್ಯಾಧ್ಯಕ್ಷರಾದ ಮಂಜುನಾಥ್ ಗೌಡ ಅವರ ಆದೇಶದ ಮೇರೆಗೆ ಚಾಮರಾಜ ವಿಧಾನಸಭಾ ಕ್ಷೇತ್ರದ ವಾರ್ಡ್ ನಂಬರ್ 22ರ ಎಲ್ಲಾ ಯುವ ಕಾಂಗ್ರೆಸ್ ಮುಖಂಡರುಗಳು ಒಗಟ್ಟಾಗಿ ಅರ್ಥಪೂರ್ಣವಾಗಿ ಸಮಾಜ ಸೇವೆ ಮಾಡುವ ಮೂಲಕ ರಾಹುಲ್ ಗಾಂಧಿಯವರ ಹುಟ್ಟುಹಬ್ಬವನ್ನು ಆಚರಿಸುತ್ತಿದ್ದೇವೆ ಮುಂದಿನ ದಿನಗಳಲ್ಲಿ ಅವರು ದೇಶದ ಪ್ರಧಾನಿಯಾಗಿ ಬಡವರ ದೀನ ದಲಿತರ ನೊಂದವರ ಪಾಲಿಗೆ ಆಶಾದಾಯಕವಾಗಿರಲಿ ಎಂದು ಆ ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದು ಮಾತನಾಡಿದರು ಇವರೊಟ್ಟಿಗೆ ಎಲ್ಲಾ ಪದಾಧಿಕಾರಿಗಳು ತಮ್ಮ ಸಂತಸವನ್ನು ಮಾಧ್ಯಮಗಳ ಮುಂದೆ ಹಂಚಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷರಾದ ನಿಶಾಂತ್ ಪಟೇಲ್ ಡಿ.ಎಂ ಹಾಗೂ ಯುವ ಕಾಂಗ್ರೆಸ್ ಉಸ್ತುವಾರಿಯಾದ ದೀಪಕ್ (ರಾಜಾಹುಲಿ), ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದೀಪಕ್ ಶಿವಣ್ಣ, ಮೈಸೂರು ನಗರ ಯುವ ಕಾಂಗ್ರೆಸ್ ಅಧ್ಯಕ್ಷರಾದ ಸೈಯದ್ ಅಬ್ರಾರ್, ಪಡುವರಹಳ್ಳಿ ಯುವ ಮುಖಂಡರಾದ ನಿತಿನ್ ಪುಟ್ಟಸ್ವಾಮಿ, ಮಾಜಿ ಮಹಾಪೌರರಾದ ರಾಜೇಶ್ವರಿ ಪುಟ್ಟಸ್ವಾಮಿ, ಪಡುವರಹಳ್ಳಿ ವಾರ್ಡ್ ಅಧ್ಯಕ್ಷರಾದ ಕುಮಾರ್, ಮೈಸೂರು ನಗರ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಲಕ್ಕನ್, ದಿಲೀಪ್, ದೇವರಾಜ, ದೇವರಾಜ ಬ್ಲಾಕ್ ನ ಯುವ ಕಾಂಗ್ರೆಸ್ ಅಧ್ಯಕ್ಷರಾದ ಪವನ್, ಇಂದಿರಾ ಗಾಂಧಿ ಬ್ಲಾಕ್ ನ ಅಧ್ಯಕ್ಷರಾದ ವಿನಯ್, ಚಾಮರಾಜ ವಿಧಾನಸಭಾ ಕ್ಷೇತ್ರದ ಉಪಾಧ್ಯಕ್ಷರಾದ ಸಂಜಯ್. ಚಾಮರಾಜ ವಿಧಾನಸಭಾ ಕ್ಷೇತ್ರದ ಪ್ರಧಾನ ಕಾರ್ಯದರ್ಶಿಗಳಾದ ಚಂದ್ರು ಹಾಗೂ ವಿಷ್ಣುಪ್ರಿಯ ಮತ್ತು ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಪ್ರಧಾನ ಕಾರ್ಯದರ್ಶಿ ಮಲ್ಲೇಶ್, ಪಡುವರಹಳ್ಳಿ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕಿರಣ್, ಮಾದೇವ್ ,ವಿನೋದ್ ಪ್ರವೀಣ್, ಪ್ರಮೋದ್,ರಾಘು ಅರುಣ್, ಅರ್ಜುನ, ಮುಂತಾದವರು ಭಾಗಿಯಾಗಿದ್ದರು.

# ಸಂಜೆ ಟಿಪ್ಸ್

## ರಿಲಯನ್ಸ್ ಜ್ಯುವೆಲ್ಸ್‌ನಿಂದ 'ಬಿಗ್‌ಬ್ಯಾಂಗಲ್ ಫೆಸ್ಟ್'

ಭಾರತದಅತ್ಯಂತ ವಿಶ್ವಾಸಾರ್ಹ ಆಭರಣಗಳರಿಟೇಲರ್‌ರಿಲಯನ್ಸ್‌ಜ್ಯುವೆಲ್ಸ್, ತನ್ನಬಿಗ್ ಬ್ಯಾಂಗಲ್ ಫೆಸ್ಟ್ ಅನ್ನು ಘೋಷಿಸಿದೆ. ಗ್ರಾಹಕರು ಸೀಮಿತ ಅವಧಿಯ ಹಬ್ಬದ ಕೊಡುಗೆಯ ಲಾಭವನ್ನು ಪಡೆಯಬಹುದು ಮತ್ತು ಚಿನ್ನದ ಬಳೆಗಳ ಮೇಕಿಂಗ್ ಶುಲ್ಕದಮೇಲೆ 50%ರಿಯಾಯಿತಿ ಮತ್ತು ವಜ್ರದ ಬಳೆಗಳ ಮೇಲೆ 35% ರಿಯಾಯಿತಿ (ವಜ್ರದ ಮೌಲ್ಯಮತ್ತು ಮೇಕಿಂಗ್ ಶುಲ್ಕಗಳೆರಡನ್ನೂ ಒಳಗೊಂಡಿದೆ) ಪಡೆಯಬಹುದು. ಈ ಆಫರ್ ಎಲ್ಲಾ ರಿಲಯನ್ಸ್ ಜ್ಯುವೆಲ್ಸ್‌ಮಳಿಗೆಗಳಲ್ಲಿ ಮತ್ತುಆನ್‌ಲೈನ್https://www.reliancejewels.com ನಲ್ಲಿಜುಲೈ7, 2025ರವರೆಗೆಲಭ್ಯವಿರಲಿದೆ.

ರಿಲಯನ್ಸ್ ಜ್ಯುವೆಲ್ಸ್ ತನ್ನ ಬಿಗ್‌ಬ್ಯಾಂಗಲ್ ಫೆಸ್ಟ್‌ನೊಂದಿಗೆ ಬಳೆಗಳ ಸಂತೋಷವನ್ನು ಮರುಶೋಧಿಸಲು ಗ್ರಾಹಕರನ್ನು ಆಹ್ವಾನಿಸುತ್ತಿದೆ. ಇದರಿಂದಾಗಿ ಪ್ರತಿ ಆಚರಣೆ ಮತ್ತು ಅಮೂಲ್ಯಕ್ಷಣಕ್ಕೆ ಪರಿಪೂರ್ಣ ಅಂತಿಮ ಸ್ಪರ್ಶವನ್ನು ಖಚಿತ ಪಡಿಸುತ್ತದೆ.



## ಮಟನ್ ಫ್ರೈ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮಟನ್ ಸೋಂಪು ಕಾಳು ಹಸಿ ಮೆಣಸು ಈರುಳ್ಳಿ ಟೊಮೆಟೋ ಶುಂಠಿ ಬೆಳ್ಳುಳ್ಳಿ ಪೇಸ್ಟ್ ಖಾರದ ಪುಡಿ ಕಾಳು ಮೆಣಸಿನ ಪುಡಿ ಕರಿಬೇವು ಕೊತ್ತಂಬರಿ ಸೊಪ್ಪು ಅಡುಗೆ ಎಣ್ಣೆ ರುಚಿಗೆ ತಕ್ಕಷ್ಟು ಉಪ್ಪು ಮಟನ್ ಫ್ರೈ ಮಾಡುವ ವಿಧಾನ

### ಮಾಡುವ ವಿಧಾನ

ಮಟನ್ ಅನ್ನು ಕುಕ್ಕರ್‌ನಲ್ಲಿ ಹಾಕಿ ಬೇಯಿಸಿಕೊಳ್ಳಬೇಕು. 4ರಿಂದ 5 ಸೀಟಿ ಹೊಡೆಸಿ ಇಟ್ಟುಕೊಳ್ಳಿ. ಈಗ ಒಲೆ ಮೇಲೆ ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿಕೊಳ್ಳಿ. ಬಳಿಕ ಇದಕ್ಕೆ ಸೋಂಪು ಕಾಳು, ಒಣ ಮೆಣಸು, ಸಣ್ಣದಾಗಿ ಹೆಚ್ಚಿರುವ ಈರುಳ್ಳಿಯನ್ನು ಸಹ ಹಾಕಿಕೊಂಡು ಫ್ರೈ ಮಾಡಿಕೊಳ್ಳಿ. ಈಗ ಒಂದೆರಡು ಕರಿಬೇವು, ಶುಂಠಿ ಬೆಳ್ಳುಳ್ಳಿ ಪೇಸ್ಟ್ ಒಂದು ಟೊಮೆಟೋ ಸಹ ಇದಕ್ಕೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. 2 ನಿಮಿಷದ ಬಳಿಕ ಈಗ ಬೇಯಿಸಿಕೊಂಡಿರುವ ಮಟನ್ ಮಾಂಸವನ್ನು ಇದಕ್ಕೆ ಹಾಕಿಕೊಳ್ಳಿ. ನೀವು ಬೇಯಿಸುವಾಗಲೇ ಉಪ್ಪು ಕೂಡ ಹಾಕಿಕೊಂಡಿರಬೇಕು. ಈಗ ಮಟನ್ ಜೊತೆಗೆ ಬೇಯಿಸಿದ್ದ ನೀರು ಕೂಡ ಹಾಕಿಕೊಂಡಿರಿ. ಈಗ ಕಾಳು ಮೆಣಸಿನ ಪುಡಿ, ಖಾರದ ಪುಡಿ ಸಹ ಹಾಕಿಕೊಂಡು ಮಿಕ್ಸ್ ಮಾಡಿ 2 ನಿಮಿಷ ಬಿಡಿ. ನಂತರ ಇದಕ್ಕೆ ಕರಿಬೇವು, ಕೊತ್ತಂಬರಿ ಸೊಪ್ಪು ಹಾಕಿಕೊಂಡು ರೋಸ್ಟ್ ಫ್ರೈ ಮಾಡಿಕೊಳ್ಳಿ. ನೀವು ಮಟನ್ ಬೇಯಿಸುವಾಗ ಉಪ್ಪು ಹಾಕಿರುವುದರಿಂದ ರುಚಿ ನೋಡಿಕೊಂಡು ಈ ಮಟನ್ ಗೆ ಉಪ್ಪು ಹಾಕಿ ಹಾಗೆ ಕೊನೆಯಲ್ಲಿ ಖಾರ ಬೇಕಿದ್ದರೆ ಹಾಕಿಕೊಂಡಿ ಮಿಕ್ಸ್ ಮಾಡಿ ನೀರು ಸ್ವಲ್ಪ ಆವಿಯಾಗುವಂತೆ ಫ್ರೈ ಮಾಡಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಮಟನ್ ಫ್ರೈ ರೆಡಿಯಾಗುತ್ತದೆ. ನೀವು ಕೂಡ ಮನೆಯಲ್ಲಿ ಈ ಮಟನ್ ಖಾದ್ಯ ಮಾಡಿ ಸವಿದು ನೋಡಿ.

## ಯಕೃತ್ತಿನಆರೋಗ್ಯಕ್ಕೆಸಲಹೆ

### ಹೆಲ್ತ್ ಟಿಪ್ಸ್



**ಸೇಬು:** ಸೇಬುಗಳು ಪೆಕ್ಟಿನ್ ಎಂಬ ಕರಗುವ ನಾರನ್ನು ಹೊಂದಿರುತ್ತವೆ. ಇದು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಇದು ದೇಹದಿಂದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಸೇಬಿನಲ್ಲಿರುವ ಉತ್ಕರ್ಷಣ ನಿರೋಧಕಗಳು ಯಕೃತ್ತನ್ನು ಉರಿಯೂತದಿಂದ ರಕ್ಷಿಸುತ್ತವೆ. ಇದು ಕೊಬ್ಬನ್ನು ಕಡಿಮೆ ಮಾಡಲು ಸಹ ಸಹಾಯ ಮಾಡುತ್ತದೆ. ಪ್ರತಿದಿನ ಒಂದು ಸೇಬನ್ನು ಸಿಪ್ಪೆ ತೆಗೆಯದೆ ತಿನ್ನಿರಿ.

**ಬೆರ್ರಿ ಹಣ್ಣುಗಳು:** ಬೆರಿಹಣ್ಣುಗಳು, ಸ್ಟ್ರಾಬೆರಿಗಳು ಮತ್ತು ರಾಸ್ಪ್ಬೆರಿಗಳಂತಹ ಬೆರ್ರಿ ಹಣ್ಣುಗಳು ಆಂಥೋಸಯಾನಿನ್‌ಗಳು ಎಂಬ ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ. ಇವು ಯಕೃತ್ತಿನಲ್ಲಿ ಕೊಬ್ಬಿನ ಶೇಖರಣೆಯನ್ನು ಕಡಿಮೆ ಮಾಡಲು, ಉರಿಯೂತವನ್ನು ಕಡಿಮೆ ಮಾಡಲು ಮತ್ತು ಯಕೃತ್ತಿನ ಕೋಶಗಳನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಇದಕ್ಕಾಗಿ ನೀವು ಅವುಗಳನ್ನು ಸ್ಮೂಥಿಗಳು, ಮೊಸರು ಅಥವಾ ಓಟ್ಸ್‌ಗೆ ಸೇರಿಸಬಹುದು.

**ಪಪ್ಪಾಯಿ:** ಈ ಹಣ್ಣು ಜೀರ್ಣಾಂಗ ವ್ಯವಸ್ಥೆಗೆ ಒಳ್ಳೆಯದು. ಇದನ್ನು ಸರ್ವರೋಗ ನಿವಾರಕವೆಂದು ಪರಿಗಣಿಸಲಾಗುತ್ತದೆ, ವಿಶೇಷವಾಗಿ ಯಕೃತ್ತಿಗೆ ಸಂಬಂಧಿಸಿದ ಸಮಸ್ಯೆಗಳಿಗೆ. ಪಪ್ಪಾಯಿ ಸುಲಭವಾಗಿ ಜೀರ್ಣವಾಗುವ ಹಣ್ಣು. ಇದು ಯಕೃತ್ತಿನ ಮೇಲೆ ಹೆಚ್ಚುವರಿ ಹೊರೆ ಹಾಕುವುದಿಲ್ಲ. ಇದು ಪಪೈನ್ ಎಂಬ ಕಿಣ್ವವನ್ನು ಹೊಂದಿರುತ್ತದೆ, ಇದು ಕೊಬ್ಬಿನ ವಿಭಜನೆಗೆ ಸಹಾಯ ಮಾಡುತ್ತದೆ. ಇದರ ಜೊತೆಗೆ, ಇದು ಯಕೃತ್ತಿನ ಉರಿಯೂತವನ್ನು ಸಹ ಕಡಿಮೆ ಮಾಡುತ್ತದೆ. ನೀವು ಬೆಳಿಗ್ಗೆ ಅಥವಾ ಸಂಜೆ ಉಪಾಹಾರಕ್ಕಾಗಿ ಒಂದು ಬಟ್ಟಲು ಪಪ್ಪಾಯಿಯನ್ನು ತಿನ್ನಬಹುದು.

**ದ್ರಾಕ್ಷಿಗಳು:** ಕೊಬ್ಬಿನ ಯಕೃತ್ತಿಗೆ ದ್ರಾಕ್ಷಿಗಳು ಉತ್ತಮ ಹಣ್ಣು. ದ್ರಾಕ್ಷಿಗಳು ಫೈಬರ್ ಅನ್ನು ಹೊಂದಿರುತ್ತವೆ – ರೆಸ್ವೆರಾಟ್ರೊಲ್ ಎಂಬ ಸಂಯುಕ್ತ. ಇದು ಯಕೃತ್ತಿನಲ್ಲಿ ಕೊಬ್ಬು ಸಂಗ್ರಹವಾಗುವುದನ್ನು ತಡೆಯುತ್ತದೆ. ಉತ್ಕರ್ಷಣ ನಿರೋಧಕವಾಗಿ ಕಾರ್ಯನಿರ್ವಹಿಸುವುದರ ಜೊತೆಗೆ, ಇದು ಯಕೃತ್ತಿನ ಕಾರ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.

**ಕಲ್ಲಂಗಡಿ:** ಬೇಸಿಗೆಯಲ್ಲಿ ಕಲ್ಲಂಗಡಿ ದೇಹವನ್ನು ತಂಪಾಗಿಸುವುದಲ್ಲದೆ, ಅದರಲ್ಲಿರುವ ನೀರು ಮತ್ತು ಉತ್ಕರ್ಷಣ ನಿರೋಧಕಗಳು ಯಕೃತ್ತಿಗೂ ಒಳ್ಳೆಯದು. ಇದು ದೇಹವನ್ನು ಹೈಡ್ರೀಕರಿಸುತ್ತದೆ. ಇದು ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ದಿನಕ್ಕೆ ಒಂದು ಬಟ್ಟಲು ಕಲ್ಲಂಗಡಿ ತಿನ್ನಿರಿ, ಆದರೆ ಹೆಚ್ಚು ತಿನ್ನುವುದನ್ನು ತಪ್ಪಿಸಿ.

## ತುಟಿರಕ್ಷಣೆಗೆಇಲ್ಲಿವೆಕೆಲವುಸಲಹೆಗಳು

### ಬ್ಯೂಟಿ ಟಿಪ್ಸ್



**ಸಾಕಷ್ಟು ನೀರು ಕುಡಿಯಿರಿ:** ಚಳಿಗಾಲದಲ್ಲಿ ಚರ್ಮ ಬೇಗನೆ ಒಣಗುತ್ತದೆ. ಸಾಕಷ್ಟು ನೀರು ಕುಡಿಯುವುದರಿಂದ ಆ ಸಮಸ್ಯೆಯನ್ನು ಬಹುತೇಕ ಕಡಿಮೆ ಮಾಡಬಹುದು. ತುಟಿಗೂ ಇದೇ ಕ್ರಮವನ್ನು ಅಳವಡಿಸಿಕೊಳ್ಳಬೇಕು. ಸಾಮಾನ್ಯವಾಗಿ ಜನರು ಬೇಸಿಗೆಯಲ್ಲಿ ಹೆಚ್ಚು ನೀರು ಕುಡಿಯುತ್ತಾರೆ, ಚಳಿಗಾಲದಲ್ಲಿ ನೀರು ಸೇವಿಸುವ ಪ್ರಮಾಣ ಕಡಿಮೆಯಾಗುತ್ತದೆ. ಚಳಿಗಾಲದಲ್ಲಿ ಬೆವರುವುದು ಮತ್ತು ಬಾಯಾರಿಕೆಯಾಗುವುದು ಕಡಿಮೆ. ಹಾಗೆಂದು ಬಾಯಾರಿಕೆಯಾಗುವುದಿಲ್ಲವೆಂದು ನೀರು ಕುಡಿಯದೆ ಇರಬಾರದು, ಚರ್ಮ ಮತ್ತು ತುಟಿ ಒಣಗಿಹೋಗದಂತೆ ನೋಡಿಕೊಳ್ಳಲು ನೀರು ಅತ್ಯಗತ್ಯ.

**ನಿಮ್ಮ ನಾಲಗೆಯ ಕಾಳಜಿ ಮುಖ್ಯ:** ಅನೇಕರಿಗೆ ನಾಲಿಗೆಯಿಂದ ತುಟಿಯನ್ನು ಆಗಾಗ ನೆಕ್ಕುತ್ತಿರುವ ಅಭ್ಯಾಸವಿರುತ್ತದೆ. ತುಟಿಗಳು ಒಣಗಿದರೆ ಈ ಅಭ್ಯಾಸ ಹೆಚ್ಚಾಗುತ್ತದೆ. ಆದರೆ ಹೀಗೆ ಮಾಡುವುದರಿಂದ ತುಟಿ ಇನ್ನಷ್ಟು ಒಡೆಯುತ್ತದೆ ಮತ್ತು ತುಟಿ ಒಣಗಿ ಹೋಗುತ್ತದೆ.

**ವಿಟಮಿನ್ ಬಿ ಕೊರತೆಯನ್ನು ನಿವಾರಿಸಿ:** ವಿಟಮಿನ್ ಬಿ ಇರುವ ಪದಾರ್ಥಗಳನ್ನು ಕಡಿಮೆ ಸೇವಿಸುವುದರಿಂದ ಹೊಟ್ಟೆಯ ಪಚನ ಕ್ರಿಯೆ ಮೇಲೆ ಪರಿಣಾಮ ಬೀರುವುದಲ್ಲದೆ ತುಟಿಯ ಆರೋಗ್ಯದ ಮೇಲೆಯೂ ಪರಿಣಾಮ ಬೀರುತ್ತದೆ. ತುಟಿ ಮತ್ತು ಬಾಯಿಯ ಮೂಲೆಗಳು ಕೆಲವೊಮ್ಮೆ ಒಡೆದು ಹೋಗುತ್ತವೆ ಇದಕ್ಕೆ ವಿಟಮಿನ್ ಬಿ ಕೊರತೆ ಕಾರಣವಾಗಿದ್ದು ಇದರಿಂದ ಬಾಯಿ ಅಲ್ಸರ್ ಕೂಡ ಬರಬಹುದು. ಹೆಚ್ಚೆಚ್ಚು ವಿಟಮಿನ್ ಬಿ ಅಂಶವಿರುವ ಪದಾರ್ಥಗಳನ್ನು ತೆಗೆದುಕೊಳ್ಳುವುದರಿಂದ ಚಳಿಗಾಲದಲ್ಲಿ ತುಟಿಯ ರಕ್ಷಣೆ ಮಾಡಿಕೊಳ್ಳಬಹುದು.

ಧೂಮಪಾನದಿಂದ ದೂರವಿರಿ:ಹೆಚ್ಚೆಚ್ಚು ಸಿಗರೇಟು ಸೇವಿಸುತ್ತಿದ್ದರೆ ನಿಮ್ಮ ತುಟಿ ಕಪ್ಪಾಗುವುದಲ್ಲದೆ, ತುಟಿ ಒಣಗುತ್ತದೆ. ಅವ್ಯಾಹತ ಸಿಗರೇಟು ಸೇವನೆ ಮತ್ತು ಕಾಫಿ ಸೇವನೆ ಅಭ್ಯಾಸವಿರುವವರ ತುಟಿ ಸಾಮಾನ್ಯವಾಗಿ ಕಪ್ಪಾಗಿರುತ್ತದೆ.

ತೊಳೆಯುತ್ತಿರಿ:ತುಟಿಯನ್ನು ಆರೋಗ್ಯವಂತವಾಗಿ ಚೆನ್ನಾಗಿ ಇಟ್ಟುಕೊಳ್ಳಲು ಸ್ಕ್ರಬ್ ನಿಂದ ಆಗಾಗ ತೊಳೆಯುತ್ತಿರಿ. ಅದು ತುಟಿಯಲ್ಲಿನ ಅನವಶ್ಯಕ ಕೋಶಗಳನ್ನು ಸ್ವಚ್ಛಗೊಳಿಸಿ ತೇವವಾಗಿ ಇಟ್ಟುಕೊಳ್ಳುವಂತೆ ಮಾಡುತ್ತದೆ. ತುಟಿಯ ಅನವಶ್ಯಕ ಡೆಡ್ ಸೆಲ್ ಗಳನ್ನು ತೆಗೆಯಲು ಸಕ್ಕರೆ ಪುಡಿಗೆ ಆಲಿವ್ ಎಣ್ಣೆ ಅಥವಾ ಜೇನು ಬೆರೆಸಿ ಹಚ್ಚುತ್ತಿರಿ.



# ದಿಶಾನಿ ಚಕ್ರವರ್ತಿ ಅವರ ಜೀವನದ ಬಗ್ಗೆ ನಿಮಗೆ ಗೊತ್ತಾ?

ಬಾಲಿವುಡ್ ನಾಯಕ ಪತ್ರಿಕೆಯಲ್ಲಿ ಒಂದು ಸುದ್ದಿಯನ್ನು ನೋಡಿದರು, ಕಸದ ತೊಟ್ಟಿಯ ಬಳಿ ಪುಟ್ಟ ಹುಡುಗಿ ಪತ್ತೆಯಾಗಿದ್ದಾಳೆ ಎಂಬ ಸಾಲುಗಳನ್ನು ಓದುತ್ತಿದ್ದಂತೆ. ಅವರು ಮಗುವನ್ನು ದತ್ತು ಪಡೆಯಲು ನಿರ್ಧರಿಸಿದರು. ಆ ಸ್ಟಾರ್ ಹೀರೋ ತಮ್ಮ ಬಯಕೆಯನ್ನು ತಮ್ಮ ಹೆಂಡತಿಗೆ ಹೇಳಿದಾಗ, ಅವರು ಅದೇ ಮಾತನ್ನು ಹೇಳಿದರು. ತಕ್ಷಣ ಪುಟ್ಟ ಹುಡುಗಿಯ ಬಳಿಗೆ ಹೋಗಿ ಸರ್ಕಾರಿ ನಿಯಮಗಳ ಪ್ರಕಾರ ದತ್ತು ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಆ ಪುಟ್ಟ ಬಾಲಕಿಯನ್ನು ತಮ್ಮ ಮನೆಗೆ ಕರೆತಂದರು. ಆ ಹುಡುಗಿ ಇಂದು ಬೆಳೆದು ದೊಡ್ಡವಳಾಗಿದ್ದಾಳೆ, ಅಷ್ಟಕ್ಕೂ ಆ ಹುಡುಗಿ ಯಾರು? ಆ ಪುಟ್ಟ ಬಾಲಕಿಯನ್ನು ದತ್ತು ಪಡೆಯಲು ನಿರ್ಧರಿಸಿದ್ದ ಆ ಸ್ಟಾರ್ ನಟಿ ಯಾರು? ತಿಳಿಯಲು ಮುಂದೆ ಓದಿ..

ಮಹಾಕ್ಷಯ್, ಉಷ್ಮೆ ಮತ್ತು ನಮಾಶಿ ಎಂಬ ಮೂವರು ಗಂಡು ಮಕ್ಕಳಲ್ಲದೆ, ದಂಪತಿಗೆ ದಿಶಾನಿ ಚಕ್ರವರ್ತಿ ಎಂಬ ಸುಂದರ ಮಗಳಿದ್ದಾಳೆ. ಅವರ ತಂದೆಯಂತೆಯೇ, ಅವರಿಗೂ ನಟನೆಯ ಬಗ್ಗೆ ಒಲವು ಇದೆ ಮತ್ತು ನಟನೆಯನ್ನು ತಮ್ಮ ವೃತ್ತಿಯನ್ನಾಗಿ ಮಾಡಿಕೊಂಡಿದ್ದಾರೆ. ಆದರೆ ದಿಶಾನಿ ಮತ್ತು ಮಿಥುನ್ ನಡುವಿನ ಸಂಬಂಧ ಏನು ಎಂದು ನಿಮಗೆ ತಿಳಿದಿದೆಯೇ? ದಿಶಾನಿ ಈ ದಂಪತಿಗಳ ದತ್ತುಪುತ್ರಿ. ಇದು ಹೆಚ್ಚಿನ ಜನರಿಗೆ ತಿಳಿದಿಲ್ಲ. ಕಸದ ತೊಟ್ಟಿಯಲ್ಲಿ ಪತ್ತೆಯಾದ ಮಿಥುನ್ ಚಕ್ರವರ್ತಿಯ ದತ್ತುಪುತ್ರಿ ದಿಶಾನಿ ಯಾರು?

ದಿಶಾನಿ ಕೋಲ್ಕತ್ತಾದಲ್ಲಿ ಜನಿಸಿದಳು. ಆಕೆಯ ಜನನದ ನಂತರ, ಆಕೆಯ ಪೋಷಕರು ಅವಳನ್ನು ಕಸದ ತೊಟ್ಟಿಯ ಬಳಿ ಬಿಟ್ಟು ಹೋದರು. ಆ ಸಮಯದಲ್ಲಿ, ಬಂಗಾಳಿ ಪತ್ರಿಕೆಯೊಂದು ತನ್ನ ಕುಟುಂಬದಿಂದ ಕಸದ ತೊಟ್ಟಿಯಲ್ಲಿ ಬಿಟ್ಟು ಹೋಗಲ್ಪಟ್ಟ ನವಜಾತ ಶಿಶುವಿನ ಬಗ್ಗೆ ಒಂದು ಸುದ್ದಿಯನ್ನು ಪ್ರಕಟಿಸಿತು. ಕೆಲವು ದಾರಿಹೋಕರು ಕಸದ ತೊಟ್ಟಿಯ ಬಳಿ ಮಗುವನ್ನು ಗಮನಿಸಿದರು. ಮರುದಿನ, ಅವರಲ್ಲಿ ಒಬ್ಬರು ಮಗುವನ್ನು ತಮ್ಮ ಮನೆಗೆ ಕರೆದುಕೊಂಡು ಹೋಗಿದ್ದಾರೆ ಎಂಬ ಸುದ್ದಿ ಪ್ರಕಟವಾಯಿತು. ಈ ಸುದ್ದಿಯನ್ನು ಓದಿದ ನಂತರ, ಮಿಥುನ್ ಮಗುವನ್ನು ದತ್ತು ಪಡೆಯಲು ಬಯಸಿದ್ದರು. ಅವರು ಈ ವಿಷಯದ ಬಗ್ಗೆ ತಮ್ಮ ಪತ್ನಿ ಯೋಗಿತಾ ಬಾಲಿ ಅವರೊಂದಿಗೆ ಮಾತನಾಡಿದರು ಮತ್ತು ಮಗುವನ್ನು ದತ್ತು ತೆಗೆದುಕೊಳ್ಳುವ ಬಯಕೆಯನ್ನು ತಕ್ಷಣವೇ ರಕ್ಷಕರಿಗೆ ತಿಳಿಸಿದರು. ಅದರ ನಂತರ, ಮಿಥುನ್ ದಂಪತಿಗಳು ಸರ್ಕಾರಿ ನಿಯಮಗಳ ಪ್ರಕಾರ ದತ್ತು ಪ್ರಕ್ರಿಯೆಗಳನ್ನು ಸಹ ಪೂರ್ಣಗೊಳಿಸಿದರು. ಯೋಗಿತಾ ತನ್ನ ಗಂಡನ ಆಸೆಯನ್ನು ಈಡೇರಿಸಲು ಸಂಪೂರ್ಣ ಬೆಂಬಲ ನೀಡಿದರು. ಮಿಥುನ್ ದಂಪತಿಗಳು ತಂದ ಪುಟ್ಟ ಹುಡುಗಿ ಇಂದಿನ ಪ್ರಸಿದ್ಧ ನಟಿ ದಿಶಾನಿ ಚಕ್ರವರ್ತಿ. ಅಂದಿನಿಂದ, ಆ ಮಗು ಇಡೀ ಕುಟುಂಬಕ್ಕೆ ಪ್ರಿಯ ವ್ಯಕ್ತಿಯಾಗಿದೆ. ಮಿಥುನ್ ತನ್ನ ಮಗಳನ್ನು ತುಂಬಾ ಪ್ರೀತಿಸುತ್ತಾರೆ.

ದಿಶಾನಿ ತನ್ನ ಪ್ರಾಥಮಿಕ ಶಿಕ್ಷಣವನ್ನು ಭಾರತದಲ್ಲಿ ಮುಗಿಸಿ ಉನ್ನತ ಶಿಕ್ಷಣಕ್ಕಾಗಿ ಅಮೆರಿಕದ ಲಾಸ್ ಏಂಜಲೀಸ್‌ಗೆ ಹೋದರು. ಅವರು ನ್ಯೂಯಾರ್ಕ್ ಫಿಲ್ಮ್ ಅಕಾಡೆಮಿಯಿಂದ ನಟನೆಯಲ್ಲಿ ಪದವಿ ಪಡೆದರು. ಮಾಧ್ಯಮ ವರದಿಗಳ ಪ್ರಕಾರ, ಈ ಸ್ಟಾರ್ ಬಾಲಕಿಗೆ ಬಾಲ್ಯದಿಂದಲೂ ನಟನೆ ಎಂದರೆ ತುಂಬಾ ಇಷ್ಟ. ಅವರ ನೆಚ್ಚಿನ ನಾಯಕ ಸಲ್ಮಾನ್ ಖಾನ್.

# ಕುಶಲಕರ್ಮಿಗಳ ಮೇಳ (ಕಾರಿಗರ್ ಮೇಳ) ಆಯೋಜಿಸಿದ ಅಮೆಜಾನ್ ಇಂಡಿಯಾ



ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳನ್ನು ಬೆಳೆಸುವ ತನ್ನ ನಿರಂತರ ಪ್ರಯತ್ನಗಳ ಭಾಗವಾಗಿ ಅಮೆಜಾನ್ ಇಂಡಿಯಾ ಸಂಸ್ಥೆಯು ಎಂಎಸ್‌ಎಂಇ ದಿನದ ಸಂದರ್ಭದಲ್ಲಿ ಜೂನ್ 21 ರಂದು ತನ್ನ ಜನಪ್ರಿಯ ಮೇಳವಾದ ಕುಶಲಕರ್ಮಿಗಳ ಮೇಳ (ಕಾರಿಗರ್ ಮೇಳ) ದ ನಾಲ್ಕನೇ ಆವೃತ್ತಿಯನ್ನು ಅದ್ದೂರಿಯಾಗಿ ಆಯೋಜಿಸುತ್ತಿದೆ.

2021ರಲ್ಲಿ ಈ ಕುಶಲಕರ್ಮಿಗಳ ಮೇಳವನ್ನು ಆಯೋಜಿಸಲು ಪ್ರಾರಂಭಿಸಿದ್ದು, ಈ ಮೇಳದಲ್ಲಿ ಭಾರತದ ಕುಶಲಕರ್ಮಿಗಳಿಗೆ ತಮ್ಮ ಕೈಯಿಂದ ಮಾಡಿದ ಉತ್ಪನ್ನಗಳನ್ನು ಪ್ರದರ್ಶಿಸಲು ಆನ್ ಲೈನ್ ಮಳಿಗೆಯನ್ನು ಒದಗಿಸಲಾಗುತ್ತದೆ. ಈ ಮೇಳವು ಸಾಂಪ್ರದಾಯಿಕ ಕಲೆಗಳನ್ನು ಸಂರಕ್ಷಿಸಲು ಸಹಾಯ ಮಾಡುವುದರ ಜೊತೆಗೆ ಇ- ಕಾಮರ್ಸ್ ಮೂಲಕ ಲಕ್ಷಾಂತರ ಗ್ರಾಹಕರಿಗೆ ಈ ಉತ್ಪನ್ನಗಳನ್ನು ತಲುಪಿಸಲು ಸಹಾಯ ಮಾಡುತ್ತದೆ.

ಕಾರಿಗರ್ ಮೇಳದಲ್ಲಿ ಭಾಗವಹಿಸುವ ಕುಶಲಕರ್ಮಿಗಳ ಸಂಖ್ಯೆಯು 2021ರಿಂದ ಮೂರು ಪಟ್ಟು ಬೆಳೆದಿದ್ದು, 2025ರ ಆವೃತ್ತಿಯಲ್ಲಿ ಭಾರತದಾದ್ಯಂತ ಇರುವ ಸಾವಿರಾರು ಕಲಾವಿದರು ಭಾಗವಹಿಸಲಿದ್ದಾರೆ. ಈ ಆನ್ ಲೈನ್ ಮಳಿಗೆಯು ಗ್ರಾಹಕರಿಗೆ ಭಾರತದ ಸಾಂಸ್ಕೃತಿಕ ಮತ್ತು ಸೃಜನಶೀಲ ವೈವಿಧ್ಯತೆಯನ್ನು ಸಾರುವ ಕೈಯಿಂದ ಮಾಡಿದ ಉತ್ಪನ್ನಗಳ ಆಯ್ದ ಆಯ್ಕೆಯನ್ನು ಒದಗಿಸಲಿದೆ. ಪೀಠೋಪಕರಣ, ಮಹಿಳೆಯರ ವಿಶಿಷ್ಟ ಉಡುಗೆಗಳು ಮತ್ತು ಗೃಹ ಅಲಂಕಾರದಂತಹ ವಿಭಾಗಗಳಲ್ಲಿ ಕೈಯಿಂದ ಮಾಡಿದ ಮತ್ತು ಪ್ರಾದೇಶಿಕ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚುತ್ತಿರುವುದರಿಂದ ಈ ಕಾರಿಗರ್ ಮೇಳದ ಕುರಿತು ಬಹಳ ನಿರೀಕ್ಷೆ ಮತ್ತು ಆಸಕ್ತಿ ಉಂಟಾಗಿದೆ. ಎರಡನೇ ಹಂತದ ಮತ್ತು ಮೂರನೇ ಹಂತದ ನಗರಗಳ ವ್ಯಾಪಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುತ್ತಿರುವುದರಿಂದ ಈ ವರ್ಷದ ಆವೃತ್ತಿಯು ಸ್ಥಳೀಯ ಕುಶಲಕರ್ಮಿಗಳಿಗೆ ಮಾರುಕಟ್ಟೆ ಪ್ರವೇಶಾವಕಾಶವನ್ನು ಜಾಸ್ತಿ ಮಾಡುತ್ತಿದೆ ಮತ್ತು ದೇಶಾದ್ಯಂತ ಇರುವ ಗ್ರಾಹಕರಿಗೆ ವಿಶಾಲ ಶ್ರೇಣಿಯ ಪ್ರಾದೇಶಿಕ ಉತ್ಪನ್ನಗಳನ್ನು ಒದಗಿಸುತ್ತದೆ.

ಈ ಕುರಿತು ಮಾತನಾಡಿರುವ ಅಮೆಜಾನ್ ಇಂಡಿಯಾದ ಸೇಲ್ಸ್ ವಿಭಾಗದ ನಿರ್ದೇಶಕರಾದ ಶ್ರೀ ಗೌರವ್ ಭಟ್ನಾಗರ್ ಅವರು, ''ಕಾರಿಗರ್ ಮೇಳ ಅಥವಾ ಕುಶಲಕರ್ಮಿಗಳ ಮೇಳವು ಭಾರತದಾದ್ಯಂತದ ಇರುವ ಸಣ್ಣ ವ್ಯಾಪಾರಗಳು ಮತ್ತು ಕಲಾವಿದರಿಗೆ ಇ- ಕಾಮರ್ಸ್ ಕ್ಷೇತ್ರದಲ್ಲಿ ಭಾಗವಹಿಸಲು ಮತ್ತು ಅದರಿಂದ ಲಾಭ ಪಡೆಯಲು ಅನುವು ಮಾಡಿಕೊಡುವ ನಮ್ಮ ಪ್ರಯತ್ನಗಳಿಗೆ ಉತ್ತಮ ಪುರಾವೆಯಾಗಿದೆ. ಸಾಂಪ್ರದಾಯಿಕ ಕಲೆಗಳ ಪುನರುತ್ಥಾನವನ್ನು ಬೆಂಬಲಿಸುವ ಮೂಲಕ ಮತ್ತು ಆ ಉತ್ಪನ್ನಗಳು ಮಾರುಕಟ್ಟೆಯಲ್ಲಿ ದೊರೆಯುವಂತೆ ಮಾಡುವ ಮೂಲಕ, ಕಲಾವಿದರಿಗೆ ತಮ್ಮ ವ್ಯಾಪಾರವನ್ನು ಸುಸ್ಥಿರವಾಗಿ ಬೆಳೆಸಲು ಅವಕಾಶವನ್ನು ಒದಗಿಸುತ್ತಿದ್ದೇವೆ. ಈ ಯೋಜನೆಯು ಎಂಎಸ್‌ಎಂಇ ವ್ಯವಸ್ಥೆಯನ್ನು ಬಲಪಡಿಸುವ ಮತ್ತು ಗ್ರಾಹಕರು ಹಾಗೂ ಮಾರಾಟಗಾರರಿಗೆ ದೀರ್ಘಕಾಲೀನ ಮೌಲ್ಯವನ್ನು ಸೃಷ್ಟಿಸುವ ನಮ್ಮ ವಿಶಾಲ ಬದ್ಧತೆಯ ಭಾಗವಾಗಿ ಮೂಡಿಬಂದಿದೆ'' ಎಂದು ಹೇಳಿದರು. 2017ರಲ್ಲಿ ಪ್ರಾರಂಭವಾದ ಅಮೆಜಾನ್ ಕಾರಿಗರ್ ಕಾರ್ಯಕ್ರಮವು ಸಣ್ಣ ವ್ಯಾಪಾರಗಳು ಮತ್ತು ನೇಕಾರರು, ಕಲಾವಿದರು ಮತ್ತು ಕುಶಲಕರ್ಮಿಗಳಂತಹ ವಿಶೇಷ ಸೂಕ್ಷ್ಮ- ಉದ್ಯಮಿಗಳಿಗೆ ಇ- ಕಾಮರ್ಸ್ ವ್ಯವಸ್ಥೆಯ ಲಾಭ ಪಡೆಯಲು, ತಮ್ಮ ವ್ಯಾಪಾರವನ್ನು ಬೆಳೆಸಲು ಮತ್ತು ದೇಶದ ವಿವಿಧ ಭಾಗಗಳಲ್ಲಿ ನಶಿಸಿಹೋಗುತ್ತಿರುವ ಕೆಲವಾರು ಕಲೆಗಳನ್ನುಸಂರಕ್ಷಿಸಿ ಬೆಳೆಸಲು ಅನುವು ಮಾಡಿಕೊಡುತ್ತದೆ. ಪ್ರಸ್ತುತ ಅಮೆಜಾನ್ ಕಾರಿಗರ್ 18 ಲಕ್ಷ (1.8 ಮಿಲಿಯನ್) ಕಲಾವಿದರ ಜೀವನದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತಿದ್ದು, ಇದರಲ್ಲಿ 2 ಲಕ್ಷಕ್ಕಿಂತ ಹೆಚ್ಚು ವಿಶಿಷ್ಟವಾದ, ಕೈಯಿಂದ ಮಾಡಿದ ಉತ್ಪನ್ನಗಳ ಆಯ್ಕೆಯನ್ನು ಗ್ರಾಹಕರಿಗೆ ಒದಗಿಸಲಾಗುತ್ತಿದೆ. ಇದರಲ್ಲಿ ದೇಶದ ವಿವಿಧ ಭಾಗಗಳ 470ಕ್ಕಿಂತ ಹೆಚ್ಚಿನ ವಿಶಿಷ್ಟ ಕಲೆಗಳು ಮತ್ತು ಕರಕುಶಲತೆಗಳು, ಹ್ಯಾಂಡ್ ಲೂಮ್, ಕರಕುಶಲ, ಕೈಯಿಂದ ಸಂಸ್ಕರಿಸಿದ ಸೌಂದರ್ಯ ವರ್ಧಕ ಮತ್ತಿತರ ಉತ್ಪನ್ನಗಳು ಸೇರಿವೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ತಂದೆಯಿಂದ ಅನುಕೂಲ, ದಾಂಪತ್ಯದಲ್ಲಿ ಅನ್ಯೋನ್ಯತೆ, ಆರ್ಥಿಕ ಪರಿಸ್ಥಿತಿ ಉತ್ತಮ.

**ವೃಷಭ:** ಸಾಲದ ನೆರವು, ಶುಭ ಯೋಗ ಪ್ರಾಪ್ತಿ, ಮಾನಸಿಕ ತೊಂದರೆ.

ಮಿಥುನ: ಪ್ರೀತಿ ಪ್ರೇಮ ವಿಷಯದಲ್ಲಿ ಯಶಸ್ಸು, ಕುಟುಂಬದಲ್ಲಿ ನೆಮ್ಮದಿ ವಾತಾವರಣ, ಅಧಿಕ ಧನವ್ಯಯ.

**ಕಟಕ:** ಶತ್ರುಗಳಿಂದ ಸಮಸ್ಯೆ, ಸಾಲದ ನೆರವು ಸಿಗುವುದು, ಸಹೋದರಿಯಿಂದ ಅನುಕೂಲ.

**ಸಿಂಹ:** ಅಧಿಕ ಖರ್ಚು, ಶುಭಕಾರ್ಯಗಳಿಗೆ ಧನವ್ಯಯ, ಉದ್ಯೋಗ ನಿಮಿತ್ತ ಪ್ರಯಾಣ.

**ಕನ್ಯಾ:** ಅಧಿಕ ಲಾಭ, ಸಂಗಾತಿಯಿಂದ ಅನುಕೂಲ, ಶಕ್ತಿದೇವತೆಗಳ ದರ್ಶನ ಭಾಗ್ಯ, ಮಾನಸಿಕ ನೆಮ್ಮದಿ ಪ್ರಾಪ್ತಿ.

**ತುಲಾ:** ಕೆಲಸ ಕಾರ್ಯಗಳಲ್ಲಿ ಜಯ, ಉದ್ಯೋಗ ಲಾಭ, ಸ್ತ್ರೀಯರಿಂದ ಸಂಕಷ್ಟ.

**ವೃಶ್ಚಿಕ:** ಅಧಿಕ ಧನವ್ಯಯ, ಪ್ರಯಾಣದ ಮನಸ್ಸು, ಮಕ್ಕಳ ಜೀವನ ಬದಲಾವಣೆ ಯೋಚನೆ.

**ಧನಸ್ಸು:** ಅನುಕೂಲಕರ ದಿವಸ, ಆರೋಗ್ಯದಲ್ಲಿ ವ್ಯತ್ಯಾಸ, ಪಿತ್ರಾರ್ಜಿತ ಆಸ್ತಿ ಕೈ ತಪ್ಪುವ ಸನ್ನಿವೇಶ.

**ಮಕರ:** ಐಷಾರಾಮಿ ಜೀವನದ ಕನಸು, ಉದ್ಯೋಗ ದೊರಕುವ ಭರವಸೆ, ಪಾಲುದಾರಿಕೆಯಲ್ಲಿ ಅನುಕೂಲ.

**ಕುಂಭ:** ಆಸ್ತಿಯಿಂದ ತೊಂದರೆ, ವಸ್ತ್ರ ಆಭರಣ ಕಳವು, ಮಿತ್ರರು ದೂರ, ಆರ್ಥಿಕ ಮುಗ್ಗಟ್ಟು.

**ಮೀನ:** ಆಕಸ್ಮಿಕವಾಗಿ ಉದ್ಯೋಗದಲ್ಲಿ ಅನುಕೂಲ, ಮಹಿಳೆಯರಿಂದ ಸಮಸ್ಯೆ, ಉದ್ಯೋಗದಲ್ಲಿ ಉನ್ನತ ಮಟ್ಟಕ್ಕೇರುವ ಸಂದರ್ಭ.

## ವಿಶ್ವ ನಿರಾಶ್ರಿತರ ದಿನ




ಯುದ್ಧ, ಕಿರುಕುಳ ಅಥವಾ ನೈಸರ್ಗಿಕ ವಿಕೋಪಗಳಿಂದಾಗಿ ತಮ್ಮ ಮನೆಗಳನ್ನು ಬಿಟ್ಟು ಓಡಿಹೋಗಲು ಒತ್ತಾಯಿಸಲ್ಪಟ್ಟ ಲಕ್ಷಾಂತರ ಜನರಿಗೆ ಈ ದಿನವನ್ನು ಸಮರ್ಪಿಸಲಾಗಿದೆ.

1951 ರ ನಿರಾಶ್ರಿತರ ಸ್ಥಿತಿಗೆ ಸಂಬಂಧಿಸಿದ ಸಮಾವೇಶದ 50 ನೇ ವಾರ್ಷಿಕೋತ್ಸವದ ನೆನಪಿಗಾಗಿ ಜೂನ್ 20, 2001 ರಂದು ಮೊದಲ ವಿಶ್ವ ನಿರಾಶ್ರಿತರ ದಿನವನ್ನು ಆಚರಿಸಲಾಯಿತು.

ಈ ದಿನವನ್ನು ಮೊದಲು ಆಫ್ರಿಕಾ ನಿರಾಶ್ರಿತರ ದಿನವೆಂದು ಗುರುತಿಸಲಾಯಿತು ಮತ್ತು ನಂತರ ಡಿಸೆಂಬರ್ 2000 ರಲ್ಲಿ, ವಿಶ್ವಸಂಸ್ಥೆಯ ಸಾಮಾನ್ಯ ಸಭೆ (ಗಓಉಂ) ಇದನ್ನು ಅಧಿಕೃತವಾಗಿ ನಿರಾಶ್ರಿತರಿಗಾಗಿ ಅಂತರರಾಷ್ಟ್ರೀಯ ದಿನವೆಂದು ಘೋಷಿಸಿತು. 1951 ರ ನಿರಾಶ್ರಿತರ ಸಮಾವೇಶದ ಪ್ರಕಾರ, ಒಬ್ಬ ವ್ಯಕ್ತಿಯು ತಮ್ಮ ಜನಾಂಗ, ಧರ್ಮ, ಸಾಮಾಜಿಕ ಗುಂಪಿನಲ್ಲಿ ತೊಡಗಿಸಿಕೊಳ್ಳುವಿಕೆ ಅಥವಾ ವಿಭಿನ್ನ ರಾಜಕೀಯ ಅಭಿಪ್ರಾಯಗಳಿಂದಾಗಿ ಹಾನಿಗೊಳಗಾಗುವ ಕಾನೂನುಬದ್ಧ ಭಯವನ್ನು ಹೊಂದಿರುವುದರಿಂದ ಅವರು ತಮ್ಮ ತಾಯ್ನಾಡಿಗೆ ಮರಳಲು ಸಾಧ್ಯವಾಗದಿದ್ದರೆ ಅವರನ್ನು ನಿರಾಶ್ರಿತರೆಂದು ಪರಿಗಣಿಸಲಾಗುತ್ತದೆ. ಸಂಘರ್ಷ, ಕಿರುಕುಳ, ಹಿಂಸೆ ಅಥವಾ ಇತರ ರೀತಿಯ ಮಾನವ ಹಕ್ಕುಗಳ ಉಲ್ಲಂಘನೆಯಿಂದಾಗಿ ನಿರಾಶ್ರಿತರು ತಮ್ಮ ಮನೆಗಳನ್ನು ಬಿಟ್ಟು ಪಲಾಯನ ಮಾಡುವಂತೆ ಒತ್ತಾಯಿಸಲ್ಪಡುತ್ತಾರೆ. ಅವರು ಹೆಚ್ಚಾಗಿ ತಮ್ಮ ಬೆನ್ನಿನ ಮೇಲೆ ಬಟ್ಟೆಗಳನ್ನು ಮಾತ್ರ ಧರಿಸಿಕೊಂಡು ಆತಿಥೇಯ ದೇಶಗಳಿಗೆ ಬರುತ್ತಾರೆ.

ವಿದೇಶಕ್ಕೆ ಸ್ಥಳಾಂತರಗೊಳ್ಳುವುದು ನಿರಾಶ್ರಿತರ ರೂಢಿಗತ ಚಿತ್ರವಾಗಿದ್ದರೂ, ಈ ಅಂತರರಾಷ್ಟ್ರೀಯ ನಿರಾಶ್ರಿತರು ಪ್ರಪಂಚದಾದ್ಯಂತದ ಎಲ್ಲಾ ಸ್ಥಳಾಂತರಗೊಂಡ ವ್ಯಕ್ತಿಗಳಲ್ಲಿ ತುಲನಾತ್ಮಕವಾಗಿ ಸಣ್ಣ ಶೇಕಡಾವಾರು ಪ್ರಮಾಣವನ್ನು ಪ್ರತಿನಿಧಿಸುತ್ತಾರೆ.ಇತರ ವಿಶಿಷ್ಟವಲ್ಲದ ನಿರಾಶ್ರಿತರ ವರ್ಗಗಳಲ್ಲಿ ಯಾವುದೇ ದೇಶದ ಪೌರತ್ವವನ್ನು ಹೊಂದಿರದ ಸ್ಥಿತಿಯಿಲ್ಲದ ವ್ಯಕ್ತಿಗಳು ಮತ್ತು ಅಂತರರಾಷ್ಟ್ರೀಯ ರಕ್ಷಣೆಯನ್ನು ಹುಡುಕುತ್ತಾ ಪ್ರಯಾಣಿಸುವ ಆಶ್ರಯ ಪಡೆಯುವವರು ಸೇರಿದ್ದಾರೆ. 2024 ರಲ್ಲಿ, ವಿಶ್ವಸಂಸ್ಥೆಯ ನಿರಾಶ್ರಿತರ ಸಂಸ್ಥೆ 130.8 ಮಿಲಿಯನ್ ವ್ಯಕ್ತಿಗಳನ್ನು ಬಲವಂತವಾಗಿ ಸ್ಥಳಾಂತರಗೊಳಿಸಲಾಗಿದೆ ಅಥವಾ ಜಾಗತಿಕವಾಗಿ ಸ್ಥಿತಿಯಿಲ್ಲದವರಾಗಿದ್ದಾರೆ ಎಂದು ಅಂದಾಜಿಸಿದೆ, ಅವರಲ್ಲಿ 32 ಮಿಲಿಯನ್‌ಗಿಂತಲೂ ಹೆಚ್ಚು ಜನರು ನಿರಾಶ್ರಿತರಾಗಿದ್ದಾರೆ.



## ಶುಭಾಂಶು ಶುಕ್ಲಾ ಗಗನಯಾತ್ರೆಯ ಆ ಯಕ್ಸಿಯಮ್ 4 ಉಡಾವಣೆ ಮತ್ತೆ ವಿಳಂಬ

**ದೆಹಲಿ:** ಭಾರತದ ಗಗನಯಾತ್ರಿ, ಶುಭಾಂಶು ಶುಕ್ಲಾ ಮತ್ತು ಪೋಲಂಡ್ ಹಾಗೂ ಹಂಗೇರಿ ತಂತ್ರಜ್ಞರನ್ನು ಹೊತ್ತೊಯ್ಯಬೇಕಿದ್ದ ಮಹತ್ವಾಕಾಂಕ್ಷಿ ಆ ಯಕ್ಸಿಯಂ ಮಿಷನ್ 4 ಉಡಾವಣೆಯನ್ನು ನಾಸಾ ಮತ್ತೆ ಮುಂದೂಡಿದೆ. ಜೂನ್ 22ರಂದು ಭಾನುವಾರ ಉಡಾವಣೆಗೆ ಸಮಯ ನಿಗದಿಪಡಿಸಲಾಗಿತ್ತು. ಆದರೆ ಮುಂದಿನ ದಿನಾಂಕವನ್ನು ಶೀಘ್ರ ಪ್ರಕಟಿಸಲಾಗುವುದು ಎಂದು ನಾಸಾ ಹೇಳಿದೆ.

ಜೂನ್ 22ರಂದು ಉಡಾವಣೆ ಮಾಡುವ ನಿರ್ಧಾರದಿಂದ ನಾಸಾ ಹಿಂದೆ ಸರಿದಿದೆ. ಮುಂದಿನ ದಿನಗಳಲ್ಲಿ ಹೊಸ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಆ ಯಕ್ಸಿಯಮ್ ಸ್ಪೇಸ್ ಹೇಳಿಕೆ ನೀಡಿದೆ.

ಐಎಸ್‌ಎಸ್ ನ ಝ್ವೆಡಾ ಸರ್ವೀಸ್ ಮಾಡ್ಯೂಲ್ ದುರಸ್ತಿ ಕಾರ್ಯದ ಮೌಲ್ಯಮಾಪನಕ್ಕೆ ಇನ್ನಷ್ಟು ಹೆಚ್ಚಿನ ಸಮಯಾವಕಾಶ ಅಗತ್ಯವಿದೆ. ಬಾಹ್ಯಾಕಾಶ ಕೇಂದ್ರದ ಜತೆ ಬಾಹ್ಯಾಕಾಶ ನೌಕೆಯ ಹಲವು ಸಿಸ್ಟಂಗಳು ನಿಕಟ ಸಂಪರ್ಕ ಹೊಂದಿದ್ದು, ಹೊಸ ಗಗನಯಾತ್ರಿಗಳ ತಂಡಕ್ಕೆ ಬೆಂಬಲ ನೀಡುವ ನಿಟ್ಟಿನಲ್ಲಿ ಸರ್ವಸನ್ನದ್ಧ ವ್ಯವಸ್ಥೆಯನ್ನು ಎಂಜಿನಿಯರ್ ಗಳು ಖಾತರಿಪಡಿಸಲು ಬಯಸಿದ್ದಾರೆ ಎಂದು ನಾಸಾ ವಿವರಿಸಿದೆ.

## ಭಾರತದಾದ್ಯಂತ ನೈರುತ್ಯ ಮಾನ್ಸೂನ್ ಚುರುಕು

**ನವದೆಹಲಿ:** ಮುಂದಿನ ಕೆಲವು ದಿನಗಳಲ್ಲಿ ನೈರುತ್ಯ ಮಾನ್ಸೂನ್ ಮತ್ತಷ್ಟು ಬಿರುಸು ಪಡೆಯಲಿದ್ದು, ವಾಯವ್ಯ, ಮಧ್ಯ ಹಾಗೂ ಪೂರ್ವ ಭಾರತದ ಕೆಲವು ಭಾಗಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಅರೇಬಿಯನ್ ಸಮುದ್ರದ ಹೆಚ್ಚುವರಿ ಪ್ರದೇಶಗಳು, ಗುಜರಾತ್, ರಾಜಸ್ಥಾನ, ಮಧ್ಯಪ್ರದೇಶ, ಪೂರ್ವ ಉತ್ತರ ಪ್ರದೇಶ, ಛತ್ತೀಸ್‌ಗಢ, ಜಾರ್ಖಂಡ್ ಮತ್ತು ಬಿಹಾರದ ಕೆಲವು ಭಾಗಗಳನ್ನು ಒಳಗೊಂಡು ವಿಶಾಲ ಪ್ರದೇಶದ ಕಡೆಗೆ ನೈಋತ್ಯ ಮಾನ್ಸೂನ್ ಚಲಿಸಿದೆ. ಭಾರತೀಯ ಹವಾಮಾನ ಇಲಾಖೆ ಪ್ರಕಾರ, ಮುಂದಿನ ಕೆಲವು ದಿನಗಳಲ್ಲಿ ಮಾನ್ಸೂನ್ ಪ್ರವಾಹಗಳು ಮತ್ತಷ್ಟು ವೇಗಗೊಳ್ಳುವ ನಿರೀಕ್ಷೆಯಿದ್ದು, ವಿವಿಧ ಭಾಗಗಳಲ್ಲಿ ವ್ಯಾಪಕ ಮಳೆ ಮತ್ತು ಮಳೆ ಸಂಬಂಧಿತ ಹವಾಮಾನ ವೈಪರೀತ್ಯಗಳು ಸಂಭವಿಸುವ ನಿರೀಕ್ಷೆಯಿದೆ. ಮುಂದಿನ 2-3 ದಿನಗಳಲ್ಲಿ, ಮಾನ್ಸೂನ್ ಉತ್ತರಾಖಂಡ, ಹಿಮಾಚಲ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಮತ್ತಷ್ಟು ವ್ಯಾಪಿಸಿಕೊಳ್ಳುವ ನಿರೀಕ್ಷೆಯಿದೆ. ಪಶ್ಚಿಮ ಬಂಗಾಳದ ದಕ್ಷಿಣ ಭಾಗದ ಕಡಿಮೆ ಒತ್ತಡದ ಪ್ರದೇಶದಿಂದ ಪಶ್ಚಿಮಕ್ಕೆ ಜಾರ್ಖಂಡ್ ಕಡೆಗೆ ಮಾನ್ಸೂನ್ ಚಲಿಸಲು ಪ್ರಾರಂಭಿಸಿದ್ದು, ಪರಿಣಾಮವಾಗಿ ಪೂರ್ವ ಮತ್ತು ಮಧ್ಯ ಭಾರತದ ಮೇಲೆ ನೈರುತ್ಯ ಮಾನ್ಸೂನ್ ಇನ್ನಷ್ಟು ಬಲಗೊಳ್ಳುವ ನಿರೀಕ್ಷೆ ಇದೆ. ಇದರಿಂದಾಗಿ ಬಿಹಾರ, ಜಾರ್ಖಂಡ್ , ಒಡಿಶಾ, ಛತ್ತೀಸ್ ಗಢ, ಮಧ್ಯಪ್ರದೇಶ, ವಿದರ್ಭ ಮತ್ತು ಗಂಗಾನದಿಯ ಪಶ್ಚಿಮ ಬಂಗಾಳ ಸೇರಿಂದತೆ ಪಶ್ಚಿಮದಿಂದ ಪೂರ್ವಕ್ಕೆ ಭಾರೀ ಮಳೆಯಾಗುವ ಮುನ್ಸೂಚನೆ ಇದೆ.



## ಖಮೇನಿ ಭೂಮಿ ಮೇಲಿರಲು ಯೋಗ್ಯನಲ್ಲ: ಇಸ್ರೇಲ್



**ಟೆಲ್ ಅವಿವ್ :** ಆಸ್ಪತ್ರೆಯ ಮೇಲೆ ಇರಾನ್ ಕ್ಷಿಪಣಿ ದಾಳಿ ಮಾಡಿದ್ದಕ್ಕೆ ತೀವ್ರ ವ್ಯಗ್ರವಾಗಿರುವ ಇಸ್ರೇಲ್ , ಅದರ ಸುಪ್ರೀಂ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರನ್ನು ಹತ್ಯೆ ಮಾಡುವ ಸುಳುಹು ನೀಡಿದೆ. ಜನರು ಮತ್ತು ಆಸ್ಪತ್ರೆಗಳ ಮೇಲೆ ಇರಾನ್ ದಾಳಿ ನಡೆಸುತ್ತಿದೆ. ಇಂದಿನ ದಾಳಿಯಲ್ಲಿ ಆಸ್ಪತ್ರೆಯಲ್ಲಿ 47 ಮಂದಿ ಗಾಯಗೊಂಡಿದ್ದಾರೆ. ಇದಕ್ಕಿಂತ ನೀಚ ಕೃತ್ಯ ಇನ್ನೊಂದಿಲ್ಲ. ಆ ದೇಶದ ಸುಪ್ರೀಂ ನಾಯಕ ಅಯತೊಲ್ಲಾ ಅಲಿ ಖಮೇನಿ ಭೂಮಿ ಮೇಲೆ ಇರಲು ಅರ್ಹನಲ್ಲ ಎಂದು ಇಸ್ರೇಲ್ ಗುಡುಗಿದೆ.

ಈ ಬಗ್ಗೆ ಮಾತನಾಡಿರುವ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ , ಇರಾನಿನ ಕ್ಷಿಪಣಿಗಳು ಸಕೊರೊ ಆಸ್ಪತ್ರೆಗೆ ಅಪ್ಪಳಿಸಿ, ಕನಿಷ್ಠ 40 ಜನರು ಗಾಯಗೊಂಡಿದ್ದಾರೆ. ದುರಹಂಕಾರಿ ನಾಯಕ ಖಮೇನಿ ಭೂಮಿ ಇರಲು ಯೋಗ್ಯನಲ್ಲ ಎಂದು ಹೇಳುವ ಮೂಲಕ ಹತ್ಯೆ ಮಾಡುವುದಾಗಿ ಬಹಿರಂಗ ಬೆದರಿಕೆ ಹಾಕಿದ್ದಾರೆ.

ಇರಾನ್‌ನಂತಹ ದೇಶವನ್ನು ಮುನ್ನಡೆಸುವ ಮತ್ತು ಇಸ್ರೇಲ್‌ನ ನಾಶವನ್ನು ತನ್ನ ಧ್ಯೇಯವನ್ನಾಗಿ ಮಾಡಿಕೊಂಡಿರುವ ಖಮೇನಿಯಂತಹ ಸರ್ವಾಧಿಕಾರಿ ಅಸ್ತಿತ್ವದಲ್ಲಿರಲು ಸಾಧ್ಯವಿಲ್ಲ. ನಮ್ಮ ಭದ್ರತಾ ಪಡೆಗಳಿಗೆ ಏನು ಮಾಡಬೇಕು ಎಂದು ಸೂಚನೆ ನೀಡಲಾಗಿದೆ. ನಮ್ಮ ಪಡೆಗಳು ಗುರಿ ಸಾಧಿಸಲಿವೆ ಎಂದಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಖಮೇನಿಯನ್ನು ಹತ್ಯೆ ಮಾಡುವ ಯೋಜನೆಯನ್ನು ತಡೆದಿದ್ದರು. ಈ ಹಂತದಲ್ಲಿ ಖಮೇನಿ ಹತ್ಯೆ ಸರಿಯಲ್ಲ ಎಂದು ಇಸ್ರೇಲ್ ನ ದಾಳಿಗೆ ಬ್ರೇಕ್ ಹಾಕಿದ್ದರು. ಇದೀಗ, ಆಸ್ಪತ್ರೆ ಮೇಲಿನ ದಾಳಿಯನ್ನೇ ಮುಂದು ಮಾಡಿಕೊಂಡು ಆತನನ್ನು ಈ ಲೋಕದಿಂದ ಕಳುಹಿಸುವ ಬಗ್ಗೆ ಇಸ್ರೇಲ್ ಚಿಂತಿಸಿದೆ ಎಂಬುದು ರಕ್ಷಣಾ ಸಚಿವರ ಹೇಳಿಕೆ ಸೂಚಿಸುತ್ತಿದೆ.

ದೊಡ್ಡ ಆಸ್ಪತ್ರೆಗಳಲ್ಲಿ ಒಂದಾದ ಸಕೊರಾ ವೈದ್ಯಕೀಯ ಕಟ್ಟಡಕ್ಕೆ ಇಂದು ಬೆಳಗ್ಗೆ ಇರಾನ್ ಪಡೆಗಳು ಕ್ಷಿಪಣಿ ದಾಳಿ ಮಾಡಿವೆ. ಇದರಿಂದ ಆಸ್ಪತ್ರೆಯ ಕಟ್ಟಡ ಛಿದ್ರವಾಗಿದೆ. ಈ ವೇಳೆ ಅಲ್ಲಿದ್ದವರ ಪೈಕಿ 47 ಮಂದಿ ಗಾಯಗೊಂಡಿದ್ದಾರೆ. ಅದರಲ್ಲಿ ಮೂವರ ಸ್ಥಿತಿ ಗಂಭೀರವಾಗಿದೆ. ಈ ದಾಳಿಯ ಬಳಿಕ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಇರಾನ್ ಗೆ ನೇರ ಸಂದೇಶ ರವಾನಿಸಿದರು.

## ಮೌಂಟ್ ಎವರೆಸ್ಟ್ ಹತ್ತಿರ ಕಾಣಿಸಿಕೊಂಡ 9 ಕಾಳಿಂಗ ಸರ್ಪಗಳು..!



**ಕಠ್ಮಂಡು:** ನೇಪಾಳದ ರಾಜಧಾನಿ ಕಾಠ್ಮಂಡು ಮತ್ತು ಸಮೀಪದ ಪ್ರದೇಶಗಳಲ್ಲಿ ಕಳೆದ ಒಂದು ತಿಂಗಳಲ್ಲಿ ಒಂಬತ್ತು ಕಿಂಗ್ ಕೋಬ್ರಾ ಮತ್ತು ಒಂದು ಮಾನೋಕಲ್ಡ್ ಕೋಬ್ರಾ ಹಾವುಗಳು ಕಾಣಿಸಿಕೊಂಡಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಈ ವಿಷಕಾರಿ ಹಾವುಗಳು ಸಾಮಾನ್ಯವಾಗಿ ಉಷ್ಣವಲಯದ ಕಡಿಮೆ ಎತ್ತರದ ಪ್ರದೇಶಗಳಾದ ಭಾರತ ಮತ್ತು ಆಗ್ನೇಯ ಏಷ್ಯಾದ ಭತ್ತದ ಗದ್ದೆಗಳು ಮತ್ತು ಮ್ಯಾಂಗ್ರೋವ್ ಕಾಡುಗಳಲ್ಲಿ ವಾಸಿಸುತ್ತವೆ. ಆದರೆ, ಇದೀಗ ಮೌಂಟ್ ಎವರೆಸ್ಟ್‌ನಿಂದ ಕೇವಲ 160 ಕಿಲೋಮೀಟರ್ ದೂರದಲ್ಲಿರುವ ತಂಪಾದ ಹಿಮಾಲಯದ ಕಠ್ಮಂಡುವಿನಂತಹ ಎತ್ತರದ ಪ್ರದೇಶದಲ್ಲಿ ಇವು ಕಾಣಿಸಿಕೊಂಡಿರುವುದು ವಿಜ್ಞಾನಿಗಳಲ್ಲಿ ಆತಂಕ ಮೂಡಿಸಿದೆ. ಈ ಅಸಾಮಾನ್ಯ ಘಟನೆಗೆ ಹವಾಮಾನ ಬದಲಾವಣೆಯೇ ಪ್ರಮುಖ ಕಾರಣ ಎಂದು ತಜ್ಞರು ಆರೋಪಿಸಿದ್ದಾರೆ.

ಕಾಠ್ಮಂಡುವಿನ ಭಾಂಜ್ಯಾಂಗ್, ಗುಪಾಲೇಶ್ವರ್, ಸೊಖೋಲ್, ಮತ್ತು ಫೂಲ್‌ಚೌಕ್‌ನಂತಹ ನಗರದ ವಸತಿ ಪ್ರದೇಶಗಳಲ್ಲಿ ಈ ಹಾವುಗಳು ಕಾಣಿಸಿಕೊಂಡಿವೆ. ವಿಶ್ವದ ಅತಿ ಉದ್ದದ ವಿಷಕಾರಿ ಹಾವಾದ ಕಿಂಗ್ ಕೋಬ್ರಾ ಸೇರಿದಂತೆ ಈ ಜಾತಿಯ ಹಾವುಗಳು ಮನೆಯ ಅಂಗಣಗಳು ಮತ್ತು ಮನೆಗಳ ಒಳಗೆ ಕಂಡುಬಂದಿವೆ. ರಕ್ಷಣಾ ಕಾರ್ಯಾಚರಣೆಯ ಸಿಬ್ಬಂದಿ ಈ ಹಾವುಗಳನ್ನು ಸುರಕ್ಷಿತವಾಗಿ ಕಾಡುಗಳಿಗೆ ಸ್ಥಳಾಂತರಿಸಿದ್ದಾರೆ. ಆದರೆ, ಕೆಲವು ಪ್ರದೇಶಗಳಲ್ಲಿ ಹಾವುಗಳ ಗೂಡು ಮತ್ತು ಮೊಟ್ಟೆಗಳು ಪತ್ತೆಯಾಗಿರುವುದು ಈ ಹಾವುಗಳು ಸ್ಥಳೀಯವಾಗಿ ಸಂತಾನಾಭಿವೃದ್ಧಿಯಾಗುತ್ತಿರಬಹುದು ಎಂಬ ಆತಂಕವನ್ನು ಹೆಚ್ಚಿಸಿದೆ.

ವಿಜ್ಞಾನಿಗಳ ಪ್ರಕಾರ, ನೇಪಾಳದ ಪರ್ವತ ಪ್ರದೇಶಗಳಲ್ಲಿ ತಾಪಮಾನ ವರ್ಷಕ್ಕೆ 0.05 ಡಿಗ್ರಿ ಸೆಲ್ಸಿಯಸ್‌ನಂತೆ ಏರುತ್ತಿದೆ, ಇದು ಕಡಿಮೆ ಎತ್ತರದ ತರೈ ಪ್ರದೇಶಕ್ಕಿಂತ ಹೆಚ್ಚಿನ ಪ್ರಮಾಣವಾಗಿದೆ. ಈ ತಾಪಮಾನ ಏರಿಕೆಯಿಂದಾಗಿ ಉಷ್ಣವಲಯದ ಜಾತಿಗಳು ಎತ್ತರದ ಪ್ರದೇಶಗಳಲ್ಲಿ ಬದುಕುಳಿಯಲು ಸಾಧ್ಯವಾಗುತ್ತಿದೆ ಎಂದು ಸರ್ಪತಜ್ಞರು ತಿಳಿಸಿದ್ದಾರೆ. ಇದು ಹವಾಮಾನ ಬದಲಾವಣೆಯ ವ್ಯಾಪಕ ಪರಿಣಾಮಗಳ ಎಚ್ಚರಿಕೆಯ ಸಂಕೇತವಾಗಿದೆ, ಎಂದು ಒಬ್ಬ ಸರ್ಪತಜ್ಞ ಂಒಖಗೆ ತಿಳಿಸಿದ್ದಾರೆ. ರಕ್ಷಣಾ ತರಬೇತುದಾರ ಸುಬೋಧ್ ಆಚಾರ್ಯ ಅವರು, ತರೈ ಪ್ರದೇಶದಿಂದ ಕಟ್ಟಿಗೆ ಅಥವಾ ಹುಲ್ಲಿನ ರಾಶಿಗಳಲ್ಲಿ ಆಕಸ್ಮಿಕವಾಗಿ ಟ್ರಕ್‌ಗಳ ಮೂಲಕ ಈ ಹಾವುಗಳು ಕಾಠ್ಮಂಡುಗೆ ಬಂದಿರಬಹುದು ಎಂಬ ಪರಿಕಲ್ಪನೆಯನ್ನು ಮಂಡಿಸಿದ್ದಾರೆ. ಆದರೆ, ಹವಾಮಾನ ಬದಲಾವಣೆಯೇ ಈ ಘಟನೆಗೆ ಪ್ರಮುಖ ಕಾರಣ ಎಂಬುದು ವ್ಯಾಪಕವಾಗಿ ಒಪ್ಪಲ್ಪಟ್ಟ ಅಭಿಪ್ರಾಯವಾಗಿದೆ.

## ದಿವ್ಯಾ ದೇಶಮುಖ್ ಸಾಧನೆಗೆ ಪ್ರಧಾನಿ ಮೋದಿ ಅಭಿನಂದನೆ

**ನವದೆಹಲಿ:** ಭಾರತದ ಅತ್ಯಂತ ಪ್ರತಿಭಾನ್ವಿತ ಯುವ ಚೆಸ್ ಪ್ರತಿಭೆಗಳಲ್ಲಿ ಒಬ್ಬರಾದ ದಿವ್ಯಾ ದೇಶಮುಖ್ ಜಾಗತಿಕ ವೇದಿಕೆಯಲ್ಲಿ ಸದ್ದು ಮಾಡುತ್ತಿದ್ದು, ಈಗ ಅವರು ಪ್ರಧಾನಿ ನರೇಂದ್ರ ಮೋದಿಯವರ ಗಮನ ಸೆಳೆದಿದ್ದಾರೆ. ಲಂಡನ್‌ನಲ್ಲಿ ನಡೆದ ವಿಶ್ವ ಬ್ಲಿಟ್ಜ್ ತಂಡ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಚೀನಾದ ದಂತಕಥೆ ಮತ್ತು ವಿಶ್ವದ ನಂ. 1 ಆಟಗಾರ ಹೌ ಯಿಫಾನ್ ಅವರನ್ನು ಸೋಲಿಸುವ ಮೂಲಕ 18 ವರ್ಷದ ಭಾರತೀಯ ಚೆಸ್‌ನ ಉದಯೋನ್ಮುಖ ತಾರೆ ಚೆಸ್ ಜಗತ್ತನ್ನು ಬೆರಗುಗೊಳಿಸಿದ್ದಾರೆ. ಡಬ್ಲ್ಯೂಆರ್ ಚೆಸ್ ತಂಡವನ್ನು ಪ್ರತಿನಿಧಿಸಿದ್ದ ಯಿಫಾನ್, ರೌಂಡ್-ರಾಬಿನ್ ಸೆಮಿಫೈನಲ್ ಹಣಾಹಣಿಯ ಮೊದಲ ಲೆಗ್‌ನಲ್ಲಿ ದಿವ್ಯಾ ಅವರನ್ನು ಸೋಲಿಸಿದ್ದರು. ಆದರೆ ದಿವ್ಯಾ, ಗಮನಾರ್ಹ ಸ್ಥಿತಿಸ್ಥಾಪಕತ್ವ ಮತ್ತು ಯುದ್ಧತಂತ್ರದ ತೀಕ್ಷ್ಣತೆಯನ್ನು ಪ್ರದರ್ಶಿಸಿ, ಎರಡನೇ ಲೆಗ್‌ನಲ್ಲಿ ಬಲವಾಗಿ ಚೇತರಿಸಿಕೊಂಡರು. ಬಿಳಿ ಕಾಯಿಗಳೊಂದಿಗೆ ಆಟವಾಡುತ್ತಾ, ಅವರು ತಮ್ಮ ಆರಂಭಿಕ ಪ್ರಯೋಜನವನ್ನು ಬಳಸಿಕೊಳ್ಳುವ ಮೂಲಕ ಮತ್ತು ಬ್ಲಿಟ್ಜ್ ಚೆಸ್‌ನಲ್ಲಿ ನಿರ್ಣಾಯಕ ಕೌಶಲ್ಯವಾದ ತಮ್ಮ ಗಡಿಯಾರವನ್ನು ಅದ್ಭುತವಾಗಿ ನಿರ್ವಹಿಸುವ ಮೂಲಕ ಆಟದ ಮೇಲೆ ಪ್ರಾಬಲ್ಯ ಸಾಧಿಸಿದರು.



## ಕೆನಡಾ ಪ್ರಧಾನಿಗೆ ಕಲಾಕೃತಿ ಉಡುಗೊರೆ ನೀಡಿದ ಮೋದಿ

**ನವದೆಹಲಿ:** ಜಿ7 ಶೃಂಗಸಭೆಯಲ್ಲಿ ಭಾಗವಹಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಹಳಸಿದ್ದ ಕೆನಡಾ ಮತ್ತು ಭಾರತದ ಸಂಬಂಧವನ್ನು ಮರುಸ್ಥಾಪಿಸಲು ಪ್ರಯತ್ನಿಸಿದರು. ಜೊತೆಗೆ ಭಾರತದ ಕರಕುಶಲ ಸಿರಿವಂತಿಕೆ ಪ್ರತಿಬಿಂಬಿಸುವ ವಸ್ತುಗಳನ್ನು ಆ ದೇಶದ ಗಣ್ಯರಿಗೆ ಉಡುಗೊರೆಯಾಗಿ ನೀಡಿದ್ದಾರೆ.

ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರಿಗೆ ಹಿತ್ತಾಳೆಯಿಂದ ರೂಪಿಸಲ್ಪಟ್ಟ ಬೋಧಿ ವೃಕ್ಷದ ಕಲಾಕೃತಿ ನೀಡಿದರು. ಇದು ಬಿಹಾರದ ಕಲಾಕೃತಿಯಾಗಿದೆ. ಕರಕುಶಲತೆಯಲ್ಲಿ ಮೂಡಿಬಂದಿರುವ ಈ ಹಿತ್ತಾಳೆಯ ಕಲಾಕೃತಿಯು, ಬುದ್ಧನು ಬೋಧಗಯಾದಲ್ಲಿ ಜ್ಞಾನೋದಯವನ್ನು ಪಡೆದ ಪವಿತ್ರ ಬೋಧಿ ವೃಕ್ಷವನ್ನು ಪ್ರತಿನಿಧಿಸುತ್ತದೆ. ಎಲೆಗಳು, ಕೊಂಬೆಗಳು, ಕಾಂಡದ ಮಾದರಿಯು ಥೇಟ್ ಬೋಧಿ ವೃಕ್ಷದಂತೆ ಭಾಸವಾಗುತ್ತದೆ.



ಅಲ್ಲದೇ, ಕೆನಡಾದ ಗವರ್ನರ್ ಜನರಲ್ ಮೇರಿ ಸೈಮನ್ ಅವರಿಗೆ ಬೆಳ್ಳಿಯಿಂದ ರೂಪಿಸಿದ ಚಿಕ್ಕ ಹ್ಯಾಂಡ್ ಬ್ಯಾಗ್ ಉಡುಗೊರೆಯಾಗಿ ನೀಡಿದ್ದಾರೆ. ಒಡಿಶಾದ ಕಟಕ್‌ನಲ್ಲಿ ತಯಾರಿಸಲಾದ ಸಿಲ್ವರ್ ಫಿಲಿಗ್ರೀ ಕ್ಲಚ್ ಪರ್ಸ್, ತಾರಕಾಸಿ ಎಂಬ ಪ್ರದೇಶದ ಪ್ರಸಿದ್ಧ ಸಾಂಪ್ರದಾಯಿಕ ಕರಕುಶಲತೆ ಕಲೆಯಾಗಿದೆ. ಅತ್ಯಂತ ಸೂಕ್ಷ್ಮವಾದ ಬೆಳ್ಳಿಯ ಎಳೆಗಳಿಂದ ವಿನ್ಯಾಸ ಮಾಡಲಾಗಿದೆ. ಈ ಕಲೆಯು 500 ವರ್ಷಗಳಿಗಿಂತ ಹಳೆಯದಾಗಿದ್ದು, ಮೊಘಲ್ ದೊರೆಗಳನ್ನು ಆಕರ್ಷಿಸಿತ್ತು.

ರಾಜಸ್ಥಾನದ ಶ್ರೀಮಂತ ಸಂಸ್ಕೃತಿ ಮತ್ತು ರಾಜ ಪರಂಪರೆ ಪ್ರತಿಬಿಂಬಿಸುವ ಎಬೊನಿ ಮರದಿಂದ ತಯಾರಿಸಲಾದ ಜೈಲ್-ವರ್ಕ್ ಬಾಕ್ಸ್ ಅನ್ನು ಆಲ್ಬರ್ಟಾ ಪ್ರಾಂತ್ಯದ ಮುಖ್ಯಸ್ಥರಿಗೆ ಉಡುಗೊರೆಯಾಗಿ ಪ್ರಧಾನಿ ಮೋದಿ ನೀಡಿದರು. ಇದು ಕೂಡ ಬೆಳ್ಳಿ ಮಿಶ್ರಿತ ಬಾಕ್ಸ್ ಆಗಿದೆ. ಸೊಗಸಾದ ಪೆಟ್ಟಿಗೆಯನ್ನು ಡಾರ್ಕ್ ಇಂಡಿಯನ್ ಎಬೊನಿ ಮರದಿಂದ ತಯಾರಿಸಲಾಗಿದೆ. ಬಾಕ್ಸ್‌ನ ಮುಚ್ಚಳದ ಮೇಲೆ ಸುಂದರವಾದ ನವಿಲಿನ ಚಿತ್ರವಿದೆ. ಇದು ಬೆಳ್ಳಿಯಿಂದ ಕೂಡಿದೆ. ಈ ಕಲೆಗೆ 'ನಕ್ಕಾಶಿ' ಎಂದು ಕರೆಯಲಾಗುತ್ತದೆ.

## 215 ಡಿಎನ್‌ಎ ಮ್ಯಾಚ್ 198 ಮೃತದೇಹ ಹಸ್ತಾಂತರ

**ಅಹಮದಾಬಾದ್:** ಏರ್ ಇಂಡಿಯಾವಿಮಾನ ದುರಂತದಲ್ಲಿ ಮೃತಪಟ್ಟವರ ಪೈಕಿ ಈವರೆಗೆ ಒಟ್ಟು 215 ಮಂದಿ ಗುರುತು ಪತ್ತೆಯಾಗಿದ್ದು, 198 ಮೃತ ದೇಹಗಳನ್ನ ಸಂಬಂಧಪಟ್ಟ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ ಎಂದು ಅಹಮದಾಬಾದ್ ಸಿವಿಲ್ ಹಾಸ್ಪಿಟಲ್ ಅಧೀಕ್ಷಕ ರಾಕೇಶ್ ಜೋಶಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಜೋಶಿ, ಒಟ್ಟು 215 ಡಿಎನ್‌ಎ (ಆಓಂ) ವರದಿಗಳು ಮ್ಯಾಚ್ ಆಗಿವೆ. ಈ ಪೈಕಿ 198 ಮೃತದೇಹಗಳನ್ನ ಹಸ್ತಾಂತರಿಸಲಾಗಿದೆ. ಈ ಪೈಕಿ 149 ಭಾರತೀಯರು, 7 ಪೋರ್ಚುಗೀಸ್, 32 ಬ್ರಿಟಿಷ್ ಮತ್ತಿ ಕೆನಡಿಯನ್ ಪ್ರಜೆಗಳ ಮೃತದೇಹಗಳು ಪತ್ತೆಯಾಗಿವೆ ಎಂದು ಮಾಹಿತಿ ನೀಡಿದ್ದಾರೆ. 15 ಮೃತದೇಹಗಳನ್ನು ಏರ್ ಅಂಬುಲೆನ್ಸ್ ಹಾಗೂ 183 ಮೃತದೇಹಗಳನ್ನು ರೋಡ್ ಅಂಬುಲೆನ್ಸ್ ಮೂಲಕ ಸಾಗಿಸಲಾಗಿದೆ. ಇದೆಲ್ಲವೂ ಸೇರಿ ಒಟ್ಟಾರೆ 222 ಮೃತದೇಹಗಳನ್ನು ಪತ್ತೆಹಚ್ಚಲಾಗಿದೆ. 8 ಮಂದಿ ಮೃತದೇಹಗಳ ಗುರುತು ಮಾತ್ರ ಪತ್ತೆಯಾಗಿಲ್ಲ ಎಂದು ವಿವರಿಸಿದ್ದಾರೆ.

**ಬ್ಲ್ಯಾಕ್ ಬಾಕ್ಸ್ ಅಮೆರಿಕಗೆ ರವಾನೆ:** ಸದ್ಯ ಪತನವಾಗಿರುವ ಏರ್ ಇಂಡಿಯಾ ಬೋಯಿಂಗ್-787 ವಿಮಾನದ ಬ್ಲ್ಯಾಕ್ ಬಾಕ್ಸ್ ಅನ್ನು ಡಿಕೋಡ್ ಮಾಡಲು ಅಮೆರಿಕಕ್ಕೆ ಕಳುಹಿಸಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ಜೂನ್ 13ರಂದು ಬಿಜೆ ಮೆಡಿಕಲ್ ಹಾಸ್ಟೆಲಿನ ಮೇಲ್ಛಾವಣಿಯಲ್ಲಿದ್ದ ಏರ್ ಇಂಡಿಯಾ ವಿಮಾನದ ಬ್ಲ್ಯಾಕ್ ಬಾಕ್ಸ್ ಅನ್ನು ವಿಮಾನ ಅಪಘಾತ ತನಿಖಾ ಬ್ಯೂರೋ ವಶಪಡಿಸಿಕೊಂಡಿತ್ತು.

## ಅಮೆರಿಕಕ್ಕೆ ಚೀನಾ ಎಚ್ಚರಿಕೆ



**ಬೀಜಿಂಗ್:** ಇರಾನ್ ಮತ್ತು ಇಸ್ರೇಲ್ ನಡುವಿನ ಯುದ್ಧದಲ್ಲಿ ಮಧ್ಯಪ್ರವೇಶಿಸುವ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿರುವುದನ್ನು ಖಂಡಿಸಿರುವ ಚೀನಾ, ಬಲಪ್ರಯೋಗದ ವಿರುದ್ಧ ಅಮೆರಿಕಕ್ಕೆ ಎಚ್ಚರಿಕೆ ನೀಡಿದೆ.

ಇರಾನ್ ಮತ್ತು ಇಸ್ರೇಲ್ ನಡುವಿನ ಉದ್ವಿಗ್ನತೆ ಉಲ್ಬಣಿಸಿರುವಂತೆಯೇ, ಇರಾನ್ ವಿರುದ್ಧ ದಾಳಿ ನಡೆಸುವ ಬಗ್ಗೆ ಪರಿಶೀಲಿಸುತ್ತಿರುವುದಾಗಿ ಟ್ರಂಪ್ ಹೇಳಿಕೆ ನೀಡಿದ್ದರು.

ಅಮೆರಿಕದಿಂದ ಯಾವುದೇ ಬಲದ ಬಳಕೆಯು ಇರಾನಿನ ಸಾರ್ವಭೌಮತ್ವ ಮತ್ತು ಭದ್ರತೆಯ ಉಲ್ಲಂಘನೆಯಾಗಿದೆ. ಇತರ ದೇಶಗಳ ಸಾರ್ವಭೌಮತೆ, ಭದ್ರತೆ ಮತ್ತು ಪ್ರಾದೇಶಿಕ ಸಮಗ್ರತೆಯನ್ನು ಉಲ್ಲಂಘಿಸುವ ಇಂತಹ ಯಾವುದೇ ಕೆಲಸವನ್ನು ಚೀನಾ ವಿರೋಧಿಸುತ್ತದೆ. ಮತ್ತು ಅಂತರಾಷ್ಟ್ರೀಯ ಸಂಬಂಧದಲ್ಲಿ ಬಲದ ಬಳಕೆ ಅಥವಾ ಬೆದರಿಕೆಯನ್ನು ಚೀನಾ ವಿರೋಧಿಸುತ್ತದೆ ಎಂದು ಚೀನಾದ ವಿದೇಶಾಂಗ ಇಲಾಖೆಯ ವಕ್ತಾರ ಗುವೊ ಜಿಯಾಕುನ್ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ. ಇರಾನ್ ವಿರುದ್ಧ ಇಸ್ರೇಲ್‌ನ ಮಿಲಿಟರಿ ದಾಳಿಯಿಂದ ತೀವ್ರ ಕಳವಳಗೊಂಡಿರುವುದಾಗಿ ಚೀನಾ ಅಧ್ಯಕ್ಷ ಕ್ಸಿ ಜಿಂಪಿಂಗ್ ಈ ವಾರದ ಆರಂಭದಲ್ಲಿ ಹೇಳಿದ್ದರು. ಸಂಘರ್ಷ ಉಲ್ಬಣಿಸುವುದನ್ನು ತಡೆಯಲು ಎಲ್ಲರೂ ಕ್ರಮ ಕೈಗೊಳ್ಳಬೇಕು. ವಲಯದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸುವಲ್ಲಿ ರಚನಾತ್ಮಕ ಪಾತ್ರ ನಿರ್ವಹಿಸಲು ಚೀನಾ ಸಿದ್ಧವಿದೆ ಎಂದು ಜಿಂಪಿಂಗ್ ಹೇಳಿರುವುದಾಗಿ ವರದಿಯಾಗಿದೆ.

## ಯುಎಸ್ ಎಚ್ಚರಿಕೆ ನೀಡಿದ ಶಶಿ ತರೂರ್

**ನವದೆಹಲಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಮತ್ತು ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರನ್ನು ಶ್ವೇತಭವನದಲ್ಲಿ ಊಟಕ್ಕೆ ಆತಿಥ್ಯ ವಹಿಸಿದ್ದಕ್ಕೆ ಹಿರಿಯ ಕಾಂಗ್ರೆಸ್ ಮುಖಂಡ ಶಶಿ ತರೂರ್ ಗುರುವಾರ ಪ್ರತಿಕ್ರಿಯಿಸಿದ್ದಾರೆ.

ಆಹಾರವು ಉತ್ತಮವಾಗಿತ್ತು ಮತ್ತು ಈ ಪ್ರಕ್ರಿಯೆಯಲ್ಲಿ ಯೋಚಿಸಲು ಅವನು ಸ್ವಲ್ಪ ಆಹಾರವನ್ನು ಪಡೆಯುತ್ತಾನೆ ಎಂದು ನಾನು ಭಾವಿಸುತ್ತೇನೆ. ಈ ಸಂವಾದಗಳಲ್ಲಿ, ಭಯೋತ್ಪಾದಕರು ತಮ್ಮ ನೆಲದಿಂದ ನಮ್ಮ ದೇಶಕ್ಕೆ ಸಕ್ರಿಯಗೊಳಿಸುವುದಿಲ್ಲ, ಮಾರ್ಗದರ್ಶನ ನೀಡುವುದಿಲ್ಲ, ತರಬೇತಿ ನೀಡುವುದಿಲ್ಲ, ಶಸ್ತ್ರಾಸ್ತ್ರ ನೀಡುವುದಿಲ್ಲ, ಹಣಕಾಸು ಒದಗಿಸುವುದಿಲ್ಲ, ಸಜ್ಜುಗೊಳಿಸುವುದಿಲ್ಲ ಮತ್ತು ಕಳುಹಿಸುವುದಿಲ್ಲ ಎಂದು ಅಮೆರಿಕನ್ನರು ಪಾಕಿಸ್ತಾನಕ್ಕೆ ನೆನಪಿಸುತ್ತಾರೆ ಎಂದು ನಾನು ಭಾವಿಸುತ್ತೇನೆ'' ಎಂದು ತರೂರ್ ಎಎನ್‌ಐಗೆ ತಿಳಿಸಿದ್ದಾರೆ.



ಪಾಕಿಸ್ತಾನದ ನಿಯೋಗವನ್ನು ಭೇಟಿಯಾದ ಕೆಲವು ಅಮೇರಿಕನ್ ಸೆನೆಟರ್ ಗಳು ಮತ್ತು ಕಾಂಗ್ರೆಸ್ ಸದಸ್ಯರು ಇದನ್ನು ಮಾಡಿದರು. ಅಮೆರಿಕದ ಜನರು ಒಸಾಮಾ ಘಟನೆಯನ್ನು ಇಷ್ಟು ಬೇಗ ಮರೆಯಲು ಸಾಧ್ಯವಿಲ್ಲ ಅಂತಿಮವಾಗಿ ಸೇನಾ ಶಿಬಿರದ ಬಳಿ ಸುರಕ್ಷಿತ ಮನೆಯಲ್ಲಿ ಪತ್ತೆಯಾಗುವವರೆಗೂ ಈ ವ್ಯಕ್ತಿಯನ್ನು ಅಡಗಿಸಿಟ್ಟ ಪಾಕಿಸ್ತಾನದ ತಪ್ಪನ್ನು ಅಮೆರಿಕನ್ನರು ಸುಲಭವಾಗಿ ಮರೆಯಲು ಮತ್ತು ಕ್ಷಮಿಸಲು ಸಾಧ್ಯವಿಲ್ಲ'' ಎಂದು ಅವರು ಹೇಳಿದರು. ಮುನೀರ್-ಟ್ರಂಪ್ ಭೇಟಿಯಲ್ಲಿ ಏನಾಯಿತು ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರನ್ನು ಭೇಟಿಯಾಗಲು ''ಗೌರವ'' ಎಂದು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ ಮತ್ತು ಭಾರತದೊಂದಿಗೆ ಯುದ್ಧಕ್ಕೆ ಪ್ರವೇಶಿಸದಿದ್ದಕ್ಕಾಗಿ ಧನ್ಯವಾದ ಅರ್ಪಿಸಿದರು.

## ಇರಾನ್ ಜೊತೆಗಿನ ಯುದ್ಧಕ್ಕಾಗಿ ಮಗನ ಮದ್ವೆ ನಿಲ್ಲಿಸಿದ್ರಾ: ನೆತಾನ್ಯಾಹು

**ಟೆಲ್ ಅವಿವ್:** ಇರಾನ್ ಜೊತೆ ನಡೆತ್ತಿರುವ ಯುದ್ಧದ ಬಗ್ಗೆ ಪ್ರಧಾನಿ ಬೆಂಜಮಿನ್ ನೆತಾನ್ಯಾಹುಅಚ್ಚರಿಯ ಹೇಳಿಕೆಯೊಂದನ್ನು ನೀಡುವ ಮೂಲಕ ಇಸ್ರೇಲಿಗರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಇರಾನ್ ಜೊತೆಗಿನ ಯುದ್ಧದ ಕಾರಣದಿಂದಾಗಿ ತಮ್ಮ ಮಗನ ಮದುವೆ ವಿಳಂಬ ಆಗುತ್ತಿದೆ. ಯುದ್ಧದ ಪರಿಣಾಮ ವೈಯಕ್ತಿಕ ಬದುಕಿನ ಮೇಲೂ ಆಗುತ್ತಿದೆ ಎಂದು ಹೇಳಿಕೆ ನೀಡಿದ್ದಾರೆ. ಈನ್ನು ನೆತಾನ್ಯಾಹು ಹೇಳಿಕೆಗೆ ಇಸ್ರೇಲಿಗರು ಫುಲ್ ಗರಂ ಆಗಿದ್ದಾರೆ.



ಬೀರ್ ಶೆವಾದಲ್ಲಿನ ಕ್ಷಿಪಣಿಯಿಂದ ಹಾನಿಗೊಳಗಾದ ಸೊರೊಕಾ ಆಸ್ಪತ್ರೆಯ ಮುಂದೆ ಗಂಭೀರವಾಗಿ ಮಾತನಾಡಿದ ನೆತನ್ಯಾಹು, ಇಸ್ರೇಲ್‌ನ ಪ್ರಸ್ತುತ ಬಿಕ್ಕಟ್ಟನ್ನು ಎರಡನೇ ಮಹಾಯುದ್ಧದ ಬಾಂಬ್ ದಾಳಿಗೆ ಹೋಲಿಸಿದರು. ಇದೇ ವೇಳೆ ಅವರು ಯುದ್ಧಕ್ಕಾಗಿ ತಮ್ಮ ಪರಿವಾರ ಎಂತಹ ತ್ಯಾಗ ಮಾಡುತ್ತಿದೆ ಎಂಬುದನ್ನು ಜನರೆದುರು ಬಿಚ್ಚಡಲು ಮುಂದಾದರು. ಭದ್ರತಾ ಕಾಳಜಿಯಿಂದಾಗಿ ಎರಡನೇ ಬಾರಿಗೆ ತಮ್ಮ ಮಗ ಅವ್ನರ್ ಅವರ ವಿವಾಹವನ್ನು ಮರು ನಿಗದಿಪಡಿಸಿದ್ದನ್ನು ಪ್ರಧಾನಿ ತಮ್ಮ ಕುಟುಂಬವು ಮಾಡಿದ ತ್ಯಾಗಗಳಿಗೆ ಉದಾಹರಣೆಯಾಗಿ ತೋರಿಸಿದರು. ಈ ನಿರ್ಧಾರದಿಂದ ಮಗ ಅವ್ನರ್ ಮತ್ತು ಪತ್ನಿ ಸಾರಾ ನೆತನ್ಯಾಹು ಅವರ ಮೇಲೆಯೂ ತೀವ್ರ ಪರಿಣಾಮ ಬೀರಿದೆ ಎಂದು ತಮ್ಮ ಕುಟುಂಬಸ್ಥರ ಗುಣಗಾನಕ್ಕಿಳಿದಿದ್ದರು.

ಯುದ್ಧದಲ್ಲಿ ತಮ್ಮ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡು ದುಃಖಿಸುತ್ತಿರುವವರ ಜೊತೆ ನಾವಿದ್ದೇವೆ. ಈ ಯುದ್ಧದಿಂದ ಇಸ್ರೇಲ್‌ನ ಪ್ರತಿಯೊಬ್ಬ ಪ್ರಜೆಯ ಮೇಲೂ ವೈಯಕ್ತಿಕ ಪರಿಣಾಮ ಬೀರಿದೆ. ಅದಕ್ಕೆ ನಾನೇನು ಹೊರತಾಗಿಲ್ಲ ಎಂದಿದ್ದಾರೆ. ಇರಾನ್‌ನ ಕ್ಷಿಪಣಿ ಸೊರೊಕಾ ಆಸ್ಪತ್ರೆ ಮೇಲೆ ಬಿದ್ದು ಅಪಾರ ಸಾವು-ನೋವು ಸಂಭವಿಸಿದೆ. ಈ ಪ್ರದೇಶಕ್ಕೆ ಭೇಟಿ ಕೊಟ್ಟ ನೆತಾನ್ಯಾಹು ಪರಿಶೀಲನೆ ನಡೆಸಿದ್ದಾರೆ. ಸಂಘರ್ಷದಲ್ಲಿ ಇಲ್ಲಿಯವರೆಗೆ ತನ್ನ 24 ನಾಗರಿಕರು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ಹೇಳುತ್ತದೆ. ಇಸ್ರೇಲ್‌ನ ಅನಿರೀಕ್ಷಿತ ವೈಮಾನಿಕ ದಾಳಿಯ ನಂತರ ಇರಾನಿನ ನಾಗರಿಕರ ಸಾವಿನ ಸಂಖ್ಯೆ ಕನಿಷ್ಠ 263 ಎಂದು ಅಮೆರಿಕದಲ್ಲಿನ ಮಾನವ ಹಕ್ಕುಗಳ ಗುಂಪುಗಳು ಅಂದಾಜಿಸಿವೆ.

## ಇಸ್ರೇಲ್ ನ ಅತಿದೊಡ್ಡ ಆಸ್ಪತ್ರೆ ಮೇಲೆ ಕ್ಷಿಪಣಿ ದಾಳಿ ನಡೆಸಿದ ಇರಾನ್

**ಟೆಲ್ ಅವಿವ್, ಇಸ್ರೇಲ್:** ಜನವಸತಿ ಪ್ರದೇಶಗಳ ಮೇಲೆ ದಾಳಿ ಮಾಡುತ್ತಿದ್ದ ಇರಾನ್ ಇದೀಗ, ನೇರವಾಗಿ ಆಸ್ಪತ್ರೆಗಳ ಮೇಲೆ ತನ್ನ ಕ್ಷಿಪಣಿಗಳನ್ನು ಹಾರಿಸುತ್ತಿದೆ. ಗುರುವಾರ ಬೆಳಗ್ಗೆ ಇಸ್ರೇಲ್ ನ ಅತಿದೊಡ್ಡ ಆಸ್ಪತ್ರೆಯಾದ ಸರೋಕಾ ವೈದ್ಯಕೀಯ ಕಟ್ಟಡದ ಮೇಲೆ ಕ್ಷಿಪಣಿ ದಾಳಿ ಮಾಡಿ ತೀವ್ರ ಹಾನಿ ಉಂಟು ಮಾಡಿದೆ.

ಘಟನೆಯಲ್ಲಿ 47 ಮಂದಿ ಗಾಯಗೊಂಡಿದ್ದಾರೆ. ಮೂವರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ. ಆಸ್ಪತ್ರೆಗೆ ಕ್ಷಿಪಣಿ ಅಪ್ಪಳಿಸಿದ ಬಳಿಕ ಅಲ್ಲಿದ್ದ ಜನರು, ವೈದ್ಯರು ದಿಕ್ಕಾಪಾಲಾಗಿ ಓಡುತ್ತಿರುವ ದೃಶ್ಯಗಳ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಕ್ಷಿಪಣಿ ದಾಳಿಯಿಂದಾಗಿ ಕಟ್ಟಡವು ತೀವ್ರ ಹಾನಿಗೀಡಾಗಿದೆ. ಆಸ್ಪತ್ರೆಯ ಕಿಟಕಿಗಳು ಛಿದ್ರವಾಗಿವೆ. ಕಟ್ಟಡದಲ್ಲಿ ದೊಡ್ಡ ಪ್ರಮಾಣದಲ್ಲಿ ಹೊಗೆ ಆವರಿಸಿದ್ದು, ಜನರು ಆತಂಕದಲ್ಲಿರುವ ದೃಶ್ಯಗಳು ವಿಡಿಯೋಗಳಲ್ಲಿ ಕಾಣಬಹುದು.



ಆಸ್ಪತ್ರೆ ಮೇಲೆ ದಾಳಿ ಮಾಡಿದ ಇರಾನ್ ವಿರುದ್ಧ ಇಸ್ರೇಲ್ ಅಧ್ಯಕ್ಷ ಬೆಂಜಮಿನ್ ನೆತನ್ಯಾಹು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜನವಸತಿ, ಆಸ್ಪತ್ರೆಗಳ ಮೇಲೆ ದಾಳಿ ಮಾಡುತ್ತಿರುವ ಇರಾನ್ ಗೆ ತಕ್ಕ ಪಾಠ ಕಲಿಸಲಾಗುವುದು. ಈ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲಾಗುವುದು. ಜನರ ಮೇಲೆ ದಾಳಿ ಮಾಡಿದ್ದು ಅಪರಾಧ ಎಂದು ಅವರು ಗುಡುಗಿದ್ದಾರೆ.

ಇರಾನ್ ಎಲ್ಲೆಲ್ಲಿ ದಾಳಿ ಮಾಡಬಹುದು ಎಂದೆಣಿಸಿರುವ ಇಸ್ರೇಲ್ , ಜನರನ್ನು ಬಂಕರ್ ಗಳಲ್ಲಿ ಆಶ್ರಯ ಪಡೆಯಲು ಮತ್ತು ಆಸ್ಪತ್ರೆಗಳನ್ನು ಭೂಗತ ಪ್ರದೇಶಗಳಿಗೆ ಸ್ಥಳಾಂತರಿಸಿದೆ. ಆಸ್ಪತ್ರೆಗಳ ಕೆಳಭಾಗದಲ್ಲಿರುವ ರಹಸ್ಯ ತಾಣಗಳಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ವಿಶೇಷವಾಗಿ ವೆಂಟಿಲೇಟರ್, ತುರ್ತು ಚಿಕಿತ್ಸೆ ಅಗತ್ಯ ಇರುವವರಿಗೆ ಅಲ್ಲಿಯೇ ಶುಶ್ರೂಷೆ ನಡೆಸಲಾಗುತ್ತಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮಹಿಳೆಗೆ ಕಾರು ಡಿಕ್ಕಿ ಹೊಡೆದಿದ್ದಕ್ಕೆ ಕ್ಷಮೆ ಕೇಳಿದ ಯುವ ರಾಜ್‌ಕುಮಾರ್



ಮಹಿಳೆಗೆ ಕಾರು ಡಿಕ್ಕಿ ಹೊಡೆದಿದ್ದ ವಿಚಾರಕ್ಕೆ ಸಂಬಂಧಿಸಿದಂತೆ ನಟ ಯುವ ರಾಜ್‌ಕುಮಾರ್ ಈಗ ಕ್ಷಮೆ ಕೇಳಿದ್ದಾರೆ. ಬೆಂಗಳೂರಿನಲ್ಲಿ ನಡೆದ ಎಕ್ಕ ಸಿನಿಮಾದ ಸುದ್ದಿಗೋಷ್ಠಿಯಲ್ಲಿ ಯುವ ರಾಜ್‌ಕುಮಾರ್ ಘಟನೆಗೆ ಪಶ್ಚಾತ್ತಾಪ ಪಟ್ಟು ಮಹಿಳೆಗೆ ಕ್ಷಮೆ ಕೇಳಿದ್ದಾರೆ. ಮಹಿಳೆ ಮೇಲೆ ಕಾರು ಹತ್ತಿಸಿ ತಪ್ಪಿಸಿಕೊಂಡು ಹೋಗಿದ್ದಾರೆ ಎಂಬ ಆರೋಪ ಹೊತ್ತಿದ್ದ ಯುವ ರಾಜ್‌ಕುಮಾರ್, ಇದೀಗ ಘಟನೆಯ ಸಂಪೂರ್ಣ ಚಿತ್ರಣ ಬಿಚ್ಚಿಟ್ಟಿದ್ದಾರೆ. ಘಟನೆಗೆ ನೊಂದು ಕ್ಷಮೆಯನ್ನೂ ಯಾಚಿಸಿದ್ದಾರೆ.

ಯುವ ರಾಜ್‌ಕುಮಾರ್ ನಟನೆಯ ಎರಡನೇ ಚಿತ್ರ 'ಎಕ್ಕ' ಸಿನಿಮಾ ಟೀಮ್ ಪ್ರಚಾರಕ್ಕೆಂದು ತುಮಕೂರಿನ ಸಿದ್ದಗಂಗಾ ಮಠಕ್ಕೆ ತೆರಳಿದ್ದ ವೇಳೆ ದುರ್ಘಟನೆ ನಡೆದಿತ್ತು. ತುಮಕೂರಿನಲ್ಲಿ ಸಿನಿಮಾ ಪ್ರಚಾರದ ವೇಳೆ ಸಿದ್ದಗಂಗಾ ಮಠಕ್ಕೆ ನಟ ಯುವ ರಾಜ್‌ಕುಮಾರ್ ಹಾಗೂ ಇತರರು ಭೇಟಿ ನೀಡಿದ್ದರು. ಯುವರಾಜ್‌ಕುಮಾರ್ ಬಂದಿದ್ದ ಕಾರಣಕ್ಕೆ ಆ ಸ್ಥಳದಲ್ಲಿ ಭಾರೀ ಜನಸಂದಣಿ ಏರ್ಪಟ್ಟಿತ್ತು. ಆಗ ನಡೆದ ತಳ್ಳಾಟ ನೂಕಾಟದಲ್ಲಿ ಯುವ ರಾಜ್ ಕುಮಾರ್ ಕುಳಿತಿದ್ದ ಕಾರು ಮಹಿಳೆಯ ಕಾಲ ಮೇಲೆ ಹರಿದಿತ್ತು. ಘಟನೆಯಿಂದ ಮಹಿಳೆಯ ಕಾಲಿಗೆ ಪೆಟ್ಟಾಗಿತ್ತು. ಘಟನೆ ನಡೆದು ಮೂರು ದಿನಗಳ ಬಳಿಕ ಆ ವಿಚಾರವಾಗಿ ಇದೀಗ ಯುವರಾಜ್‌ಕುಮಾರ್ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ.

**ಯುವ ರಾಜ್‌ಕುಮಾರ್ ಹೇಳಿದ್ದೇನು?:** ಮಹಿಳೆಯ ಕಾಲ ಮೇಲೆ ಕಾರು ಹತ್ತಿದ್ದ ವಿಚಾರ ಗೊತ್ತಿರಲಿಲ್ಲ. ಬೆಂಗಳೂರಿಗೆ ವಾಪಸ್ ಆದ ಬಳಿಕ ಮಾಧ್ಯಮದಲ್ಲಿ ನೋಡಿದೆ. ಬಳಿಕ ನಮ್ಮ ಅಭಿಮಾನಿಗಳ ಕಡೆಯಿಂದ ಗಾಯಗೊಂಡ ಮಹಿಳೆಗೆ ಎಲ್ಲಾ ಸೌಕರ್ಯ ಮಾಡಿಕೊಡಲಾಯ್ತು. ಬೌನ್ಸರ್ ತಳ್ಳಿದ್ದಾರೆ ಅನ್ನೋ ಮಾತು ಕೇಳಿ ಬಂದಿತ್ತು. ಈ ವಿಚಾರವಾಗಿ ನಾನು ಕ್ಷಮೆ ಕೇಳುತ್ತೇನೆ ಎಂದಿದ್ದಾರೆ ಯುವರಾಜ್‌ಕುಮಾರ್.

# ಮೋಹದ ಬಣ್ಣ ನೀಲಿ



ಯೋಗರಾಜ್ ಭಟ್ಟರ ಹೊಸ ಪ್ರಯೋಗ

ನಿರ್ದೇಶಕ ಯೋಗರಾಜ್ ಭಟ್, ಶ್ರೀನಿಧಿ ಹಾಗೂ ಪ್ರಸನ್ನ ಅವರು ನಿರ್ಮಿಸಿರುವ, ಯೋಗರಾಜ್ ಭಟ್ ನಿರ್ದೇಶನದ ಹಾಗೂ ಕರಾವಳಿ ಮೂಲದ ನೂತನ ಪ್ರತಿಭೆ ಸಂಜನ್ ಕಜೆ ನಾಯಕನಾಗಿ ನಿಧಿ ಸುಬ್ಬಯ್ಯ, ಅಮೀತ ಎಸ್ ಕುಲಾಲ್, ದೇವಿಕಾ ಶಿಂಧೆ ಹಾಗೂ ಅಂಜಲಿ ಗೌಡ ನಾಯಕಿಯರಾಗಿ ನಟಿಸಿರುವ ಗೀತಗುಚ್ಛ (ಆಲ್ಬಂ) ''ಮತ್ತೆ ಮೊದಲಿಂದ'' ಬಿಡುಗಡೆಯಾಗಿದೆ. ಈ ಆಲ್ಬಂ ನಲ್ಲಿ ನಾಲ್ಕು ಹಾಡುಗಳಿದೆ. ನಾಡಿನ ಜನಪ್ರಿಯ ಗಾಯಕ -ಗಾಯಕಿಯರು ಈ ಹಾಡುಗಳನ್ನು ಹಾಡಿದ್ದಾರೆ.

ನಾಲ್ಕು ಬಣ್ಣಗಳ ಅಚ್ಚ ಕನ್ನಡ ಹಾಡುಗಳ 'ಮತ್ತೆ ಮೊದಲಿಂದ' ಆಲ್ಬಂನ ಮೊದಲ ಹಾಡು '' ಮೋಹದ ಬಣ್ಣ ನೀಲಿ'' ಬಿಡುಗಡೆಯಾಗಿದೆ. ಯೋಗರಾಜ್ ಭಟ್ ಅವರು ಬರೆದಿರುವ ಈ ಹಾಡನ್ನು ಖ್ಯಾತ ಗಾಯಕ ವಿಜಯ್ ಪ್ರಕಾಶ್ ಹಾಡಿದ್ದಾರೆ. ಅನಿರುದ್ಧ್ ಶಾಸ್ತ್ರಿ ಸಂಗೀತ ನೀಡಿದ್ದಾರೆ.

ಶೀರ್ಷಿಕೆಯನ್ನು ಪರಿಚಯಿಸಿದ ಯೋಗರಾಜ್ ಭಟ್ ಅವರು ಇನ್ನಷ್ಟು ವಿವರ ನೀಡುತ್ತಾ, ಈ ಆಲ್ಬಂನಲ್ಲಿ ನಾಲ್ಕು ಗೀತೆಗಳಿದ್ದು, ನಾಲ್ಕು ಸಂಗೀತ ನಿರ್ದೇಶಕರು, ನಾಲ್ಕು ಗಾಯಕರು, ನಾಲ್ಕು ನಾಯಕಿಯರು ಇರುವುದು ವಿಶೇಷ. ಜೊತೆಗೆ ನವ ಪ್ರತಿಭೆ ಸಂಜನ್ ಕಜೆ ಹೆಸರಿನ ಅಪ್ಪಟ ಕನ್ನಡದ ಕರಾವಳಿ ಮೂಲದ ಯುವ ಪ್ರತಿಭಾನ್ವಿತ ನಟನನ್ನು ಪರಿಚಯಿಸುತ್ತಿದ್ದೇನೆ ಎಂದರು.

ನಾಲ್ಕೂ ಗೀತೆಗಳಿಗೆ ಭಟ್ರ ಸಾಹಿತ್ಯ ಮತ್ತು ನಿರ್ದೇಶನ ಇದ್ದು ಸಂಗೀತ ನಿರ್ದೇಶಕರಾಗಿ ಮನೋ ಮೂರ್ತಿ, ವಿ. ಹರಿಕೃಷ್ಣ, ಚೇತನ್-ಡ್ಯಾವಿ, ಅನಿರುದ್ಧ ಶಾಸ್ತ್ರಿ ಇದ್ದಾರೆ. ವಿಜಯ ಪ್ರಕಾಶ್, ಚೇತನ್ ಸೋಸ್ಕ, ವಾಸುಕಿ ವೈಭವ್, ಅದಿತಿ ಖಂಡೇಗಲ ರವರ ಗಾಯನ ಇದೆ. ನಾಲ್ಕು ಗೀತೆಗಳ ವೀಡಿಯೋದಲ್ಲಿ ಸಂಜನ್ ಕಜೆ ಜೊತೆ ನಿಧಿ ಸುಬ್ಬಯ್ಯ, ಅಮೀತ ಎಸ್. ಕುಲಾಲ್, ದೇವಿಕಾ ಶಿಂಧೆ, ಅಂಜಲಿ ಗೌಡ ನಾಯಕಿಯರಾಗಿ ಜೊತೆಯಾಗಿದ್ದಾರೆ. ಪ್ರಸ್ತುತ ಮೊದಲ ಹಾಡಾಗಿ ''ಮೋಹದ ಬಣ್ಣ ನೀಲಿ'' ಬಿಡುಗಡೆಯಾಗಿದೆ ಎಂದು ಹೇಳಿದರು.

ಇತ್ತೀಚಿನ ಸುಂದರ ಸಂಜೆಯಲ್ಲಿ ಖ್ಯಾತ ಲೇಖಕರು, ಇತಿಹಾಸ ತಜ್ಞರೂ ಆದ ಧರ್ಮೇಂದ್ರ ಕುಮಾರ್ ಆರೇನಹಳ್ಳಿ ಅವರು ಮೊದಲ ಗೀತೆಯಾದ 'ನಿನ್ನ ಕಣ್ಣು ನೀಲಿ' (ಮೋಹದ ಬಣ್ಣ ನೀಲಿ) ಹಾಡನ್ನು ಪಂಚರಂಗಿ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆ ಮಾಡಿ ಸುಗಮ ಸಂಗೀತ, ಭಾವಗೀತೆಗಳು ವಿರಳವಾಗಿರುವ ಈ ಸಂದರ್ಭದಲ್ಲಿ ಇದೊಂದು ಶ್ಲಾಘನೀಯ ಪ್ರಯತ್ನ ಎಂದು ಯೋಗರಾಜ್ ಭಟ್ಟರನ್ನು ಪ್ರಶಂಶಿಸಿದರು. ತಮ್ಮ ಬಾಲ್ಯದ ದಿನಗಳಲ್ಲಿ ಮೈಸೂರು ಅನಂತಸ್ವಾಮಿಯವರ ಗೀತೆಗಳನ್ನು ಮೈಸೂರಿನಲ್ಲಿ ಕೇಳುತ್ತಿದ್ದದ್ದನ್ನು ನೆನಪು ಮಾಡಿಕೊಳ್ಳುತ್ತಾ ಭಾವಗೀತೆಗಳು ಕನ್ನಡ ನೆಲದ ಸೊಗಡು, ಇದನ್ನು ಉಳಿಸಿ ಬೆಳಸುವುದು ಸಾಹಿತಿಗಳ ಕರ್ತವ್ಯ. ಬಹಳ ವರ್ಷಗಳ ನಂತರ ಅದೇ ರೀತಿಯ ಗೀತೆಯನ್ನು ಕೇಳಿ ತುಂಬಾ ಸಂತೋಷವಾಯಿತು ಎನ್ನುತ್ತಾ ಈ ಗೀತೆಯನ್ನು ಮಾಧುರ್ಯವಾಗಿ ಹಾಡಿದ ವಿಜಯ ಪ್ರಕಾಶ್ ರವರನ್ನು ಪ್ರಶಂಶಿಸುತ್ತಲೇ ಅಭಿನಂದಿಸಿದರು.

ವಿಜಯ ಪ್ರಕಾಶ್ ರವರು ಮಾತನಾಡುತ್ತಾ ಈ ಗೀತೆಯನ್ನು ಹಾಡಲು ಚಿತ್ರಗೀತೆಗಳಿಗಿಂತ ಹೆಚ್ಚು ಮುತುವರ್ಜಿ ವಹಿಸಿದ್ದಾಗಿ ಹೇಳುತ್ತಾ ರೇಕಾರ್ಡಿಂಗೆ ಬಂದರೂ ಹಾಡದೆ ಗೀತೆಯನ್ನು ಗಂಟೆಗಟ್ಟಲೆ ಕೇಳಿ ಮರುದಿನ ಬಂದು ಹಾಡಿದ್ದಾಗಿ ಹೇಳಿದರು. ಅದಕ್ಕೆ ಕಾರಣ ಈ ಗೀತೆಯಲ್ಲಿನ ವಿಶೇಷತೆ ಮತ್ತು ಸಾಹಿತ್ಯ ಸಾಲುಗಳಲ್ಲಿರುವ ಸೂಕ್ಷ್ಮತೆ. ಹಾಗು ಭಾವಗೀತೆಗಳಿಗಳ ಬಗ್ಗೆ ತಮಗಿರುವ ಅಪಾರ ಗೌರವ, ಪ್ರೀತಿ, ಭಟ್ಟರ ಜೊತೆಗಿನ ಸ್ನೇಹ ಎಲ್ಲವೂ ಸೇರಿ ಗೀತೆಯನ್ನು ಎದೆ ತುಂಬಿ ಮನಸಾರೆ ಹಾಡಿದ್ದಾಗಿ ಹೇಳಿದರು.

# 666 ಆಪರೇಷನ್ ಡ್ರೀಮ್ ಥಿಯೇಟರ್'ನಲ್ಲಿ ಡಾಲಿ, ಶಿವಣ್ಣ




ಗೋಧಿ ಬಣ್ಣ ಸಾಧಾರಣ ಮೈಕಟ್ಟು', 'ಕವಲುದಾರಿ', ಹಾಗೂ 'ಸಪ್ತ ಸಾಗರದಾಚೆ ಎಲ್ಲೋ' ಚಿತ್ರಗಳ ಮೂಲಕ ವಿಶಿಷ್ಟ ಕಥಾನಕಗಳ ಮೂಲಕ ಪ್ರೇಕ್ಷಕರ ಮೆಚ್ಚುಗೆ ಗಳಿಸಿದ ನಿರ್ದೇಶಕ ಹೇಮಂತ್ ಎಂ ರಾವ್, ಈಗ ತಮ್ಮ ಮುಂದಿನ ಚಿತ್ರ '666 ಆಪರೇಷನ್ ಡ್ರೀಮ್ ಥಿಯೇಟರ್' ಮೂಲಕ ಮತ್ತೊಮ್ಮೆ ನಿರ್ದೇಶನದ ಹಾದಿಯಲ್ಲಿ.

ಧನಂಜಯ ಕೆ.ಎ ಅವರ ಅಭಿನಯದಲ್ಲಿ ಮೂಡಿಬರಲಿರುವ ಈ ಚಿತ್ರವು, 70ರ ದಶಕದ ಶೈಲಿ ಚಿತ್ರದ ವೈಶಿಷ್ಟ್ಯತೆಯಾಗಿದೆ, ಕರುನಾಡ ಚಕ್ರವರ್ತಿ ಡಾ. ಶಿವರಾಜಕುಮಾರ್ ಅವರ ಶಕ್ತಿಯುತ ಪಾತ್ರ, ಪ್ರೇಕ್ಷಕರ ಮನಸ್ಸಿನಲ್ಲಿ ಸಂಚಲನ ಮೂಡಿಸಲಿದೆ.

ಈ ಚಿತ್ರವನ್ನು ಡಾ. ವೈಶಾಖ್ ಜೆ.ಗೌಡ ಅವರು ವೈಶಾಖ್ ಜೆ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸುತ್ತಿದ್ದಾರೆ. '666 ಆಪರೇಷನ್ ಡ್ರೀಮ್ ಥಿಯೇಟರ್' ಚಿತ್ರತಂಡದಲ್ಲಿ ಚರಣ್ ರಾಜ್ ಸಂಗೀತ ಸಂಯೋಜನೆ, ಅದ್ವೈತ ಗುರುಮೂರ್ತಿ ಛಾಯಾಗ್ರಹಣ, ಮತ್ತು ವಿಶ್ವಾಸ್ ಕಾಶ್ಯಪ್ ಕಲಾ ನಿರ್ದೇಶನವನ್ನು ನಿರ್ವಹಿಸುತ್ತಿದ್ದಾರೆ.





# ರಗಡ್ ಲುಕ್‌ನಲ್ಲಿ ಕಾಣಿಸಿಕೊಂಡ ಅಜಯ್ ರಾವ್

ಯುದ್ಧಕಾಂಡ ಚಿತ್ರದ ಯಶಸ್ಸಿನ ನಂತರ ನಟ, ನಿರ್ಮಾಪಕ ಕೃಷ್ಣ ಅಜಯ್ ರಾವ್ ಅವರು ಇದೀಗ ಮತ್ತೊಂದು ಇಂಟರೆಸ್ಟಿಂಗ್ ಕ್ಯಾರೆಕ್ಟರ್ ಮೂಲಕ ಸಿನಿ ರಸಿಕರ ಮುಂದೆ ಬರುತ್ತಿದ್ದಾರೆ. ಇದುವರೆಗೂ ಲವರ್ ಬಾಯ್, ಆಕ್ಷನ್ ಹೀರೋ, ಭಗ್ನ ಪ್ರೇಮಿಯಾಗಿ ತೆರೆಮೇಲೆ ಕಾಣಿಸಿಕೊಂಡಿದ್ದ ಅಜಯ್ ರಾವ್ ಅವರು ವಿಭಿನ್ನವಾದ ರಗಡ್ ಗೆಟಪ್ ಮೂಲಕ ನೋಡುಗರ ಗಮನ ಸೆಳೆಯುತ್ತಿದ್ದಾರೆ.

ಬೋಳು ತಲೆಯಲ್ಲಿ, ಅರ್ಧ ಕೂಲಿಂಗ್ ಗ್ಲಾಸ್ ಹಾಕಿ ವಿಲನ್ಗಳಿಗೆ ಗಳಿಗೆ ಸಿಂಹಸ್ವಪ್ನ ಎನ್ನುವಂತೆ ಕಾಣಿಸಿಕೊಂಡಿದ್ದಾರೆ. ನನ್ ಮಗಳೇ ಹೀರೋಯಿನ್ ಖ್ಯಾತಿಯ ನಿರ್ದೇಶಕ ಎಸ್.ಕೆ ಬಾಹುಬಲಿ ಅವರು ಈ ಚಿತ್ರಕ್ಕೆ ಕಥೆ ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ.

ಪಿಕೆ ಪ್ರೊಡಕ್ಷನ್ಸ್ ಮೂಲಕ ಕಿರಣ್ ಅವರು ನಿರ್ಮಿಸುತ್ತಿರುವ ಈ ಚಿತ್ರದ ಹಾಡುಗಳಿಗೆ ಮ್ಯೂಸಿಕ್ ಮಾಂತ್ರಿಕ ಅರ್ಜುನ್ ಜನ್ಯ ಅವರ ಸಂಗೀತ ಸಂಯೋಜನೆಯಿದ್ದು, ಸುಜ್ಞಾನ್ ಅವರು ಕ್ಯಾಮೆರಾ ವರ್ಕ್ ನಿಭಾಯಿಸುತ್ತಿದ್ದಾರೆ.



# ವಿದರ್ಭ ತೊರೆದು ಮತ್ತೆ ತವರು ತಂಡ ಸೇರಲು ನಿರ್ಧರಿಸಿದ ಕನ್ನಡಿಗ ಕರುಣ್ ನಾಯರ್



ಭಾರತ ಮತ್ತು ಇಂಗ್ಲೆಂಡ್ ನಡುವಿನ ಟೆಸ್ಟ್ ಸರಣಿ ಆರಂಭಕ್ಕೆ ಕೆಲವೇ ಗಂಟೆಗಳು ಬಾಕಿ ಉಳಿದಿವೆ. ಲೀಡ್ಸ್‌ನ ಹೆಡಿಂಗ್ಲಿಯಲ್ಲಿ ಮೊದಲ ಟೆಸ್ಟ್ ಪಂದ್ಯದಿಂದ ಪ್ರಾರಂಭವಾಗುವ ಸರಣಿಯೊಂದಿಗೆ ಟೀಂ ಇಂಡಿಯಾದಲ್ಲಿ ಕನ್ನಡಿಗ ಕರುಣ್ ನಾಯರ್ ಅವರ ಎರಡನೇ ಇನ್ನಿಂಗ್ಸ್ ಕೂಡ ಆರಂಭವಾಗಲಿದೆ. 8 ವರ್ಷಗಳ ಹಿಂದೆ ಭಾರತ ಟೆಸ್ಟ್ ತಂಡಕ್ಕೆ ಪದಾರ್ಪಣೆ ಮಾಡಿದ್ದ ಕರುಣ್‌ಗೆ ಆ ಬಳಿಕ ಹೆಚ್ಚಿನ ಅವಕಾಶಗಳು ಸಿಗಲಿಲ್ಲ. ಆದಾಗ್ಯೂ ಛಲ ಬಿಡದ ಕರುಣ್, ದೇಶಿ ಕ್ರಿಕೆಟ್‌ನಲ್ಲಿ ಸತತವಾಗಿ ಉತ್ತಮ ಪ್ರದರ್ಶನ ನೀಡುವ ಮೂಲಕ ಮತ್ತೆ ಟೀಂ ಇಂಡಿಯಾದಲ್ಲಿ ಅವಕಾಶ ಪಡೆದುಕೊಂಡಿದ್ದಾರೆ. ಅಲ್ಲದೆ ಮೊದಲ ಟೆಸ್ಟ್ ಪಂದ್ಯದಲ್ಲಿ ತಂಡದ ಆಡುವ ಹನ್ನೊಂದರ ಬಳಗದಲ್ಲೂ ಕರುಣ್‌ಗೆ ಅವಕಾಶ ಸಿಗಲಿದೆ ಎಂದು ಹೇಳಲಾಗುತ್ತಿದೆ. ಇದರ ನಡುವೆ ಕರುಣ್ ಅವರು ದೇಶೀಯ ಕ್ರಿಕೆಟ್‌ನಲ್ಲಿ ತಂಡ ಬದಲಿಸಲು ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ.

**ರಾಜ್ಯ ತಂಡದಿಂದ ಕೈಬಿಡಲಾಯಿತು:** ವಾಸ್ತವವಾಗಿ ಕನ್ನಡಿಗ ಕರುಣ್ ನಾಯರ್ ಕರ್ನಾಟಕ ತಂಡದೊಂದಿಗೆ ತಮ್ಮ ದೇಶಿ ಕ್ರಿಕೆಟ್ ವೃತ್ತಿಜೀವನವನ್ನು ಆರಂಭಿಸಿದರು. ಕರ್ನಾಟಕ ತಂಡದಲ್ಲಿ ವರ್ಷಗಳ ಕಾಲ ಆಡಿದ ಕರುಣ್ ಸತತವಾಗಿ ವೈಫಲ್ಯ ಅನುಭವಿಸಿದರು. ಹೀಗಾಗಿ ಅವರನ್ನು ರಾಜ್ಯ ತಂಡದಿಂದ ಕೈಬಿಡಲಾಯಿತು. ಆ ಬಳಿಕ ವಿದರ್ಭ ತಂಡವನ್ನು ಸೇರಿಕೊಂಡ ಕರುಣ್, ದೇಶಿ ಕ್ರಿಕೆಟ್‌ನಲ್ಲಿ ತಮ್ಮ ಅಮೋಘ ಪ್ರದರ್ಶನದ ಮೂಲಕ ವಿದರ್ಭ ತಂಡವನ್ನು ಹಲವು ಐತಿಹಾಸಿಕ ಗೆಲುವುಗಳಿಗೆ ಮುನ್ನಡೆಸಿದರು. ಇದರ ಜೊತೆಗೆ ತಮ್ಮ ಆಟದಲ್ಲೂ ಸುಧಾರಣೆ ಕಂಡುಕೊಂಡಿದ್ದರು.

ಆದರೀಗ ಕ್ರಿಕ್‌ಬಜ್ ವರದಿಯ ಪ್ರಕಾರ, ಕರುಣ್ ನಾಯರ್ ಮುಂದಿನ ದೇಶೀಯ ಸೀಸನ್ ಆರಂಭಕ್ಕೂ ಮುನ್ನ ವಿದರ್ಭ ತಂಡವನ್ನು ತೊರೆಯಲು ನಿರ್ಧರಿಸಿದ್ದಾರೆ. ಕೇವಲ ಎರಡು ವರ್ಷಗಳ ಹಿಂದೆ ವಿದರ್ಭ ತಂಡವನ್ನು ಸೇರಿಕೊಂಡಿದ್ದ ಕರುಣ್ 2023-24 ಮತ್ತು 2024-25 ರ ಆವೃತ್ತಿಗಳಲ್ಲಿ ವಿದರ್ಭ ತಂಡದ ಭಾಗವಾಗಿದ್ದರು. ಅಲ್ಲದೆ ಕಳೆದ ರಣಜಿ ಟ್ರೋಫಿಯಲ್ಲಿ ತಂಡದ ಪರ ರನ್‌ಗಳ ಶಿಖರ ಕಟ್ಟಿದ್ದ ಕರುಣ್, ವಿದರ್ಭ ತಂಡವನ್ನು ರಣಜಿ ಚಾಂಪಿಯನ್ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

**ತವರಿಗೆ ಮರಳಲಿರುವ ಕರುಣ್ ನಾಯರ್:** ವರದಿಯ ಪ್ರಕಾರ, ವಿದರ್ಭ ತಂಡವನ್ನು ತೊರೆಯಲಿರುವ ಕರುಣ್ ನಾಯರ್ ತಮ್ಮ ತವರು ಕರ್ನಾಟಕ ತಂಡಕ್ಕೆ ಮತ್ತೊಮ್ಮೆ ಸೇರಲಿದ್ದಾರೆ. ಎರಡು ವರ್ಷಗಳ ಹಿಂದೆ, ಕಳಪೆ ಫಾರ್ಮ್ ಕಾರಣದಿಂದಾಗಿ ಅವರನ್ನು ಕರ್ನಾಟಕ ತಂಡದಿಂದ ಕೈಬಿಡಲಾಗಿತ್ತು. ಇದಾದ ನಂತರವೇ ಅವರು ವಿದರ್ಭ ಸೇರಿದ್ದರು. ಕಳೆದ ರಣಜಿ ಸೀಸನ್‌ನಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ್ದ ಕರುಣ್ 4 ಶತಕ ಸೇರಿದಂತೆ ಒಟ್ಟು 863 ರನ್ ಕಲೆಹಾಕಿದ್ದರು. ಫೈನಲ್‌ನಲ್ಲಿಯೂ ಪಂದ್ಯ ಗೆಲ್ಲುವ ಇನ್ನಿಂಗ್ಸ್ ಆಡಿದ್ದ ಕರುಣ್ 88 ರನ್ ಬಾರಿಸಿ ತಂಡವನ್ನು ಚಾಂಪಿಯನ್ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇದಲ್ಲದೆ, ವಿಜಯ್ ಹಜಾರೆ ಟ್ರೋಫಿಯಲ್ಲಿ ಸತತ 5 ಶತಕಗಳನ್ನು ಬಾರಿಸುವ ಮೂಲಕ ಇತಿಹಾಸವನ್ನು ಸೃಷ್ಟಿಸಿದ್ದರು. ಆದಾಗ್ಯೂ, ಫೈನಲ್‌ನಲ್ಲಿ ಸೋಲುವ ಮೂಲಕ ವಿದರ್ಭ ತಂಡವು ಪ್ರಶಸ್ತಿಯಿಂದ ವಂಚಿತವಾಗಿತ್ತು.

**ವಿದರ್ಭಕ್ಕೆ ಶಾಕ್ ನೀಡಿದ ಜಿತೇಶ್:** ಕರುಣ್ ನಾಯರ್ ಜೊತೆಗೆ ಮತ್ತೊಬ್ಬ ಸ್ಫೋಟಕ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಜಿತೇಶ್ ಶರ್ಮಾ ಕೂಡ ವಿದರ್ಭ ಕ್ರಿಕೆಟ್ ಅಸೋಸಿಯೇಷನ್ ತೊರೆಯುತ್ತಿದ್ದಾರೆ ಎಂದು ವರದಿಯಾಗಿದೆ. ವಿಜಯ್ ಹಜಾರೆ ಟ್ರೋಫಿ ಮತ್ತು ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಂತಹ ಎರಡು ಪ್ರಮುಖ ವೈಟ್ ಬಾಲ್ ಟೂರ್ನಿಗಳಲ್ಲಿ ತಂಡವನ್ನು ಮುನ್ನಡೆಸಿದ್ದ ಜಿತೇಶ್ ಶರ್ಮಾ ಕೂಡ ಮುಂದಿನ ಸೀಸನ್‌ನಿಂದ ಹೊಸ ತಂಡವನ್ನು ಸೇರಲಿದ್ದಾರೆ.

# ಜುಲೈ 1 ರಿಂದ ಮನೆ ಬಾಗಿಲಿಗೆ ಬರಲಿದೆ ಕರಡು ಇ-ಖಾತಾ




**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜುಲೈನಲ್ಲಿ ಕರಡು ಇ ಖಾತಾ ಪ್ರತಿಗಳನ್ನು ಮನೆ ಬಾಗಿಲಿಗೆ ತಲುಪಿಸುವ ವ್ಯವಸ್ಥೆಯನ್ನು ಪ್ರಾರಂಭಿಸಲಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬುಧವಾರ ಹೇಳಿದ್ದಾರೆ. ಈ ಅಭಿಯಾನವು ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಯೋಗಿಕವಾಗಿ ಆರಂಭವಾಗಲಿದೆ ಎಂದು ಅವರು ತಿಳಿಸಿದ್ದಾರೆ. ಬಿಬಿಎಂಪಿಯು ಸುಮಾರು 20 ಲಕ್ಷ ಕರಡು ಇ ಖಾತಾ ಪ್ರತಿಗಳನ್ನು ರವಾನಿಸಲು ಯೋಜನೆ ರೂಪಿಸಿದೆ.

ಬೆಂಗಳೂರಿನಲ್ಲಿ ಇ ಖಾತಾಗಳ ವಿತರಣೆಗಾಗಿ ನಾವು ಒಂದು ಅಭಿಯಾನವನ್ನು ರೂಪಿಸಿದ್ದೇವೆ. ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರ ಕ್ಷೇತ್ರದಲ್ಲಿ, ನಾವು 25,000 ಇ ಖಾತಾಗಳನ್ನು ಸಿದ್ಧಪಡಿಸಿದ್ದೇವೆ ಮತ್ತು ಜುಲೈ 1 ರಿಂದ ಅವುಗಳನ್ನು ಮನೆ ಬಾಗಿಲಿಗೆ ತಲುಪಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹೇಳಿದ್ದಾರೆ. ಬೆಂಗಳೂರಿನ ವಿವಿಧ ಇಲಾಖೆಗಳ ಕಾಂಗ್ರೆಸ್ ಶಾಸಕರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ರಹಸ್ಯ ಸಭೆ ನಡೆಸಿದ ನಂತರ ಉಪಮುಖ್ಯಮಂತ್ರಿ ಈ ಹೇಳಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುಮಾರು 25 ಲಕ್ಷ ಆಸ್ತಿಗಳಿದ್ದು, ಕೇವಲ ಐದು ಲಕ್ಷ ಜನರು ಮಾತ್ರ ಇ ಖಾತಾ ಪಡೆದಿದ್ದಾರೆ. ಉಳಿದವರಿಗೂ ಇ ಖಾತಾ ವಿತರಣೆ ಮಾಡಬೇಕಿದೆ. ಕರಡು ಇ ಖಾತಾ ಮನೆ ಬಾಗಿಲಿಗೆ ವಿತರಣೆ ಅಭಿಯಾನವು ಒಂದು ತಿಂಗಳ ಕಾಲ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ವಿಧಾನಸೌಧ, ಎಂಎಸ್ ಬಿಲ್ಡಿಂಗ್, ಲೋಕಾಯುಕ್ತ ಕಚೇರಿ ಸುತ್ತ ಪಾರ್ಕಿಂಗ್ ಜಂಜಾಟ

ಅಪಾರ್ಟ್‌ಮೆಂಟ್‌ಗಳಿಗೆ ಹೊಸ ಇ ಖಾತಾಗಳು ಸೇರಿದಂತೆ ಇ ಖಾತಾಗಳನ್ನು ನೀಡುವಲ್ಲಿನ ವಿಳಂಬದ ಬಗ್ಗೆ ಶಾಸಕರು ಸಭೆಯಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ ಎಂದು ವರದಿಯಾಗಿದೆ. ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಮತ್ತು ಕಸದ ಸಮಸ್ಯೆಗಳನ್ನು ಪರಿಹರಿಸುವಂತೆ ಶಾಸಕರು ಸರ್ಕಾರವನ್ನು ವಿನಂತಿಸಿದ್ದಾರೆ.

20 ಲಕ್ಷ ಮನೆಗಳಿಗೆ ಕರಡು ಇ-ಖಾತಾಗಳನ್ನು ತಲುಪಿಸುವ ಬಗ್ಗೆ ಘೋಷಣೆ ಮಾಡುವುದು ಸುಲಭ, ಆದರೆ ಜಾರಿಗೊಳಿಸುವುದು ಅಷ್ಟು ಸುಲಭವಲ್ಲ. ಏಕೆಂದರೆ ಬಿಬಿಎಂಪಿ ಬಳಿ ಆಸ್ತಿ ಮಾಲೀಕರ ಸಂಪೂರ್ಣ ವಿಳಾಸದ ದತ್ತಾಂಶ ಇಲ್ಲ. ಇದಲ್ಲದೆ, ಕರಡು ಇ ಖಾತಾಗಳನ್ನು ಮನೆ ಬಾಗಿಲಿಗೆ ತಲುಪಿಸುವುದರಿಂದ ವೆಬ್‌ಸೈಟ್‌ನಲ್ಲಿ ತಮ್ಮ ದಾಖಲೆಯನ್ನು ಹುಡುಕಲು ಸಾಧ್ಯವಾಗದ ಆಸ್ತಿ ಮಾಲೀಕರಿಗೆ ಮಾತ್ರ ಸಹಾಯವಾಗುತ್ತದೆ. ಕರಡು ದಾಖಲೆಯನ್ನು ಡೌನ್‌ಲೋಡ್ ಮಾಡಿದ ನಂತರ ಅಂತಿಮ ಇ ಖಾತಾ ಪಡೆಯಲು ಹೆಣಗಾಡುತ್ತಿರುವ ಆಸ್ತಿ ಮಾಲೀಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಇದು ಪರಿಹರಿಸುವುದಿಲ್ಲ.

ಸಭೆಯಲ್ಲಿ ಸಚಿವರಾದ ಕೆಜೆ ಜಾರ್ಜ್, ಕೃಷ್ಣ ಬೈರೇಗೌಡ, ಜಮೀರ್ ಅಹ್ಮದ್ ಖಾನ್ ಮತ್ತು ಬೈರತಿ ಸುರೇಶ್ ಉಪಸ್ಥಿತರಿದ್ದರು. ಬಿಬಿಎಂಪಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ), ಮತ್ತು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ (ಬಿಎಸ್ ಡಬ್ಲ್ಯುಎಂಎಲ್) ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರು ಸಹ ಉಪಸ್ಥಿತರಿದ್ದರು. ಬಿಜೆಪಿ ಶಾಸಕರನ್ನು ಸಭೆಗೆ ಆಹ್ವಾನಿಸದ ಬಗ್ಗೆ ಜಯನಗರ ಶಾಸಕ ಸಿಕೆ ರಾಮಮೂರ್ತಿ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

# ಭಾರತ- ಇಂಗ್ಲೆಂಡ್ ಲೀಡ್ಸ್ ಟೆಸ್ಟ್‌ಗೆ ಮಳೆಯ ಆತಂಕ



ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿ ಜೂನ್ 20 ರಿಂದ ಆರಂಭವಾಗಲಿದೆ. ಮೊದಲ ಪಂದ್ಯ ಲೀಡ್ಸ್‌ನಲ್ಲಿ ನಡೆಯುತ್ತಿದೆ. ಈ ಪಂದ್ಯಕ್ಕಾಗಿ ಎರಡೂ ತಂಡಗಳು ಕಠಿಣ ಅಭ್ಯಾಸ ನಡೆಸಿವೆ. ಭಾರತದ ಬೌಲಿಂಗ್ ಬಲಿಷ್ಠವಾಗಿರುವಂತೆ ತೋರುತ್ತಿದ್ದರೆ, ಇತ್ತ ಇಂಗ್ಲೆಂಡ್‌ನ ಬ್ಯಾಟಿಂಗ್ ವಿಭಾಗದಲ್ಲಿ ಅನುಭವಿಗಳ ದಂಡೆ ಇದೆ. ಹೀಗಾಗಿ ಉಭಯ ತಂಡಗಳ ನಡುವೆ ತೀವ್ರ ಪೈಪೋಟಿ ನಿರೀಕ್ಷಿಸಲಾಗಿದೆ. ಆದಾಗ್ಯೂ ಈ ಮೊದಲ ಪಂದ್ಯಕ್ಕೆ ಮಳೆಯ ಆತಂಕ ಎದುರಾಗಿದೆ. ಂಬಿಭಿಣಘಾಜಚಣ್ಣುಜಡಿ.ಛಿಟಞ ವರದಿಯ ಪ್ರಕಾರ, ಜೂನ್‌ನಲ್ಲಿ ಲೀಡ್ಸ್‌ನಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಹೀಗಾಗಿ ಐದು ದಿನಗಳ ಕಾಲ ನಡೆಯುವ ಈ ಪಂದ್ಯದಲ್ಲಿ ಯಾವ ದಿನ ಮಳೆ ಬೀಳುತ್ತದೆ ಎಂಬುದರ ವಿವರ ಇಲ್ಲಿದೆ.

**ಐದು ದಿನಗಳ ಹವಾಮಾನ ವರದಿ:** ಮೊದಲ ದಿನ ಮಳೆಯಾಗುವ ಸಾಧ್ಯತೆ ಶೇ. 5 ರಿಂದ 10 ರಷ್ಟು ಇದೆ. ತಾಪಮಾನ ಗರಿಷ್ಠ 17 ಡಿಗ್ರಿ ಮತ್ತು ಕನಿಷ್ಠ 31 ಡಿಗ್ರಿ ಇರುವ ಸಾಧ್ಯತೆ ಇದೆ. ಎರಡನೇ ದಿನ, ಅಂದರೆ ಜೂನ್ 21 ರಂದು ಮಳೆಯಾಗುವ ಸಾಧ್ಯತೆ ಶೇ. 60 ರಷ್ಟು ಇದೆ. ಇದರಿಂದಾಗಿ, ಈ ದಿನ ಆಟಕ್ಕೆ ಅಡ್ಡಿಯಾಗುವ ಸಾಧ್ಯತೆ ಇದೆ. ಮೂರನೇ ದಿನ ಮಳೆಯಾಗುವ ಸಾಧ್ಯತೆ ಶೇ. 5 ರಿಂದ 10 ರಷ್ಟು ಇದೆ. ಇದರರ್ಥ ಮೂರನೇ ದಿನ ಪಂದ್ಯ ಯಾವ ತೊಂದರೆಯೂ ಇಲ್ಲದೆ ನಡೆಯಲಿದೆ.

ಆದಾಗ್ಯೂ, ನಾಲ್ಕನೇ ದಿನ ಮಳೆಯಾಗುವ ಸಾಧ್ಯತೆ ಶೇ. 25-30 ರಷ್ಟು ಇದೆ. ಆದ್ದರಿಂದ, ಈ ದಿನದಂದು ಆಟಕ್ಕೆ ಮಳೆ ಅಡ್ಡಿಯಾಗಬಹುದು. ಐದನೇ ಮತ್ತು ಕೊನೆಯ ದಿನವೂ ಶೇ. 25-30 ರಷ್ಟು ಮಳೆಯಾಗುವ ಸಾಧ್ಯತೆ ಇದೆ. ಇಂತಹ ಪರಿಸ್ಥಿತಿಯಲ್ಲಿ, ಮಳೆ ಭಾರೀ ಪ್ರಮಾಣದಲ್ಲಿ ಸುರಿದರೆ, ಪಂದ್ಯ ಡ್ರಾ ಆಗಬಹುದು. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ ಪಂದ್ಯ ಡ್ರಾ ಆದರೆ, ಅದು ಎರಡೂ ತಂಡಗಳ ಗೆಲುವಿನ ಶೇಕಡಾವಾರು ಮೇಲೆ ಪರಿಣಾಮ ಬೀರುತ್ತದೆ.

**ಟೀಂ ಇಂಡಿಯಾ ದಾಖಲೆ ಉತ್ತಮವಾಗಿಲ್ಲ:** ಹೆಡಿಂಗ್ಲಾಟ್‌ನಲ್ಲಿ ಟೀಂ ಇಂಡಿಯಾದ ದಾಖಲೆ ಉತ್ತಮವಾಗಿಲ್ಲ. ಈ ಮೈದಾನದಲ್ಲಿ ಟೀಂ ಇಂಡಿಯಾ ಒಟ್ಟು 7 ಪಂದ್ಯಗಳನ್ನು ಆಡಿದ್ದು, ಕೇವಲ ಎರಡು ಪಂದ್ಯಗಳನ್ನು ಮಾತ್ರ ಗೆದ್ದಿದ್ದರೆ, ನಾಲ್ಕು ಪಂದ್ಯಗಳಲ್ಲಿ ಸೋಲನ್ನು ಎದುರಿಸಿದೆ. ಉಳಿದಂತೆ ಒಂದು ಪಂದ್ಯ ಡ್ರಾ ಆಗಿದೆ. ಮತ್ತೊಂದೆಡೆ, ಭಾರತ ಮತ್ತು ಇಂಗ್ಲೆಂಡ್ ನಡುವೆ ಒಟ್ಟು 136 ಟೆಸ್ಟ್ ಪಂದ್ಯಗಳು ನಡೆದಿವೆ. ಈ ಪೈಕಿ ಭಾರತ 35 ಪಂದ್ಯಗಳನ್ನು ಗೆದ್ದಿದ್ದರೆ, ಇಂಗ್ಲೆಂಡ್ 51 ಟೆಸ್ಟ್ ಪಂದ್ಯಗಳನ್ನು ಗೆದ್ದಿದೆ. ಉಳಿದಂತೆ 50 ಪಂದ್ಯಗಳು ಡ್ರಾ ಆಗಿವೆ.

# 56 ಪೊಲೀಸ್ ಸಿಬ್ಬಂದಿ ವರ್ಗಾವಣೆ



**ಮಂಗಳೂರು:** ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆಗೆ ಪರೋಕ್ಷವಾಗಿ ನೆರವಾಗಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪ ಮಾಡಿದ್ದ ಬಜ್ಪೆ ಠಾಣೆ ಹೆಡ್ ಕಾನ್ಸ್‌ಟೇಬಲ್ ರಶೀದ್ ಸೇರಿದಂತೆ ಮಂಗಳೂರು ಕಮಿಷನರೇಟ್ ವ್ಯಾಪ್ತಿಯ 56 ಪೊಲೀಸ್ ಸಿಬ್ಬಂದಿಯನ್ನು ವರ್ಗಾವಣೆ ಮಾಡಲಾಗಿದೆ. ಕರಾವಳಿಯಲ್ಲಿ ಕೋಮು ಸೌಹಾರ್ದತೆಗೆ ಧಕ್ಕೆ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಗೃಹ ಇಲಾಖೆ ಈಗಾಗಲೇ ಹಲವು ಕ್ರಮಗಳನ್ನು ಕೈಗೊಂಡಿದೆ. ಕೋಮು ಸೌಹಾರ್ದತೆ ಕಾಪಾಡುವ ನಿಟ್ಟಿನಲ್ಲಿ ವಿಶೇಷ ಟಾಸ್ಕ್?ಫೋರ್ಸ್ ಕೂಡ ರಚನೆ ಮಾಡಲಾಗಿದೆ. ಇದೀಗ ಪೊಲೀಸ್ ಇಲಾಖೆಯ ತಳಮಟ್ಟದಲ್ಲೂ ಭಾರೀ ಸರ್ಜರಿ ನಡೆಯುತ್ತಿದೆ. 56 ಪೊಲೀಸ್ ಸಿಬ್ಬಂದಿಯ ವರ್ಗಾವಣೆ ಮಾಡಿ ಮಂಗಳೂರು ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಆದೇಶ ಹೊರಡಿಸಿದ್ದು, ಇನ್ನೂ ನೂರಾರು ಸಂಖ್ಯೆಯಲ್ಲಿ ಸಿಬ್ಬಂದಿ ವರ್ಗಾವಣೆ ಸಾಧ್ಯತೆ ಇದೆ ಎನ್ನಲಾಗಿದೆ.

ಹಲವು ವರ್ಷಗಳಿಂದ ಒಂದೇ ಕಡೆ ಇದ್ದ ಸಿಬ್ಬಂದಿಯನ್ನು ವರ್ಗಾವಣೆ ಮಾಡಲಾಗಿದೆ. ಬಜ್ಪೆ ಠಾಣೆ ಹೆಡ್ ಕಾನ್ಸ್‌ಟೇಬಲ್ ರಶೀದ್‌ರನ್ನು ಮಂಗಳೂರು ಮಹಿಳಾ ಠಾಣೆಗೆ ವರ್ಗಾವಣೆ ಮಾಡಿ ಆದೇಶಿಸಲಾಗಿದೆ. ಹೆಡ್ ಕಾನ್ಸ್‌ಟೇಬಲ್ ರಶೀದ್ ಸುಹಾಸ್ ಹಂತಕರ ಜತೆ ಕೈಜೋಡಿಸಿದ್ದರು ಎಂದು ಬಿಜೆಪಿ ನಾಯಕರು ಆರೋಪ ಮಾಡಿದ್ದರು.

ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ನಂತರ ಕಾಂಗ್ರೆಸ್ ಸರ್ಕಾರದ ವಿರುದ್ಧ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಕೋಮುಹಿಂಸಾಚಾರ ತಡೆಯುವಲ್ಲಿ ಸರ್ಕಾರ ವಿಫಲವಾಗಿದೆ. ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಮತ್ತು ಗೃಹ ಸಚಿವ ಡಾ. ಜಿ ಪರಮೇಶ್ವರ ಅವರನ್ನು ಬದಲಾವಣೆ ಮಾಡಬೇಕು ಎಂಬ ಅಗ್ರಹ ವ್ಯಕ್ತವಾಗಿತ್ತು.

ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಮಂಗಳೂರಿಗೆ ಭೇಟಿ ನೀಡಿದ್ದ ಗೃಹ ಸಚಿವರು ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದ್ದರು. ಅದಾದ ನಂತರ ಕರಾವಳಿಯಲ್ಲಿ ಕೋಮು ಹಿಂಸಾಚಾರ ತಡೆಯುವುದಕ್ಕಾಗಿ ವಿಶೇಷ ಕಾರ್ಯಪಡೆ ರಚಿಸುವ ಘೋಷಣೆ ಮಾಡಿದ್ದರು.

ಅದರಂತೆ ಇದೀಗ ಸ್ಪೆಷಲ್ ಆಕ್ಷನ್ ಫೋರ್ಸ್ ಜಾರಿಗೆ ಬಂದಿದೆ. ಜೂನ್ 13 ರಂದು ಮಂಗಳೂರಿನಲ್ಲಿ ಗೃಹ ಸಚಿವ ಪರಮೇಶ್ವರ್ ಸ್ಪೆಷಲ್ ಆಕ್ಷನ್ ಫೋರ್ಸ್‌ಗೆ ಚಾಲನೆ ನೀಡಿದ್ದಾರೆ. ಸದ್ಯ, ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಈ ವಿಶೇಷ ಕಾರ್ಯಪಡೆಯ ಹೆಚ್ಚುವರಿ ಹೊಣೆ ಹೊತ್ತಿದ್ದಾರೆ. ಆ ನಂತರ ಇದೀಗ ಪೊಲೀಸ್ ಇಲಾಖೆಯ ತಳಮಟ್ಟದ ಸಿಬ್ಬಂದಿ ವರ್ಗಾವಣೆ ಕ್ರಮ ಕೈಗೊಳ್ಳಲಾಗಿದೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054